23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 339 | ನವದೆಹಲಿ | ಬೆಲೆ ₹10 | ಜೂನ್ 13 2026, ಶನಿವಾರ

## ಒಳಪುಟಗಳಲ್ಲಿ

ದೆಹಲಿಯ ಗೋವಿಂದಪುರಿಯಲ್ಲಿ ಅಗ್ನಿ ಅವಘಡ -ಮೂವರ ಸಾವು; ಇಬ್ಬರಿಗೆ ಗಂಭೀರ ಗಾಯ - ಪು.4

ಹೊರರಾಜ್ಯದ ಶಿಕ್ಷಣ ಸಂಸ್ಥೆಯಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೂ ಉಚಿತ ಬಸ್‌ಪಾಸ್ - ಪು.5

ಸಾಮಾನ್ಯ ಕಾರ್ಯಕರ್ತನೊಬ್ಬ ಪ್ರಧಾನಿ ಹುದ್ದೆ ಅಲಂಕರಿಸುವುದು ಬಿಜೆಪಿಯಲ್ಲಿ ಮಾತ್ರ ಸಾಧ್ಯ: ಸಂತೋಷ್ ರೆಡ್ಡಿ ಅನದೂರ - ಪು.6

# ಕರ್ನಾಟಕದ ನೀರಾವರಿ ಯೋಜನೆಗಳಿಗೆ ಅನುಮತಿ, ಅನುದಾನ ನೀಡಿ


### ಮೇಕೆದಾಟು, ಮಹಾದಾಯಿ ಸೇರಿದಂತೆ ರಾಜ್ಯದ ಯೋಜನೆಗಳ ಬಗ್ಗೆ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಜತೆ ಮುಖ್ಯಮಂತ್ರಿ ಡಿಕೆಶಿ ಮಾತುಕತೆ

**ನವದೆಹಲಿ, ಜೂ.12: ಕರ್ನಾಟಕ ರಾಜ್ಯದ ಪ್ರಮುಖ ನೀರಾವರಿ ಯೋಜನೆಗಳಾದ ಮೇಕೆದಾಟು, ಕೃಷ್ಣಾ ಮೇಲ್ದಂಡೆ, ಭದ್ರಾ ಮೇಲ್ದಂಡೆ, ಮಹದಾಯಿ ಯೋಜನೆಗಳಿಗೆ ಅನುಮತಿ, ಅನುದಾನ ನೀಡಬೇಕು ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ಕೇಂದ್ರ ಜಲಶಕ್ತಿ ಸಚಿವರಿಗೆ ಮನವಿ ಮಾಡಿದ್ದಾರೆ.**

ರಾಜ್ಯದ ನಿರಾವರಿ ಯೋಜನೆಗಳಿಗೆ ಹೆಚ್ಚಿನ ಕಾಳಜಿ ವಹಿಸಿರುವ ಮುಖ್ಯಮಂತ್ರಿಗಳು ಗುರುವಾರ ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದ ಶಿವಕುಮಾರ್ ಅವರು ಶುಕ್ರವಾರ ಕೇಂದ್ರ ಜಲಶಕ್ತಿ ಸಚಿವರನ್ನು ಭೇಟಿ ಮಾಡಿ ನೀರಾವರಿ ಯೋಜನೆಗಳ ಜಾರಿಗೆ ಸಹಕಾರ ಕೋರಿದರು. ಮೇಕೆದಾಟು ಯೋಜನೆಯಲ್ಲಿ ತಮಿಳುನಾಡು ರಾಜ್ಯದ ವಿವಿಧ ಅರ್ಜಿಗಳನ್ನು ವಜಾಗೊಳಿಸಿದೆ ಮತ್ತು ಮೇಕೆದಾಟು ಯೋಜನೆಯ ಅನುಮತಿಯ ಬಗ್ಗೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮತ್ತು ಕೇಂದ್ರ ಜಲ ಆಯೋಗ ನಿರ್ಧಾರ ತೆಗೆದುಕೊಳ್ಳಬೇಕು ಎಂದು ಅಭಿಪ್ರಾಯಪಟ್ಟಿದೆ. CWMA ಈಗಾಗಲೇ ಯೋಜನೆಯನ್ನು ಮೌಲ್ಯಮಾಪನ ಮಾಡಲು CWCಗೆ ಸೂಚಿಸಿರುವುದರಿಂದ, ಈ ಯೋಜನೆಗೆ ಶೀಘ್ರ ಅನುಮತಿ ಸಿಗುವಂತೆ ನೋಡಿಕೊಳ್ಳಬೇಕು.

ಕೃಷ್ಣಾ ನದಿ ನೀರು ಹಂಚಿಕೆಗೆ ಸಂಬಂಧಿಸಿದಂತೆ, ಕೃಷ್ಣಾ ನೀರು ವಿವಾದ ನ್ಯಾಯಾಧೀಕರಣ–II ತೀರ್ಪು ನೀಡಿ ಒಂದು ದಶಕಕ್ಕೂ ಹೆಚ್ಚು ಕಾಲ ಕಳೆದಿದ್ದರೂ, ಕೇಂದ್ರ ಸರ್ಕಾರವು ಇನ್ನು ಸಹ ಈ ತೀರ್ಪನ್ನು ಗೆಜೆಟ್‌ನಲ್ಲಿ ಅಧಿಸೂಚಿಸಿಲ್ಲ. ಕರ್ನಾಟಕ ರಾಜ್ಯವು ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–III ರ ಅನುಷ್ಠಾನದಲ್ಲಿ ಭಾರಿ ಮೊತ್ತವನ್ನು ಹೂಡಿಕೆ ಮಾಡಿದೆ ಮತ್ತು ನಮ್ಮ ಯೋಜನೆಯನ್ನು ಮುಂದುವರಿಸಲು ಹಾಗೂ ನಮ್ಮ ಪಾಲಿನ ನೀರನ್ನು ಬಳಸಿಕೊಳ್ಳಲು ಕೇಂದ್ರದ ಬೆಂಬಲದ ಅಗತ್ಯವಿದೆ.

ಭದ್ರಾ ಮೇಲ್ದಂಡೆ ಯೋಜನೆಗೆ ಸಂಬಂಧಿಸಿದಂತೆ, ಕೇಂದ್ರ ಸರ್ಕಾರವು 2023–24 ರ ಕೇಂದ್ರ ಬಜೆಟ್‌ನಲ್ಲಿ 5,300 ಕೋಟಿ ರೂ.ಗಳ ನೆರವನ್ನು ಘೋಷಿಸಿತ್ತು. ಆದರೆ, 3 ವರ್ಷಗಳು ಕಳೆದರೂ ರಾಜ್ಯಕ್ಕೆ ಈ ಹಣಕಾಸಿನ



ನೆರವು ಬಿಡುಗಡೆಯಾಗಿಲ್ಲ. ಈ ಯೋಜನೆಯ 21,167.93 ಕೋಟಿ ರೂ.ಗಳ ಪರಿಷ್ಕೃತ ವೆಚ್ಚದ ಅಂದಾಜಿನ ಪ್ರಸ್ತುತ ಪ್ರಸ್ತಾವನೆಯನ್ನು ಮೌಲ್ಯಮಾಪನ ಮಾಡಿದೆ. PMKSY-AIBP ಯೋಜನೆಯಡಿ ಈ ಯೋಜನೆಗೆ ಕೇಂದ್ರದ ನೆರವನ್ನು ಶೀಘ್ರ ಬಿಡುಗಡೆ ಮಾಡಬೇಕು.

ಮಹದಾಯಿ ಕಣಿವೆಯಡಿ ಬರುವ ಕಳಸಾ ಮತ್ತು ಬಂಡೂರಿ ನಾಲಾ ಯೋಜನೆಗಳನ್ನು ಹುಬ್ಬಳ್ಳಿ–ಧಾರವಾಡದ ಕುಡಿಯುವ ನೀರಿನ ಅಗತ್ಯ ಪೂರೈಸಲು ಉದ್ದೇಶಿಸಲಾಗಿದೆ. ಇವುಗಳಿಗೆ ಡಿಸೆಂಬರ್ 2022 ರಲ್ಲಿ ಕೇಂದ್ರ ಜಲ ಆಯೋಗ /ಜಲಶಕ್ತಿ ಸಚಿವಾಲಯವು ಅನುಮತಿ ನೀಡಿದ್ದರೂ, ಈ ಯೋಜನೆಗೆ ಯಾವುದೇ ಕಾನೂನು ಅಡಚಣೆಗಳಿಲ್ಲದಿದ್ದರೂ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯದಿಂದ ಅರಣ್ಯ/ವನ್ಯಜೀವಿ ಅನುಮತಿ ಇನ್ನೂ ಸಿಕ್ಕಿಲ್ಲ. ಇದರಿಂದಾಗಿ ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಕುಡಿಯುವ ನೀರಿನ ಅಗತ್ಯಗಳನ್ನು ಪೂರೈಸಲು ತೀರ್ಪಿನ ಅನ್ವಯ ಹಂಚಿಕೆಯಾದ ನೀರನ್ನು ಬಳಸಿಕೊಳ್ಳಲು ನಮಗೆ ಸಾಧ್ಯವಾಗುತ್ತಿಲ್ಲ. ಹೀಗಾಗಿ ಆದಷ್ಟು ಬೇಗ ಅನುಮತಿ ಕೊಡಿಸಬೇಕು.

ಸೊಂತಿ ಏತ ನೀರಾವರಿ, ಇಂಡಿ ಶಾಖಾ ಕಾಲುವೆ, ಮಲಪ್ರಭಾ ಕಾಲುವೆ ಬಾಕಿ ಕಾಮಗಾರಿ, ಘಟಪ್ರಭಾ ಬಲದಂಡೆ ಕಾಲುವೆ ಮತ್ತು ಚಿಕ್ಕೋಡಿ ಶಾಖಾ ಕಾಲುವೆ, ತುಂಗಭದ್ರಾ ಎಡದಂಡೆ ಕಾಲುವೆ ಬಾಕಿ ಕಾಮಗಾರಿ, ಬೆಣ್ಣಿಹಳ್ಳ ನದಿಯ ಪ್ರವಾಹ ನಿಯಂತ್ರಣ ಮತ್ತು ಪ್ರವಾಹ ನಿರ್ವಹಣೆ ಯೋಜನೆಗಳಿಗೆ ಕೇಂದ್ರ ಸರ್ಕಾರ ನೆರವು ನೀಡಬೇಕು. ಕೇಂದ್ರ ಸರ್ಕಾರದ ನದಿಗಳ ಜೋಡಣೆಯ ಪ್ರಸ್ತಾವನೆಗಳ ಅಡಿಯಲ್ಲಿ, ನದಿ ಜೋಡಣೆ ಯೋಜನೆಗಳಿಂದ ಸಮತೆ ಮತ್ತು ಸಮಾನ ಹಂಚಿಕೆಯ ತತ್ವದ" ಮೇಲೆ ಕರ್ನಾಟಕ ರಾಜ್ಯಕ್ಕೆ ನ್ಯಾಯಸಮ್ಮತವಾದ ಪಾಲನ್ನು ಹಂಚಿಕೆ ಮಾಡಬೇಕು ಎಂದು ಮನವಿ ಮಾಡಿದರು.

ತುಂಗಭದ್ರಾ ಅಣೆಕಟ್ಟಿನ ನೂತನ ಗೇಟ್ ಗಳ ಉದ್ಘಾಟನೆಗೆ ಕೇಂದ್ರ ಜಲಶಕ್ತಿ ಸಚಿವರು ಆಗಮಿಸುತ್ತಿದ್ದು, ನೆರೆ ರಾಜ್ಯಗಳ ಮುಖ್ಯಮಂತ್ರಿಗಳು ಭಾಗವಹಿಸುವ ಸಾಧ್ಯತೆ ಇದೆ. ನ್ಯಾಯ ನೀಡುವ ಸ್ಥಾನದಲ್ಲಿ ಕೂತು ಅವರು ಅನ್ಯಾಯ ಮಾಡುವುದಿಲ್ಲ ಎಂಬ ವಿಶ್ವಾಸ ನಮಗಿದೆ ಎಂದು ತಿಳಿಸಿದರು.

## ರಾಷ್ಟ್ರಪತಿ, ಉಪರಾಷ್ಟ್ರಪತಿ ಭೇಟಿಮಾಡಿದ ಸಿಎಂ ಡಿ.ಕೆ.ಶಿವಕುಮಾರ್





**ಬೆಂಗಳೂರು, ಜೂ.12:** ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದೆಹಲಿಯಲ್ಲಿ ಶುಕ್ರವಾರ ರಾಷ್ಟ್ರಪತಿ ಹಾಗೂ ಉಪರಾಷ್ಟ್ರಪತಿಯವರನ್ನು ಭೇಟಿ ಮಾಡಿದ್ದರು.

ಶುಕ್ರವಾರ ಬೆಳಗ್ಗೆ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಡಿ.ಕೆ.ಶಿವಕುಮಾರ್ ಭೇಟಿ ಮಾಡಿದ್ದರು. ನಂತರ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣಾ ಅವರನ್ನು ಭೇಟಿ ಮಾಡಿದ್ದಾರೆ. ಕಳೆದ ಮೂರು ದಿನಗಳಿಂದಲೂ ದೆಹಲಿಯಲ್ಲೇ ಇರುವ ಮುಖ್ಯಮಂತ್ರಿಗಳು, ಗುರುವಾರ ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿದ್ದರು. ಅದಕ್ಕೂ ಮುನ್ನ ಕಾಂಗ್ರೆಸ್ ಅಧಿನಾಯಕಿ ಸೋನಿಯಾ ಗಾಂಧಿ, ಲೋಕ ಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಸಂಸದೆ ಪ್ರಿಯಾಂಕಾ ಗಾಂಧಿಯವರನ್ನು ಭೇಟಿ ಮಾಡಿದ್ದರು. ದೆಹಲಿಯಲ್ಲಿ ಅಖಿಲ ಭಾರತ ಕಾಂಗ್ರೆಸ್‌ನ ಯುವ ಮಹಿಳಾ ಹಾಗೂ ವಿದ್ಯಾರ್ಥಿ ಘಟಕಗಳಿಗೆ ಭೇಟಿ ನೀಡಿ, ಡಿ.ಕೆ.ಶಿವಕುಮಾರ್ ಚರ್ಚೆ ನಡೆಸಿದರು. ದೆಹಲಿಯಲ್ಲಿ ಪ್ರಮುಖ ನಾಯಕರು ಹಾಗೂ ಕೇಂದ್ರ ಸಚಿವರ ಜೊತೆ ಸಭೆಗಳ ಮೂಲಕ ಡಿ.ಕೆ.ಶಿವಕುಮಾರ್ ರಾಜ್ಯದ ಅಭಿವೃದ್ಧಿಗೆ ಭದ್ರ ಬುನಾದಿಯ ಸಿದ್ಧತೆಯಲ್ಲಿದ್ದಾರೆ.



ದೆಹಲಿಯಲ್ಲಿರುವ ಕೆಪಿಸಿಸಿ ನೂತನ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರು ಕಾಂಗ್ರೆಸ್ ಅಧಿನಾಯಕಿ ಸೋನಿಯಾ ಗಾಂಧಿ ಅವರನ್ನು ಶುಕ್ರವಾರ ಭೇಟಿ ಮಾಡಿ ಧನ್ಯವಾದ ಅರ್ಪಿಸಿದರು. ಮಾರ್ಗದರ್ಶನ, ಸಲಹೆ ನೀಡುವಂತೆ ಮನವಿ ಮಾಡಿದರು.



ಎಐಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಸಂಸದೆ ಪ್ರಿಯಾಂಕಾ ಗಾಂಧಿ ಅವರನ್ನು ದೆಹಲಿಯಲ್ಲಿ ಶುಕ್ರವಾರ ಭೇಟಿ ಮಾಡಿದ ಕೆಪಿಸಿಸಿ ನೂತನ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರು ಪಕ್ಷ ಸಂಘಟನೆ ಹಾಗೂ ಸಮಕಾಲೀನ ರಾಜಕೀಯ ಬೆಳವಣಿಗೆಗಳ ಕುರಿತು ಚರ್ಚೆ ನಡೆಸಿದರು.

## ರಾಜ್ಯದ ಭದ್ರತಾ ಮೂಲಸೌಕರ್ಯ, ಪೊಲೀಸ್ ಸಾಮರ್ಥ್ಯ ಸುಧಾರಣೆಗೆ ನೆರವು ನೀಡಿ

### ಕೇಂದ್ರ ಗೃಹ ಸಚಿವ ಅಮಿತ್ ಶಾ ಜತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಚರ್ಚೆ


**ನವದೆಹಲಿ, ಜೂ.12:** ಎರಡು ಹೆಚ್ಚುವರಿ ಇಂಡಿಯಾ ರಿಸರ್ವ್ ಬೆಟಾಲಿಯನ್ಸ್ ಸೃಷ್ಟಿ, ಪೊಲೀಸ್ ಇಲಾಖೆ ಚಟುವಟಿಕೆಗಳಿಗೆ ಸಿಎಸ್ಆರ್ ನಿಧಿ ಬಳಕೆ, ಪೊಲೀಸ್ ತರಬೇತಿ ಸಂಸ್ಥೆಗಳಲ್ಲಿ ಮೂಲಸೌಕರ್ಯ ಮೇಲ್ದರ್ಜೀಕರಣ, ಕಾರಾಗೃಹಗಳ ಆಧುನೀಕರಣ ಸೇರಿದಂತೆ ಕರ್ನಾಟಕ ರಾಜ್ಯದ ಭದ್ರತಾ ಮೂಲಸೌಕರ್ಯ ಮತ್ತು ಪೊಲೀಸ್ ಸಾಮರ್ಥ್ಯ ಸುಧಾರಣೆಗೆ ನೆರವಾಗುವಂತೆ ಸಿಎಂ ಡಿ.ಕೆ. ಶಿವಕುಮಾರ್ ಅವರು ಕೇಂದ್ರ ಗೃಹ ಸಚಿವರಿಗೆ ಮನವಿ ಸಲ್ಲಿಸಿದರು. ದೆಹಲಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್‌ಶಾ ಅವರನ್ನು ಶುಕ್ರವಾರ ಭೇಟಿ ಮಾಡಿ ಮನವಿ ಸಲ್ಲಿಸಿದರು.

ಕರ್ನಾಟಕ ರಾಜ್ಯ ಪೊಲೀಸ್‌ಗೆ 'ಪ್ರೆಸಿಡೆಂಟ್ಸ್ ಕಲರ್' ಪ್ರಶಸ್ತಿಯನ್ನು ನೀಡುವ ಕುರಿತಾದ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಪ್ರಸ್ತುತ ಅದು ಪರಿಶೀಲನೆಯಲ್ಲಿದೆ. ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯು ಇನ್ನು ಸಹ ಈ ಪ್ರತಿಷ್ಠಿತ ಗೌರವವನ್ನು ಸ್ವೀಕರಿಸಬೇಕಾಗಿದೆ. ಈ ವಿಷಯವನ್ನು ಶೀಘ್ರವಾಗಿ ಪರಿಶೀಲಿಸಿ 'ಪ್ರೆಸಿಡೆಂಟ್ಸ್ ಕಲರ್' ಪ್ರಶಸ್ತಿ ನೀಡಲು ಅನುಮೋದನೆ ನೀಡಬೇಕು.

ವಿಜಯನಗರ ಮತ್ತು ರಾಮನಗರ ಜಿಲ್ಲೆಗಳಲ್ಲಿ ಇನ್ನೂ ಎರಡು ಹೆಚ್ಚುವರಿ ಐಆರ್‌ಬಿ ತುಕಡಿಗಳನ್ನು ಸ್ಥಾಪಿಸಲು ಅಂದಾಜು 243.87 ಕೋಟಿ ರೂ.ಗಳ ವೆಚ್ಚದ ಹೊಸ ಪ್ರಸ್ತಾವನೆಯನ್ನು ಸಚಿವಾಲಯಕ್ಕೆ ಕಳುಹಿಸಲಾಗಿದೆ. ಇದಕ್ಕೆ ಶೀಘ್ರವಾಗಿ ಮಂಜೂರಾತಿ ನೀಡಬೇಕು. ನಾಲ್ಕು ಪ್ರಮುಖ ನಗರಗಳಲ್ಲಿ ಕಮಾಂಡ್ ಮತ್ತು ಕಂಟ್ರೋಲ್ ಸೆಂಟರ್‌ಗಳು ಹಾಗೂ ಸಂವಹನ ಉಪಕರಣಗಳ ಸ್ಥಾಪನೆಗಾಗಿ ASUMP ಯೋಜನೆಯಡಿ 280.00 ಕೋಟಿ ರೂ.ಗಳ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಆದಷ್ಟು ಬೇಗ ಮಂಜೂರಾತಿ ನೀಡಬೇಕು. ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ ನಿಧಿಯನ್ನು ಬಳಸಿಕೊಳ್ಳಲು ಅನುಕೂಲವಾಗುವಂತೆ ಕಂಪನಿಗಳ ಕಾಯ್ದೆ, 2013 ರ ಶೆಡ್ಯೂಲ್ VII ರ ಅಡಿಯಲ್ಲಿ ಪೊಲೀಸ್ ಸಂಬಂಧಿತ ಚಟುವಟಿಕೆಗಳನ್ನು ಸೇರಿಸುವ ಪ್ರಸ್ತಾವನೆ ಸಲ್ಲಿಸಲಾಗುತ್ತಿದ್ದು, ಶೀಘ್ರವಾಗಿ ಅನುಮೋದನೆ ನೀಡಬೇಕು.

BPR&D ಯ ಗ್ಯಾಪ್ ಅನಾಲಿಸಿಸ್ ಮಾರ್ಗಸೂಚಿಗಳ ಪ್ರಕಾರ ಪೊಲೀಸ್ ತರಬೇತಿ ಸಂಸ್ಥೆಗಳಲ್ಲಿ ಮೂಲಸೌಕರ್ಯಗಳನ್ನು ಮೇಲ್ದರ್ಜೆಗೆ ಏರಿಸಲು 258.53 ಕೋಟಿ ರೂ.ಗಳ ವಿವರವಾದ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಇದಕ್ಕೆ ನಿಮ್ಮ ಅನುಮೋದನೆ ನೀಡಬೇಕು.

ಕಾರಾಗೃಹಗಳ ಆಧುನೀಕರಣ ಯೋಜನೆಯಡಿ 2025–26ರ



ಆರ್ಥಿಕ ವರ್ಷಕ್ಕೆ (ಸಿಸಿಟಿವಿ, ವಾಕಿ–ಟಾಕಿ ಮತ್ತು ಇತರ ಭದ್ರತಾ ಉಪಕರಣಗಳ ಖರೀದಿಗೆ) 20 ಕೋಟಿ ರೂ.ಗಳನ್ನು ಬಿಡುಗಡೆ ಮಾಡುವಂತೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಈ ಮೊತ್ತವನ್ನು ಶೀಘ್ರ ಮಂಜೂರು ಮಾಡಬೇಕು.

ಕರ್ನಾಟಕದಲ್ಲಿ ನಿಯಮ 52–A ಅನುಷ್ಠಾನಗೊಳಿಸಲು ಗಡುವನ್ನು ವಿಸ್ತರಿಸುವಂತೆ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯಕ್ಕೆ ಪತ್ರ ಬರೆಯಲಾಗಿದೆ. ದಯವಿಟ್ಟು ತಾವು ಈ ವಿಷಯವನ್ನು ಸಂಬಂಧಪಟ್ಟ ಸಚಿವಾಲಯದೊಂದಿಗೆ ಚರ್ಚಿಸಿ, ಆದಷ್ಟು ಬೇಗ ಅನುಮೋದನೆ ಕೊಡಿಸಬೇಕು. ಸುಪ್ರೀಂ ಕೋರ್ಟ್ ಮುಂದೆ ನಡೆದ ಚರ್ಚೆಗಳ ಅನುಸಾರ, ಪೊಲೀಸ್ ಠಾಣೆಗಳಲ್ಲಿ ಅಳವಡಿಸಲಾಗಿರುವ ಸಿಸಿಟಿವಿ ಕ್ಯಾಮರಾಗಳನ್ನು ಮೇಲ್ದರ್ಜೆಗೆ ಏರಿಸಲು ASUMP ಅಡಿಯಲ್ಲಿ 278.26 ಕೋಟಿ ರೂ.ಗಳ ಪ್ರಸ್ತಾವನೆ ಸಲ್ಲಿಸಲಾಗಿದೆ. ಇದಕ್ಕೆ ಸಕಾರಾತ್ಮಕವಾಗಿ ಪರಿಗಣಿಸಬೇಕು.

ಸೈಬರ್ ಅಪರಾಧಗಳು ಸಮಾಜ, ಆರ್ಥಿಕತೆ ಮತ್ತು ರಾಷ್ಟ್ರೀಯ ಭದ್ರತೆಗೆ ಗಂಭೀರ ಹಾಗೂ ನಿರಂತರ ಸವಾಲನ್ನು ಒಡ್ಡುತ್ತಿವೆ. ಇವುಗಳನ್ನು ನಿಗ್ರಹಿಸಲು ಅತ್ಯಾಧುನಿಕ ಸೈಬರ್ ಭದ್ರತಾ ವ್ಯವಸ್ಥೆ ಅಗತ್ಯವಿದ್ದು, ಕರ್ನಾಟಕ ಸರ್ಕಾರವು ಅಂದಾಜು 360 ಕೋಟಿ ರೂ.ಗಳ ವೆಚ್ಚದಲ್ಲಿ 'ಕರ್ನಾಟಕ ಸೈಬರ್ ಕ್ರೈಮ್ ಕಂಟ್ರೋಲ್ ಅಂಡ್ ಕೋಆರ್ಡಿನೇಷನ್ ಯುನಿಟ್' (K4C) ಅನ್ನು ಸ್ಥಾಪಿಸಲು ಉದ್ದೇಶಿಸಿದೆ. ಇದರ ವಿವರವಾದ ಯೋಜನಾ ಪ್ರಸ್ತಾವನೆಯನ್ನು ಶೀಘ್ರದಲ್ಲೇ ಸಲ್ಲಿಸಲಾಗುವುದು.

ಈ ಉಪಕ್ರಮವನ್ನು ದಯವಿಟ್ಟು ಪರಿಗಣಿಸಿ, ಯೋಜನೆಗೆ ಅನುಮೋದನೆ ನೀಡಬೇಕು ಎಂದು ಮನವಿ ಮಾಡಿದರು.

## ಕಾಂಗ್ರೆಸ್ ಜತೆ ಟಿಎಂಸಿ ವಿಲೀನ ಕೇವಲ ವದಂತಿ

**ನವದೆಹಲಿ, ಜೂ.12:** ಪಶ್ಚಿಮ ಬಂಗಾಳದಲ್ಲಿ ಬಂಡಾಯದ ಬೇಗುದಿಯಲ್ಲಿ ಬೇಯುತ್ತಿರುವ ಮಮತಾ ಬ್ಯಾನರ್ಜಿ ನೇತೃತ್ವದ ಟಿಎಂಸಿ ಕಾಂಗ್ರೆಸ್ ಜೊತೆಗೆ ವಿಲೀನದ ಮಾತುಗಳು ಕೇಳಿಬರುತ್ತಿರುವ ನಡುವೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್, ಇವು ಸಂಪೂರ್ಣವಾಗಿ ಆಧಾರರಹಿತ ವದಂತಿಗಳು ಎಂದು ಅಲ್ಲಗಳೆದರು. ಮಮತಾ ಬ್ಯಾನರ್ಜಿ ಮತ್ತು ಅಭಿಷೇಕ್ ಬ್ಯಾನರ್ಜಿ ಇತ್ತೀಚಿಗೆ ದೆಹಲಿಯಲ್ಲಿ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಅವರನ್ನು



ಭೇಟಿಯಾಗಿದ್ದರು. ಆದರೆ ಅವರು ಇಂಡಿಯಾ ಬಣದಲ್ಲಿ ಮುಂದುವರೆಯುವ ಕುರಿತು ಚರ್ಚೆ ನಡೆಸಿದ್ದು, ಬೇರೆ ಯಾವುದೇ ವಿಚಾರ ಚರ್ಚೆ ಯಾಗಿಲ್ಲ ಎಂದು ಸ್ಪಷ್ಟಪಡಿಸಿದರು.

ಮೀನಾಕ್ಷಿ ನಟರಾಜನ್ ವಿರುದ್ಧ ಯಾವುದೇ ಕ್ರಿಮಿನಲ್ ಪ್ರಕರಣ, ಎಫ್‌ಐಆರ್ ಅಥವಾ ಚಾರ್ಜ್‌ಶೀಟ್ ಇರಲಿಲ್ಲ. ಆದಾಗ್ಯೂ ಅವರ ನಾಮಪತ್ರವನ್ನು ತಿರಸ್ಕರಿಸಲಾಗಿದೆ ಎಂದು ಕೆ.ಸಿ. ವೇಣುಗೋಪಾಲ್ ಆಕ್ರೋಶ ವ್ಯಕ್ತಪಡಿಸಿದರು.

# ಆಯ್ಕೆ ಪ್ರಮಾಣಪತ್ರ ಸ್ವೀಕಾರ ಇದೇ ಕೊನೆಯದಾಗಬಹುದು: ಮಲ್ಲಿಕಾರ್ಜುನ ಖರ್ಗೆ

### ರಾಜ್ಯಸಭೆಗೆ ಅವಿರೋಧ ಆಯ್ಕೆ

### 13ನೇ ಬಾರಿ ಜನಪ್ರತಿನಿಧಿಯಾಗುವ ಅವಕಾಶ ಸಿಕ್ಕಿದ್ದಕ್ಕೆ ಧನ್ಯವಾದ

**ಬೆಂಗಳೂರು, ಜೂ.12:** ರಾಜ್ಯಸಭೆಗೆ ಅವಿರೋಧವಾಗಿ ಆಯ್ಕೆಯಾಗಿದ್ದೇನೆ. ಆದರೆ, ಇದು ನನ್ನ ಕೊನೆಯ ಪ್ರಮಾಣಪತ್ರ ಸ್ವೀಕಾರ ಆಗಬಹುದು ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.

ಶುಕ್ರವಾರ ಇಲ್ಲಿನ ವಿಧಾನಸೌಧದಲ್ಲಿ ರಾಜ್ಯಸಭೆಗೆ ಅವಿರೋಧವಾಗಿ ಆಯ್ಕೆಯಾಗಿರುವ ಹಿನ್ನೆಲೆ ಚುನಾವನಾಧಿಕಾರಿ ಎಂ.ಕೆ.ವಿಶಾಲಾಕ್ಷಿ ಅವರಿಂದ ಪ್ರಮಾಣಪತ್ರ ಸ್ವೀಕರಿಸಿ ಪ್ರತಿಕ್ರಿಯಿಸಿದ ಅವರು, ಇದು ನನ್ನ ಕೊನೆಯ ಪ್ರಮಾಣಪತ್ರ ಸ್ವೀಕಾರ ಆಗಬಹುದು ಎಂದು ಸೂಚ್ಯವಾಗಿ ನುಡಿದರು.

13ನೆ ಬಾರಿ ಜನಪ್ರತಿನಿಧಿಯಾಗುವ ಅವಕಾಶ ಸಿಕ್ಕಿದೆ. ಕಲಬುರಗಿ ಜನತೆಗೆ ಧನ್ಯವಾದ ಹೇಳುತ್ತೇವೆ. ಜೀವನದಲ್ಲಿ ಸತತವಾಗಿ ಈ ಅವಕಾಶ ಸಿಗುತ್ತಿರುವುದು ಕಾಂಗ್ರೆಸ್ ಕೊಡುಗೆಯಾಗಿದೆ. ದಿವಂಗತ ಪ್ರಧಾನಿ ಇಂದಿರಾಗಾಂಧಿಯಿಂದ ಇದುವರೆಗೆ ನನಗೆ ಅವಕಾಶ ನೀಡಿದ್ದಾರೆ ಎಂದರು.ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ನನ್ನ ಜೊತೆ ಇದ್ದು ಪ್ರೋತ್ಸಾಹ ನೀಡಿದ್ದಾರೆ. ರಾಹುಲ್ ಗಾಂಧಿ ನನ್ನ ಜೊತೆ ಸೌಹಾರ್ದತೆಯಿಂದ ವರ್ತಿಸುತ್ತಾರೆ. ರಾಹುಲ್ ಗಾಂಧಿ, ಸೋನಿಯಾ ಗಾಂಧಿ ಹಾಗೂ ರಾಜ್ಯದ ಜನರು ಕೆಲಸ ಮಾಡಲು ಅವಕಾಶ ನೀಡಿದ್ದಾರೆ. ಯಾವಾಗಲೂ ಯಾವುದೇ ಕೆಲಸದಲ್ಲಿ ಮಾಧ್ಯಮ ಬೆಂಬಲ ಇಲ್ಲದೇ ಯಾರೂ ಕೂಡ ಜನರಿಗೆ ಪರಿಚಿತರಾಗುವುದಿಲ್ಲ. ಲೋಪದೋಷವನ್ನು ಎತ್ತಿ ಹಿಡಿಯುವುದು ಮಾಧ್ಯಮದವರ ಕೆಲಸವಾಗಿದೆ ಎಂದು ಅವರು ಅಭಿನಂದಿಸಿದರು.



## ಸುಪ್ರೀಂನಲ್ಲಿ ಮೀನಾಕ್ಷಿ ನಟರಾಜನ್‌ಗೆ ಹಿನ್ನಡೆ

### ಚುನಾವಣಾ ಆಯೋಗದ ಮೊರೆ ಹೋಗಲು ಗಂಭೀರ ಚಿಂತನೆ

**ನವದೆಹಲಿ, ಜೂ.12:** ಮಧ್ಯಪ್ರದೇಶ ರಾಜ್ಯಸಭೆ ಚುನಾವಣಾ ನಾಮಪತ್ರ ತಿರಸ್ಕಾರ ಪ್ರಕರಣದಲ್ಲಿ ಕಾಂಗ್ರೆಸ್ ನಾಯಕಿ ಮೀನಾಕ್ಷಿ ನಟರಾಜನ್‌ಗೆ ಸುಪ್ರೀಂ ಕೋರ್ಟ್‌ನಲ್ಲಿ ಹಿನ್ನಡೆಯಾಗಿದೆ. ನಾಮಪತ್ರ ತಿರಸ್ಕೃತವಾದ ಬಳಿಕ ಸಾಮಾನ್ಯವಾಗಿ ಪರಿಹಾರಕ್ಕಾಗಿ ಚುನಾವಣಾ ಆಯೋಗದ ಮೊರೆ ಹೋಗಬೇಕಾಗುತ್ತದೆ ಎಂದು ಸುಪ್ರೀಂ ಕೋರ್ಟ್ ಶುಕ್ರವಾರ ಅಭಿಪ್ರಾಯಪಟ್ಟಿದೆ. ನ್ಯಾಯಮೂರ್ತಿಗಳಾದ ಪ್ರಶಾಂತ್‌ಕುಮಾರ್ ಮಿಶ್ರಾ ಮತ್ತು ಅತುಲ್ ಚಂದೂರ್ಕರ್ ಅವರಿದ್ದ ಪೀಠವು, ಈ ಹಂತದಲ್ಲಿ ನ್ಯಾಯಾಲಯ ಹಸ್ತಕ್ಷೇಪ ಮಾಡಲು ಸಾಧ್ಯವೇ ಎಂದು ಪ್ರಶ್ನಿಸಿದೆ.



ನಾಮಪತ್ರ ತಿರಸ್ಕರಿಸಿದ ನಿರ್ಧಾರ ಎಷ್ಟೇ ತಪ್ಪಾಗಿದ್ದರೂ, ಅದರ ವಿರುದ್ಧದ ಪರಿಹಾರ ಸಾಮಾನ್ಯವಾಗಿ ಬೇರೆ ವೇದಿಕೆಯಲ್ಲಿ ದೊರೆಯುತ್ತದೆ. ಈ ಹಂತದಲ್ಲಿ ನಾವು ಮಧ್ಯಪ್ರವೇಶಿಸಿರುವ ಯಾವುದೇ ಪ್ರಕರಣ ಇದೆಯೇ ಎಂದು ಪೀಠ ಪ್ರಶ್ನಿಸಿದೆ. ನಟರಾಜನ್ ಪರ ಹಿರಿಯ ವಕೀಲ ಅಭಿಷೇಕ್ ಸಿಂಘ್ವಿ ವಾದ ಮಂಡಿಸಿ, ಅಭ್ಯರ್ಥಿಗಳು ಎರಡು ವರ್ಷ ಅಥವಾ ಅದಕ್ಕಿಂತ ಹೆಚ್ಚಿನ ಶಿಕ್ಷೆಗೆ ಒಳಪಡುವ ಅಪರಾಧ ಪ್ರಕರಣಗಳ ವಿವರಗಳನ್ನು ಮಾತ್ರ ಬಹಿರಂಗಪಡಿಸಬೇಕಾಗುತ್ತದೆ ಎಂದು ತಿಳಿಸಿದರು. ಈ ಪ್ರಕರಣದಲ್ಲಿ ಕೇವಲ ಸಮನ್ಸ್ ಜಾರಿಯಾಗಿದ್ದು, ನಾಮಪತ್ರ ತಿರಸ್ಕರಿಸಿರುವುದು ಸರಿಯಲ್ಲ ಎಂದು ವಾದಿಸಿದರು.

## ನಿತ್ಯ ಪಂಚಾಂಗ 13.06.2026 ಶನಿವಾರ



**ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ ಅಧಿಕ ಜ್ಯೇಷ್ಠ ಮಾಸ**

**ಅಧಿಕ ಜ್ಯೇಷ್ಠ ಬಹುಳ, ತ್ರಯೋದಶಿ, ಕೃತ್ತಿಕ ನಕ್ಷತ್ರ, 2ನೇ ಶನಿವಾರ, ಮಾಸ ಶಿವರಾತ್ರಿ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ.5.04–6.33 | 12.00–1.30 | 3.00–4.00 |
| ಸೋಮ | ಬೆ.7.20–9.04 | 10.30–12.00 | 1.30–12.00 |
| ಮಂಗಳ | ಮ.3.25–4.59 | 9.00–10.30 | 12.00–1.30 |
| ಬುಧ | ಮ.12.16–1.50 | 7.30–9.00 | 10.30–12.00 |
| ಗುರು | ಮ.1.50–3.29 | 6.00–7.30 | 9.00–10.30 |
| ಶುಕ್ರ | ಬೆ.10.42–12.16 | 3.00–4.30 | 7.30–9.00 |
| ಶನಿ | ಬೆ.9.07–10.41 | 1.30–3.00 | 6.00–7.30 |

# ಧರ್ಮಸ್ಥಳ ಪ್ರಕರಣದಲ್ಲಿ ಹಿಂದೂಗಳ ಧಾರ್ಮಿಕ ಶ್ರದ್ಧೆಗೆ ಕೊಡಲಿಪೆಟ್ಟು ಕೊಡಲು ಷಡ್ಯಂತ್ರ

**ಪರಾಮರ್ಶೆ ಮಾಡದೆ ಎಸ್‌ಐಟಿ ತನಿಖೆಗೆ ಆದೇಶಿಸಿದ್ದು ಸಮರ್ಪಕ ನಿರ್ಧಾರವಲ್ಲ: ಬಿ.ವೈ.ವಿಜಯೇಂದ್ರ ಆಕ್ಷೇಪ**



**ಬೆಂಗಳೂರು, ಜೂ.12:** ಧರ್ಮಸ್ಥಳ ಮಂಜುನಾಥೇಶ್ವರ ಸ್ವಾಮಿಯ ಸನ್ನಿಧಿಯಲ್ಲಿ ಕಳಂಕ ತರುವ, ಹಿಂದೂಗಳ ಧಾರ್ಮಿಕ ಶ್ರದ್ಧೆಗೆ ಕೊಡಲಿ ಪೆಟ್ಟು ಕೊಡುವ ದೊಡ್ಡ ಷಡ್ಯಂತ್ರ ನಡೆದಿದೆ ಎಂದು ಶಾಸಕ ಹಾಗೂ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ.

ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಅಂದಿನ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಯಾವುದನ್ನೂ ಪರಾಮರ್ಶೆ ಮಾಡದೇ ಪ್ರಕರಣದ ಎಸ್‌ಐಟಿ ತನಿಖೆಗೆ ಆದೇಶಿಸಿದ್ದು ಸಮರ್ಪಕ ನಿರ್ಧಾರ ಆಗಿರಲಿಲ್ಲ ಎಂದು ಆಕ್ಷೇಪಿಸಿದರು. ಧರ್ಮಸ್ಥಳದ ಪ್ರಕರಣದಲ್ಲಿ ಸಾಕಷ್ಟು ವಿಷಯಗಳು ಈಗ ಬೆಳಕಿಗೆ ಬಂದಿವೆ. ಹಿಂದೆ ಸಿದ್ದರಾಮಯ್ಯನವರು ಮುಖ್ಯಮಂತ್ರಿಗಳಾಗಿದ್ದಾಗ ಏಕಾಏಕಿ ಎಸ್‌ಐಟಿ ತನಿಖೆಗೆ ಆದೇಶಿಸಿದಾಗ ಸಾಕಷ್ಟು ಅನುಮಾನಗಳಿಗೆ ಎಡೆ ಮಾಡಿಕೊಟ್ಟಿತ್ತು ಎಂದು ನುಡಿದರು.

ಅಂದಿನ ಮುಖ್ಯಮಂತ್ರಿಗಳು ಒಂದು ದಿನ ಮುಂಚಿತವಾಗಿ ಯಾವುದೇ ತನಿಖೆಯ ಅವಶ್ಯಕತೆ ಇಲ್ಲ ಎಂದಿದ್ದರು. ಪಟ್ಟಭದ್ರ ಹಿತಾಸಕ್ತಿಗಳು ಅವರನ್ನು ಸ್ವಗೃಹದಲ್ಲಿ ಭೇಟಿ ಮಾಡಿದ ನಂತರ ಮುಖ್ಯಮಂತ್ರಿಗಳೇ ಎಸ್‌ಐಟಿ ತನಿಖೆಗೆ ಆದೇಶಿಸಿದ್ದರು ಎಂದು ಗಮನ ಸೆಳೆದರು. ಬಿಜೆಪಿ ಹಿಂದೆ ಧರ್ಮಸ್ಥಳ ಚಲೋ ಬೃಹತ್ ಪ್ರತಿಭಟನೆ ಹಮ್ಮಿಕೊಂಡಿತ್ತು ಎಂದು ವಿವರಿಸಿದರು. ಇದರಲ್ಲಿ ನೂರಾರು ಕೋಟಿ ಒಳಗೊಂಡದ್ದು ಈಗ ಗೊತ್ತಾಗುತ್ತಿದೆ. ನೂರಾರು ಕೋಟಿ ತೊಡಗಿಸಿಕೊಂಡ ಕಾರಣ ವಿದೇಶಿ ಶಕ್ತಿಗಳ ಕೈವಾಡದ ತನಿಖೆಯೂ ಆಗಬೇಕಿದೆ ಎಂದು ಒತ್ತಾಯಿಸಿದರು.

ಕಾಂಗ್ರೆಸ್ ಸರಕಾರವು ಇಂಥ ಷಡ್ಯಂತ್ರಗಳಿಗೆ ಶಕ್ತಿ ತುಂಬುವ ಕೆಲಸ ಮಾಡಿರುವುದು ನಮಗೆ ನೋವು ತಂದಿದೆ ಎಂದು ತಿಳಿಸಿದರು. ಯಾರ್ಯಾರು ಇದರ ಹಿಂದಿದ್ದರು ಯಾರ್ಯಾರು ಬಂಡವಾಳ ಹಾಕಿದ್ದರು? ಅಂದಿನ ಸಿಎಂ ಯಾಕೆ ಕಣ್ಮುಚ್ಚಿ ಎಸ್‌ಐಟಿಗೆ ಕೊಟ್ಟರು– ಇವೆಲ್ಲವೂ ಸತ್ಯಾಸತ್ಯತೆ ಹೊರಕ್ಕೆ ಬರಬೇಕು ಎಂಬುದು ನಾಡಿನ ಜನರ ಮತ್ತು ಹಿಂದೂಗಳ ಅಪೇಕ್ಷೆ ಎಂದು ತಿಳಿಸಿದರು. ಇನ್ನು ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ ಎಸ್‌ಐಆರ್ ಬಗ್ಗೆ ಚರ್ಚೆಗಳಾಗಿವೆ. ಕೇಂದ್ರ ಚುನಾವಣಾ ಆಯೋಗ ತೀರ್ಮಾನಿಸಿದ ಬಳಿಕ ಎಸ್‌ಐಆರ್ ನಡೆಯುತ್ತಿದ್ದು, ರಾಜ್ಯ ಸರಕಾರ ಇದಕ್ಕೆ ಕಲ್ಲು ಹಾಕುವ ಕೆಲಸ ಮಾಡುತ್ತಿದೆ ಎಂಬ ಅಭಿಪ್ರಾಯ ಎಲ್ಲ ಮುಖಂಡರಿಂದ ವ್ಯಕ್ತವಾಗಿದೆ. ರಾಜ್ಯ ಸರ್ಕಾರ ಬಿಎಲ್‌ಒಗಳಿಗೆ ಸಮರ್ಪಕ ಆದೇಶ, ಮಾರ್ಗದರ್ಶನ ಮಾಡುತ್ತಿಲ್ಲ. ಡೂಪ್ಲಿಕೇಟ್ ಹೆಸರು, ಸತ್ತವರ ಹೆಸರು ಕೈಬಿಡುವ ಕೆಲಸ ನಡೆಯಬೇಕಿದೆ. ಬಿಎಲ್‌ಒಗಳನ್ನು ದುರುಪಯೋಗ ಪಡಿಸಿಕೊಂಡು, ಸ್ವಚ್ಛಗೊಳಿಸುವ ಕಾರ್ಯ ಕರ್ನಾಟಕದಲ್ಲಿ ಸಮರ್ಪಕವಾಗಿ ಆಗುತ್ತಿಲ್ಲ ಎಂಬ ಆಕ್ಷೇಪ ಇದೆ. ಮುಂದಿನ ದಿನಗಳಲ್ಲಿ ನಮ್ಮ ನಡೆ ಯಾವ ರೀತಿ ಇರಬೇಕೆಂಬ ಬಗ್ಗೆ ಚರ್ಚೆ ಮಾಡಿದ್ದೇವೆ ಎಂದು ವಿವರ ನೀಡಿದರು.

# ಹಿಂದುಳಿದ ವರ್ಗಗಳ ಇಲಾಖೆ ಅನುದಾನ ಹಂಚಿಕೆಯಲ್ಲಿ ತಾರತಮ್ಯ ಮಾಡಿಲ್ಲ

**ಮಾಜಿ ಸಿಎಂ ಸಿದ್ದರಾಮಯ್ಯ ಸ್ಪಷ್ಟನೆ**

**ಹೆಚ್ಚಿನ ಮನವಿ ಬಂದಿದ್ದ ಕಾರಣ ಕುರುಬ ಸಮುದಾಯಕ್ಕೆ ಹೆಚ್ಚಿನ ಅನುದಾನ ಸಂದಾಯ**



**ಬೆಂಗಳೂರು, ಜೂ.12:** ಕರ್ನಾಟಕದ ಹಿಂದುಳಿದ ವರ್ಗಗಳ ಇಲಾಖೆಯಿಂದ ಅನುದಾನ ಹಂಚಿಕೆಯಲ್ಲಿ ತಾರತಮ್ಯ ನಡೆದಿದೆ ಎಂಬ ಆರೋಪಗಳು ಕೇಳಿಬಂದ ಬೆನ್ನಲ್ಲೇ ಈ ಬಗ್ಗೆ ಮಾಜಿ ಸಿಎಂ ಸಿದ್ದರಾಮಯ್ಯ ಸ್ಪಷ್ಟನೆ ನೀಡಿದ್ದಾರೆ.


ಸಲ್ಲಿಕೆಯಾಗಿದ್ದ ಮನವಿಗಳನ್ನು ಪರಿಶೀಲಿಸಿ ಸುಮಾರು 155 ಹಿಂದುಳಿದ ವರ್ಗಗಳ ಸಂಘ – ಸಂಸ್ಥೆಗಳಿಗೆ 71.85 ಕೋಟಿ ರೂ. ವೆಚ್ಚದಲ್ಲಿ ಸಮುದಾಯ ಭವನ ಮತ್ತು ವಿದ್ಯಾರ್ಥಿ ನಿಲಯಗಳ ನಿರ್ಮಾಣಕ್ಕೆ ಪೂರ್ವಭಾವಿ ಮಂಜೂರಾತಿಯನ್ನು ಇಲಾಖೆ ನೀಡಿದೆ. ಇದೇನು ಫಲಾನುಭವಿಗಳ ಅಂತಿಮಪಟ್ಟಿ ಅಲ್ಲ ಎಂದಿದ್ದಾರೆ.

ಇಲಾಖೆಗೆ ಸಲ್ಲಿಸಲಾಗಿರುವ ಮನವಿಗಳಲ್ಲಿ ಕುರುಬ ಸಮುದಾಯಕ್ಕೆ ಸೇರಿರುವ ಮನವಿಗಳು ಹೆಚ್ಚಿನ ಸಂಖ್ಯೆಯಲ್ಲಿದ್ದ ಕಾರಣಕ್ಕೆ ಆ ಸಮುದಾಯಕ್ಕೆ ಹೆಚ್ಚಿನ ಅನುದಾನ ಸಂದಾಯವಾಗಿದೆಯೇ ಹೊರತು ಉದ್ದೇಶಪೂರ್ವಕವಾಗಿ ಯಾವುದೇ ಬಗೆಯ ತಾರತಮ್ಯ ಮಾಡಲಾಗಿಲ್ಲ. ಬೇರೆ ಬೇರೆ ಹಿಂದುಳಿದ ಜಾತಿಗಳು ನೀಡಿರುವ ಮನವಿಗಳನ್ನು ಕೂಡಾ ಪರಿಶೀಲಿಸಿ, ಅವುಗಳಿಗೆ ಮುಂದಿನ ದಿನಗಳಲ್ಲಿ ಅನುದಾನವನ್ನು ಬಿಡುಗಡೆ ಮಾಡಲಾಗುವುದು ಎಂದಿದ್ದಾರೆ.

ಕುರುಬ ಜನಾಂಗದ ಜೊತೆಗೆ ಮಡಿವಾಳ, ಲಿಂಗಾಯಿತ, ಒಕ್ಕಲಿಗ, ಬೆಸ್ತ, ಬಲಿಜ, ಗೊಲ್ಲ, ಜೆಟ್ಟಿ, ಕುಂಬಾರ, ಅರಸು, ಹೆಳವ, ಸವಿತಾ ಸಮಾಜ, ಉಪ್ಪಾರ, ಗಾಣಿಗ, ಕುರುಹಿನಶೆಟ್ಟಿ, ಹಾಲಕ್ಕಿ, ರೆಡ್ಡಿ ಈ ಜನಾಂಗದವರ ಸಮುದಾಯ ಭವನ ಮತ್ತು ವಿದ್ಯಾರ್ಥಿ ನಿಲಯಗಳ ಕಟ್ಟಡಗಳ ನಿರ್ಮಾಣಕ್ಕೆ ಪೂರ್ವಭಾವಿ ಆದೇಶವನ್ನು ಹೊರಡಿಸಲಾಗಿದೆ. ಈ ಆದೇಶವು ಅನುದಾನದ ಬಿಡುಗಡೆಯ ಆದೇಶ ಅಲ್ಲ. ಅನುದಾನ ಬಿಡುಗಡೆಗೆ ಸಂಘ ಸಂಸ್ಥೆಗಳು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ಮುಖಾಂತರ ಜಮೀನು/ನಿವೇಶನ ಅವರ ಹೆಸರಿನಲ್ಲಿ ಇರುವ ಬಗ್ಗೆ ಸ್ಥಳೀಯ ಪುರಸಭೆ/ ಪಂಚಾಯತಿಯಿಂದ ಕಟ್ಟಡ ಲೈಸೆನ್ಸ್, ಸಂಘ ಸಂಸ್ಥೆಯ 3 ವರ್ಷದ ಆಡಿಟ್ ವರದಿ ಇತ್ಯಾದಿ ದಾಖಲಾತಿಗಳನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಕಳುಹಿಸಬೇಕಾಗುತ್ತದೆ. ಅನುದಾನ ಬಿಡುಗಡೆ ಮಾಡಲು ಸರ್ಕಾರದಿಂದ ಮಾರ್ಗಸೂಚಿ ಹೊರಡಿಸಲಾಗಿದೆ.

ಈ ಮಾರ್ಗಸೂಚಿಗಳ ಅನುಸಾರ ಅನುದಾನವನ್ನು 3 ಹಂತದಲ್ಲಿ ಪ್ರಗತಿಯನ್ನು ಪರಿಶೀಲನೆ ಮಾಡಿ ಅನುದಾನ ಬಿಡುಗಡೆ ಮಾಡಲಾಗುವುದು. ಕಾಮಗಾರಿಯ ಪ್ರಗತಿಯನ್ನು ಪ್ರತಿವರ್ಷ ಪರಿಶೀಲಿಸಿ ಅದರ ಆಧಾರದಲ್ಲಿ ಮಂಜೂರಾಗಿರುವ ಹಣವನ್ನು ಬಿಡುಗಡೆ ಮಾಡಲಾಗುವುದು. ಇದು ನಿರಂತರವಾಗಿ ನಡೆಯುತ್ತಿರುವ ಪ್ರಕ್ರಿಯೆಯಾಗಿದೆ. ಈ ರೀತಿ ಅನುದಾನವನ್ನು ಬಿಡುಗಡೆ ಮಾಡುವಾಗ ಸರ್ಕಾರದ ಆದೇಶಕ್ಕೆ ಪ್ರವರ್ಗ ಮತ್ತು ಪ್ರವರ್ಗ 2ಎ ನಲ್ಲಿ ಬರುವ ಜಾತಿಗಳಿಗೆ ಶೇ.70ರಷ್ಟು ಮತ್ತು ಪ್ರವರ್ಗ 3A ಮತ್ತು 3Bನಲ್ಲಿ ಬರುವ ಜಾತಿಗಳಿಗೆ ಶೇ.30ರಷ್ಟು ಅನುದಾನವನ್ನು ಮಂಜೂರು ಮಾಡಲಾಗುವುದು. ಪ್ರವರ್ಗ 1 ಮತ್ತು 2ಎ ಹೆಚ್ಚಿನ ಸಂಖ್ಯೆಯಲ್ಲಿ ಜಾತಿಗಳು ಇರುವ ಕಾರಣಕ್ಕಾಗಿ ಕೆಲವು ಸಮುದಾಯಗಳಿಗೆ ಹೆಚ್ಚಿನ ಅನುದಾನ ಬಿಡುಗಡೆ ಮಾಡಲಾಗಿದೆ ಎಂದವರು ತಿಳಿಸಿದ್ದಾರೆ.

# ಪರಮೇಶ್ವರ್‌ಗೆ ಸಿಎಂ ಸ್ಥಾನ ತಪ್ಪಲು ಅವರ ಪಕ್ಷದವರೇ ಕಾರಣ, ನನ್ನಿಂದಾಗಿ ಕೈತಪ್ಪಿಲ್ಲ: ಎಚ್.ಡಿ.ಕೆ.



ಬೆಂಗಳೂರು, ಜೂ.12: ತಮಗೆ ಮೂರು ಬಾರಿ ಸಿಎಂ ಆಗುವ ಅವಕಾಶ ಕೈತಪ್ಪಿತು ಎಂಬ ಡಿಸಿಎಂ ಡಾ.ಜಿ.ಪರಮೇಶ್ವರ್ ಇತ್ತೀಚೆಗೆ ಬೇಸರ ವ್ಯಕ್ತಪಡಿಸಿದ್ದಕ್ಕೆ ಪ್ರತಿಕ್ರಿಯಿಸಿರುವ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಪರಮೇಶ್ವರ್ ಅವರಿಗೆ ಸಿಎಂ ಸ್ಥಾನ ಕೈತಪ್ಪಲು ಅವರದೇ ಪಕ್ಷದ ಕಾಂಗ್ರೆಸ್ಸಿಗರೇ ನೇರ ಕಾರಣ, ಈ ಬಗ್ಗೆ ಪರಮೇಶ್ವರ್ ಅವರು ನಮ್ಮನ್ನು ಕೇಳುವ ಬದಲು ಮೊದಲು ತಮ್ಮದೇ ಪಕ್ಷದವರ ಜೊತೆ ಕೂತು ಚರ್ಚೆ ಮಾಡಲಿ ಎಂದು ಟಾಂಗ್ ನೀಡಿದ್ದಾರೆ. ಅಂದು ಅವರು ನನ್ನ ಜೊತೆ ಬಂದಾಗ ನಾನು ಸಿಎಂ ಆಗಬೇಡಿ ಅಂತಾ ಹೇಳಿದ್ನಾ? ನೀವೇ ಮುಖ್ಯಮಂತ್ರಿಯಾಗಿ ಎಂದು ಖುದ್ದಾಗಿ ಹೇಳಿದ್ದೆ. ನೀವೇ ಸಿಎಂ ಆಗಿ ಎಂದಾಗಲೂ ಅವರು ಆಗಲಿಲ್ಲವಲ್ಲ. ನನ್ನಿಂದಾಗಿ ಪರಮೇಶ್ವರ್ ಅವರಿಗೆ ಸಿಎಂ ಸ್ಥಾನ ಕೈತಪ್ಪಿಲ್ಲ. ಅವರ ಪಕ್ಷದ ನಾಯಕರಿಂದಲೇ ಆಗಿದೆ ಎಂದು ಹೇಳಿದರು.

# ಧರ್ಮಸ್ಥಳ ಅಪಪ್ರಚಾರಕ್ಕೆ 200 ಕೋಟಿ ರೂ ಬಳಕೆ ಸಮಗ್ರ ಪರಿಶೀಲನೆ ಅಗತ್ಯ: ಪ್ರಿಯಾಂಕ್ ಖರ್ಗೆ



ಬೆಂಗಳೂರು, ಜೂ.12: ಶ್ರೀ ಕ್ಷೇತ್ರ ಧರ್ಮಸ್ಥಳದ ಅಪಪ್ರಚಾರಕ್ಕಾಗಿ 200 ಕೋಟಿ ರೂ. ಬಳಕೆಯಾಗಿದೆ ಎಂಬ ಆರೋಪವನ್ನು ಸಮಗ್ರವಾಗಿ ಪರಿಶೀಲಿಸುವ ಅಗತ್ಯ ಇದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧರ್ಮಸ್ಥಳದ ವಿರುದ್ಧ ಷಡ್ಯಂತ್ರ ನಡೆಸಿರುವ ಪ್ರಕರಣಕ್ಕೆ ಸಂಬಂಧಪಟ್ಟಂತೆ ನ್ಯಾಯಾಲಯಕ್ಕೆ ಸಲ್ಲಿಸಿರುವ ವರದಿಯಲ್ಲಿ ಪ್ರಕಾಶ್ ರಾಜ್ ಹೆಸರು ಪ್ರಸ್ತಾಪವಾಗಿದೆ. ನ್ಯಾಯಾಲಯ ಎಸ್‌ಐಟಿ ಮುಖ್ಯಸ್ಥರಿಂದ ಮಾಹಿತಿ ಕೇಳಿದೆ. ಪೊಲೀಸರು ಮೊದಲು ಮಾಹಿತಿ ನೀಡಲಿ, ಇಂತಹ ವಿಚಾರಗಳನ್ನು ಮಾಧ್ಯಮಗಳಲ್ಲಿ ಚರ್ಚೆ ಮಾಡುವುದು ಸರಿಯಲ್ಲ. ಹೆಸರು ಪ್ರಸ್ತಾಪವಾದಾಕ್ಷಣ ಯಾರೂ ಕ್ರಿಮಿನಲ್‌ಗಳಾಗುವುದಿಲ್ಲ ಎಂದು ಹೇಳಿದರು.

ಧರ್ಮಸ್ಥಳ ವಿರುದ್ಧ ಅಪ ಪ್ರಚಾರಕ್ಕೆ ಬೇರೆ ಬಾಗಿಲಿನಿಂದ ದುಡ್ಡು ಬಂದಿದೆ. ಇದರಲ್ಲಿ ಕೆಲವರ ಸಹಭಾಗಿತ್ವ ಇದೆ ಎನ್ನುವ ಆರೋಪವನ್ನು ಬಂಧಿತ ವ್ಯಕ್ತಿ ಮಾಡಿದ್ದಾರೆ. 200 ಕೋಟಿ ರೂ. ಬಳಕೆಯಾಗಿದೆ ಎಂದು ಹೇಳುತ್ತಿದ್ದಾರೆ. ಇದು ಸಣ್ಣ ಮೊತ್ತ ಅಲ್ಲ, ಗಂಭೀರ ಪರಿಶೀಲನೆಯಾಗಬೇಕಿದೆ. ಆರೋಪ ಮಾಡುತ್ತಿರುವ ವ್ಯಕ್ತಿಯ ಮಾತುಗಳು ನಿಜವೋ, ಸುಳ್ಳೋ ಎಂಬುದನ್ನು ಪರಿಶೀಲಿಸಬೇಕಾಗಿದೆ ಎಂದರು.

ಎಲ್ಲ ಹಣಕಾಸು ಸಂಸ್ಥೆಗಳೂ ಕಾನೂನು ಪಾಲಿಸಬೇಕು

ಮೈಕ್ರೋ ಫೈನಾನ್ಸ್ ವಿಚಾರವಾಗಿ ಸರ್ಕಾರ ರೂಪಿಸಿರುವ ಕಾನೂನುಗಳನ್ನು ಧರ್ಮಸ್ಥಳದ ಹಣಕಾಸು ಸಂಸ್ಥೆಗಳು ಪಾಲಿಸುತ್ತಿಲ್ಲ ಎಂದು ಮಾಧ್ಯಮದವರು ಪ್ರಶ್ನಿಸಿದಾಗ ಉತ್ತರಿಸಿದ ಪ್ರಿಯಾಂಕ್ ಖರ್ಗೆಯವರು, ನಾನ್ ಬ್ಯಾಂಕಿಂಗ್ ಫೈನಾನ್ಸ್ ಸಂಸ್ಥೆಗಳು (ಎನ್‌ಬಿಎಫ್‌ಸಿ)ಗಳು ಹೊಸ ಕಾನೂನು ಉಲ್ಲಂಘಿಸುತ್ತಿರುವ ಬಗ್ಗೆ ತಮ ಬಳಿ ಮಾಹಿತಿಯಿಲ್ಲ. ಮುಂದಿನವಾರ ಇದಕ್ಕಾಗಿ ಹೊಸ ಪ್ರತ್ಯೇಕ ಸಭೆ ನಡೆಸಿ, ಪರಿಶೀಲಿಸಲಾಗುವುದು. ಹೊಸ ಕಾನೂನು ಧರ್ಮಸ್ಥಳದ ಸಂಸ್ಥೆಗೆ ಮಾತ್ರ ಸೀಮಿತವಾಗಿಲ್ಲ. ಎಲ್ಲಾ ಹಣಕಾಸು ಸಂಸ್ಥೆಗಳು ಅದನ್ನು ಪಾಲನೆ ಮಾಡಬೇಕು ಎಂದು ಹೇಳಿದರು.

ಸಂಘ ಸಂಸ್ಥೆಗಳು ವ್ಯಕ್ತಿಗತ ಹಾಗೂ ಧಾರ್ಮಿಕ ದತ್ತಿ ಸಂಸ್ಥೆಗಳು ರಾಜ್ಯ ಸರ್ಕಾರ ಕಾಯ್ದೆ ರೂಪಿಸಿದ ಕಾಯ್ದೆಯನ್ನು ಪಾಲಿಸಲೇಬೇಕು. ಧರ್ಮಸ್ಥಳದ ವಿಚಾರವಾಗಿ ಯಾವ ದೂರಿದೆ, ಆನ್‌ಲೈನ್ ಪೇಮೆಂಟ್ ಬದಲಾಗಿ ನಗದು ರೂಪದಲ್ಲಿ ಹಣ ಪಡೆಯುತ್ತಿರುವ ಕುರಿತು ತಮಗೆ ಮಾಹಿತಿಯಿಲ್ಲ ಎಂದು ಹೇಳಿದರು.

ವಿಜಯ್‌ಗೆ ಕಪ್ಪುಬಾವುಟ ಪ್ರದರ್ಶನ ಅನಗತ್ಯ

ಕೊಲ್ಲೂರು ಮೂಕಾಂಬಿಕೆ ದೇವಸ್ಥಾನಕ್ಕೆ ಭೇಟಿ ನೀಡುತ್ತಿರುವ ತಮಿಳುನಾಡಿನ ಮುಖ್ಯಮಂತ್ರಿ ವಿಜಯ್ ಅವರಿಗೆ ಕಪ್ಪು ಬಾವುಟ ಪ್ರದರ್ಶಿಸುವುದು ಅನಗತ್ಯ. ಮೇಕೆದಾಟು ಯೋಜನೆ ವಿಚಾರವಾಗಿ ಸುಪ್ರೀಂಕೋರ್ಟಿನ ಆದೇಶ ಇದೆ. ನೆರೆಯ ರಾಜ್ಯದ ಮುಖ್ಯಮಂತ್ರಿ ದೇವಸ್ಥಾನಕ್ಕೆ ಬಂದು ದೇವರ ದರ್ಶನ ಪಡೆದು ಹೋಗಲಿ. ಅವರು ಬಂದಾಕ್ಷಣ ನಾವು ನಮ ಹಕ್ಕನ್ನು ಬಿಟ್ಟುಕೊಡುವುದಿಲ್ಲ. ನೆಲ, ಜಲ, ಭಾಷೆ ವಿಚಾರವಾಗಿ ಯಾವುದೇ ರಾಜೀ ಇಲ್ಲ. ನಾವು ನಮ ರಾಜ್ಯದ ಹಿತಾಸಕ್ತಿಗೆ ಬದ್ಧರಾಗಿರುವಂತೆ, ತಮಿಳುನಾಡಿನ ಮುಖ್ಯಮಂತ್ರಿ ಕೂಡ ಕೆಲಸ ಮಾಡುತ್ತಾರೆ. ಅವರಿಗೆ ಅಡ್ಡಿ ಪಡಿಸುವುದು ಸರಿಯಲ್ಲ ಎಂದು ಹೇಳಿದರು. ಬಿಡದಿ ಭೂ ಸ್ವಾಧೀನ ವಿಚಾರವಾಗಿ ವಿರೋಧ ಪಕ್ಷಗಳು ದಾರಿ ತಪ್ಪಿಸುವ ಪ್ರಯತ್ನ ಮಾಡುತ್ತಿವೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

# ಗ್ಯಾರಂಟಿ ನಿಲ್ಲಿಸಲು ಸರ್ಕಾರದ ಹುನ್ನಾರ: ಶ್ರೀರಾಮುಲು ಟೀಕೆ



**ಬೆಂಗಳೂರು, ಜೂ.12:** ಗ್ಯಾರಂಟಿಗಳ ವಿಚಾರದಲ್ಲಿ ಸುಳ್ಳು ಹೇಳಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಈಗ ಅದೇ ಗ್ಯಾರಂಟಿಗಳನ್ನು ಪರಿಷ್ಕರಣೆ ನೆಪದಲ್ಲಿ ಬಂದ್ ಮಾಡಲು ಹುನ್ನಾರ ನಡೆಸಿದೆ ಎಂದು ಮಾಜಿ ಸಚಿವ ಬಿ.ಶ್ರೀರಾಮುಲು ಆರೋಪಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗ್ಯಾರಂಟಿ ಕೊಡಿ ಎಂದು ರಾಜ್ಯದ ಜನರು ಸರ್ಕಾರಕ್ಕೆ ಕೇಳಿರಲಿಲ್ಲ. ಅವರೇ ಸ್ವಾರ್ಥಕ್ಕಾಗಿ ಘೋಷಣೆ ಮಾಡಿದರು. ಉಚಿತ ಬಸ್ ಕೊಡಿ ಎಂದು ಹೆಣ್ಣು ಮಕ್ಕಳು ಕೇಳಿರಲಿಲ್ಲ. ಆದರೂ ಸರ್ಕಾರವೇ ಕೊಟ್ಟು ಈಗ ಗ್ಯಾರಂಟಿಗಳನ್ನು ಸ್ಥಗಿತಗೊಳಿಸಲು ಮುಂದಾಗಿದ್ದಾರೆ ಎಂದು ಹೇಳಿದರು.

ಗೃಹಲಕ್ಷ್ಮಿ ಹಣ ಮೃತ ಫಲಾನುಭವಿಗಳ ಖಾತೆಗೆ ಹೋಗುತ್ತಿದೆ ಎಂಬ ವರದಿಗಳಿವೆ. ಸರ್ಕಾರದಲ್ಲಿ ಗ್ಯಾರಂಟಿ ಸಂಬಂಧ ಗೊಂದಲ ಇದೆ. ಎಲ್ಲಾ ಕಡೆ ಲೋಪ ಆಗಿದೆ. ಗ್ಯಾರಂಟಿಗಳು ಎಲ್ಲರಿಗೂ ಫ್ರೀ ಎಂದು ಹೇಳಿದ್ದರು. ಈಗ ಸರಿಯಾಗಿ ಜಾರಿ ಮಾಡದೆ ನಿಲ್ಲಿಸಲು ಮುಂದಾಗಿದ್ದಾರೆ. ಆದ್ದರಿಂದ ಸರ್ಕಾರ ರಾಜ್ಯದ ಜನರ ಕ್ಷಮೆ ಯಾಚಿಸಬೇಕು ಎಂದು ಆಗ್ರಹಿಸಿದರು. ಚುನಾವಣೆಗೆ ಗ್ಯಾರಂಟಿ ಕೊಡಬೇಕಿತ್ತು, ಕೊಟ್ಟರು. ಈಗ ನಿಲ್ಲಿಸುವ ಷಡ್ಯಂತ್ರ ಮಾಡುತ್ತಿದ್ದಾರೆ. ಗೃಹಲಕ್ಷ್ಮಿ ಹಣದಲ್ಲಿ ಅಕ್ರಮ ನಡೆದಿದೆ ಎಂದು ಸದನದಲ್ಲೇ ಒಪ್ಪಿಕೊಂಡಿದ್ದರು. ಅಧಿಕಾರಕ್ಕಾಗಿ ಸಿದ್ದರಾಮಯ್ಯ ಹಾಗೂ ಶಿವಕುಮಾರ್ ಅವರ ನಡುವೆ ಶೀತಲಸಮರ ನಡೆಯುತ್ತಿತ್ತು. ಈಗ ಶಿವಕುಮಾರ್ ಅವರು ಸಿಎಂ ಆದ ನಂತರ ಸಚಿವ ಸಂಪುಟಕ್ಕಾಗಿ ಕಚ್ಚಾಟ ಆರಂಭವಾಯಿತು. ಬೆಂಗಳೂರು ಅಭಿವೃದ್ಧಿ ಖಾತೆಗೆ ಕೃಷ್ಣಬೈರೇಗೌಡ ಕ್ಯಾತೆ ತೆಗೆದಿದ್ದಾರೆ ಎಂದರು.

ರಾಮಲಿಂಗಾರೆಡ್ಡಿ ಅವರು ಖಾತೆ ಬೇಡ ಅಂತ ರಾಜೀನಾಮೆ ನೀಡಿದ್ದರು. ಕೆ.ಎಚ್.ಮುನಿಯಪ್ಪ ಅವರೂ ಖಾತೆಗೆ ಅಸಮಾಧಾನ ಗೊಂಡಿದ್ದರು. ಎಲ್ಲಕ್ಕೂ ರಾಹುಲ್ ಗಾಂಧಿ ಅವರ ಮೇಲೆಯೇ ಸರ್ಕಾರ ನಿಂತಿದೆ ಎಂದರು.

**ಧರ್ಮಸ್ಥಳ ವಿರುದ್ಧ ಸಂಚು**

ಧರ್ಮಸ್ಥಳ ಪ್ರಕರಣದಲ್ಲಿ ಷಡ್ಯಂತ್ರ ನಡೆದಿದೆ ಎಂದು ಆಗ ಉಪ ಮುಖ್ಯಮಂತ್ರಿಗಳಾಗಿದ್ದ ಡಿ.ಕೆ. ಶಿವಕುಮಾರ್ ಅವರೇ ಹೇಳಿದ್ದರು. ಬಿಜೆಪಿ ನಾಯಕರು ಧರ್ಮಸ್ಥಳ ಚಲೋ ಮಾಡಿದ್ದೆವು. ಈಗ ಹೊಸದಾಗಿ ನಟ ಪ್ರಕಾಶ್‌ರಾಜ್ ಅವರ ಹೆಸರು ಕೇಳಿಬರುತ್ತಿದೆ. ಹಿಂದೂ ಧಾರ್ಮಿಕ ಸ್ಥಳಕ್ಕೆ ತೊಂದರೆ ಮಾಡುವ ಕೆಲಸ ನಡೆಯುತ್ತಿದೆ ಎಂದು ಶ್ರೀರಾಮುಲು ತಿಳಿಸಿದರು.

# ವಿದ್ಯುತ್ ಕ್ಷೇತ್ರ ಖಾಸಗೀಕರಣಕ್ಕೆ ಅವಕಾಶ ಬೇಡ: ಸಂಸದ ಗೋವಿಂದ ಕಾರಜೋಳ ಆಗ್ರಹ




**ಬೆಂಗಳೂರು, ಜೂ.12:** ರಾಜ್ಯ ಸರಕಾರವು ವಿದ್ಯುತ್ ಕ್ಷೇತ್ರದ ಖಾಸಗೀಕರಣಕ್ಕೆ ಅವಕಾಶ ನೀಡಬಾರದು. ರೈತರು ಬೀದಿಗಿಳಿದು ಹೋರಾಟ ಮಾಡಲು ಅವಕಾಶ ಕೊಡಬಾರದು ಎಂದು ಮಾಜಿ ಉಪಮುಖ್ಯಮಂತ್ರಿ ಮತ್ತು ಸಂಸದ ಗೋವಿಂದ ಕಾರಜೋಳ ಅವರು ಆಗ್ರಹಿಸಿದ್ದಾರೆ.

ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮಗಳೊಂದಿಗೆ ಶುಕ್ರವಾರ ಮಾತನಾಡಿ, ಕೆಇಆರ್‌ಸಿ ಮತ್ತು ಸರಕಾರ ಜೊತೆಗೂಡಿ ರೈತರಿಗೆ ಆತಂಕ ಸೃಷ್ಟಿ ಉಂಟು ಮಾಡಿದ್ದಾರೆ. ಟಾಟಾ ಪವರ್‌ನಂಥ ಖಾಸಗಿಯವರಿಗೆ ವಿದ್ಯುತ್ ಸರಬರಾಜಿನ ಅವಕಾಶ ಕೊಡುವ ಯೋಜನೆಯಿಂದ ರೈತರು ಬಂಡಾಯ ಏಳುವ ಸ್ಥಿತಿ ಇದೆ ಎಂದು ತಿಳಿಸಿದರು.

ಪ್ರಶ್ನೆಗೆ ಉತ್ತರಿಸಿದ ಅವರು, ಖಾಸಗಿಯವರು ಲೈನ್ ನಿರ್ವಹಣೆ ಮಾಡುತ್ತಿರುತ್ತಾರೆ. ಒಂದು ಲೈನ್ ಸುಟ್ಟುಹೋದರೆ, ಟಿಸಿ ಸುಟ್ಟುಹೋದರೆ ಅವರು ಕೇಳಿದಷ್ಟು ಹಣ ಕಟ್ಟಿ ದುರಸ್ತಿ ಮಾಡಬೇಕಾಗುತ್ತದೆ. ಖಾಸಗಿ ಕಂಪೆನಿಯವರು ಲಾಭಕ್ಕಾಗಿ ಕೆಲಸ ಮಾಡುತ್ತಾರೆ. ಸರಕಾರ ಇದೀಗ ಐಪಿ ಸೆಟ್ ಕನೆಕ್ಷನ್, ಟಿ.ಸಿ. ಅಳವಡಿಸಲು 2.5 ಲಕ್ಷದಿಂದ 3 ಲಕ್ಷವನ್ನು ಕಟ್ಟಿಸಿಕೊಳ್ಳುತ್ತಿದೆ. ನಾಳೆ ಅವರು 4 ರಿಂದ 5 ಲಕ್ಷ ಕೇಳಬಹುದೆಂದು ತಿಳಿಸಿದರು.

ಹಿಂದೆ ಬಿಜೆಪಿ ಅಧಿಕಾರದಲ್ಲಿ ಇದ್ದಾಗ 25 ಸಾವಿರ ತುಂಬಿ ಅರ್ಜಿ ಕೊಟ್ಟರೆ ರೈತರಿಗೆ ಯಾವುದೇ ತೊಂದರೆ ಇಲ್ಲದೇ, ಐಪಿ ಸೆಟ್ ಕನೆಕ್ಷನ್, ಟಿ.ಸಿ. ಅಳವಡಿಸುವ ಕೆಲಸ ಮಾಡುತ್ತಿದ್ದೆವು.

ಕಳೆದ 3 ವರ್ಷದಿಂದ ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದ ಮೇಲೆ ಒಬ್ಬ ರೈತ ಐಪಿ ಸೆಟ್ ಕನೆಕ್ಷನ್, ಟಿ.ಸಿ. ಅಳವಡಿಸಲು 2.5 ಲಕ್ಷದಿಂದ 3 ಲಕ್ಷವನ್ನು ವಿದ್ಯುತ್ ಕಂಪೆನಿಗೆ ಕಟ್ಟಬೇಕಿದೆ. ಇದರಿಂದ ರೈತರು ಸಾಕಷ್ಟು ತೊಂದರೆ ಅನುಭವಿಸುತ್ತಿದ್ದಾರೆ ಎಂದು ವಿಶ್ಲೇಷಿಸಿದರು.

ಧರ್ಮಸ್ಥಳದ ಕುರಿತು ಸರಕಾರ ಎಸ್‌ಐಟಿ ಮೂಲಕ ತನಿಖೆ ಮಾಡಿಸುತ್ತಿದೆ. ಧರ್ಮಸ್ಥಳ ಪವಿತ್ರಕ್ಷೇತ್ರ, ಪುಣ್ಯಕ್ಷೇತ್ರ. ಈ ವಿಚಾರದಲ್ಲಿ ಸಮಸ್ಯೆಯನ್ನು ಕೂಡಲೇ ಬಗೆಹರಿಸಿ ಎಂದು ಪ್ರಶ್ನೆಗೆ ಉತ್ತರವಾಗಿ ತಿಳಿಸಿದರು.

## ನಿಧನ ವಾರ್ತೆ

# ಹಿರಿಯ ಪತ್ರಕರ್ತ-ನಿವೃತ್ತ ಪ್ರಾಂಶುಪಾಲ ಪ್ರೊ| ಕೆ. ಬಾಲಕೃಷ್ಣ ಗಟ್ಟಿ ನಿಧನ



ಮುಂಬಯಿ (ಬಂಟ್ವಾಳ), ಜೂ.12: ಕರ್ನಾಟಕ ಕರಾವಳಿಯಲ್ಲಿನ ಹಿರಿಯ ಪತ್ರಕರ್ತ, ನಿವೃತ್ತ ಪ್ರಾಂಶುಪಾಲ ಪ್ರೊ| ಕೆ.ಬಾಲಕೃಷ್ಣ ಗಟ್ಟಿ (83.) ಇಂದಿಲ್ಲಿ ನಿಧನರಾದರು. ಬಂಟ್ವಾಳ ಎಸ್‌ವಿಎಸ್ ಕಾಲೇಜ್‌ನಲ್ಲಿ ಅರ್ಥಶಾಸ್ತ್ರ ಉಪನ್ಯಾಸಕರಾಗಿ, ಪ್ರಾಂಶುಪಾಲರಾಗಿ ಸೇವೆ ಸಲ್ಲಿಸಿದ್ದು ನಿವೃತ್ತರಾಗಿ ಮಂಗಳೂರಿನಲ್ಲಿ ನೆಲೆಸಿದ್ದರು. ಮೃತರು ಪತ್ನಿ, ಪುತ್ರ, ಪುತ್ರಿ ಮತ್ತು ಬಂಧು ಬಳಗವನ್ನು ಆಗಲಿದ್ದಾರೆ.

ಕಾಸರಗೋಡು ಮೂಲತಃ ಅವರು ಬಂಟ್ವಾಳದಲ್ಲಿ ಸುದೀರ್ಘ ಕಾಲ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ್ದು ಎಪ್ಪತ್ತರ ದಶಕಕ್ಕೆ ಬುಲೆಟ್ ಮೇಸ್ತ್ರು ಎಂದೇ ಪರಿಚಯಿತರಾಗಿದ್ದರು. ಉತ್ತಮ ವಾಗ್ಮಿಯಾಗಿದ್ದ ಅವರು ಎಡಪಂಥೀಯ ಚಿಂತನೆಗಳಿಂದ ಆಕರ್ಷಿತರಾಗಿದ್ದರು.

ಪ್ರಜಾವಾಣಿ ಮತ್ತು ಡೆಕ್ಕನ್ ಹೆರಾಲ್ಡ್ ಪತ್ರಿಕೆಯ ವರದಿಗಾರರಾಗಿದ್ದರು. ನೇತ್ರಾವತಿ ವಾರ್ತೆ ದೈನಿಕವನ್ನು ಪ್ರಾರಂಭಿಸಿ ಅನೇಕ ಕಿರಿಯ ಪತ್ರಕರ್ತರಿಗೆ ಮಾರ್ಗದರ್ಶಕರಾಗಿದ್ದರು. ಜನವಾಹಿನಿ ದೈನಿಕದ ಸಂಪಾದಕರಾಗಿ ಪತ್ರಿಕೆಯನ್ನು ಮುನ್ನಡೆಸಿದ್ದ ಬಾಲಕೃಷ್ಣ ಗಟ್ಟಿ ಸರಳ ನಿಷ್ಠುರ ಬರೆವಣಿಗೆ ಮೂಲಕ ಪತ್ರಿಕಾರಂಗದಲ್ಲಿ ದಶಕಗಳ ಕಾಲ ಗುರುತಿಸಲ್ಪಟ್ಟಿದ್ದರು. ಬಂಟ್ವಾಳ ತಾಲೂಕು ಗ್ರಾಮೀಣ ಪತ್ರಕರ್ತರ ಸಂಘ ಸ್ಥಾಪನೆ ಮಾಡಿ ಸ್ಥಾಪಕಾಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದರು. 2024 ನವಂಬರ 12ರ ಬಂಟ್ವಾಳ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿದ್ದರು.

ಹಿರಿಯ ಪತ್ರಕರ್ತ ಕೆ.ಬಾಲಕೃಷ್ಣ ಗಟ್ಟಿ ನಿಧನಕ್ಕೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು, ಕೆಯುಡಬ್ಲ್ಯೂಜೆ ಮಹಾರಾಷ್ಟ್ರ ಘಟಕದ ನಿಕಟಪೂರ್ವ ಅಧ್ಯಕ್ಷ ರೋನ್ಸ್ ಬಂಟ್ವಾಳ, ಕೆಯುಡಬ್ಲ್ಯೂಜೆ ದಕ್ಷಿಣ ಕನ್ನಡ ಜಿಲ್ಲಾಧ್ಯಕ್ಷ ಪುಷ್ಪರಾಜ್ ಬಿ.ಎನ್, ನಿಕಟಪೂರ್ವ ಅಧ್ಯಕ್ಷ ಶ್ರೀನಿವಾಸ್ ನಾಯಕ್ ಇಂದಾಜೆ ಮತ್ತಿತರ ಗಣ್ಯರು ಸಂತಾಪ ವ್ಯಕ್ತ ಪಡಿಸಿದ್ದಾರೆ

# ಕರ್ನಾಟಕ ಛಾಯಾರತ್ನ ಪ್ರಶಸ್ತಿ ಪ್ರದಾನ




**ಬೆಂಗಳೂರು, ಜೂ.12:** ಕರ್ನಾಟಕ ವಿಡಿಯೋ ಮತ್ತು ಫೋಟೋ ಅಸೋಸಿಯೇಷನ್ ಮತ್ತು ಕರ್ನಾಟಕ ರಾಜ್ಯ ಪತ್ರಿಕಾ ಛಾಯಾಗ್ರಾಹಕರ ಸಹಕಾರದೊಂದಿಗೆ ತ್ರಿಪುರವಾಸಿನಿ ಅರಮನೆ ಮೈದಾನದಲ್ಲಿ ಮೂರು ದಿನಗಳ ಕಾಲ ಅಂತಾರಾಷ್ಟ್ರೀಯ ಮಟ್ಟದ ಫೋಟೋ ಮತ್ತು ವಿಡಿಯೋ ಪ್ರದರ್ಶನದಲ್ಲಿ ಪತ್ರಿಕಾ ಛಾಯಾಗ್ರಾಹಕರಿಗೆ ಕರ್ನಾಟಕ ಛಾಯಾರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು. ಬೆಂಗಳೂರಿನ ಪೂರ್ಣಿಮಾ, ವಿಶ್ವೇಶ್ವರಪ್ಪ ಎಸ್, ಬೆಳಗಾವಿಯ ಪಿ ಕೆ ಬಡಿಗೇರ್, ಅಕ್ರಮ್ ಕೊಪ್ಪಳದ ನಾಗರಾಜ್ ದಸ್ತಾನವರ್, ಬಳ್ಳಾರಿಯ ರುದ್ರಸ್ವಾಮಿ ಬಳ್ಳಾರಿ, ಮೈಸೂರಿನ ಪ್ರಗತಿ ಗೋಪಾಲಕೃಷ್ಣ ಅವರಿಗೆ ಕರ್ನಾಟಕ ಛಾಯಾರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಮುಖ್ಯ ಅತಿಥಿಗಳಾಗಿ ಎಂ.ಎಸ್. ಎಂ.ಇ.ಡೇವಲ್ ಮೆಂಟ್ ಅಧಿಕಾರಿ ದೇವರಾಜ್ ಕೆ. ಬಿ.ಬೆಂಜಮಿನ್ ಭಾಸ್ಕರ್, ಸೆಲ್ವಮುತ್ತು, ಶ್ರೀನಾಥ್, ಎಸ್.ಕೆ. ಹುಸೇನ್, ಜಾನ್ ಅಮರ್ ರಾಜ್, ರಿನಿ ರಾವಲ್, ದಿವ್ಯರವಿ, ಅಧ್ಯಕ್ಷ ಎಚ್.ವಿ.ಕೃಷ್ಣಪ್ಪ, ಕಾರ್ಯದರ್ಶಿ ಎ.ಜಗದೀಶ್ ಉದ್ಘಾಟನೆ ಮಾಡಿದರು.

ಕೆ.ದೇವರಾಜ್ ಮಾತನಾಡಿ, ಇಲಾಖೆಯ ವತಿಯಿಂದ ಫೋಟೋ ಮತ್ತು ವಿಡಿಯೋ ಪ್ರದರ್ಶನ ಮೇಳಕ್ಕೆ ಸಹಕಾರ ಕೊಡುತ್ತಿದ್ದೇವೆ. ಫೋಟೋ ಮತ್ತು ವಿಡಿಯೊ ದೊಡ್ಡ ಉದ್ಯಮವಾಗಿದೆ. ಪ್ರತಿಯೊಬ್ಬ ಫೋಟೋ ಮತ್ತು ವಿಡಿಯೊಗ್ರಾಫರ್ಸ್ ಗಳಿಗೆ ಎಂ.ಎಸ್. ಎಮ್.ಇ.ಇಲಾಖೆಗೆ ಭೇಟಿ ಮಾಡಿ ವಿವಿಧ ಯೋಜನೆಗಳ ಸಹಾಯ ಪಡೆದುಕೊಳ್ಳಿ. ವಿವಿಧ ಜಿಲ್ಲೆಗಳಲ್ಲಿ ಈ ರೀತಿಯ ಪ್ರದರ್ಶನ ಮತ್ತು ಮಾರಾಟ ಮೇಳಕ್ಕೆ ನಮ್ಮ ಇಲಾಖೆ ಸಹಕಾರ ನೀಡುತ್ತದೆ ಎಂದು ಹೇಳಿದರು.

# ಸೊನಾಟಾ ಸಿಂಫನೀಸ್–ಎನ್‌ಕೆಇಎಸ್ ಸಂಯುಕ್ತ ಆಶ್ರಯದಲ್ಲಿ ಗೋಕುಲ್ ಸಭಾಗೃಹದಲ್ಲಿ ಸಂಭ್ರಮ

**ಗಾನಗಂಧರ್ವ ಎಸ್.ಪಿ ಬಾಲಸುಬ್ರಹ್ಮಣ್ಯಂ ೮೦ನೇ ಜನ್ಮದಿನಾಚರಣೆ**



**ಮುಂಬಯಿ, ಜೂ.12:** ಸೊನಾಟಾ ಸಿಂಫನೀಸ್ ಹಾಗೂ ಎನ್‌ಕೆಇಎಸ್ ಇವುಗಳ ಸಂಯುಕ್ತ ಆಶ್ರಯದಲ್ಲಿ ಇತ್ತೀಚೆಗೆ ಸಯನ್‌ನ ಗೋಕುಲ್ ಸಭಾಗೃಹದಲ್ಲಿ ಸಂಗೀತದ ಗಾನಗಂಧರ್ವ ದಿ| ಎಸ್.ಪಿ ಬಾಲಸುಬ್ರಹ್ಮಣ್ಯಂ ಅವರ 80ನೇ ಜನ್ಮದಿನವನ್ನು ವಿನೂತನವಾಗಿ ಆಚರಿಸಲಾಯಿತು.

ವಿಶ್ವನಾಥ್‌ಶೆಟ್ಟಿ ಕಾಪು ಅವರ ಮುತುವರ್ಜಿಯಲ್ಲಿ ಹಾಗೂ ಎನ್‌ಕೆಇಎಸ್ ಹಳೆ ವಿದ್ಯಾರ್ಥಿಗಳ ನೇತೃತ್ವದಲ್ಲಿ ಉಚಿತವಾಗಿ ಆಯೋಜಿಸಲಾಗಿದ್ದ ಸಂಗೀತ ಸಂಜೆಯಲ್ಲಿ ಹಲವಾರು ಗಣ್ಯರು ಉಪಸ್ಥಿತರಿದ್ದರು. ಆರಂಭದಲ್ಲಿ ತಂಡದ ಹಾಡುಗಾರರು ಅತಿಥಿ ಗಣ್ಯರ ಸಮ್ಮುಖದಲ್ಲಿ ದೀಪ ಪ್ರಜ್ವಲನೆ ನೆರವೇರಿಸಿ, ಎಸ್‌ಪಿಬಿ ಅವರಿಗಾಗಿ ವಿಶೇಷವಾಗಿ ತಯಾರಿಸಲಾದ ಕೇಕ್ ಕತ್ತರಿಸುವ ಮೂಲಕ ಜನ್ಮದಿನ ಸಂಭ್ರಮಿಸಿದರು.

ಸ್ವರಸೂರಿ ಮಾರ್ನಾಡ್ ಅವರ ಪ್ರಾರ್ಥನೆಯೊಂದಿಗೆ ಆರಂಭಗೊಂಡ ಸಂಗೀತ ಕಾರ್ಯಕ್ರಮದಲ್ಲಿ ಎಸ್‌ಪಿಬಿ ಅವರು ಹಾಡಿದ ಅಮರ ಗೀತೆಗಳನ್ನು ಆಯ್ದು ಪ್ರೇಕ್ಷಕರಿಗೆ ಸಂಗೀತ ರಸದೌತಣ ನೀಡಲಾಯಿತು. ಗಾಯಕರಾದ ವಿಶ್ವನಾಥ್‌ಶೆಟ್ಟಿ ಕಾಪು, ಸುರೇಶ್ ಶೆಟ್ಟಿ, ಜಯೇಶ್ ಪೂಜಾರಿ, ಕೇಶವ್ ಶೆಟ್ಟಿ ಕಲ್ಲಡ್ಕ, ಸಂಧ್ಯಾ ಸಿಂಗ್, ಪ್ರತಿಮಾ ಆಚಾರ್ಯ, ಬೇಬಿ ಸ್ವರ ಮಾರ್ನಾಡ್, ಮೀನಾಕ್ಷಿ ಚೌಬೆ ಹಾಗೂ ನಮ್ರತಾ ಕದಂ ಅವರು ಮನಮೋಹಕವಾಗಿ ಹಾಡುಗಳನ್ನು ಪ್ರಸ್ತುತಪಡಿಸಿ ಶ್ರೋತೃಗಳ ಮೆಚ್ಚುಗೆಗೆ ಪಾತ್ರರಾದರು.

ಕಾರ್ಯಕ್ರಮಕ್ಕೆ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಸಹಕಾರ ನೀಡಿದ ಮಹನೀಯರನ್ನು ವೇದಿಕೆಗೆ ಆಹ್ವಾನಿಸಿ ಸತ್ಕರಿಸಲಾಯಿತು. ಬೃಹನ್ಮುಂಬಯಿಯಲ್ಲಿ ಇದೇ ಮೊದಲಾಗಿಸಿ ಹೊಸ ಮಾದರಿಯ ಸಂಗೀತ ಕಾರ್ಯಕ್ರಮದೊಂದಿಗೆ ಹೊಸ ಆಯಾಮ ನೀಡಿದ ಈ ತಂಡದ ಪ್ರಯತ್ನ ಸಂಗೀತಾಸಕ್ತರ ಮೆಚ್ಚುಗೆಗೆ ಪಾತ್ರವಾಗಿ ವಿಶಿಷ್ಟ ಸಂಚಲನ ಮೂಡಿಸಿತು. ಶಾಹಿದ್ ಅವರು ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

## ವಿ.ಪ. ಚುನಾವಣೆ: ಜೂ.16 ರಂದು ವಂಡರ್ ಲಾ ರೆಸಾರ್ಟ್‌ನಲ್ಲಿ ಮಹತ್ವದ ಶಾಸಕಾಂಗ ಸಭೆ

**ಬೆಂಗಳೂರು, ಜೂ.12:** ವಿಧಾನ ಪರಿಷತ್ತಿಗೆ ನಡೆಯಲಿರುವ ದ್ವೈ-ವಾರ್ಷಿಕ ಚುನಾವಣೆಯ ಹಿನ್ನೆಲೆಯಲ್ಲಿ ರಾಜ್ಯ ರಾಜಕಾರಣದಲ್ಲಿ ಭಾರಿ ಚಟುವಟಿಕೆಗಳು ಗರಿಗೆದರಿವೆ. ಇದರ ಭಾಗವಾಗಿ, ಕರ್ನಾಟಕ ಕಾಂಗ್ರೆಸ್ ಶಾಸಕಾಂಗ ಪಕ್ಷದ ಮಹತ್ವದ ಸಭೆಯನ್ನು ಜೂ.16ರಂದು ಕರೆಯಲಾಗಿದೆ. ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕರು ಆಗಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಶಾಸಕಾಂಗ ಸಭೆ ಕರೆದಿದ್ದಾರೆ. ವಿಶೇಷವೆಂದರೆ, ಈ ಬಾರಿ ಕಾಂಗ್ರೆಸ್ ತನ್ನ ಶಾಸಕರಿಗೆ ಬೆಂಗಳೂರು ದಕ್ಷಿಣ ಜಿಲ್ಲೆಯ ರಾಮನಗರ ತಾಲೂಕಿನ ಬಿಡದಿ ಬಳಿಯಿರುವ ವಂಡರ್‌ಲಾ ರೆಸಾರ್ಟ್‌ನಲ್ಲಿ ಸಭೆ ಆಯೋಜಿಸಿದ್ದು, ಜೂನ್ 16ರ ಮಂಗಳವಾರ ಸಂಜೆ 6 ಗಂಟೆಗೆ ಆರಂಭವಾಗಲಿದೆ ಎಂದು ಪಕ್ಷದ ಪ್ರಕಟಣೆ ತಿಳಿಸಿದೆ. ಸಭೆಯಲ್ಲಿ ಎ.ಐ.ಸಿ.ಸಿ. ಪ್ರಧಾನ ಕಾರ್ಯದರ್ಶಿ ಹಾಗೂ ಕರ್ನಾಟಕ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ, ರಾಜ್ಯ ಕೆ.ಪಿ.ಸಿ.ಸಿ. ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಪಕ್ಷದ ಎಲ್ಲಾ ಕಾರ್ಯಾಧ್ಯಕ್ಷರು ಉಪಸ್ಥಿತರಿರಲಿದ್ದಾರೆ. ಜೂನ್ 18ರ ಗುರುವಾರದಂದು ವಿಧಾನ ಸಭೆಯಿಂದ ವಿಧಾನ ಪರಿಷತ್ತಿಗೆ ಚುನಾವಣೆ ನಡೆಯಲಿದ್ದು, ಪಕ್ಷದ ಅಭ್ಯರ್ಥಿಗಳ ಪರವಾಗಿ ಮತ ಚಲಾಯಿಸುವ ಕುರಿತು ಶಾಸಕರಿಗೆ ಈ ಸಭೆಯಲ್ಲಿ ಪ್ರಮುಖ ಮಾರ್ಗದರ್ಶನ ಹಾಗೂ ಕಾರ್ಯತಂತ್ರಗಳನ್ನು ಹೆಣೆಯ ಲಾಗುತ್ತದೆ. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಶಾಸಕಾಂಗ ಪಕ್ಷದ ಎಲ್ಲಾ ವಿಧಾನಸಭಾ ಸದಸ್ಯರು ಹಾಗೂ ಬಾಹ್ಯ ಬೆಂಬಲಿತ ವಿಧಾನಸಭಾ ಸದಸ್ಯರು ತಪ್ಪದೇ ಈ ಸಭೆಯಲ್ಲಿ ಭಾಗವಹಿಸಬೇಕೆಂದು ಶಾಸಕಾಂಗ ಪಕ್ಷದ ನಾಯಕರ ಪರವಾಗಿ ಕಾರ್ಯದರ್ಶಿ ಅಲ್ಲಮಪ್ರಭು ಪಾಟೀಲ್ ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ.

# ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ ಯೋಜನೆಗೆ ಅಧಿಸೂಚನೆ ಪ್ರಕಟ

### ವಿರೋಧ, ಪ್ರತಿಭಟನೆ ನಡುವೆ ಯೋಜನೆ ಮುಂದುವರಿಸಲು ಸರ್ಕಾರ ದೃಢ ಹೆಜ್ಜೆ




**ಬೆಂಗಳೂರು, ಜೂ.12:** ಸಿಲಿಕಾನ್ ಸಿಟಿ ನೆರಳಿನಲ್ಲಿ ಮತ್ತೊಂದು ಬೃಹತ್ ಉಪನಗರ ನಿರ್ಮಾಣಕ್ಕೆ ರಾಜ್ಯ ಸರ್ಕಾರ ಅಧಿಕೃತವಾಗಿ ಚಾಲನೆ ನೀಡಿದೆ. ಬಿಡದಿ ಬಳಿ 'ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ' ಯೋಜನೆಗೆ ಸಂಬಂಧಿಸಿದಂತೆ ತೀವ್ರ ರಾಜಕೀಯ ವಿರೋಧ ಮತ್ತು ಸಾರ್ವಜನಿಕ ಪ್ರತಿಭಟನೆಗಳ ನಡುವೆಯೂ ಸರ್ಕಾರ ಅಂತಿಮ ಅಧಿಸೂಚನೆ ಪ್ರಕಟಿಸಿದೆ.

ಈ ಮಹತ್ವದ ನಿರ್ಧಾರವು ಬೆಂಗಳೂರಿನ ಸುತ್ತಮುತ್ತಲಿನ ರಿಯಲ್ ಎಸ್ಟೇಟ್ ಮತ್ತು ಕೈಗಾರಿಕಾ ವಲಯದಲ್ಲಿ ಭಾರಿ ಸಂಚಲನ ಮೂಡಿಸಿದೆ. ಮೊದಲ ಹಂತದಲ್ಲಿ 500 ಎಕರೆ ಸ್ವಾಧೀನಪಡಿಸಿಕೊಳ್ಳಲು ಸರ್ಕಾರ ಪ್ರಕ್ರಿಯೆ ಆರಂಭಿಸಿದೆ. ಇದಕ್ಕಾಗಿ ಬೆಂಗಳೂರು ದಕ್ಷಿಣ ಜಿಲ್ಲೆ ಹಾಗೂ ರಾಮನಗರ ತಾಲೂಕಿನ ವ್ಯಾಪ್ತಿಗೆ ಬರುವ ಬಿಡದಿ ಸುತ್ತಮುತ್ತಲಿನ ಆಯಕಟ್ಟಿನ ಜಾಗವನ್ನು ಗುರುತಿಸಲಾಗಿದೆ. ರಾಜಕೀಯ ವಲಯದಲ್ಲಿ ಈ ಅಧಿಸೂಚನೆಗೆ ತೀವ್ರ ಧಿಕ್ಕಾರ ಹಾಗೂ ರೈತರಿಂದ ಸಾಲು ಸಾಲು ಪ್ರತಿಭಟನೆಗಳು ವ್ಯಕ್ತವಾಗಿದ್ದರೂ, ಸರ್ಕಾರ ಮಾತ್ರ ಯೋಜನೆಯನ್ನು ಮುಂದುವರಿಸಲು ಕಟ್ಟುನಿಟ್ಟಿನ ಹೆಜ್ಜೆ ಇಟ್ಟಿದೆ.

ಎರಡು ತಾಲೂಕುಗಳಿಗೆ ವಿಸ್ತರಣೆ ಈ ಬೃಹತ್ ಉಪನಗರ ಯೋಜನೆಯ ಮೊದಲ ಹಂತದ ಭೂಸ್ವಾಧೀನ ಪ್ರಕ್ರಿಯೆಯು ಪ್ರಮುಖವಾಗಿ ಎರಡು ತಾಲೂಕುಗಳ ವ್ಯಾಪ್ತಿಯಲ್ಲಿ ನಡೆಯಲಿದೆ. ರಾಮನಗರ ಮತ್ತು ಹಾರೋಹಳ್ಳಿ ತಾಲೂಕುಗಳ ವಿವಿಧ ಹಳ್ಳಿಗಳ ಜಮೀನುಗಳು ಈ ಯೋಜನೆಗೆ ಒಳಪಡಲಿವೆ. ಈ ಭಾಗದಲ್ಲಿ ಕೈಗಾರಿಕಾ ಕಾರಿಡಾರ್‌ಗಳು ಈಗಾಗಲೇ ಇರುವುದರಿಂದ, ಹೊಸ ಉಪನಗರದ ನಿರ್ಮಾಣವು ಈ ಪ್ರದೇಶದ ಆರ್ಥಿಕ ಚಿತ್ರಣವನ್ನೇ ಬದಲಾಯಿಸಲಿದೆ ಎಂದು ಸರ್ಕಾರ ಅಂದಾಜಿಸಿದೆ.

ಭೂಮಿ ಕಳೆದುಕೊಳ್ಳುವ ರೈತರು ಮತ್ತು ಜಮೀನು ಮಾಲೀಕರಿಗಾಗಿ ಸರ್ಕಾರ ಆಕರ್ಷಕ ಪರಿಹಾರ ಪ್ಯಾಕೇಜ್ ಅನ್ನು ಪ್ರಕಟಿಸಿದೆ. ಭೂಮಿಯ ಮೌಲ್ಯಕ್ಕೆ ಅನುಗುಣವಾಗಿ ಪ್ರತಿ ಎಕರೆಗೆ 2.50 ಕೋಟಿ ರೂಪಾಯಿಯಿಂದ 2.70 ಕೋಟಿ ರೂಪಾಯಿವರೆಗೆ ಗರಿಷ್ಠ ಪರಿಹಾರ ಧನವನ್ನು ನಿಗದಿಪಡಿಸಲಾಗಿದೆ. ಭೂಸ್ವಾಧೀನಕ್ಕೆ ಎದುರಾಗಿರುವ ವಿರೋಧವನ್ನು ಶಮನಗೊಳಿಸಲು ಈ ಭಾರಿ ಮೊತ್ತದ ಪರಿಹಾರ ಸಹಾಯ ಮಾಡಬಹುದು ಎಂದು ನಿರೀಕ್ಷಿಸಲಾಗಿದೆ.

**50:50 ಅನುಪಾತದ ಭೂಮಿ ಆಫರ್!**

ನಗದು ಪರಿಹಾರ ಬೇಡದ ರೈತರಿಗಾಗಿ ಸರ್ಕಾರ ಮತ್ತೊಂದು ಅತ್ಯುತ್ತಮ ಪರ್ಯಾಯ ಆಯ್ಕೆಯನ್ನು ನೀಡಿದೆ. ಅದರಂತೆ, ಸ್ವಾಧೀನಪಡಿಸಿಕೊಂಡ ಜಮೀನಿಗೆ ಪ್ರತಿಯಾಗಿ ಶೇಕಡಾ 50 ರಷ್ಟು ಅಭಿವೃದ್ಧಿಪಡಿಸಿದ ಭೂಮಿಯನ್ನು ಮೂಲ ಮಾಲೀಕರಿಗೆ ಮರಳಿ ನೀಡಲು ಸರ್ಕಾರ ಆದೇಶ ಹೊರಡಿಸಿದೆ. ಅಂದರೆ, ಲೇಔಟ್ ಸಿದ್ಧವಾದ ಬಳಿಕ ಅರ್ಧದಷ್ಟು ವಾಣಿಜ್ಯ ಅಥವಾ ವಸತಿ ನಿವೇಶನಗಳನ್ನು ರೈತರಿಗೇ ಹಸ್ತಾಂತರಿಸಲಾಗುವುದು.

**ಯೋಜನೆಯ ಮುಖ್ಯಾಂಶಗಳು:**

**ಯೋಜನೆ:** ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ (ಬಿಡದಿ ಬಳಿ)

**ಮೊದಲ ಹಂತದ ವ್ಯಾಪ್ತಿ:** 500 ಎಕರೆ ಭೂಸ್ವಾಧೀನ. ಒಳಪಡುವ ತಾಲೂಕುಗಳು: ರಾಮನಗರ ಮತ್ತು ಹಾರೋಹಳ್ಳಿ.

**ನಗದು ಪರಿಹಾರ:** ಪ್ರತಿ ಎಕರೆಗೆ 2.50 ಕೋಟಿಯಿಂದ 2.70 ಕೋಟಿ ರೂ. (ಪ್ರತಿ ಎಕರೆಗೆ).

**ಪರ್ಯಾಯ ಆಯ್ಕೆ:** ಶೇ.50ರಷ್ಟು ಅಭಿವೃದ್ಧಿಪಡಿಸಿದ ಜಮೀನು ವಾಪಸ್. ಬೆಂಗಳೂರಿನ ಮೇಲಿನ ಜನಸಂಖ್ಯೆ ಮತ್ತು ಸಂಚಾರದಟ್ಟಣೆ ಕಡಿಮೆ ಮಾಡುವ ನಿಟ್ಟಿನಲ್ಲಿ ಈ 'ಗ್ರೇಟರ್ ಬೆಂಗಳೂರು' ಉಪನಗರ ಯೋಜನೆ ಅತ್ಯಂತ ನಿರ್ಣಾಯಕವಾಗಿದ್ದು, ಮುಂಬರುವ ದಿನಗಳಲ್ಲಿ ಇದು ಹೂಡಿಕೆದಾರರ ಪ್ರಮುಖ ಆಕರ್ಷಣೆಯ ಕೇಂದ್ರವಾಗಲಿದೆ.

## ಗ್ರಾಮೀಣ ಪ್ರದೇಶದ 50 ಸರ್ಕಾರಿ ಶಾಲೆಗಳಲ್ಲಿ 10 ಕೋಟಿ ರೂ. ಎಐ ಪ್ರಯೋಗಾಲಯ: ಪ್ರಿಯಾಂಕ್ ಖರ್ಗೆ



**ಕೇಂದ್ರ ಸರ್ಕಾರದಿಂದ 3 ವರ್ಷಗಳ ಅವಧಿಗೆ 68.98 ಲಕ್ಷ ರೂ. ನೆರವು, ರಾಜ್ಯದಿಂದ 10 ಕೋಟಿ ರೂ.**

**ಬೆಂಗಳೂರು, ಜೂ.12:** ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗಶೀಲತೆ ಹೆಚ್ಚಿಸಲು ರಾಜ್ಯದ 2 ಮತ್ತು 3ನೆ ಶ್ರೇಣಿಯ ನಗರ –ಪಟ್ಟಣಗಳ 50 ಸರ್ಕಾರಿ ಕಾಲೇಜಗಳಲ್ಲಿ 10 ಕೋಟಿ ರೂ. ವೆಚ್ಚದಲ್ಲಿ ಅತ್ಯಾಧುನಿಕ ಕೃತಕ ಬುದ್ಧಿಮತ್ತೆ (ಎಐ) ಪ್ರಯೋಗಾಲಯ ಗಳನ್ನು ಸ್ಥಾಪಿಸಲು ಕರ್ನಾಟಕ ರಾಜ್ಯ ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿದೆ ಎಂದು ಗೃಹ, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಮತ್ತು ಇ–ಆಡಳಿತ ಇಲಾಖೆ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ರಾಜ್ಯ ಸರ್ಕಾರದ ಪ್ರಸಕ್ತ ಹಣಕಾಸು ವರ್ಷದ (2026–27) ಬಜೆಟ್‌ನಲ್ಲಿ ಘೋಷಿಸಿದಂತೆ, ಗ್ರಾಮೀಣ ಪ್ರದೇಶದ ಯುವ ಜನರನ್ನು ಅಗತ್ಯ ಕೌಶಲದ ಜೊತೆ ಉದ್ಯೋಗಶೀಲರನ್ನಾಗಿ ಮಾಡಲು ಕೇಂದ್ರ ಸರ್ಕಾರದ ಎಐ ಮಿಷನ್ ಸಹಭಾಗಿತ್ವದಲ್ಲಿ ಎಐ ಪ್ರಯೋಗಾಲಯ ಗಳನ್ನು ಆರಂಭಿಸಲು ಉದ್ದೇಶಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ. ಆಯ್ಕೆ ಮಾಡಲಾಗುವ ಶಿಕ್ಷಣ ಸಂಸ್ಥೆ, ಕಾಲೇಜ್‌ಗಳಲ್ಲಿ ಆಧುನಿಕ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಒಳಗೊಂಡ ಪ್ರಯೋಗಾಲಯಗಳನ್ನು ಸ್ಥಾಪಿಸಿ, ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ತರಬೇತಿ, ಕೌಶಲ ಅಭಿವೃದ್ಧಿ ಮತ್ತು ಹೊಸ ಆವಿಷ್ಕಾರಗಳಿಗೆ ಅವಕಾಶ ಕಲ್ಪಿಸಿಕೊಡಲಾಗುವುದು. ಯುವಜನರು ಇತ್ತೀಚಿನ ತಂತ್ರಜ್ಞಾನಗಳನ್ನು ಕರಗತ ಮಾಡಿಕೊಳ್ಳಲು ಮತ್ತು ಉದ್ಯೋಗಾರ್ಹತೆ ಹೆಚ್ಚಿಸಿಕೊಳ್ಳಲು ಇದು ಎಂದು ಸಚಿವರು ಹೇಳಿದ್ದಾರೆ.

ಕೇಂದ್ರ ಸರ್ಕಾರವು ಎಐ ಮಿಷನ್ – ಯೋಜನೆಯಡಿ ಪ್ರತಿಯೊಂದು ಪ್ರಯೋಗಾಲಯಕ್ಕೆ 3 ವರ್ಷಗಳ ಅವಧಿಗೆ 68.98 ಲಕ್ಷ ರೂ. ಮೊತ್ತದ ನೆರವು ನೀಡಲಿದೆ. ಈ ಮೊತ್ತವನ್ನು 3 ಕಂತುಗಳಲ್ಲಿ ಬಿಡುಗಡೆ ಮಾಡಲಾಗುವುದು. ಇದಕ್ಕೆ ಪೂರಕವಾಗಿ ರಾಜ್ಯ ಬಜೆಟ್‌ನಲ್ಲಿ ಘೋಷಿಸಿರುವಂತೆ 10 ಕೋಟಿ ಬಿಡುಗಡೆ ಮಾಡಲು ಅನುಮೋದನೆ ನೀಡಲಾಗಿದೆ, ಮೊದಲ ವರ್ಷಕ್ಕೆ 6.29 ಕೋಟಿ ಬಿಡುಗಡೆ ಮಾಡಲಾಗುತ್ತಿದೆ, ಎಂದೂ ಸಚಿವರು ವಿವರಿಸಿದ್ದಾರೆ.

## ಶೌಚಗುಂಡಿ ಸ್ವಚ್ಛತೆಗೆ ಯಂತ್ರ ಬಳಸಲು ಈಶ್ವರ ಖಂಡ್ರೆ ಕಟ್ಟಪ್ಪಣೆ



**ಬೆಂಗಳೂರು, ಜೂ. 12:** ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯ್ತಿ ವ್ಯಾಪ್ತಿಗೆ ಸೇರಿದ ಮತ್ತು ಪಂಚಾಯ್ತಿ ಸೃಜಿಸಿರುವ ಎಲ್ಲ ಸರ್ಕಾರಿ ಆಸ್ತಿಗಳನ್ನು ಜಿಯೋಟ್ಯಾಗ್ ಮಾಡುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಸೂಚನೆ ನೀಡಿದ್ದಾರೆ.

ದೇವನಹಳ್ಳಿಯ ಜಿಲ್ಲಾ ಪಂಚಾಯ್ತಿ ಕಾರ್ಯಾಲಯದಲ್ಲಿಂದು ನಡೆದ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯ್ತಿಗಳ ಪ್ರಗತಿ ಪರಿಶೀಲನಾ ಸಭೆಗೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಭೂಮಿಗೆ ಬಂಗಾರದ ಬೆಲೆ ಇದ್ದು, ಪಂಚಾಯ್ತಿಯ ಯಾವುದೇ ಆಸ್ತಿ ಕಬಳಿಕೆ ಆಗದಂತೆ ಮತ್ತು ಗುಣಮಟ್ಟದ ಖಾತ್ರಿಗೆ ಜಿಯೋ ಟ್ಯಾಗ್ ಮಾಡಲು ಸೂಚಿಸಿರುವುದಾಗಿ ಹೇಳಿದರು.

ರಾಜ್ಯದಲ್ಲಿ ಇಂದಿಗೂ 7483 ಶೌಚಗುಂಡಿ ಕಾರ್ಮಿಕರು (ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್) ಇದ್ದಾರೆ ಎಂದು ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ನೀಡಿರುವ ಹೇಳಿಕೆ ಉಲ್ಲೇಖಿಸಿದ ಸಚಿವರು, ಯಾವುದೇ ಮಲಗುಂಡಿಯ ಸ್ವಚ್ಛತೆಯನ್ನು ಯಾವುದೇ ಕರ್ಮಚಾರಿಯ ಕೈಯಿಂದ ಮಾಡಿಸಿದರೆ ನಿಯಮಾನುಸಾರ ಶಿಸ್ತುಕ್ರಮ ಜರುಗಿಸಲಾಗುವುದು, ಯಂತ್ರಗಳ ಮೂಲಕವೇ ಸ್ವಚ್ಛತೆ ಮಾಡಬೇಕೆಂದು ಸೂಚಿಸಲಾಗಿದ್ದು ಇದಕ್ಕಾಗಿ ಅಗತ್ಯವಿರುವ ಜೆಟ್ಟಿಂಗ್, ಸಕ್ಕಿಂಗ್ ಯಂತ್ರ ಖರೀದಿಸಲಾಗುವುದು ಎಂದರು. ತಾವು ಈ ಹಿಂದೆ ಪೌರಾಡಳಿತ ಸಚಿವರಾಗಿದ್ದಾಗ ಮಲತ್ಯಾಜ್ಯ ಸಂಸ್ಕರಣಾ ಘಟಕ (ಎಫ್.ಎಸ್.ಟಿ.ಪಿ.) ನಿರ್ಮಿಸಲು ಯೋಜನೆ ರೂಪಿಸಿ, ದೇವನಹಳ್ಳಿಯಲ್ಲಿ ಕೂಡ ಒಂದು ಎಫ್.ಎಸ್.ಟಿ.ಪಿ. ಮಾಡಿದ್ದನ್ನು ಸ್ಮರಿಸಿದ ಈಶ್ವರ ಖಂಡ್ರೆ, ಈಗ ಪಂಚಾಯ್ತಿ ಮಟ್ಟದಲ್ಲೂ ಎಫ್.ಎಸ್.ಟಿ.ಪಿ. ನಿರ್ಮಿಸುವುದಾಗಿ ತಿಳಿಸಿದರು. ಅವಧಿ ಮುಗಿದಿರುವ ಎಲ್ಲ ಪಂಚಾಯ್ತಿಗಳಿಗೆ ಚುನಾವಣೆ ನಡೆಸಲು ಇಲಾಖೆ ಈಗಾಗಲೇ ಕ್ರಮ ವಹಿಸಿದ್ದು, ಈ ವರ್ಷಾಂತ್ಯದೊಳಗೆ ಚುನಾವಣೆ ನಡೆದೇ ನಡೆಯುತ್ತದೆ, ಅಧಿಕಾರ ವಿಕೇಂದ್ರೀಕರಣದ ಉದ್ದೇಶವನ್ನು ಸರ್ಕಾರ ಈಡೇರಿಸುತ್ತದೆ ಎಂದರು. ಸುದ್ದಿಗೋಷ್ಠಿಯಲ್ಲಿ ಇಲಾಖೆಯ ಕಾರ್ಯದರ್ಶಿಗಳಾದ ಸಮೀರ್ ಶುಕ್ಲ, ರಂದೀಪ್, ಜಿಲ್ಲಾಧಿಕಾರಿ ಡಾ.ಕೆ.ಎನ್. ಅನೂರಾಧಾ ಮತ್ತು ಜಿಲ್ಲಾಪಂಚಾಯ್ತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ವಾಸಂತಿ ಅಮರ್ ಮತ್ತಿತರರು ಪಾಲ್ಗೊಂಡಿದ್ದರು.



ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ಶುಕ್ರವಾರ ನವದೆಹಲಿಯಲ್ಲಿ ನಡೆದ ಭಾರತ್ ಇನ್ನೋವೇಟ್ಸ್ 2026 ಗಾಗಿ ಕಾರ್ಯತಂತ್ರದ ದಾಖಲೆಗಳ ಬಿಡುಗಡೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಬೆಂಗಳೂರು ಹೆರಿಟೇಜ್ ಹಬ್ಬಕ್ಕೆ ನಾಳೆ ಅದ್ದೂರಿ ಚಾಲನೆ




**ಬೆಂಗಳೂರು, ಜೂ.12:** ಬಸವನಗುಡಿಯ ನ್ಯಾಷನಲ್ ಕಾಲೇಜು ಮೈದಾನದಲ್ಲಿ ಜೂ.14 ರಂದು ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಒಳಗೊಂಡ 'ಬೆಂಗಳೂರು ಹೆರಿಟೇಜ್ ಹಬ್ಬ' ನಡೆಯಲಿದೆ. ಬೆಳಗ್ಗೆ ಐದು ಗಂಟೆಗೆ ಶಂಖನಾದ, ಗಂಗಾರತಿ, ಮ್ಯಾರಥಾನ್, ಜುಂಬಾ, ಯೋಗ ಪ್ರದರ್ಶನಗಳಿಂದ ಆರಂಭವಾಗುವ 'ಬೆಂಗಳೂರು ಹೆರಿಟೇಜ್ ಹಬ್ಬ' ಕ್ಕೆ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸದಸ್ಯ ತೇಜಸ್ವಿಸೂರ್ಯ ಚಾಲನೆ ನೀಡಲಿದ್ದಾರೆ.

ಖ್ಯಾತ ಇತಿಹಾಸತಜ್ಞ, ಧರ್ಮೇಂದ್ರ ಕುಮಾರ್ ಯದುವೀರ್, ಚಲನಚಿತ್ರ ನಟ ಸಿಹಿಕಹಿ ಚಂದ್ರು, ಬೆಂಗಳೂರು ನಗರ ಗಣ್ಯರ ರಕ್ಷಣಾ ವಿಭಾಗದ ಉಪ ಪೊಲೀಸ್ ಆಯುಕ್ತ ಮಂಜುನಾಥ್ ಬಾಬು, ಚಿಕ್ಕಪೇಟೆ ಶಾಸಕ ಉದಯ ಗರುಡಾಚಾರ್, ಗರುಡ ಪ್ರತಿಷ್ಠಾನದ ಮೇದಿನಿ ಗರುಡಾಚಾರ್, ಕರ್ನಾಟಕ ಕ್ಯಾನ್ಸರ್ ಸೊಸೈಟಿ ಅಧ್ಯಕ್ಷ ಡಾ.ಸಿ ಎ ಕಿಶೋರ್, ಮಾಜಿ ಪೊಲೀಸ್ ಆಯುಕ್ತ ಭಾಸ್ಕರರಾವ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ. ಪ್ರತಿಷ್ಠಿತ ಬಿಎನ್‌ಎಂಐಟಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ನಾರಾಯಣರಾವ್ ಮಾನೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಬಿಎನ್‌ಎಂ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಸಂಸ್ಥೆಯು ವಿಕಸನ ಪ್ರತಿಷ್ಠಾನದ ಸಹಯೋಗದಲ್ಲಿ ಈ ಬೆಂಗಳೂರು ಹೆರಿಟೇಜ್ ಹಬ್ಬ ಆಯೋಜಿಸಿದೆ.

## ಮಲ್ಲಿಕಾರ್ಜುನ ಖರ್ಗೆ ಅವರಿಗೆ ಮುಗಿಬಿದ್ದ ಸಚಿವಾಕಾಂಕ್ಷಿಗಳು

**ಬೆಂಗಳೂರು, ಜೂ. 12:** ಸಚಿವ ಸ್ಥಾನದ ಆಕಾಂಕ್ಷಿಗಳು ಇಂದು ಬೆಂಗಳೂರಿನಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ, ಅವಕಾಶ ನೀಡುವಂತೆ ಮನವಿ ಮಾಡಿದ್ದಾರೆ.

ಹಿರಿಯ ಶಾಸಕ ಆರ್.ವಿ.ದೇಶಪಾಂಡೆ, ಹಂಪನಗೌಡ ಬಾದರ್ಲಿ, ಮಾಜಿ ಸಚಿವ ಮಾಂಕಾಳ ವೈದ್ಯ ಸೇರಿದಂತೆ ಹಲವಾರು ಮಂದಿ ಖರ್ಗೆ ಅವರನ್ನು ಭೇಟಿ ಮಾಡಿದ್ದಾರೆ.

ಇಂದು ಖರ್ಗೆ ಅವರು ಬೆಂಗಳೂರಿಗೆ ಆಗಮಿಸಿದರು. ರಾಜ್ಯಸಭೆಯ ಸದಸ್ಯರಾಗಿ ಅವಿರೋಧವಾಗಿ ಆಯ್ಕೆಯಾಗಿರುವ ಅವರು, ಚುನಾವಣಾಧಿಕಾರಿಯಿಂದ ಪ್ರಮಾಣಪತ್ರ ಪಡೆದುಕೊಂಡಿದ್ದಾರೆ. ಇಂದು ಖರ್ಗೆ ಅವರನ್ನು ಭೇಟಿ ಮಾಡಿದ ಬಹಳಷ್ಟು ಶಾಸಕರು ಸಂಪುಟದಲ್ಲಿ ಅವಕಾಶ ಕಲ್ಪಿಸಿಕೊಡುವಂತೆ ಒತ್ತಡ ಹಾಕಿದ್ದಾರೆ. ಆರ್.ವಿ.ದೇಶಪಾಂಡೆ ತಾವು ಅತ್ಯಂತ ಹಿರಿಯ ಶಾಸಕರಾಗಿದ್ದು, ಬಹುತೇಕ ಇದು ನನ್ನ ಕೊನೆಯ ಚುನಾವಣೆ. ಹಲವಾರು ಬಾರಿ ಸಚಿವನಾಗಿ ಕೆಲಸ ಮಾಡಿದ್ದೇನೆ. ಕಳೆದ ಮೂರು ವರ್ಷಗಳಿಂದ ತಮನ್ನು ಹೊರಗಿಡಲಾಗಿದೆ. ಸಂಪುಟದಲ್ಲಿ ಬ್ರಾಹಣ ಸಮುದಾಯಕ್ಕೆ ಪ್ರಾತಿನಿಧ್ಯ ಸಿಕ್ಕಿಲ್ಲ. ಹೀಗಾಗಿ ತಮಗೆ ಅವಕಾಶ ಕೊಡಿಸುವಂತೆ ಖರ್ಗೆ ಅವರಲ್ಲಿ ಮನವಿ ಮಾಡಿದ್ದಾರೆ ಎನ್ನಲಾಗಿದೆ.

ಮಾಂಕಾಳ ವೈದ್ಯ ಅವರು ಉತ್ತರ ಕರ್ನಾಟಕ ಭಾಗಕ್ಕೆ ಪ್ರಾತಿನಿಧ್ಯ ಸಿಕ್ಕಿಲ್ಲ, ಮೇಲಾಗಿ ತಾವು ಸಚಿವನಾಗಿ ಉತ್ತಮ ಕೆಲಸ ಮಾಡಿದ್ದೇನೆ. ಡಿ.ಕೆ.ಶಿವಕುಮಾರ್ ಅವರ ಸಂಪುಟದಲ್ಲೂ ಕೆಲಸ ಮಾಡಲು ಅವಕಾಶ ಮಾಡಿಕೊಡಬೇಕೆಂದು ಮನವಿ ಮಾಡಿದ್ದಾರೆ.

ಸಿಂಧನೂರು ಕ್ಷೇತ್ರದ ಶಾಸಕ ಹಂಪನಗೌಡ ಬಾದರ್ಲಿ ಖರ್ಗೆ ಅವರ ಭೇಟಿಯ ವೇಳೆ ತಮಗೆ ನಿರಂತರವಾಗಿ ಅನ್ಯಾಯವಾಗುತ್ತಿದೆ. ಪಕ್ಷದ ನಿಷ್ಠಾವಂತನಾಗಿ ಕೆಲಸ ಮಾಡಿದ್ದೇನೆ. ಸಂಪುಟದಲ್ಲಿ ಅವಕಾಶ ಮಾಡಿಕೊಡಿ ಎಂದು ಒತ್ತಾಯಿಸಿರುವುದಾಗಿ ತಿಳಿದು ಬಂದಿದೆ.

ಈ ಮೊದಲು ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿದ್ದಾಗ ಬಹುತೇಕರು ಸಚಿವ ಸ್ಥಾನ ಹಾಗೂ ಯಾವುದೇ ಅವಕಾಶಗಳಿಗಾದರೂ ಸಿದ್ದರಾಮಯ್ಯ ಅವರ ಮನೆಗೆ ಭೇಟಿ ನೀಡುತ್ತಿದ್ದ ರೂಢಿ ಸಂಪ್ರದಾಯವಿತ್ತು. ಸಿದ್ದರಾಮಯ್ಯ ಅಧಿಕಾರದಿಂದ ಕೆಳಗಿಳಿದ ಬಳಿಕ ಶಾಸಕರ ಹಾಜರಾತಿ ಕಡಿಮೆಯಾಗಿದೆ. ಡಿ.ಕೆ.ಶಿವಕುಮಾರ್ ಅವರ ಭೇಟಿ ಸುಲಭಸಾಧ್ಯವಿಲ್ಲ ಎಂಬ ಪರಿಸ್ಥಿತಿಯಿದ್ದು, ಎಲ್ಲರೂ ಮಲ್ಲಿಕಾರ್ಜುನ ಖರ್ಗೆ ಅವರ ಬೆನ್ನು ಹತ್ತಲಾರಂಭಿಸಿದ್ದಾರೆ.




ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಮತ್ತು ಶಿಕ್ಷಣ ಖಾತೆ ರಾಜ್ಯ ಸಚಿವ (ಸ್ವತಂತ್ರ ಶುಲ್ಕ) ಜಯಂತ್ ಚೌಧರಿ ಅವರು ಶುಕ್ರವಾರ ನವದೆಹಲಿಯಲ್ಲಿ ನಡೆದ ಸಮಗ್ರ ಐಟಿಐ ರೂಪಾಂತರಕ್ಕಾಗಿ ಕಾರ್ಯತಂತ್ರದ ಸಲಹಾ ಮತ್ತು ಸುಧಾರಣಾ ಕಾರ್ಯಪಡೆ (SARTHI)ಯ ಮೊದಲ ಸಭೆಯಲ್ಲಿ ಭಾಗವಹಿಸಿದ್ದರು.

## ದೆಹಲಿಯಲ್ಲಿ ಅಗ್ನಿ ಅವಘಡ, ಕಟ್ಟಡ ಕುಸಿತದಿಂದ ಮೃತಪಟ್ಟವರಿಗೆ 10 ಲಕ್ಷ ರೂ. ಪರಿಹಾರ ಘೋಷಿಸಿದ ಸಿಎಂ ರೇಖಾ



**ನವದೆಹಲಿ, ಜೂನ್ 12:** ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಅವರು ಶುಕ್ರವಾರ ಮಾಲ್ವಿಯಾ ನಗರದ ಹೌಜ್ ರಾಣಿಯಲ್ಲಿ ಇತ್ತೀಚೆಗೆ ಸಂಭವಿಸಿದ ಅಗ್ನಿ ದುರಂತ ಮತ್ತು ಸಾಕೇತ್ನ ಸೈದುಲಾಜಬ್ನಲ್ಲಿ ನಡೆದ ಕಟ್ಟಡ ಕುಸಿತದಲ್ಲಿ ಮೃತಪಟ್ಟವರಿಗೆ ಗೌರವ ಸಲ್ಲಿಸಿದರು, ಸಂತ್ರಸ್ತ ಕುಟುಂಬಗಳಿಗೆ ಆರ್ಥಿಕ ನೆರವು ಮತ್ತು ರಕ್ಷಣಾ ಕಾರ್ಯಾಚರಣೆಯಲ್ಲಿ ನಿರ್ಣಾಯಕ ಪಾತ್ರ ವಹಿಸಿದ ನಾಗರಿಕರು ಮತ್ತು ಅಧಿಕಾರಿಗಳನ್ನು ಗೌರವಿಸಿದರು. ದೆಹಲಿ ಸಚಿವಾಲಯದಲ್ಲಿ ನಡೆದ ಗಂಭೀರ ಕಾರ್ಯಕ್ರಮದಲ್ಲಿ, ಮುಖ್ಯಮಂತ್ರಿಗಳು ಎರಡು ಘಟನೆಗಳಲ್ಲಿ ಪ್ರಾಣ ಕಳೆದುಕೊಂಡವರನ್ನು ಸ್ಮರಿಸಿದರು ಮತ್ತು ರಕ್ಷಕರು, ಪೊಲೀಸ್ ಸಿಬ್ಬಂದಿ, ಆಡಳಿತ ಅಧಿಕಾರಿಗಳು ಮತ್ತು ಸ್ಥಳೀಯ ನಿವಾಸಿಗಳು ಪ್ರದರ್ಶಿಸಿದ ಧೈರ್ಯ ಮತ್ತು ನಿಸ್ವಾರ್ಥತೆಯನ್ನು ಶ್ಲಾಘಿಸಿದರು. ಮೃತರ ಸ್ಮರಣಾರ್ಥ ಎರಡು ನಿಮಿಷಗಳ ಮೌನ ಆಚರಿಸಲಾಯಿತು. ಸಭೆಯನ್ನುದ್ದೇಶಿಸಿ ಮಾತನಾಡಿದ ಗುಪ್ತಾ, ಎರಡು ದುರಂತಗಳಲ್ಲಿ ಮೃತಪಟ್ಟ ಪ್ರತಿಯೊಬ್ಬ ವ್ಯಕ್ತಿಯ ಕುಟುಂಬಗಳಿಗೆ 10 ಲಕ್ಷ ರೂ.ಗಳ ಪರಿಹಾರ ಪಾವತಿ ಮತ್ತು ಗಾಯಗೊಂಡವರಿಗೆ 2 ಲಕ್ಷ ರೂ.ಗಳ ಆರ್ಥಿಕ ಸಹಾಯವನ್ನು ಘೋಷಿಸಿದರು.

# ವೈದ್ಯಕೀಯ ಕೋರ್ಸ್‌ಗಳ ಶುಲ್ಕ ಹೆಚ್ಚಳ ಇಲ್ಲ

## ಯಥಾಸ್ಥಿತಿ ಮುಂದುವರಿಸಲು ಸರ್ಕಾರ ಮಹತ್ವದ ನಿರ್ಧಾರ



**ಬೆಂಗಳೂರು, ಜೂ.12:** ಪ್ರಸಕ್ತ ಶೈಕ್ಷಣಿಕ ವರ್ಷದಿಂದ ವೈದ್ಯಕೀಯ, ದಂತ ವೈದ್ಯಕೀಯ, ಸ್ನಾತಕ ಹಾಗೂ ಸ್ನಾತಕೋತ್ತರ ಕೋರ್ಸ್‌ಗಳ ಶುಲ್ಕವನ್ನು ಹೆಚ್ಚಳ ಮಾಡದೇ ಯಥಾಸ್ಥಿತಿಯನ್ನೇ ಮುಂದುವರಿಸುವ ಮಹತ್ವ ತೀರ್ಮಾನವನ್ನು ರಾಜ್ಯ ಸರ್ಕಾರ ತೆಗೆದುಕೊಂಡಿದೆ. ಸರ್ಕಾರದ ಇಂತಹ ನಿರ್ಧಾರದಿಂದಾಗಿ ಈ ಬಾರಿ ವೈದ್ಯಕೀಯ, ದಂತ ವೈದ್ಯಕೀಯ, ಸ್ನಾತಕ ಹಾಗೂ ಸ್ನಾತಕೋತ್ತರ ಕೋರ್ಸ್‌ಗಳ ಶುಲ್ಕ ಹೆಚ್ಚಳವಾಗುತ್ತದೆ ಎಂಬ ಆತಂಕದಲ್ಲಿದ್ದ ವಿದ್ಯಾರ್ಥಿಗಳು ಹಾಗೂ ಪೋಷಕರು ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ.

ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ಖಾಸಗಿ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕಾಲೇಜು ಆಡಳಿತ ಮಂಡಳಿಯವರೊಂದಿಗೆ ಶುಕ್ರವಾರ ವಿಕಾಸಸೌಧದಲ್ಲಿ ನಡೆದ ಸಭೆಯಲ್ಲಿ ಈ ಮಹತ್ವದ ತೀರ್ಮಾನವನ್ನು ತೆಗೆದುಕೊಳ್ಳಲಾಗಿದೆ.ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲರು, ಖಾಸಗಿ ಕಾಲೇಜು ಆಡಳಿತ ಮಂಡಳಿಗಳ ಶುಲ್ಕವನ್ನು ಹೆಚ್ಚಳ ಮಾಡಬೇಕೆಂಬ ಪ್ರಸ್ತಾವನೆಯನ್ನು ನಾವು ಒಪ್ಪಿಕೊಂಡಿಲ್ಲ. ಈ ಹಿಂದೆ ಅಂದರೆ 2025–26ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿದ್ದ ಶುಲ್ಕವು ಯಥಾಸ್ಥಿತಿಯಲ್ಲೇ ಮುಂದುವರೆಯಲಿದೆ ಎಂದು ಸ್ಪಷ್ಟಪಡಿಸಿದರು.

### ಶುಲ್ಕ ವಿವರ :

**ಎಂಬಿಬಿಎಸ್:**

ಸರ್ಕಾರಿ ಕಾಲೇಜು– 55,000 ರೂ.
ಕೆಪಿಸಿಎಫ್ ಸರ್ಕಾರಿ ಕೋಟ– 1,41,621 ರೂ.
ಕೆಆರ್‌ಎಲ್‌ಎಂಪಿಸಿಎ ಸರ್ಕಾರಿ ಕೋಟ– 1,41,621 ರೂ.
ಎಎಂಪಿಸಿಕೆ ಸರ್ಕಾರಿ ಕೋಟ– 1,41,621 ರೂ.
ಖಾಸಗಿ ವಿಶ್ವವಿದ್ಯಾನಿಲಯಗಳ ಸರ್ಕಾರಿ ಕೋಟ – 1,41,621 ರೂ.
ಕೆಪಿಸಿಎಫ್ ಖಾಸಗಿ ಕೋಟ– 11,88,167 ರೂ.
ಕೆಆರ್‌ಎಲ್‌ಎಂಪಿಸಿಎ ಖಾಸಗಿ ಕೋಟ– 11,88,167 ರೂ.
ಎಎಂಪಿಸಿಕೆ ಖಾಸಗಿ ಕೋಟ – 11,88,167 ರೂ.

**ದಂತ ವೈದ್ಯಕೀಯ :**

ಸರ್ಕಾರಿ ಕಾಲೇಜುಗಳ ಕೋಟ– 40,000 ರೂ.
ಕೆಪಿಸಿಎಫ್ ಸರ್ಕಾರಿ ಕೋಟ– 83,358 ರೂ.
ಕೆಆರ್‌ಎಲ್‌ಎಂಪಿಸಿಎ ಸರ್ಕಾರಿ ಕೋಟ– 83,358 ರೂ.
ಎಎಂಪಿಸಿಕೆ ಸರ್ಕಾರಿ ಕೋಟ– 83,358 ರೂ.

**ಖಾಸಗಿ ಕೋಟ :**

ಕೆಪಿಸಿಎಫ್ ಖಾಸಗಿ ಕೋಟ– 7,32,625 ರೂ.
ಕೆಆರ್‌ಎಲ್‌ಎಂಪಿಸಿಎ ಖಾಸಗಿ ಕೋಟ– 7,32,625 ರೂ.
ಎಎಂಪಿಸಿಕೆ ಖಾಸಗಿ ಕೋಟ– 7,32,625 ರೂ.


ಪೋಷಕರು ಮತ್ತು ವಿದ್ಯಾರ್ಥಿಗಳು ಶುಲ್ಕ ಹೆಚ್ಚಳವಾಗುತ್ತದೆ ಎಂಬ ಆತಂಕಕ್ಕೆ ಒಳಗಾಗಬಾರದು. ಈಗಾಗಲೇ ವೈದ್ಯಕೀಯ ಕೋರ್ಸ್‌ಗಳ ಪ್ರವೇಶಾತಿಗೆ ನಡೆದಿದ್ದ ನೀಟ್ ಪ್ರವೇಶ ಪರೀಕ್ಷೆ ರದ್ದಾಗಿ ಮರುಪರೀಕ್ಷೆ ನಡೆಯಬೇಕಿರುವುದರಿಂದ ಒತ್ತಡಕ್ಕೆ ಒಳಗಾಗಿದ್ದಾರೆ. ಇಂತಹ ಸಮಯದಲ್ಲಿ ಶುಲ್ಕ ಹೆಚ್ಚಳ ಮಾಡುವುದು ಸರಿಯಲ್ಲ ಎಂಬ ತೀರ್ಮಾನ ಮಾಡಲಾಗಿದೆ. ಖಾಸಗಿ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕಾಲೇಜು ಮಂಡಳಿಯವರು ಶುಲ್ಕ ಹೆಚ್ಚಳ ಮಾಡುವ ಪ್ರಸ್ತಾವನೆಗೆ ನಾವು ಅವಕಾಶವನ್ನೇ ಕೊಟ್ಟಿಲ್ಲ. ಹೀಗಾಗಿ ವಿದ್ಯಾರ್ಥಿಗಳು ಮತ್ತು ಪೋಷಕರು ಯಾವುದೇ ರೀತಿಯ ಊಹಾಪೋಹಕ್ಕೆ ಕಿವಿಗೊಡಬಾರದು ಎಂದು ಸಚಿವ ಶರಣಪ್ರಕಾಶ್ ಪಾಟೀಲ್ ಮನವಿ ಮಾಡಿದರು. ಶುಲ್ಕ ಸ್ಥಿರತೆ: –ಕಳೆದ ಸಾಲಿನಲ್ಲಿ ನಿಗದಿಪಡಿಸಿದ್ದ ಶುಲ್ಕವನ್ನೇ ಈ ಸಾಲಿನಲ್ಲೂ ಮುಂದುವರಿಸಲಾಗುವುದು. ಈ ನಿಯಮವು ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳೆರಡಕ್ಕೂ ಅನ್ವಯಿಸುತ್ತದೆ. ಈ ನಿರ್ಧಾರದಿಂದಾಗಿ ಪ್ರವೇಶ ಪಡೆಯಲಿರುವ ವಿದ್ಯಾರ್ಥಿಗಳಿಗೆ ಆರ್ಥಿಕ ಹೊರೆ ತಪ್ಪಿದಂತಾಗಿದೆ.

ಸಭೆಯಲ್ಲಿ ಕಲಬುರಗಿ ಸಂಸದ ರಾಧಾಕೃಷ್ಣ, ದಂತ ವೈದ್ಯಕೀಯ ಕಾಲೇಜುಗಳ ಪರವಾಗಿ ವಿಧಾನಪರಿಷತ್ ಸದಸ್ಯ ನಾಗರಾಜ್ ಯಾದವ್, ವೈದ್ಯಕೀಯ ಶಿಕ್ಷಣ ಇಲಾಖೆಯ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮೊಹಮದ್ ಮೊಹಿಸಿನ್, ಎಂ.ಎಸ್.ರಾಮಯ್ಯ ಕಾಲೇಜಿನ ಎಂ.ಆರ್. ಜಯರಾಂ ಹಾಗೂ ವಿವಿಧ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕಾಲೇಜುಗಳ ಮುಖ್ಯಸ್ಥರು ಭಾಗವಹಿಸಿದ್ದರು.

## ಸಾಲ ಮರುಪಾವತಿಗೆ ವಿಫಲ: ನಸೀರ್ ಅಹ್ಮದ್ ದಿವಾಳಿ

**ರಾಷ್ಟ್ರೀಯ ಕಂಪನಿ ಕಾನೂನು ನ್ಯಾಯಮಂಡಳಿ ಅಧಿಕೃತ ಘೋಷಣೆ**

**ಎಂಎಲ್‌ಸಿ ಸ್ಥಾನದಿಂದ ಅನರ್ಹಗೊಳ್ಳುವ ಭೀತಿ**



**ಬೆಂಗಳೂರು, ಜೂ.12:** ಸಾವಿರಾರು ಕೋಟಿ ರೂಪಾಯಿಗಳ ಬ್ಯಾಂಕ್ ಸಾಲ ಮರುಪಾವತಿಸಲು ವಿಫಲರಾದ ಹಿನ್ನೆಲೆಯಲ್ಲಿ, ಕಾಂಗ್ರೆಸ್‌ನ ಹಿರಿಯ ನಾಯಕ ಹಾಗೂ ವಿಧಾನ ಪರಿಷತ್ ಸದಸ್ಯ (ಎಂಎಲ್‌ಸಿ) ನಸೀರ್ ಅಹ್ಮದ್ ಅವರನ್ನು ರಾಷ್ಟ್ರೀಯ ಕಂಪನಿ ಕಾನೂನು ನ್ಯಾಯಮಂಡಳಿ ಅಧಿಕೃತವಾಗಿ ದಿವಾಳಿ ಎಂದು ಘೋಷಿಸಿದೆ.

ಎನ್‌ಸಿಎಲ್‌ಟಿಯ ಈ ಮಹತ್ವದ ಆದೇಶದಿಂದಾಗಿ ನಸೀರ್ ಅಹ್ಮದ್ ಅವರು ತಮ್ಮ ಎಂಎಲ್‌ಸಿ ಸ್ಥಾನದಿಂದ ಅನರ್ಹಗೊಳ್ಳುವ ಭೀತಿ ಎದುರಿಸುತ್ತಿದ್ದಾರೆ. ನ್ಯಾಯಾಂಗ ಸದಸ್ಯ ಸುನಿಲ್ ಕುಮಾರ್ ಅಗರ್‌ವಾಲ್ ಮತ್ತು ತಾಂತ್ರಿಕ ಸದಸ್ಯ ರಾಧಾಕೃಷ್ಣ ಶ್ರೀಪಾದ ಅವರನ್ನೊಳಗೊಂಡ ಎನ್‌ಸಿಎಲ್‌ಟಿಯ ಬೆಂಗಳೂರು ಪೀಠವು ಜೂನ್ 8ರಂದು ಈ ಆದೇಶ ಹೊರಡಿಸಿದೆ. ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಕೆನರಾ ಬ್ಯಾಂಕ್ ಮತ್ತು ಐಡಿಬಿಐ ಬ್ಯಾಂಕ್‌ಗಳ ಒಕ್ಕೂಟವು ದಿವಾಳಿತನ ಸಂಹಿತೆ –2016ರ ಅಡಿಯಲ್ಲಿ ಸಲ್ಲಿಸಿದ್ದ ಅರ್ಜಿಯ ಮೇರೆಗೆ ಈ ಕಠಿಣ ಕ್ರಮ ಕೈಗೊಳ್ಳಲಾಗಿದೆ. ಬೆಂಗಳೂರಿನಲ್ಲಿರುವ ಸ್ಕಾಟ್ಸ್ ಗಾರ್ಮೆಂಟ್ಸ್ ಲಿಮಿಟೆಡ್ ಕಂಪನಿಯು ಪಡೆದಿದ್ದ 1,454 ಕೋಟಿ ರೂ.ಗೂ ಅಧಿಕ ಮೊತ್ತದ ಬಾಕಿ ಸಾಲದ ವಸೂಲಾತಿಗಾಗಿ ಕಳೆದ 2019ರಿಂದಲೇ ಈ ಕಾನೂನು ಪ್ರಕ್ರಿಯೆ ನಡೆದಿತ್ತು.

ನಸೀರ್ ಅಹ್ಮದ್ ಅವರು ವ್ಯವಸ್ಥಾಪಕ ನಿರ್ದೇಶಕರಾಗಿದ್ದ ಸ್ಕಾಟ್ಸ್ ಗಾರ್ಮೆಂಟ್ಸ್ ಕಂಪನಿಗೆ ಪಡೆದಿದ್ದ ಭಾರಿ ಮೊತ್ತದ ಸಾಲಕ್ಕೆ ಅವರ ಕುಟುಂಬದ ಸದಸ್ಯರೇ ವೈಯಕ್ತಿಕ ಜಾಮೀನುದಾರರಾಗಿದ್ದರು. ಹೀಗಾಗಿ, ಕಂಪನಿಯ ಹಿಂದಿನ ನಿರ್ದೇಶಕರಾಗಿದ್ದ ನಸೀರ್ ಅಹ್ಮದ್ ಅವರ ಪತ್ನಿ ನುಝುತ್ ಆಯಿಷಾ ನಸೀರ್ ಮತ್ತು ಮಗ ಅವೈಜ್ ಅಹ್ಮದ್ ಅವರನ್ನೂ ಸಹ ಎನ್‌ಸಿಎಲ್‌ಟಿ ಜಂಟಿಯಾಗಿ ದಿವಾಳಿ ಎಂದು ಘೋಷಿಸಿದೆ. ಇದರಿಂದಾಗಿ ಇಡೀ ಕುಟುಂಬವೇ ಈಗ ಆರ್ಥಿಕ ಮತ್ತು ಕಾನೂನಾತ್ಮಕವಾಗಿ ಸಂಕಷ್ಟಕ್ಕೆ ಸಿಲುಕಿದಂತಾಗಿದೆ.

ಎನ್‌ಸಿಎಲ್‌ಟಿ ಆದೇಶದ ಬೆನ್ನಲ್ಲೇ ನಸೀರ್ ಅಹ್ಮದ್ ಅವರ ರಾಜಕೀಯ ಭವಿಷ್ಯಕ್ಕೆ ಹಿನ್ನಡೆಯಾಗಿದೆ. ನಿಯಮದಂತೆ ನ್ಯಾಯಾಲಯ ಅಥವಾ ಸಕ್ಷಮ ಪ್ರಾಧಿಕಾರದಿಂದ ದಿವಾಳಿ ಎಂದು ಘೋಷಿಸಲ್ಪಟ್ಟ ಯಾವುದೇ ವ್ಯಕ್ತಿಯು ಶಾಸಕ ಅಥವಾ ಎಂಎಲ್‌ಸಿ ಹುದ್ದೆಯಲ್ಲಿ ಮುಂದುವರಿಯಲು ಕಾನೂನುಬದ್ಧವಾಗಿ ಅರ್ಹನಾಗಿರುವುದಿಲ್ಲ. ಈ ತಾಂತ್ರಿಕ ಕಾರಣದಿಂದಾಗಿ ಅವರು ತಮ್ಮ ಜನಪ್ರತಿನಿಧಿ ಸ್ಥಾನವನ್ನು ಕಳೆದುಕೊಳ್ಳುವ ಸಾಧ್ಯತೆಗಳು ದಟ್ಟವಾಗಿವೆ.

ಈ ಟ್ರಸ್ಟಿಯ ಲಿಖಿತ ಅನುಮತಿಯಿಲ್ಲದೆ ನಸೀರ್ ಅಹ್ಮದ್ ಇನ್ಮುಂದೆ ಯಾವುದೇ ಹೊಸ ಸಾಲವನ್ನು ಪಡೆಯುವಂತಿಲ್ಲ. ಒಂದು ವೇಳೆ ಅವರು ಯಾವುದೇ ಆರ್ಥಿಕ ಅಥವಾ ವಾಣಿಜ್ಯ ವ್ಯವಹಾರಗಳನ್ನು ನಡೆಸಬೇಕಾದರೂ, ತಾನು ಕಾನೂನುಬದ್ಧವಾಗಿ ದಿವಾಳಿ ಎಂದು ಘೋಷಿತನಾದ ವ್ಯಕ್ತಿ ಎಂಬುದನ್ನು ಪಾಲುದಾರರಿಗೆ ಮುಂಚಿತವಾಗಿಯೇ ಕಡ್ಡಾಯವಾಗಿ ತಿಳಿಸಬೇಕಾಗುತ್ತದೆ. ಅಷ್ಟೇ ಅಲ್ಲದೆ, ಟ್ರಸ್ಟಿಯ ಪೂರ್ವಾನುಮತಿ ಇಲ್ಲದೆ ದೇಶ ತೊರೆದು ವಿದೇಶ ಪ್ರವಾಸ ಕೈಗೊಳ್ಳುವಂತೆಯೂ ಇಲ್ಲ ಎಂದು ಆದೇಶದಲ್ಲಿ ಕಠಿಣ ನಿರ್ಬಂಧಗಳನ್ನು ವಿಧಿಸಲಾಗಿದೆ.

# ರಾಜ್ಯಸಭೆ: 24 ಮಂದಿ ಅವಿರೋಧವಾಗಿ ಆಯ್ಕೆ ಎನ್‌ಡಿಎ 3ನೇ ಎರಡರಷ್ಟು ಬಹುಮತಕ್ಕೆ ಹತ್ತಿರ



**ನವದೆಹಲಿ, ಜೂ.12:** 10 ರಾಜ್ಯಗಳಿಂದ ರಾಜ್ಯಸಭೆಗೆ ಅವಿರೋಧವಾಗಿ ಆಯ್ಕೆಯಾದ 24 ನಾಯಕರಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ತರುಣ್ ಚುಗ್ ಸೇರಿದ್ದಾರೆ. 27 ರಾಜ್ಯಸಭಾ ಸ್ಥಾನಗಳಲ್ಲಿ ಗುರುವಾರ ಮೂರು ಸ್ಥಾನಗಳನ್ನು ಹೊರತುಪಡಿಸಿ ಉಳಿದೆಲ್ಲ ಸ್ಥಾನಗಳನ್ನು ನಿರ್ಧರಿಸಲಾಯಿತು, ಎನ್‌ಡಿಎ ಅಭ್ಯರ್ಥಿಗಳು 19 ಸ್ಥಾನಗಳನ್ನು ಅವಿರೋಧವಾಗಿ ಗೆದ್ದರು ಮತ್ತು ಕಾಂಗ್ರೆಸ್ ಐದು ಸ್ಥಾನಗಳನ್ನು ಪಡೆದುಕೊಂಡಿತು.

ಜೂನ್ 18 ರಂದು ಜಾರ್ಖಂಡ್‌ನಲ್ಲಿ ಎರಡು ಸ್ಥಾನಗಳು ಮತ್ತು ಮಿಜೋರಾಂನಲ್ಲಿ ಒಂದು ಸ್ಥಾನಗಳಿಗೆ ಚುನಾವಣೆ ನಡೆಯಲಿದೆ. ಮಧ್ಯಪ್ರದೇಶದಲ್ಲಿ, ಕಾಂಗ್ರೆಸ್ ಅಭ್ಯರ್ಥಿ ಮೀನಾಕ್ಷಿ ನಟರಾಜನ್ ಅವರ ನಾಮಪತ್ರವನ್ನು ಚುನಾವಣಾಧಿಕಾರಿ ತಿರಸ್ಕರಿಸಿದ ನಂತರ ಬಿಜೆಪಿ ಮೂರು ಸ್ಥಾನಗಳನ್ನು ಅವಿರೋಧವಾಗಿ ಗೆದ್ದಿತು. ನಟರಾಜನ್ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರೂ ಸಹ, ಚುನಾವಣಾ ಆಯೋಗವು ಬಿಜೆಪಿಯ ರಜನೀಶ್ ಅಗರ್ವಾಲ್, ತರುಣ್ ಚುಗ್ ಮತ್ತು ಮಹೇಶ್ ಕೆವಾಟ್ ಅವರಿಗೆ ಪ್ರಮಾಣಪತ್ರಗಳನ್ನು ನೀಡಿ, ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಘೋಷಿಸಿತು. ರಾಜ್ಯಸಭಾ ನಾಮಪತ್ರ ತಿರಸ್ಕಾರವನ್ನು ಪ್ರಶ್ನಿಸಿ ನಟರಾಜನ್ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ಶುಕ್ರವಾರ ವಜಾಗೊಳಿಸಿದ್ದು, ನಡೆಯುತ್ತಿರುವ ಚುನಾವಣಾ ಪ್ರಕ್ರಿಯೆಯಲ್ಲಿ ನ್ಯಾಯಾಲಯಗಳು ಹಸ್ತಕ್ಷೇಪ ಮಾಡಲು ಸಾಧ್ಯವಿಲ್ಲ ಮತ್ತು ಚುನಾವಣಾ ಪ್ರಕ್ರಿಯೆ ಪೂರ್ಣಗೊಂಡ ನಂತರ ಚುನಾವಣಾ ಅರ್ಜಿ ಸಲ್ಲಿಸುವುದು ಅವರ ಪರಿಹಾರ ಎಂದು ಹೇಳಿದೆ. ಈ ಹೊಸದಾಗಿ ಆಯ್ಕೆಯಾದ ಸದಸ್ಯರ ಸೇರ್ಪಡೆಯೊಂದಿಗೆ, ರಾಜ್ಯಸಭಾದಲ್ಲಿ ಎನ್‌ಡಿಎಯ ಬಲವು ಸುಮಾರು 149 ಸ್ಥಾನಗಳಿಗೆ ಏರುವ ನಿರೀಕ್ಷೆಯಿದೆ, ಇದು 245 ಸದಸ್ಯರ ಮೇಲ್ಮನೆಯಲ್ಲಿ ತನ್ನ ಸ್ಥಾನವನ್ನು ಮತ್ತಷ್ಟು ಬಲಪಡಿಸುತ್ತದೆ.

ಟಿಡಿಪಿ ಮತ್ತು ಜೆಡಿಯು ನಂತಹ ಮೈತ್ರಿಕೂಟದ ಪಾಲುದಾರರು, ನಾಮನಿರ್ದೇಶಿತ ಮತ್ತು ಸ್ವತಂತ್ರ ಸದಸ್ಯರು ಬೆಂಬಲಿಸುವ ಆಡಳಿತ ಒಕ್ಕೂಟವು ಮೂರನೇ ಎರಡರಷ್ಟು ಸ್ಥಾನಗಳಿಗೆ ಹತ್ತಿರವಾಗುತ್ತಿದೆ, ವಿಶೇಷ ಬಹುಮತದ ಅಗತ್ಯವಿರುವ ಪ್ರಮುಖ ಶಾಸಕಾಂಗ ಕ್ರಮಗಳು ಮತ್ತು ಸಾಂವಿಧಾನಿಕ ತಿದ್ದುಪಡಿ ಮಸೂದೆಗಳನ್ನು ಜಾರಿಗೆ ತರುವ ಸಾಮರ್ಥ್ಯವನ್ನು ಬಲಪಡಿಸುತ್ತದೆ. ಜಾರ್ಖಂಡ್ನಲ್ಲಿ, ಎರಡು ರಾಜ್ಯಸಭಾ ಸ್ಥಾನಗಳಿಗೆ ಚುನಾವಣೆಗಳು ನಡೆಯಲಿದ್ದು, ಮೂವರು ಅಭ್ಯರ್ಥಿಗಳು – ಜೆಎಂಎಂನ ಬೈದ್ಯನಾಥ್ ರಾಮ್, ಕಾಂಗ್ರೆಸ್ ನಾಮನಿರ್ದೇಶಿತ ಪ್ರಣವ್ ಝಾ ಮತ್ತು ಬಿಜೆಪಿ ಬೆಂಬಲಿತ ಸ್ವತಂತ್ರ ಅಭ್ಯರ್ಥಿ ಪರಿಮಳ್ ನಾಥ್ವಾನಿ. ಮಿಜೋರಾಂನ ಏಕೈಕ ರಾಜ್ಯಸಭಾ ಸ್ಥಾನಕ್ಕೆ, ಆಡಳಿತಾರೂಢ ಜೋರಮ್ ಪೀಪಲ್ಸ್ ಮೂವ್ಮೆಂಟ್ ವಕ್ತಾರ ಕೆ ಲಾಲ್ಲುವಾಂಗ್ಕಿಮಾ ಮತ್ತು ಪ್ರಮುಖ ವಿರೋಧ ಪಕ್ಷವಾದ ಮಿಜೋ ನ್ಯಾಷನಲ್ ಫ್ರಂಟ್ ಅಭ್ಯರ್ಥಿ ಜೋಥನ್ಸಂಗಿ ಹಮರ್ ಕಣದಲ್ಲಿದ್ದಾರೆ.

# ಅಮೆರಿಕ ದಾಳಿಯಲ್ಲಿ ಭಾರತೀಯ ನಾವಿಕರ ಸಾವು: ಮೋದಿ ವಿರುದ್ಧ ರಾಹುಲ್ ವಾಗ್ದಾಳಿ




ನವದೆಹಲಿ, ಜೂ.12: ಅಂತಾರಾಷ್ಟ್ರೀಯ ಜಲಪ್ರದೇಶದಲ್ಲಿ ಇತ್ತೀಚೆಗೆ ನಡೆದ ಅಮೆರಿಕದ ದಾಳಿಯಲ್ಲಿ ಮೂವರು ಭಾರತೀಯ ನಾಗರಿಕರು ಸಾವನ್ನಪ್ಪಿದ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಮೌನ ವಹಿಸಿದ್ದಾರೆ ಮತ್ತು ವಿದೇಶಿ ಶಕ್ತಿಗಳ ವಿರುದ್ಧ ಮಾತನಾಡಲು ಅವರಿಗೆ ಧೈರ್ಯವಿಲ್ಲ ಎಂದು ಆರೋಪಿಸಿದ ಲೋಕಸಭೆಯ ವಿರೋಧ ಪಕ್ಷದ ನಾಯಕ ಮತ್ತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಕಳೆದ ಮೂರು ದಿನಗಳಲ್ಲಿ ಹಡಗುಗಳ ಮೇಲಿನ ಮೂರು ಪ್ರತ್ಯೇಕ ಅಮೆರಿಕ ದಾಳಿಗಳಲ್ಲಿ ಮೂವರು ಭಾರತೀಯರು ಸಾವನ್ನಪ್ಪಿದ್ದಾರೆ ಎಂದು ಗಾಂಧಿ ಹೇಳಿಕೊಂಡರು ಮತ್ತು ಪ್ರಧಾನಿ ಈ ಸಾವುಗಳ ಬಗ್ಗೆ ಸಾರ್ವಜನಿಕವಾಗಿ ಏಕೆ ಪ್ರತಿಕ್ರಿಯಿಸಲಿಲ್ಲ ಎಂದು ಪ್ರಶ್ನಿಸಿದರು. "ಮೂರು ದಿನಗಳಲ್ಲಿ ಅಂತರರಾಷ್ಟ್ರೀಯ ಜಲಪ್ರದೇಶದಲ್ಲಿ ಹಡಗುಗಳ ಮೇಲಿನ ಮೂರು ಅಮೇರಿಕನ್ ದಾಳಿಯಲ್ಲಿ ಮೂವರು ಭಾರತೀಯರು ಸಾವನ್ನಪ್ಪಿದ್ದಾರೆ. ಮತ್ತು ನಮ್ಮ ರಾಜಿ ಮಾಡಿಕೊಂಡ ಪ್ರಧಾನಿಯೇ ಒಂದೇ ಒಂದು ಮಾತು ಹೇಳಲಿಲ್ಲ" ಎಂದು ಗಾಂಧಿ ಹೇಳಿದರು. ವಿದೇಶಿ ಶಕ್ತಿಯಿಂದ ಭಾರತೀಯ ನಾಗರಿಕನೊಬ್ಬ ಕೊಲ್ಲಲ್ಪಟ್ಟಾಗಲೆಲ್ಲಾ ಮಾತನಾಡುವುದು ಪ್ರಧಾನಿಯ ಕರ್ತವ್ಯ ಎಂದು ಕಾಂಗ್ರೆಸ್ ನಾಯಕರು ವಾದಿಸಿದರು. "ರಾಜಿ ಮಾಡಿಕೊಂಡ ಪ್ರಧಾನಿ ಭಾರತ ಮಾತೆಯ ಪುತ್ರರನ್ನು ರಕ್ಷಿಸಲು ಸಾಧ್ಯವಿಲ್ಲ ಏಕೆಂದರೆ ಅವರ ಜೀವಗಳನ್ನು ತೆಗೆದುಕೊಂಡವರನ್ನು ಅಸಮಾಧಾನಗೊಳಿಸುವ ಧೈರ್ಯ ಅಥವಾ ಶಕ್ತಿ ಅವರಲ್ಲಿ ಇಲ್ಲ" ಎಂದು ಅವರು ಹೇಳಿದರು. ಗಾಂಧಿಯವರು ಈ ವಿಷಯವನ್ನು ಮೋದಿ ಮುಂಬರುವ G7 ಶೃಂಗಸಭೆಯಲ್ಲಿ ಭಾಗವಹಿಸುವುದರೊಂದಿಗೆ ಜೋಡಿಸಿದರು, ಭಾರತೀಯ ನಾವಿಕರ ಸಾವುಗಳ ಹೊರತಾಗಿಯೂ ಪ್ರಧಾನಿ ವಿಶ್ವ ನಾಯಕರೊಂದಿಗೆ ರಾಜತಾಂತ್ರಿಕ ಸಂಬಂಧಗಳನ್ನು ಮುಂದುವರಿಸುತ್ತಾರೆ ಎಂದು ಆರೋಪಿಸಿದರು. "ಮುಂದಿನ ವಾರ ಜಿ7 ನಲ್ಲಿ, ನಮ್ಮ ನಾವಿಕರು ಸಾವನ್ನಪ್ಪಿದ ಕೆಲವೇ ದಿನಗಳ ನಂತರ, ಮೋದಿ ನಗುತ್ತಾರೆ, ನಾಯಕರನ್ನು ಅಪ್ಪಿಕೊಳ್ಳುತ್ತಾರೆ ಮತ್ತು ಒಪ್ಪಂದಗಳನ್ನು ಮಾಡಿಕೊಳ್ಳುತ್ತಾರೆ. ಆದರೆ ಆ ಮೂವರು ಭಾರತೀಯರಿಗೆ ಅವರು ಒಂದೇ ಒಂದು ಮಾತನ್ನೂ ಹೇಳುವುದಿಲ್ಲ" ಎಂದು ಗಾಂಧಿ ಹೇಳಿದರು. ತಮ್ಮ ಟೀಕೆಯನ್ನು ಹೆಚ್ಚಿಸಿದ ಗಾಂಧಿಯವರು, ಪ್ರಧಾನ ಮಂತ್ರಿಯವರು ಭಾರತೀಯ ನಾಗರಿಕರನ್ನು ರಕ್ಷಿಸುವಲ್ಲಿ ವಿಫಲರಾಗಿದ್ದಾರೆ ಎಂದು ಆರೋಪಿಸಿದರು ಮತ್ತು ಅವರ ಮೌನವು ಸಾವಿಗೆ ಕಾರಣರಾದವರನ್ನು ಎದುರಿಸಲು ಇಷ್ಟವಿಲ್ಲದ ಕಾರಣ ಹುಟ್ಟಿಕೊಂಡಿದೆ ಎಂದು ಸೂಚಿಸಿದರು. "ವಿದೇಶಿ ಶಕ್ತಿಯು ಭಾರತೀಯನನ್ನು ಕೊಂದಾಗ, ಪ್ರಧಾನಿ ಮಾತನಾಡಬೇಕು. ಆದರೆ ಅವರಿಗೆ ಒಂದೇ ಒಂದು ಮಾತನ್ನೂ ಹೇಳುವ ಧೈರ್ಯವಿಲ್ಲ" ಎಂದು ಅವರು ಹೇಳಿದರು.

# ದೆಹಲಿಯ ಗೋವಿಂದಪುರಿಯಲ್ಲಿ ಅಗ್ನಿ ಅವಘಡ ಮೂವರ ಸಾವು; ಇಬ್ಬರಿಗೆ ಗಂಭೀರ ಗಾಯ



**ನವದೆಹಲಿ,ಜೂ.12:** ಆಗ್ನೇಯ ದೆಹಲಿಯ ಗೋವಿಂದಪುರಿ ಪ್ರದೇಶದಲ್ಲಿರುವ ಐದು ಅಂತಸ್ತಿನ ವಸತಿ ಕಟ್ಟಡದಲ್ಲಿ ಶುಕ್ರವಾರ ಮುಂಜಾನೆ ಸಂಭವಿಸಿದ ಬೆಂಕಿ ಆಕಸ್ಮಿಕದಲ್ಲಿ ಮೂವರು ಮೃತಪಟ್ಟಿದ್ದು, ಇಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ.

ತುಘಲಕಾಬಾದ್ ಬಡಾವಣೆಯಲ್ಲಿರುವ ಈ ಕಟ್ಟಡದಲ್ಲಿ ಬೆಂಕಿ ಕಾಣಿಸಿಕೊಂಡಿರುವ ಬಗ್ಗೆ ಬೆಳಗಿನ ಜಾವ 2.24ರ ಸುಮಾರಿಗೆ ಗೋವಿಂದಪುರಿ ಪೊಲೀಸ್ ಠಾಣೆಗೆ ಪಿಸಿಆರ್ ಕರೆ ಬಂದಿತ್ತು ಎಂದು ಪೊಲೀಸರು ತಿಳಿಸಿದ್ದಾರೆ.

ಬೆಂಕಿ ಹೊತ್ತಿಕೊಂಡ ಬಳಿಕ ಕಟ್ಟಡದೊಳಗೆ ದಟ್ಟ ಹೊಗೆ ಆವರಿಸಿದ್ದರಿಂದ ಹಲವಾರು ನಿವಾಸಿಗಳು ಹೊರಬರಲು ಸಾಧ್ಯವಾಗದೆ ಒಳಗೇ ಸಿಲುಕಿಕೊಂಡಿದ್ದರು. ಮಾಹಿತಿ ತಿಳಿಯುತ್ತಿದ್ದಂತೆ ಅಗ್ನಿಶಾಮಕ ಸಿಬ್ಬಂದಿ ಮತ್ತು ಪೊಲೀಸರು ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆ ನಡೆಸಿದರು. ಕಾರ್ಯಾಚರಣೆಯಲ್ಲಿ ಎಂಟು ಮಂದಿಯನ್ನು ಕಟ್ಟಡದಿಂದ ಸುರಕ್ಷಿತವಾಗಿ ಹೊರತೆಗೆದು ಸಫ್ದರ್‌ಜಂಗ್ ಆಸ್ಪತ್ರೆ ಹಾಗೂ ಏಮ್ಸ್ ಟ್ರಾಮಾ ಸೆಂಟರ್ ಗೆ ದಾಖಲಿಸಲಾಯಿತು ಎಂದು ಆಗ್ನೇಯ ವಿಭಾಗದ ಉಪ ಪೊಲೀಸ್ ಆಯುಕ್ತ ಹೇಮಂತ್ ತಿವಾರಿ ತಿಳಿಸಿದ್ದಾರೆ.

ಆಸ್ಪತ್ರೆಗೆ ದಾಖಲಿಸಲಾದವರ ಪೈಕಿ 22 ವರ್ಷದ ಯುವಕ ಹಾಗೂ ಇಬ್ಬರು ಮಹಿಳೆಯರು ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ. ಗಾಯಗೊಂಡಿರುವ ಇನ್ನಿಬ್ಬರ ಸ್ಥಿತಿ ಗಂಭೀರವಾಗಿದ್ದು, ಅವರಿಗೆ ಚಿಕಿತ್ಸೆ ಮುಂದುವರಿದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪ್ರಾಥಮಿಕ ತನಿಖೆಯ ಪ್ರಕಾರ ಕಟ್ಟಡದ ನೆಲ ಮಹಡಿಯಲ್ಲಿ ಸಂಭವಿಸಿದ ವಿದ್ಯುತ್ ಶಾರ್ಟ್ ಸರ್ಕ್ಯೂಟ್ ನಿಂದ ಬೆಂಕಿ ಕಾಣಿಸಿಕೊಂಡಿರಬಹುದು ಎಂದು ಶಂಕಿಸಲಾಗಿದೆ. ಬೆಂಕಿ ಅವಘಡದ ನಿಖರ ಕಾರಣವನ್ನು ಪತ್ತೆಹಚ್ಚಲು ತನಿಖೆ ಮುಂದುವರಿದಿದೆ.

ದಕ್ಷಿಣ ದಿಲ್ಲಿಯ ಮಾಳವೀಯ ನಗರದಲ್ಲಿನ ಹೋಟೆಲ್ ನಲ್ಲಿ ಸಂಭವಿಸಿದ್ದ ಭಾರಿ ಬೆಂಕಿ ಅವಘಡದಲ್ಲಿ ಕನಿಷ್ಠ 21 ಮಂದಿ ಮೃತಪಟ್ಟ ಘಟನೆ ನಡೆದ ಒಂದು ವಾರದ ಬಳಿಕ ಈ ದುರ್ಘಟನೆ ಸಂಭವಿಸಿದೆ.

# ಪಿಯುಸಿ ಅಂಕಗಳ ಆಧಾರದ ಮೇಲೆ ಎಂಬಿಬಿಎಸ್‌ಗೆ ಪ್ರವೇಶ ನೀಡಿ: ವಿಜಯ್





**ಚೆನ್ನೈ, ಜೂ. 12:** ತಮಿಳುನಾಡಿನ ಕೋಟಾದಡಿ ಬರುವ ಎಂಬಿಬಿಎಸ್, ಬಿಡಿಎಸ್ ಹಾಗೂ ಆಯುಷ್ ಕೋರ್ಸ್‌ಗಳ ಎಲ್ಲ ಸೀಟುಗಳನ್ನು 12ನೇ ತರಗತಿಯ ಅಂಕಗಳ ಆಧಾರದ ಮೇಲೆ ಭರ್ತಿ ಮಾಡಲು ಅನುಮತಿ ನೀಡಬೇಕೆಂದು ತಮಿಳುನಾಡು ಸಿಎಂ ಸಿ ಜೋಸೆಫ್ ವಿಜಯ್ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ನೀಟ್–ಯುಜಿ ಪ್ರಶ್ನೆ ಪತ್ರಿಕೆ ಸೋರಿಕೆ ವಿವಾದದ ನಡುವೆ ವಿಜಯ್ ಅವರು ತಮ್ಮ ರಾಜ್ಯದ ವಿದ್ಯಾರ್ಥಿಗಳಿಗೆ 12ನೇ ತರಗತಿಯ ಅಂಕಗಳ ಆಧಾರದಲ್ಲಿಯೇ ಸೀಟು ಹಂಚಿಕೆ ಮಾಡಲು ಒತ್ತಾಯಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ನೀತಿ ಆಯೋಗದ ಆಡಳಿತ ಮಂಡಳಿಯ 11ನೇ ಸಭೆಯಲ್ಲಿ ಸಿಎಂ ವಿಜಯ್ ಈ ಬೇಡಿಕೆಯನ್ನು ಮಂಡಿಸಿದ್ದಾರೆ. ವಿದ್ಯಾರ್ಥಿಗಳ ಹಿತರಕ್ಷಣೆಗೆ ತಮಿಳುನಾಡು ಸರ್ಕಾರ ಬದ್ಧವಾಗಿದೆ. ಪದವಿ ಪೂರ್ವ ವೈದ್ಯಕೀಯ ಮತ್ತು ದಂತವೈದ್ಯಕೀಯ ಕೋರ್ಸ್‌ಗಳ ಪ್ರವೇಶಕ್ಕಾಗಿ ನಡೆಸಲಾಗುವ ನೀಟ್ ಪರೀಕ್ಷೆಯನ್ನು ರಾಜ್ಯ ಸರ್ಕಾರ ವಿರೋಧಿಸುತ್ತದೆ. ಏಕೆಂದರೆ, ನೀಟ್‌ನಿಂದಾಗಿ ಗ್ರಾಮೀಣ ಮತ್ತು ಸಾಮಾಜಿಕ–ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ವಿದ್ಯಾರ್ಥಿಗಳಿಗೆ ಭಾರಿ ತೊಂದರೆಯಾಗಿದೆ ಎಂದಿದ್ದಾರೆ. ತಮಿಳುನಾಡು ಸರ್ಕಾರಕ್ಕೆ ತನ್ನ ರಾಜ್ಯ ಕೋಟಾದಡಿಯ ಎಂಬಿಬಿಎಸ್, ಬಿಡಿಎಸ್ ಮತ್ತು ಆಯುಷ್ ಸೀಟುಗಳನ್ನು ಸಂಪೂರ್ಣವಾಗಿ 12ನೇ ತರಗತಿಯ ಅಂಕಗಳ ಆಧಾರದ ಮೇಲೆ ಭರ್ತಿ ಮಾಡಲು ಅನುಮತಿ ನೀಡಬೇಕು ಎಂದು ಅವರು ಕೋರಿದ್ದಾರೆ. ನೀಟ್ ಪತ್ರಿಕೆ ಸೋರಿಕೆ ಹಗರಣದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರವು ತೀವ್ರ ಟೀಕೆಗಳನ್ನು ಎದುರಿಸುತ್ತಿರುವ ಬೆನ್ನಲ್ಲೇ ವಿಜಯ್ ಈ ಬೇಡಿಕೆ ಇಟ್ಟಿರುವುದು ಪ್ರಾಮುಖ್ಯತೆ ಪಡೆದಿದೆ. ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯು ಜೂನ್ 21ರ ಭಾನುವಾರದಂದು ಮರು ಪರೀಕ್ಷೆ ನಡೆಸಲಿದೆ.

# ನ್ಯೂಸ್‌ಕ್ಲಿಕ್ ವಿರುದ್ಧದ ಎಫ್‌ಐಆರ್ ರದ್ದು ಸುಪ್ರೀಂ ಮೆಟ್ಟಿಲೇರಲು ಮುಂದಾದ ಇಡಿ



**ಚೆನ್ನೈ, ಜೂ. 12:** ವಿದೇಶಿ ನೇರ ಹೂಡಿಕೆ ಮಾನದಂಡಗಳ ಉಲ್ಲಂಘನೆ ಆರೋಪದ ಮೇಲೆ ನ್ಯೂಸ್‌ಕ್ಲಿಕ್ ಮತ್ತು ಅದರ ಪ್ರಧಾನ ಸಂಪಾದಕ ಪ್ರಬೀರ್ ಪುರಕಾಯಸ್ಥ ವಿರುದ್ಧ ದಾಖಲಾಗಿರುವ ಎರಡು ಪ್ರಕರಣಗಳನ್ನು ದೆಹಲಿ ಹೈಕೋರ್ಟ್ ರದ್ದುಗೊಳಿಸಿದೆ. ಈ ಆದೇಶವನ್ನು ಪ್ರಶ್ನಿಸಿ ಜಾರಿ ನಿರ್ದೇಶನಾಲಯ (ಇ.ಡಿ) ಸುಪ್ರೀಂ ಕೋರ್ಟ್ ಮೆಟ್ಟಿಲೇರಲು ಮುಂದಾಗಿದೆ. ಹೈಕೋರ್ಟ್ ಪ್ರಾಸಿಕ್ಯೂಷನ್ ಎತ್ತಿದ ಹಲವಾರು ನಿರ್ಣಾಯಕ ವಾದಗಳನ್ನು ಕಡೆಗಣಿಸಿದೆ ಅಥವಾ ಪರಿಹರಿಸದೆ ಬಿಡಲಾಗಿದೆ ಎಂದು ಇಡಿ ವಾದಿಸಿದೆ. ದೆಹಲಿ ಹೈಕೋರ್ಟ್‌ನ ನ್ಯಾ. ನೀನಾ ಬನ್ಸಾಲ್ ಕೃಷ್ಣ ಅವರಿದ್ದ ಪೀಠವು ಈ ಪ್ರಕರಣದ ತನಿಖೆಯನ್ನು ಕಾನೂನು ಪ್ರಕ್ರಿಯೆಯ ಸಂಪೂರ್ಣ ದುರ್ಬಳಕೆ ಎಂದು ಬಲವಾಗಿ ಟೀಕಿಸಿದೆ. ನ್ಯಾಯಮೂರ್ತಿ ತಮ್ಮ 41 ಪುಟಗಳ ತೀರ್ಪಿನಲ್ಲಿ, ಕ್ರಿಮಿನಲ್ ಪಿತೂರಿ ಇದೆ ಎಂಬ ಸ್ಪಷ್ಟ ಹೇಳಿಕೆಗಳನ್ನು ಹೊರತುಪಡಿಸಿ, ಸೆಕ್ಷನ್ 4 ಪಿಎಂಎಲ್ಎ (ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆ) ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಲಾಗಿದೆ ಎಂದು ಸೂಚಿಸುವ ಯಾವುದೇ ಆರೋಪದ ಪುರಾವೆ ಇಲ್ಲ ಎಂದು ಹೇಳಿದ್ದರು. ಈ ನಡುವೆ ಹೈಕೋರ್ಟ್ ಆದೇಶಕ್ಕೆ ನ್ಯೂಸ್‌ಕ್ಲಿಕ್ ಪ್ರತಿಕ್ರಿಯಿಸಿದೆ. ನಮ್ಮ ಮೇಲಿರುವ ಹಲವಾರು ಪ್ರಕರಣಗಳು ಮತ್ತು ಆರೋಪಗಳು ಪತ್ರಿಕಾ ಸ್ವಾತಂತ್ರ್ಯದ ಮೇಲಿನ ದಾಳಿಗಳಾಗಿವೆ ಎಂದು ಹೇಳಿದೆ. ಇವೆಲ್ಲ ಬೆಳವಣಿಗೆ ನಡುವೆ ಇಡಿ ಹೈಕೋರ್ಟ್ ಆದೇಶದ ವಿರುದ್ಧ ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸುವುದಾಗಿ ತಿಳಿಸಿದೆ. ಇನ್ನು ಈ ಪ್ರಕರಣದಲ್ಲಿ ಇಬ್ಬರು ವ್ಯಕ್ತಿಗಳ ಬಂಧನವನ್ನು ಅಕ್ರಮ ಎಂದೂ ದೆಹಲಿ ಕೋರ್ಟ್ ಘೋಷಿಸಿದೆ. ಇಬ್ಬರನ್ನೂ ಬಿಡುಗಡೆ ಮಾಡಲು ಆದೇಶಿಸಿದೆ.



ನವದೆಹಲಿಯಲ್ಲಿ ಶುಕ್ರವಾರ ನಡೆದ ಭಾರತ್ ಇನ್ನೋವೇಟ್ಸ್ ಕಾರ್ಯತಂತ್ರದ ದಾಖಲೆಗಳ ಬಿಡುಗಡೆ ಕಾರ್ಯಕ್ರಮದಲ್ಲಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಭಾಗವಹಿಸಿದ್ದರು.

# ಫಿಲಿಪ್ಪೀನ್ಸ್‌ನಲ್ಲಿ ಪ್ರಭಾ ಎನ್.ಸುವರ್ಣಗೆ ಗ್ಲೋಬಲ್ ವುಮನ್ ಅಚೀವರ್ಸ್ ಅವಾರ್ಡ್ ಪ್ರದಾನ



**ಮುಂಬಯಿ, ಜೂ.11:** ಪ್ರತಿಷ್ಠಿತ 'ಮೈಲ್‌ಸ್ಟೋನ್ ಗ್ಲೋಬಲ್ ಅವಾರ್ಡ್ಸ್; ಸಮಾರಂಭವು ಕಳೆದ ರವಿವಾರ (ಜೂ.07) ಫಿಲಿಪ್ಪೀನ್ಸ್ ರಾಷ್ಟ್ರದ ಮನಿಲಾದಲ್ಲಿನ ಹೊಟೇಲ್ ವೆಸ್ಟಿನ್ ಮನಿಲಾ ಫಿಲಿಪ್ಪೀನ್ಸ್ ಇದರ ಗ್ರ್ಯಾಂಡ್ ಬಾಲ್‌ರೂಮ್‌ನಲ್ಲಿ ನಡೆದಿದ್ದುಮ್ ಬೃಹನ್ಮುಂಬಯಿಯಲ್ಲಿನ ಪ್ರಭಾ ಎನ್.ಸುವರ್ಣ ಅವರಿಗೆ '50ನೇ ಜಾಗತಿಕ ಮಹಿಳಾ ಸಾಧಕರ ಪ್ರಶಸ್ತಿ; ಪ್ರದಾನಿಸಿ ಗೌರವಿಸಲಾಯಿತು. ಸಾಮಾಜಿಕ ಮತ್ತು ಸಾಂಸ್ಕೃತಿಕ ಅಭಿವೃದ್ಧಿ ಕ್ಷೇತ್ರದಲ್ಲಿ ಪ್ರಭಾ ಸುವರ್ಣ ಮಾಡಿರುವ ಹಾಗೂ ಸಾಧನೆ ಹಾಗೂ ಕೊಡುಗೆಗಳನ್ನು ಪರಿಗಣಿಸಿ ಈ ಪ್ರಶಸ್ತಿಯನ್ನು ಪ್ರದಾನ ಮಾಡಲಾಗಿದೆ. ಮೈಲ್‌ಸ್ಟೋನ್ ಪಜೇಂಟ್ಸ್ ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ಡಾ। ಮ್ಯಾಕ್ ಮಲಿಕ್ ಅವರು ಪ್ರಭಾ ಎನ್.ಸುವರ್ಣ ಅವರಿಗೆ ಗ್ಲೋಬಲ್ ವುಮನ್ ಅಚೀವರ್ಸ್ ಅವಾರ್ಡ್ ಬಿರುದಾವಲಿ ಫಲಕ, ಮಾನ್ಯತಾಪತ್ರ ಪ್ರದಾನಿಸಿ ಗೌರವಿಸಿ ಅಭಿನಂದಿಸಿದರು.

ಸಮುದಾಯದ ಸಬಲೀಕರಣ ಮತ್ತು ಸಾಮಾಜಿಕ ಪ್ರಗತಿಗಾಗಿ ಸದಾ ಶ್ರಮಿಸುವ ಪ್ರಭಾ ಸುವರ್ಣ ಅವರು ಸಾಂಸ್ಕೃತಿಕ ಮೌಲ್ಯಗಳು, ಶಿಕ್ಷಣ ಮತ್ತು ಮಹಿಳಾ ಸಬಲೀಕರಣವನ್ನು ಉತ್ತೇಜಿಸಲು ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಇವರ ಈ ಶ್ರದ್ಧಾಪೂರ್ವಕ ಪ್ರಯತ್ನಗಳು ಅನೇಕ ಜನರ ಜೀವನದ ಮೇಲೆ ಸಕಾರಾತ್ಮಕ ಪ್ರಭಾವ ಬೀರಿದ್ದು, ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಮನ್ನಣೆ ತಂದುಕೊಟ್ಟಿದೆ. ಈ ಪ್ರಶಸ್ತಿಯನ್ನು ಸ್ವೀಕರಿಸುವ ಮುನ್ನ, ಸುವರ್ಣ ಅವರು 'ಮೈಲ್‌ಸ್ಟೋನ್ ಗ್ಲೋಬಲ್ ವುಮೆನ್ ಕಾನ್ಫರೆನ್ಸ್;ನಲ್ಲಿ ಮುಖ್ಯ ವಕ್ತಾರರಾಗಿ ಭಾಗವಹಿಸಿ 'ಹೆಣ್ಣು ಮಗುವಿಗೆ ಶಿಕ್ಷಣ ನೀಡಿ; ಎಂಬ ಪ್ರಮುಖ ವಿಷಯದ ಕುರಿತು ಸ್ಫೂರ್ತಿದಾಯಕ ಪ್ರಬಂಧ ಮಂಡಿಸಿದ್ದರು. ಸಮಾನ ಅವಕಾಶಗಳನ್ನು ಸೃಷ್ಟಿಸುವಲ್ಲಿ ಮತ್ತು ಬಲಿಷ್ಠ ಸಮುದಾಯ ಗಳನ್ನು ನಿರ್ಮಿಸುವಲ್ಲಿ ಶಿಕ್ಷಣದ ಪರಿವರ್ತನಾ ಶಕ್ತಿಯನ್ನು ಒತ್ತಿ ಹೇಳಿದ್ದು, ಈ ಸಂದೇಶವು ವಿವಿಧ ದೇಶಗಳಿಂದ ಆಗಮಿಸಿದ್ದ ಪ್ರತಿನಿಧಿಗಳು ಹಾಗೂ ಭಾಗವಹಿಸಿದ ಗಣ್ಯರ ಅಪಾರ ಮೆಚ್ಚುಗೆಗೆ ಪಾತ್ರವಾಗಿತ್ತು ಎನ್ನಲಾಗಿದೆ. ಗ್ಲೋಬಲ್ ವುಮನ್ ಅಚೀವರ್ಸ್ ಪ್ರಶಸ್ತಿಯ ಈ ಗೌರವವು, ಸಾಮಾಜಿಕ ಬದಲಾವಣೆಗಾಗಿ ಅವರು ತೋರುತ್ತಿರುವ ಸಮರ್ಪಣಾ ಭಾವ, ನಾಯಕತ್ವ ಮತ್ತು ಬದ್ಧತೆಯನ್ನು ಶ್ಲಾಘಿಸುತ್ತದೆ. ಅವರ ಈ ಸಾಧನೆಗಳು ಜಗತ್ತಿನಾದ್ಯಂತ ಇರುವ ಮಹಿಳೆಯರಿಗೆ ಹಾಗೂ ಯುವ ನಾಯಕರಿಗೆ ನಿರಂತರ ಸ್ಫೂರ್ತಿಯಾಗಿದೆ. ಪ್ರಭಾ ಸುವರ್ಣ ಅವರ ಈ ಗಮನಾರ್ಹ ಸಾಧನೆಗೆ 'ಮೈಲ್‌ಸ್ಟೋನ್; ಸಂಸ್ಥೆಯು ಹಾರ್ದಿಕ ಅಭಿನಂದನೆಗಳನ್ನು ಸಲ್ಲಿಸಿದ್ದು, ಸುವರ್ಣರ ಮುಂದಿನ ಎಲ್ಲಾ ಸತ್ಕಾರ್ಯಗಳಿಗೆ ಶುಭ ಹಾರೈಸಿದೆ.

# ಧರ್ಮಸ್ಥಳದಲ್ಲಿ ವ್ಯಸನಮುಕ್ತರ ಸಮ್ಮಿಲನ–ಶತದಿನೋತ್ಸವ ಸಮಾರಂಭ

**ಮುಂಬಯಿ, ಜೂ.12:** ಚತುರ್ವಿಧ ದಾನಪರಂಪರೆಯೊಂದಿಗೆ ಧರ್ಮಸ್ಥಳದ ಧರ್ಮಾಧಿಕಾರಿ ಡಿ. ವೀರೇಂದ್ರ ಹೆಗ್ಗಡೆಯವರು ಮತ್ತು ಹೇಮಾವತಿ ವೀ. ಹೆಗ್ಗಡೆಯವರು ಮಾನವ ಕಲ್ಯಾಣಕ್ಕಾಗಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮೂಲಕ ಮಾಡುತ್ತಿರುವ ಬಹುಮುಖಿ ಸೇವಾಕಾರ್ಯಗಳು ಆದರ್ಶ ಹಾಗೂ ಅನುಕರಣೀಯವಾಗಿವೆ ಎಂದು ಕೊಡಗು ವಿರಾಜಪೇಟೆಯ ಪೂಜ್ಯ ಶಾಂತ ಮಲ್ಲಿಕಾರ್ಜುನ ಸ್ವಾಮೀಜಿ ಹೇಳಿದರು.ಅವರು ಶುಕ್ರವಾರ ಧರ್ಮಸ್ಥಳದಲ್ಲಿ ಅಮೃತವರ್ಷಿಣಿ ಸಭಾಭವನದಲ್ಲಿ ವ್ಯಸನಮುಕ್ತರ ಸಮ್ಮಿಲನ ಮತ್ತು ಶತದಿನೋತ್ಸವ ಸಮಾರಂಭವನ್ನು ಉದ್ಘಾಟಿಸಿ ಆಶೀರ್ವಚನ ನೀಡಿದರು.

ಧರ್ಮಸ್ಥಳದ ವತಿಯಿಂದ ಬದುಕಿಗೆ ಬೇಕಾದ ಎಲ್ಲಾ ಅವಶ್ಯಕತೆಗಳನ್ನು ಮತ್ತು ಸೌಲಭ್ಯಗಳನ್ನು ಒದಗಿಸಿ ಫಲಾನುಭವಿಗಳ ಸ್ವಾವಲಂಬಿ ಜೀವನಕ್ಕೆ ಪ್ರೋತ್ಸಾಹ ನೀಡುತ್ತಿರುವುದು ಶ್ಲಾಘನೀಯವಾಗಿದೆ. ಆಡುಮುಟ್ಟದ ಸೊಪ್ಪಿಲ್ಲ, ಧರ್ಮಸ್ಥಳದವರು ಕಾರ್ಯಮಾಡದ ಸೇವಾ ಕ್ಷೇತ್ರವಿಲ್ಲ.

ವ್ಯಸನಮುಕ್ತರು ದೃಢಸಂಕಲ್ಪದಿಂದ ಸಾರ್ಥಕ ಜೀವನ ನಡೆಸಬೇಕು. ಇದು ಅತ್ಯಂತ ಸಂತೋಷ ಮತ್ತು ಸಂಭ್ರಮದ ಸಮಾರಂಭವಾಗಿದ್ದು ವ್ಯಸನಮುಕ್ತರ ಮುಖದಲ್ಲಿರುವ ಮಂದಹಾಸ ಹಾಗೂ ತೃಪ್ತಿ ಆಶಾದಾಯಕವಾಗಿದೆ. ಪೂಜ್ಯ ಹೆಗ್ಗಡೆಯವರು ತಮ್ಮ ಎಲ್ಲಾ ಸೇವಾಕಾರ್ಯಗಳ ಯಶಸ್ಸನ್ನು ದೇವರ ಸೇವೆ ಎಂದೇ ಭಾವಿಸಿ, ಶ್ರೀ ಸ್ವಾಮಿಗೆ ಅರ್ಪಿಸಿ ಧನ್ಯತೆಯನ್ನು ಹೊಂದುತ್ತಾರೆ. ವ್ಯಸನಮುಕ್ತರು ಇಲ್ಲಿಗೆ ಬಂದು ಒಳ್ಳೆಯ ಜ್ಞಾನ ಹಾಗೂ ವಿಚಾರಗಳನ್ನು ಮನದಲ್ಲಿ ತುಂಬಿಕೊಂಡು ಮುಂದೆ ಸಾರ್ಥಕ ಜೀವನ ನಡೆಸಬೇಕು. ಏಕೆಂದರೆ ಇತರ ಕ್ಷೇತ್ರಗಳಲ್ಲಿ ಮಾಡಿದ ಪಾಪಕರ್ಮಗಳು ಪುಣ್ಯಕ್ಷೇತ್ರದಲ್ಲಿ ನಾಶವಾಗುತ್ತವೆ. ಪುಣ್ಯಕ್ಷೇತ್ರದಲ್ಲಿ ಪಾಪ ಮಾಡಿದರೆ ವಜ್ರಲೇಪದಂತೆ ಅದು ಬದುಕಿನಲ್ಲಿ ಶಾಶ್ವತವಾಗಿರುತ್ತದೆ ಎಂದು ಸ್ವಾಮೀಜಿ ಸಲಹೆ ನೀಡಿದರು.

ನವಜೀವನ ಪ್ರಶಸ್ತಿ ಪ್ರದಾನ ಮಾಡಿದ ವಿಧಾನಪರಿಷತ್ ಸದಸ್ಯ ಕೆ. ಪ್ರತಾಪಸಿಂಹ ನಾಯಕ್ ಮಾತನಾಡಿ, ವ್ಯಸನಮುಕ್ತರು ಮನಸ್ಸನ್ನು ನಿಯಂತ್ರಣದಲ್ಲಿಟ್ಟುಕೊಂಡು, ತಮ್ಮ ಕೆಲಸವನ್ನು ಸಂತೋಷದಿಂದ ಮಾಡಿ ಗೌರವಯುತ ಹಾಗೂ ನೆಮ್ಮದಿಯ ಜೀವನ ನಡೆಸಬೇಕು ಎಂದು ಹೇಳಿದರು. ವಾರ್ಷಿಕ ವರದಿ ಬಿಡಗಡೆಗೊಳಿಸಿದ ಹೇಮಾವತಿ ವೀ. ಹೆಗ್ಗಡೆ ಮಾತನಾಡಿ ಮದ್ಯಪಾನದಂತಹ ದುಶ್ಚಟಗಳಿಂದ ಕೊಲೆ, ಅನ್ಯಾಯ, ಅತ್ಯಾಚಾರ ಹೆಚ್ಚಾಗುತ್ತದೆ. ಮಹಿಳೆಯರ ಜೀವನ ನರಕಯಾತನೆಯಾಗುತ್ತದೆ. ಮಾನವಜನ್ಮ ಶ್ರೇಷ್ಠವಾಗಿದ್ದು ಬುದ್ಧಿ, ವಿವೇಕ ಮತ್ತು ಶಕ್ತಿಯ ಸದುಪಯೋಗ ಮಾಡಿ ಸುಖ–ಶಾಂತಿ, ನೆಮ್ಮದಿಯ ಕುಟುಂಬಜೀವನ ನಡೆಸಬೇಕು ಎಂದು ಕಿವಿಮಾತು ಹೇಳಿದರು.




ಗ್ರಾಮಾಭಿವೃದ್ಧಿ ಯೋಜನೆಯ ಸಿ.ಇ.ಓ. ಅನಿಲ್ ಕುಮಾರ್ ಮಾತನಾಡಿ ಫಲಾನುಭವಿಗಳ ಕಲ್ಯಾಣಕ್ಕಾಗಿ ಅನುಷ್ಠಾನಗೊಳಿಸಿದ ಯಶಸ್ವಿ ಕಾರ್ಯಕ್ರಮಗಳ ಮಾಹಿತಿ ನೀಡಿದರು.

**"ಜಾಗೃತಿ ಅಣ್ಣ ಮತ್ತು ಜಾಗೃತಿ ಮಿತ್ರ" ಪ್ರಶಸ್ತಿ:** ಹೊನ್ನಾವರದ ಮಂಜುನಾಯ್ಕ, ನಂಜನಗೂಡು ಮಣಿಕಂಠ ಮತ್ತು ಗದಗ ಜಿಲ್ಲೆಯ ನವಲಗುಂದದ ಜಗದೀಶ ಮಲ್ಲಪ್ಪ ಬ್ಯಾಳಿ ಅವರಿಗೆ "ಜಾಗೃತಿ ಅಣ್ಣ" ಹಾಗೂ ಹುಬ್ಬಳ್ಳಿಯ ಸಿದ್ದಪ್ಪ ಕಲ್ಲಪ್ಪ ನೀಲರಗಿ, ಅಥಣಿಯ ಅಂದಾನಿ ದುರದುಂಡೆಪ್ಪ, ಶಿವಮೊಗ್ಗದ ರಮೇಶ್, ಎಸ್.ಎಲ್. ಗದಗ್‌ನ ಶಿವಾನಂದ ಕುರಿ, ತುಮಕೂರಿನ ರವಿಕುಮಾರ್ ಮತ್ತು ವಿಜಯಪುರದ ಬಬಲೇಶ್ವರ ಸುಭಾಶ್ ಅವರಿಗೆ "ಜಾಗೃತಿ ಮಿತ್ರ" ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.

ಪಾನಮುಕ್ತರ ಪರವಾಗಿ ಕೂಡ್ಲಿಗಿಯ ಸತೀಶ್ ಮತ್ತು ತುಮಕೂರಿನ ಮಂಜುಳಾ ತಮ್ಮ ಅನಿಸಿಕೆ ವ್ಯಕ್ತಪಡಿಸಿದರು.

ಅಧ್ಯಕ್ಷತೆ ವಹಿಸಿದ ಧರ್ಮಾಧಿಕಾರಿ ಡಿ. ವೀರೇಂದ್ರ ಹೆಗ್ಗಡೆಯವರು ಮಾತನಾಡಿ, ವ್ಯಸನಮುಕ್ತರು ದೃಢಸಂಕಲ್ಪದಿಂದ ಇದ್ದು ಮುಂದೆ ಯಾವುದೇ ಆಮಿಷ, ಒತ್ತಡಕ್ಕೆ ಒಳಗಾಗಿ ಮತ್ತೆ ದುಶ್ಚಟಕ್ಕೆ ಬಲಿಯಾಗಬಾರದು. ತಾವು ಸಾರ್ಥಕ ಜೀವನ ನಡೆಸುವುದರೊಂದಿಗೆ, ಇತರ ಮದ್ಯವ್ಯಸನಿಗಳೂ ವ್ಯಸನಮುಕ್ತರಾಗುವಂತೆ ಪ್ರೇರಣೆ, ಸಹಕಾರ ನೀಡಬೇಕು ಎಂದರು.

ಪ್ರಾಸ್ತಾವಿಕ ಮಾತುಗಳೊಂದಿಗೆ ಸ್ವಾಗತಿಸಿದ ಜನಜಾಗೃತಿ ವೇದಿಕೆಯ ಪ್ರಾದೇಶಿಕ ನಿರ್ದೇಶಕ ವಿವೇಕ್ ಪ್ಯಾಸ್ ಮಾತನಾಡಿ, ಈ ವರೆಗೆ 2063 ಮದ್ಯವರ್ಜನ ಶಿಬಿರಗಳ ಮೂಲಕ 1,38,000 ಮದ್ಯವ್ಯಸನಿಗಳನ್ನು ವ್ಯಸನಮುಕ್ತರಾಗಿ ಪರಿವರ್ತನೆ ಮಾಡಿದ್ದು ಇದಕ್ಕಾಗಿ 75 ಕೋಟಿ ರೂ. ವಿನಿಯೋಗಿಸಲಾಗಿದೆ ಎಂದರು.

ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆಯ ರಾಜ್ಯ ಸಂಘಟನಾ ಅಧ್ಯಕ್ಷ ನಟರಾಜ ಬಾದಾಮಿ ಧನ್ಯವಾದವಿತ್ತರು. ಯೋಜನಾಧಿಕಾರಿ ಗಣೇಶ್ ಆಚಾರ್ಯ ಕಾರ್ಯಕ್ರಮ ನಿರ್ವಹಿಸಿದರು.

**ಕಾಡುಗೋಡಿ ಮಗು ಸಾವು ಪ್ರಕರಣ: ಕರ್ತವ್ಯಲೋಪ ಎಸಗಿದ ಮೂವರು ಪೊಲೀಸ್ ಅಧಿಕಾರಿಗಳ ಅಮಾನತು**

# ಉದಾಸೀನ, ಕಾನೂನುಬಾಹಿರ ನಡೆಯನ್ನು ಸರ್ಕಾರ ಸಹಿಸದು: ಗೃಹ ಸಚಿವ ಪ್ರಿಯಾಂಕ್ ಖರ್ಗೆ ಎಚ್ಚರಿಕೆ

**ಬೆಂಗಳೂರು, ಜೂ.12:** ಕಾಡುಗೋಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಮಗುವಿನ ಸಾವಿನ ಪ್ರಕರಣದಲ್ಲಿ ಕರ್ತವ್ಯಲೋಪ ಎಸಗಿದ ಮತ್ತು ಕಾನೂನು ನಿಯಮಗಳನ್ನು ಉಲ್ಲಂಘಿಸಿದ ಮೂವರು ಪೊಲೀಸ್ ಸಿಬ್ಬಂದಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತುಗೊಳಿಸಲಾಗಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಸುದ್ದಿಗಾರರ ಜೊತೆ ಮಾತನಾಡಿ, ಪೊಲೀಸರ ಉದಾಸೀನತೆ ಹಾಗೂ ಕಾನೂನುಬಾಹಿರ ನಡೆಗಳನ್ನು ಸರ್ಕಾರ ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂಬ ಕಟ್ಟುನಿಟ್ಟಿನ ಸಂದೇಶ ರವಾನಿಸಿದ್ದಾರೆ.

ಕಳೆದ ಏಪ್ರಿಲ್ 4 ರಂದೇ ಮಗುವಿನ ಮರಣೋತ್ತರ ಪರೀಕ್ಷೆಯ ವರದಿ ಬಂದಿತ್ತು. ವರದಿಯಲ್ಲಿ ಅದು ಸಾವು ಎಂದು ದೃಢಪಟ್ಟ ತಕ್ಷಣವೇ ಅಧಿಕಾರಿಗಳು ಅದನ್ನು ಅನುಮಾನಾಸ್ಪದ ಸಾವು ಎಂದು ಪರಿಗಣಿಸಿ ಎಫ್‌ಐಆರ್ ದಾಖಲಿಸಿ ತನಿಖೆ ನಡೆಸಬೇಕಾಗಿತ್ತು. ಆದರೆ, ಕಾನೂನುಬಾಹಿರವಾಗಿ ಈ ಪ್ರಕರಣವನ್ನು ಯುಡಿಆರ್ ವ್ಯಾಪ್ತಿಯಲ್ಲೇ ಇಟ್ಟುಕೊಂಡು, ತಮ್ಮ ಹಂತದಲ್ಲೇ ವಿಳಂಬ ಧೋರಣೆ ಅನುಸರಿಸಿದ್ದಾರೆ. ಇದು ಗಂಭೀರ ಕರ್ತವ್ಯ ಲೋಪ," ಎಂದು ಸಚಿವರು ವಿವರಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಕರ್ತವ್ಯ ನಿರ್ಲಕ್ಷ್ಯ ತೋರಿದ ಕಾಡುಗೋಡಿ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್, ಸಬ್ ಇನ್ಸ್‌ಪೆಕ್ಟರ್ ಹಾಗೂ ರೈಟರ್ ಸೇರಿದಂತೆ ಮೂವರನ್ನು ಅಮಾನತುಗೊಳಿಸಿ ಆದೇಶ ಹೊರಡಿಸಲಾಗಿದೆ. ಪ್ರಕರಣದ ಪ್ರಮುಖ ಆರೋಪಿಗಳಾದ ಮೋಹನ್ ಮತ್ತು ಪ್ರಿಯಾಂಕ ಎಂಬುವವರನ್ನು ಈಗಾಗಲೇ ಪೊಲೀಸರು ಬಂಧಿಸಿದ್ದು, ತನಿಖೆ ಪ್ರಗತಿಯಲ್ಲಿದೆ, ತನಿಖೆಯ ಪೂರ್ಣ ವರದಿ ಬಂದ ನಂತರ ಮುಂದಿನ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಗೃಹ ಸಚಿವರು ಸ್ಪಷ್ಟಪಡಿಸಿದ್ದಾರೆ.



**ಗ್ರಾಮೀಣ ಸೇವೆಗೆ ಹಾಜರಾಗದ ವೈದ್ಯರಿಗೆ 15 ಲಕ್ಷ ರೂ. ದಂಡ**

## 450ಕ್ಕೂ ಹೆಚ್ಚು ವೈದ್ಯರಿಗೆ ಆರೋಗ್ಯ ಇಲಾಖೆ ನೋಟಿಸ್

**ಬೆಂಗಳೂರು, ಜೂ. 12** ವೈದ್ಯಕೀಯ ಪದವಿ ನಂತರ ಕಡ್ಡಾಯ ಗ್ರಾಮೀಣ ಸೇವೆಗೆ ಹಾಜರಾಗದ ವೈದ್ಯರಿಗೆ 15 ಲಕ್ಷ ರೂ.ಗಳ ದಂಡ ವಿಧಿಸಿ ನೋಟಿಸ್‌ನ್ನು ಆರೋಗ್ಯ ಇಲಾಖೆ ಜಾರಿ ಮಾಡಿದೆ.

ಸರ್ಕಾರಿ ಕೋಟಾದಡಿ ವೈದ್ಯಕೀಯ ಸೀಟು ಪಡೆದು ವೈದ್ಯಕೀಯ ಶಿಕ್ಷಣ ಮುಗಿಸುವ ವೈದ್ಯರು ನಿಯಮಾವಳಿಗಳಂತೆ 1 ವರ್ಷ ಗ್ರಾಮೀಣ ಸೇವೆ ಮಾಡುವುದು ಕಡ್ಡಾಯ. ಆದರೆ 2018–19ನೇ ಬ್ಯಾಚ್‌ನ 450ಕ್ಕೂ ಹೆಚ್ಚು ವೈದರು ನಿಯಮಗಳನ್ನು ಗಾಳಿಗೆ ತೂರಿ ಕಡ್ಡಾಯ ಸೇವೆಗೆ ಹಾಜರಾಗಿಲ್ಲ ಎನ್ನಲಾಗಿದೆ. ಈ ಸಂಬಂಧ ಆರೋಗ್ಯ ಇಲಾಖೆ ಈಗಾಗಲೇ 2 ಬಾರಿ ನೋಟಿಸ್ ನೀಡಿದ್ದರೂ ಯಾವುದೇ ಪ್ರತಿಕ್ರಿಯೆ ಬಾರದ ಹಿನ್ನೆಲೆಯಲ್ಲಿ ಈಗ ದಂಡದ ಜತೆ ಕಾನೂನು ಕ್ರಮಕ್ಕೂ ಇಲಾಖೆ ಮುಂದಾಗಿದೆ.



ಕಡ್ಡಾಯ ಗ್ರಾಮೀಣ ಸೇವೆಗೆ ಹಾಜರಾಗದ ವೈದ್ಯರಿಗೆ 15 ಲಕ್ಷ ರೂ. ದಂಡ ವಿಧಿಸಲಾಗುತ್ತದೆ. ಈ ದಂಡದ ಮೊತ್ತವನ್ನು 25 ಲಕ್ಷ ರೂ.ಗಳಿಗೆ ಏರಿಕೆ ಮಾಡುವ ಬಗ್ಗೆಯೂ ಚಿಂತನೆ ನಡೆದಿದೆ. ಆರೋಗ್ಯ ಸಚಿವ ಯು.ಟಿ. ಖಾದರ್ ಸೂಚನೆ ಮೇರೆಗೆ ಆರೋಗ್ಯ ಇಲಾಖೆ ಕ್ರಮಕ್ಕೆ ಮುಂದಾಗಿದ್ದು, ಮುಂದಿನ ದಿನಗಳಲ್ಲಿ ಗ್ರಾಮೀಣ ಕಡ್ಡಾಯ ಸೇವೆಗೆ ಹಾಜರಾಗದ ವೈದ್ಯ ವಿದ್ಯಾರ್ಥಿಗಳಿಗೆ ದಂಡದ ಜತೆಗೆ ಕ್ರಿಮಿನಲ್ ಪ್ರಕರಣ ದಾಖಲಿಸುವ ಬಗ್ಗೆಯೂ ಚಿಂತನೆ ನಡೆದಿದೆ ಎಂದು ಆರೋಗ್ಯ ಸಚಿವರು ತಿಳಿಸಿದ್ದಾರೆ. ಗ್ರಾಮೀಣ ಸೇವೆ ಮಾಡದ ವಿದ್ಯಾರ್ಥಿಗಳಿಗೆ ಪದವಿ ಪ್ರಮಾಣ ಪತ್ರ ತಡೆ ಹಿಡಿಯುವ ಬಗ್ಗೆಯೂ ಇಲಾಖಾ ಮಟ್ಟದಲ್ಲಿ ಚರ್ಚೆ ನಡೆದಿದೆ ಎಂದರು.

**ಜಿಬಿಎ ಚುನಾವಣೆಗೂ ಮುನ್ನ ಎಸ್‌ಐಆರ್ ನಡೆಯಲಿ**

## ಸರ್ಕಾರ, ಚುನಾವಣಾ ಆಯೋಗಕ್ಕೆ ಉದ್ಯಮಿ ಟಿ.ವಿ.ಮೋಹನ್‌ದಾಸ್ ಪೈ ಒತ್ತಾಯ

**ಬೆಂಗಳೂರು, ಜೂ.12:** ಗ್ರೇಟರ್ ಬೆಂಗಳೂರು ಪ್ರಾಧಿಕಾರ ಚುನಾವಣೆಗೂ ಮುನ್ನ ಬೆಂಗಳೂರಿನ ಮತದಾರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ನಡೆಸುವಂತೆ ಉದ್ಯಮಿ ಟಿ.ವಿ. ಮೋಹನ್‌ದಾಸ್ ಪೈ ಅವರು ರಾಜ್ಯ ಸರ್ಕಾರ ಮತ್ತು ಚುನಾವಣಾ ಆಯೋಗವನ್ನು ಒತ್ತಾಯಿಸಿದ್ದಾರೆ.

ನಗರದ ಮತದಾರರ ಪಟ್ಟಿಯಲ್ಲಿ ಅಕ್ರಮ ವಲಸಿಗರು ಹೆಸರು ಪಡೆದಿರುವ ಸಾಧ್ಯತೆಗಳಿದ್ದು, ಪಾರದರ್ಶಕ ಚುನಾವಣೆಗಾಗಿ ತಕ್ಷಣವೇ ಎಸ್‌ಐಆರ್ ಪ್ರಕ್ರಿಯೆ ಆರಂಭಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಬೆಂಗಳೂರು ನಗರಕ್ಕೆ ಅಕ್ರಮವಾಗಿ ನುಸುಳಿ ಬಂದಿರುವ ಬಾಂಗ್ಲಾದೇಶ ಸೇರಿದಂತೆ ವಿವಿಧ ದೇಶಗಳ ವಲಸಿಗರ ಹೆಸರುಗಳು ಮತದಾರರ ಪಟ್ಟಿಗೆ ಸೇರಿರುವ ಸಾಧ್ಯತೆಗಳಿವೆ.

ಕೆಲವು ರಾಜಕೀಯ ಪಕ್ಷಗಳು ತಮ್ಮ ಸ್ವಾರ್ಥ ಲಾಭಕ್ಕಾಗಿ ಇಂತಹ ಅಕ್ರಮ ವಲಸಿಗರಿಗೆ ಆಧಾರ್ ಕಾರ್ಡ್ ಸೇರಿದಂತೆ ಗುರುತಿನ ಚೀಟಿ ಹಾಗೂ ದಾಖಲೆಗಳನ್ನು ಕಳ್ಳಮಾರ್ಗದ ಮೂಲಕ ಒದಗಿಸುತ್ತಿವೆ. ನಂತರ ಇವುಗಳನ್ನು ಬಳಸಿಕೊಂಡು ಅವರ ಹೆಸರುಗಳನ್ನು ಮತದಾರರ ಪಟ್ಟಿಗೆ ಸೇರಿಸಲಾಗುತ್ತಿದೆ ಎಂದು ಪೈ ಗಂಭೀರ ಆರೋಪ ಮಾಡಿದ್ದಾರೆ.

ಮತದಾರರ ಪಟ್ಟಿಯನ್ನು ಸಂಪೂರ್ಣವಾಗಿ ಶುದ್ಧೀಕರಿಸಲು ವಿಶೇಷ ತೀವ್ರ ಪರಿಷ್ಕರಣೆ (SIR) ಏಕೈಕ ದಾರಿಯಾಗಿದೆ. ಚುನಾವಣಾ ಆಯೋಗವು ಇಂತಹ ನಕಲಿ ಮತ್ತು ಅಕ್ರಮ ವಲಸಿಗರ ಪ್ರಕರಣಗಳನ್ನು ಕಟ್ಟುನಿಟ್ಟಾಗಿ ಪತ್ತೆಹಚ್ಚಬೇಕು.

ಬೋಗಸ್ ಹೆಸರುಗಳನ್ನು ಪಟ್ಟಿಯಿಂದ ತಕ್ಷಣವೇ ಡಿಲೀಟ್ ಮಾಡುವುದರ ಜೊತೆಗೆ, ಇಂತಹ ಅಕ್ರಮ ದಂಧೆಯ ಹಿಂದೆ ಇರುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಅವರು ಸರ್ಕಾರಕ್ಕೆ ತಿಳಿಸಿದ್ದಾರೆ.

ಚುನಾವಣಾ ವೇಳಾಪಟ್ಟಿಯ ಕುರಿತು ಸಲಹೆ ನೀಡಿರುವ ಮೋಹನ್‌ದಾಸ್ ಪೈ, ಸರ್ಕಾರ



ಮತ್ತು ಚುನಾವಣಾ ಆಯೋಗವು ತಕ್ಷಣವೇ ಎಚ್ಚೆತ್ತುಕೊಂಡು ಜೂನ್ ಅಥವಾ ಜುಲೈ ಅವಧಿಯೊಳಗೆ ಈ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಬೇಕು. ಆ ಮೂಲಕ ಮತದಾರರ ಪಟ್ಟಿಯ ಪಾರದರ್ಶಕತೆಯನ್ನು ಖಚಿತಪಡಿಸಿಕೊಂಡು, ತದನಂತರ ಆಗಸ್ಟ್ ತಿಂಗಳಿನಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಚುನಾವಣೆಯನ್ನು ನಡೆಸಬೇಕು ಎಂದು ಹೇಳಿದ್ದಾರೆ.

# ಹೊರರಾಜ್ಯದ ಶಿಕ್ಷಣ ಸಂಸ್ಥೆಯಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೂ ಉಚಿತ ಬಸ್‌ಪಾಸ್

**ಬೆಂಗಳೂರು, ಜೂ.12:** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಗಳಲ್ಲಿ ಒಂದಾದ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಉಚಿತ ಬಸ್‌ಪಾಸ್‌ಗಳನ್ನು ಉಪಯೋಗಿಸಿ ಹೊರ ರಾಜ್ಯಗಳ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೂ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ.

ಗಂಡು ಮಕ್ಕಳಿಗೂ ಉಚಿತ ಪಾಸ್ ವಿತರಣೆಯ ಸಂಬಂಧ ರಾಜ್ಯ ಸಾರಿಗೆ ಇಲಾಖೆ ಮಾರ್ಗಸೂಚಿಗಳನ್ನು ಪ್ರಕಟಿಸಿದೆ. ಅದರಂತೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ ಇನ್ನು ಮುಂದೆ ವಿದ್ಯಾರ್ಥಿಗಳು, ವಿದ್ಯಾರ್ಥಿನಿಯರೆಲ್ಲರೂ ಉಚಿತವಾಗಿ ಪ್ರಯಾಣಿಸಬಹುದು.

ರಸ್ತೆ ಸಾರಿಗೆ ನಿಗಮಗಳು ಮತ್ತು ಸಂಸ್ಥೆಗಳು ವಿದ್ಯಾರ್ಥಿಗಳ ಉಚಿತ ಪಾಸ್ ವಿತರಣೆಗೆ ಸಂಬಂಧಿಸಿದಂತೆ ಸದ್ಯ ಇರುವ ನಿಯಮಾವಳಿಗಳನ್ನು ಅನುಸರಿಸಲಾಗುತ್ತದೆ. ಅಂದರೆ, ವಿದ್ಯಾರ್ಥಿ ಪಾಸಿಗಾಗಿ ಶೈಕ್ಷಣಿಕ ವಿದ್ಯಾಭ್ಯಾಸದ ಅರ್ಹತಾ ಮಾನದಂಡ ಗಳು, ದೂರದ



ಮಿತಿ, ಪಾಸಿನ ಕಾಲಾವಧಿಯಂತಹ ನಿಬಂಧನೆಗಳು ಅನ್ವಯವಾಗುತ್ತವೆ.

ವಿದ್ಯಾರ್ಥಿಗಳು ರಾಜ್ಯ ಸರ್ಕಾರದ ಸೇವಾ ಸಿಂಧು ಪೋರ್ಟಲ್ ನಲ್ಲಿ ಎಲ್ಲಿಂದ ಬೇಕಾದರೂ ಆನ್ ಲೈನ್ ನಲ್ಲಿ ಪೂರಕ ದಾಖಲೆಗಳೊಂದಿಗೆ ಅರ್ಜಿಗಳನ್ನು ಸಲ್ಲಿಸಬಹುದು. ಈಗಾಗಲೇ ವಿತರಿಸಲಾಗಿರುವ ಬಸ್ ಪಾಸ್ ಗಳನ್ನು ಬಳಸಿಯೂ ವಿದ್ಯಾರ್ಥಿಗಳು ಪ್ರಯಾಣಿಸಬಹುದು. ಇದಕ್ಕಾಗಿ ಪಾವತಿಸಿರುವ ಹಣವನ್ನು 15 ದಿನಗಳೊಳಗಾಗಿ ವಿದ್ಯಾರ್ಥಿಗಳಿಗೆ ಮರುಪಾವತಿಸಲಾಗುತ್ತದೆ.

ರಾಜ್ಯದಲ್ಲಿ ವಾಸವಿದ್ದು, ನೆರೆ ರಾಜ್ಯಗಳಲ್ಲಿನ ವಿದ್ಯಾಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮತ್ತು ನೆರೆ ರಾಜ್ಯಗಳಲ್ಲಿ (ರಾಜ್ಯದ ಗಡಿಭಾಗಗಳಲ್ಲಿ) ವಾಸವಿದ್ದು ರಾಜ್ಯದೊಳಗಿರುವ ವಿದ್ಯಾಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೂ ಈ ಉಚಿತ ಬಸ್ ಪಾಸ್ ಲಭ್ಯವಿರುತ್ತದೆ.

**ವಿಶೇಷತೆಗಳು:**

* ಪ್ರತಿಯೊಬ್ಬ ವಿದ್ಯಾರ್ಥಿಗೂ ಅಪಘಾತ ವಿಮೆಯೂ ಇರಲಿದೆ. ಇದಕ್ಕೆ ಪ್ರತಿ ತಿಂಗಳು ಪ್ರತಿ ವಿದ್ಯಾರ್ಥಿಗೆ 5 ರೂ. ವಿಮಾ ಕಂತನ್ನು ಸರ್ಕಾರವೇ ಕಂತನ್ನು ಪಾವತಿಸಲಿದೆ.

*ಪ್ರತಿ ಬಸ್‌ಪಾಸ್‌ಗೆ ತಲಾ 100 ರೂ.ನಂತೆ ಸಂಸ್ಕರಣಾ ಶುಲ್ಕವನ್ನು ಸಾರಿಗೆ ನಿಗಮಗಳಿಗೆ ಸರ್ಕಾರವೇ ಭರಿಸಲಿದೆ. ಈ ಅಪಘಾತ ಪರಿಹಾರ ನಿಧಿ ಮತ್ತು ಸಂಸ್ಕರಣೆಗೆ ತಗಲುವ ಸುಮಾರು 15 ಕೋಟಿ ರೂಪಾಯಿಗಳನ್ನು ನಾಲ್ಕು ರಸ್ತೆ ಸಾರಿಗೆ ನಿಗಮಗಳಿಗೆ ಸರ್ಕಾರವೇ ಪಾವತಿಸಲಿದೆ.

*ಪ್ರಸ್ತುತ ರಾಜ್ಯದ 4 ಸಾರಿಗೆ ಸಂಸ್ಥೆಗಳಿಂದ 19,792 ವಿದ್ಯಾರ್ಥಿಗಳು ನಿಗದಿತ ಶುಲ್ಕ ಪಾವತಿಸಿ ಬಸ್‌ಪಾಸ್ ಖರೀದಿಸಿದ್ದಾರೆ. ಈ ವಿದ್ಯಾರ್ಥಿಗಳಿಗೆ ಮುಂದಿನ 15 ದಿನಗಳಲ್ಲಿ ಈ ಹಣವನ್ನು ಮರುಪಾವತಿ ಮಾಡಲಾಗುತ್ತದೆ. ಇದೇವೇಳೆ, ಹಳೆಯ ಬಸ್‌ಪಾಸ್ ಅನ್ನು ಉಚಿತವಾಗಿ ಬಳಸಿ ಪ್ರಯಾಣಿಸಬಹುದಾಗಿದೆ.

*ಈ ಯೋಜನೆಗಾಗಿ ವಾರ್ಷಿಕ 286.08 ಕೋಟಿ ರೂ. ವೆಚ್ಚವಾಗುವ ನಿರೀಕ್ಷೆ ಇದೆ. ಈ ಹಣವನ್ನೂ ಸರ್ಕಾರ ನಾಲ್ಕು ಸಾರಿಗೆ ಸಂಸ್ಥೆಗಳು/ನಿಗಮಗಳಿಗೆ ಬಿಡುಗಡೆ ಮಾಡಲಿದೆ.

**ಕರ್ನಾಟಕದಲ್ಲಿ ಟಾಟಾ ಪವರ್‌ಗೆ ವಿದ್ಯುತ್ ವಿತರಣಾ ಪರವಾನಗಿ ನೀಡಲು ವಿರೋಧ**

# ಹಳೇ ಪಿಂಚಣಿ ಯೋಜನೆ ಮರುಸ್ಥಾಪಿಸುವಂತೆ ಹಕ್ಕೊತ್ತಾಯ ಅಖಿಲ ಭಾರತ ವಿದ್ಯುತ್ ಇಂಜಿನಿಯರ್‌ಗಳ ಒಕ್ಕೂಟ ಆಗ್ರಹ

**ಬೆಂಗಳೂರು, ಜೂ.12:** ವಿದ್ಯುತ್ (ತಿದ್ದುಪಡಿ) ಮಸೂದೆ ಮೂಲಕ ವಿದ್ಯುತ್ ವಲಯವನ್ನು ಖಾಸಗೀಕರಣ ಮಾಡುತ್ತಿರುವುದನ್ನು ಅಖಿಲ ಭಾರತ ವಿದ್ಯುತ್ ಇಂಜಿನಿಯರ್‌ಗಳ ಒಕ್ಕೂಟ ವಿರೋಧ ವ್ಯಕ್ತಪಡಿಸಿದ್ದು, ಕರ್ನಾಟಕದಲ್ಲಿ ಸಮಾನಾಂತರ ವಿತರಣಾ ಪರವಾನಗಿ ನೀಡುವ ಮತ್ತು ಎಐ ದತ್ತಾಂಶ ಮತ್ತು ಕೃಷಿ ಡಿಸ್ಕಾಂಗಳ ವಿರುದ್ಧ ನಿರ್ಣಯ ಕೈಗೊಂಡಿದೆ. ಹಳೆ ಪಿಂಚಣಿ ಯೋಜನೆಯನ್ನು ಮರುಸ್ಥಾಪಿಸಬೇಕೆಂದು ಆಗ್ರಹಿಸಿದೆ.

ನಗರದಲ್ಲಿಂದು 21 ರಾಜ್ಯಗಳು ಭಾಗವಹಿಸಿದ್ದ ಅಖಿಲ ಭಾರತ ವಿದ್ಯುತ್ ಇಂಜಿನಿಯರ್‌ಗಳ ಒಕ್ಕೂಟ – ಎಐಪಿಇಎಫ್ ಕಾರ್ಯಕಾರಿ ಸಮಿತಿ ಸಭೆಯಲ್ಲಿ ತಿದ್ದುಪಡಿ ಮಸೂದೆ ಮೂಲಕ ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸಲು ಮುಂದಾಗಿರುವ ಕ್ರಮಕ್ಕೆ ವಿರೋಧ ವ್ಯಕ್ತಪಡಿಸಿ ನಿರ್ಣಯ ಅಂಗೀಕರಿಸಿದೆ.

ಸಭೆಯಲ್ಲಿ ಮಾತನಾಡಿದ ಎಐಪಿಇಎಫ್ ಅಧ್ಯಕ್ಷ ಶೈಲೇಂದ್ರ ದುಬೆ, ವಿದ್ಯುತ್ ಕ್ಷೇತ್ರದ ಖಾಸಗೀಕರಣ ವಿದ್ಯುತ್ ಕ್ಷೇತ್ರದ ವಿಭಜನೆಗೆ ದಾರಿ ಮಾಡಿಕೊಡುತ್ತದೆ. ಇಂತಹ ನೀತಿಗಳು ಆತಂಕಕಾರಿಯಾಗಿದ್ದು, ಸಾರ್ವಜನಿಕರು, ಗ್ರಾಹಕರ ಹಿತಾಸಕ್ತಿ ಹಾಗೂ ವಿದ್ಯುತ್ ಕ್ಷೇತ್ರದ ನೌಕರರು, ಇಂಜಿನಿಯರ್‌ಗಳ ಹಕ್ಕುಗಳ ರಕ್ಷಣೆಗಾಗಿ ತನ್ನ ಬದ್ಧತೆ ಹೊಂದಿದೆ. ವಿದ್ಯುತ್ ತಿದ್ದುಪಡಿ ಮಸೂದೆಯನ್ನು ತಕ್ಷಣವೇ ಹಿಂತೆಗೆದುಕೊಳ್ಳಬೇಕು. ಒಂದೇ ಪ್ರದೇಶದಲ್ಲಿ



ಬಹು ವಿತರಣಾ ಪರವಾನಗಿದಾರರಿಗೆ ಅವಕಾಶ ಕಲ್ಪಿಸುವ ಮೂಲಕ ವಿದ್ಯುತ್ ವಿತರಣೆಯ ಖಾಸಗೀಕರಣಕ್ಕೆ ಈ ಮಸೂದೆ ದಾರಿ ಮಾಡಿಕೊಡುತ್ತದೆ ಎಂದರು.

ಲಾಭದಾಯಕ ಗ್ರಾಹಕರನ್ನು ಮಾತ್ರ ಆಯ್ಕೆ ಮಾಡುವ ಪ್ರವೃತ್ತಿಗೆ ಈ ತಿದ್ದುಪಡಿ ಮಸೂದೆ ಉತ್ತೇಜನ ನೀಡಲಿದ್ದು, ಸಾರ್ವಜನಿಕ ಡಿಸ್ಕಾಂಗಳನ್ನು ದುರ್ಬಲಗೊಳಿಸುತ್ತದೆ. ಸಬ್ಸಿಡಿ ವ್ಯವಸ್ಥೆಯನ್ನು ಹಾಳುಮಾಡಿ, ಸಾಮಾನ್ಯ ಗ್ರಾಹಕರು ಹಾಗೂ ರೈತರ ಮೇಲಿನ ವಿದ್ಯುತ್ ದರದ ಹೊರೆ ಹೆಚ್ಚಿಸಲಿದೆ. ನೌಕರರ ಹಿತಾಸಕ್ತಿಗೆ ಧಕ್ಕೆಯುಂಟುಮಾಡಿ, ವಿದ್ಯುತ್ ಕ್ಷೇತ್ರವನ್ನು ದುರ್ಬಲಗೊಳಿಸಲಿದೆ. ಮುಂಬರುವ ಸಂಸತ್ತಿನ ಮಳೆಗಾಲದ ಅಧಿವೇಶನದಲ್ಲಿ ಮಸೂದೆಯನ್ನು ಮಂಡಿಸಿದರೆ ರಾಷ್ಟ್ರವ್ಯಾಪಿ ಹೋರಾಟ ನಡೆಸಲು ತೀರ್ಮಾನಿಸಲಾಯಿತು ಎಂದರು.

ರಾಜ್ಯದಲ್ಲಿ ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗದ ಮುಂದೆ ಟಾಟಾ ಪವರ್ ಸಲ್ಲಿಸಿರುವ ಸಮಾನಾಂತರ ವಿದ್ಯುತ್ ವಿತರಣಾ ಪರವಾನಗಿ ಅರ್ಜಿಗೆ ನಮ್ಮ ವಿರೋಧವಿದೆ. ರಾಜ್ಯದ ಐದು ಎಸ್ಕಾಂಗಳ ವ್ಯಾಪ್ತಿಯಲ್ಲಿರುವ 19 ಜಿಲ್ಲೆಗಳಲ್ಲಿ ಈ ಪರವಾನಗಿ ಪಡೆಯಲು ಟಾಟಾ ಪವರ್ ಮುಂದಾಗಿದೆ. ಅದೇ ರೀತಿ ಹರಿಯಾಣದ ಗುರುಗ್ರಾಮ ಮತ್ತು ನೂಹ್ ಜಿಲ್ಲೆಗಳಿಗೆ ಎಲೆವನ್ ಪವರ್ ಲಿಮಿಟೆಡ್ ಸೇರಿದಂತೆ ಖಾಸಗಿ ಕಂಪನಿಗಳಿಗೆ ವಿತರಣಾ ಪರವಾನಗಿ ನೀಡುವ ಪ್ರಸ್ತಾವ ಖಂಡನೀಯ. ಖಾಸಗಿ ಕಂಪನಿಗಳು ಹೆಚ್ಚಿನ ಆದಾಯದ ಗ್ರಾಹಕರನ್ನು ಸೆಳೆಯುವ ಮೂಲಕ ಸರ್ಕಾರಿ ವಿತರಣಾ ಸಂಸ್ಥೆಗಳನ್ನು ದುರ್ಬಲಗೊಳಿಸಲಿವೆ. ಗೃಹ ಬಳಕೆದಾರರು, ರೈತರು ಹಾಗೂ ದುರ್ಬಲ ವರ್ಗಗಳಿಗೆ ಕೈಗೆಟುಕುವ ದರದಲ್ಲಿ ವಿದ್ಯುತ್ ಪೂರೈಕೆಗೆ ಇದರಿಂದ ಧಕ್ಕೆಯಾಗಲಿದೆ. ಹೀಗಾಗಿ ಈ ಅರ್ಜಿಗಳನ್ನು ತಕ್ಷಣವೇ ತಿರಸ್ಕರಿಸಬೇಕು ಎಂದು ಆಗ್ರಹಿಸಿದರು.

ಆಂಧ್ರಪ್ರದೇಶ, ತೆಲಂಗಾಣ, ಮಹಾರಾಷ್ಟ್ರ, ಹರಿಯಾಣ ಸೇರಿದಂತೆ ಕೆಲವು ರಾಜ್ಯಗಳಲ್ಲಿ ಪ್ರತ್ಯೇಕ ಕೃಷಿ ಡಿಸ್ಕಾಂಗಳನ್ನು ರಚಿಸುವ ಪ್ರಸ್ತಾವಕ್ಕೆ ವಿರೋಧವಿದೆ. ಇಂತಹ ಪುನರ್‌ರಚನೆಯು ತಾಂತ್ರಿಕವಾಗಿ ಸಮರ್ಥನೀಯ ವಲ್ಲ, ಆರ್ಥಿಕವಾಗಿ ದೀರ್ಘಕಾಲಿಕವಾಗಿಲ್ಲ ಮತ್ತು ಏಕೀಕೃತ ಸಾರ್ವಜನಿಕ ವಿದ್ಯುತ್ ಸಂಸ್ಥೆಗಳ ಮಾದರಿಗೆ ಹಾನಿಕಾರಕವಾಗಿದೆ. ಕೃಷಿ ಗ್ರಾಹಕರನ್ನು ಪ್ರತ್ಯೇಕಿಸುವುದರಿಂದ ಸಬ್ಸಿಡಿ ವ್ಯವಸ್ಥೆ ದುರ್ಬಲಗೊಳ್ಳುತ್ತದೆ. ಸರ್ಕಾರದ ಸಹಾಯಧನದ ಮೇಲಿನ ಅವಲಂಬನೆ ಹೆಚ್ಚುತ್ತದೆ. ಕೈಗಾರಿಕಾ ಮತ್ತು ವಾಣಿಜ್ಯ ಗ್ರಾಹಕರಿಗೆ ಪ್ರತ್ಯೇಕ ಡಿಸ್ಕಾಂ ಪರವಾನಗಿಗಳಿಗೆ ಹಾದಿಮಾಡಿಕೊಡುತ್ತದೆ ಎಂದು ದುಬೆ ಹೇಳಿದರು.

ಆಂಧ್ರಪ್ರದೇಶದಲ್ಲಿ ಗೂಗಲ್ ಎಐ ದತ್ತಾಂಶ ಕೇಂದ್ರಕ್ಕೆ 'ಡೀಮ್ಡ್ ಡಿಸ್ಟ್ರಿಬ್ಯೂಷನ್ ಲೈಸೆನ್ಸ್' ನೀಡಲು ಮುಂದಾಗಿರುವುದು ಸರಿಯಲ್ಲ. ಇದು ತಾರತಮ್ಯದಿಂದ ಕೂಡಿದ್ದು, ಡಿಸ್ಕಾಂಗಳ ಆರ್ಥಿಕ ಸ್ಥಿರತೆಗೆ ಧಕ್ಕೆ ತರುತ್ತದೆ. ಲಡಾಖ್ ವಿದ್ಯುತ್ ಅಭಿವೃದ್ಧಿ ಇಲಾಖೆಯನ್ನು ಕಾರ್ಪೊರೇಟ್ ವಲಯಕ್ಕೆ ಒಳಪಡಿಸುವುದು ಆತಂಕಕಾರಿಯಾಗಿದೆ. ಪೂರ್ವಾಂಚಲ್ ವಿದ್ಯುತ್ ವಿತರಣಾ ನಿಗಮ ಲಿಮಿಟೆಡ್ ಮತ್ತು ದಕ್ಷಿಣಾಂಚಲ ವಿದ್ಯುತ್ ವಿತರಣಾ ನಿಗಮ ಖಾಸಗೀಕರಣದ ವಿರುದ್ಧ ನಡೆಯುತ್ತಿರುವ ವಿದ್ಯುತ್ ಹೋರಾಟಕ್ಕೆ ಎಐಪಿಇಎಫ್ ಸಂಪೂರ್ಣ ಬೆಂಬಲ ವ್ಯಕ್ತಪಡಿಸಿದೆ ಎಂದರು.

ಎಐಪಿಇಎಫ್ ಪ್ರಧಾನ ಕಾರ್ಯದರ್ಶಿ ಪಿ. ರತ್ನಾಕರ ರಾವ್, ಕೆಇಬಿ ಇಂಜಿನಿಯರ್‌ಗಳ ಸಂಘದ ಅಧ್ಯಕ್ಷ ಬಸವಣ್ಣ, ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ ದೇಸಾಯಿ ಅವರು ಮಾತನಾಡಿ, ದೇಶದಾದ್ಯಂತ ವಿದ್ಯುತ್ ಕ್ಷೇತ್ರದ ನೌಕರರು ಮತ್ತು ಇಂಜಿನಿಯರ್‌ಗಳಿಗೆ ಹಳೆಯ ಪಿಂಚಣಿ ಯೋಜನೆಯನ್ನು ಮರುಸ್ಥಾಪಿಸಬೇಕು. ಪಿಂಚಣಿ ಎಂಬುದು ಸಾಮಾಜಿಕ ಭದ್ರತೆಯ ಹಕ್ಕು ಹಾಗೂ ಅಪಾಯಭರಿತ ಪರಿಸ್ಥಿತಿಗಳಲ್ಲಿ ಕೆಲಸ ಮಾಡುವ ನೌಕರರಿಗೆ ಅಗತ್ಯವಾದ ಭದ್ರತಾ ವ್ಯವಸ್ಥೆಯಾಗಿದೆ. ವಿದ್ಯುತ್ ಎನ್ನುವುದು ಕೇವಲ ವಾಣಿಜ್ಯ ಚಟುವಟಿಕೆಯಲ್ಲ, ಅದು ಅತ್ಯಗತ್ಯ ಸಾರ್ವಜನಿಕ ಸೇವೆಯಾಗಿದೆ ಎಂದರು.




ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ಶುಕ್ರವಾರ ಕಾರ್ಮಿಕ ಇಲಾಖೆ ಆಯೋಜಿಸಿದ್ದ ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನಾಚರಣೆಯ ಜಾಗೃತಿ ಜಾಥಾದಲ್ಲಿ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಜೂ.16: ರಾಜೀವ್‌ಗಾಂಧಿ ಆರೋಗ್ಯ ವಿವಿ 28ನೇ ಘಟಿಕೋತ್ಸವ

**ಬೆಂಗಳೂರು, ಜೂ.12**: ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ 28ನೇ ಘಟಿಕೋತ್ಸವ ಜೂ.16ರಂದು ಬೆಳಗ್ಗೆ 10 ಗಂಟೆಗೆ ಗಾಂಧಿ ಕೃಷಿ ವಿಜ್ಞಾನ ಕೇಂದ್ರದ ಡಾ. ಬಾಬು ರಾಜೇಂದ್ರ ಪ್ರಸಾದ್ ಅಂತರರಾಷ್ಟ್ರೀಯ ಸಮಾವೇಶ ಭವನದಲ್ಲಿ ನಡೆಯಲಿದೆ. ಘಟಿಕೋತ್ಸವದಲ್ಲಿ ಒಟ್ಟು 72,741 ಅಭ್ಯರ್ಥಿಗಳಿಗೆ ವಿವಿಧ ಪದವಿ ಪ್ರದಾನ ಮಾಡಲಾಗುವುದು. ಒಟ್ಟು 103 ವಿದ್ಯಾರ್ಥಿಗಳು 115 ಚಿನ್ನದ ಪದಕಗಳಿಗೆ ಭಾಜನರಾಗಿದ್ದು ಪದ್ಮಶ್ರೀ ಇನ್‌ಸ್ಟಿಟ್ಯೂಟ್ ಆಫ್ ಫಿಸಿಯೋಥೆರಪಿ, ಬೆಂಗಳೂರಿನ ಸ್ಪಂಧನ ಐ ಅವರು 3 ಚಿನ್ನದ ಪದಕಗಳೊಂದಿಗೆ ಅತಿ ಹೆಚ್ಚು ಚಿನ್ನದ ಪದಕ ಪಡೆದ ವಿದ್ಯಾರ್ಥಿಯಾಗಿದ್ದಾರೆ. ವಿಶ್ವವಿದ್ಯಾಲಯದ ಒಟ್ಟಾರೆ ಫಲಿತಾಂಶ ಶೇಕಡಾ 89.22ರಷ್ಟಿದ್ದು, ಇದು ಆರೋಗ್ಯ ವಿಜ್ಞಾನ ಶಿಕ್ಷಣ ಕ್ಷೇತ್ರದಲ್ಲಿ ವಿಶ್ವವಿದ್ಯಾಲಯದ ಶೈಕ್ಷಣಿಕ ಸಾಧನೆಯನ್ನು ಪ್ರತಿಬಿಂಬಿಸುತ್ತದೆ. ಕರ್ನಾಟಕದ ರಾಜ್ಯಪಾಲರು ಹಾಗೂ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರು ಘಟಿಕೋತ್ಸವದ ಅಧ್ಯಕ್ಷತೆ ವಹಿಸಲಿದ್ದು, ಕರ್ನಾಟಕದ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಮುಖ್ಯ ಅತಿಥಿಗಳಾಗಿ ಘಟಿಕೋತ್ಸವ ಭಾಷಣ ಮಾಡಲಿದ್ದಾರೆ. ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಹಾಗೂ ವಿಶ್ವವಿದ್ಯಾಲಯದ ಸಮ ಕುಲಾಧಿಪತಿಗಳಾದ ಡಾ. ಶರಣಪ್ರಕಾಶ್ ಆರ್. ಪಾಟೀಲ್ ಹಾಗೂ ವಿಶ್ವವಿದ್ಯಾಲಯದ ಡಾ. ಭಗವಾನ್ ಬಿ.ಸಿ. ಉಪಸ್ಥಿತರಿರುವರು.ಪ್ರೊ. ನೈಲಾಡಿ ಶ್ರೀಧರ ಶೆಟ್ಟಿ, ಡಾ. ಹರ್ಷಿಣಿಗಿ ವೀರಭದ್ರಪ್ಪ ಹಾಗೂ ಡಾ. ಎ.ಸಿ. ಷಣ್ಮುಗಂ ಅವರಿಗೆ ಗೌರವ ಡಾಕ್ಟರೇಟ್ ಡಾಕ್ಟರ್ ಆಫ್ ಸೈನ್ಸ್ ಪದವಿ ಪ್ರದಾನ ಮಾಡಲಾಗುವುದು.

# 14 ಡ್ಯಾಂಗಳಲ್ಲಿ 207.57 ಟಿಎಂಸಿ ನೀರು ಲಭ್ಯ, ಮುಂಗಾರು ದುರ್ಬಲ: ಪ್ರಮುಖ ಜಲಾಶಯ ಒಳಹರಿವಿನಲ್ಲಿ ಇಳಿಕೆ, ರಾಜ್ಯದ ಜಲಾಶಯಗಳಲ್ಲಿ ಶೇ.23ರಷ್ಟು ನೀರಿನ ಸಂಗ್ರಹ

**ಬೆಂಗಳೂರು, ಜೂ.12:** ನೈಋತ್ಯ ಮುಂಗಾರು ಆರಂಭದಲ್ಲೇ ದುರ್ಬಲಗೊಂಡು ವಾಡಿಕೆಗಿಂತ ಕಡಿಮೆ ಮಳೆಯಾಗುತ್ತಿರುವ ಪರಿಣಾಮ ರಾಜ್ಯದ ಪ್ರಮುಖ ಜಲಾಶಯಗಳ ಒಳಹರಿವು ಸಾಕಷ್ಟು ಪ್ರಮಾಣದಲ್ಲಿ ಹೆಚ್ಚಾಗಿಲ್ಲ. ಆರಂಭದಲ್ಲೇ ಬರದ ಛಾಯೆ ಆವರಿಸುವ ಲಕ್ಷಣಗಳು ಗೋಚರಿಸತೊಡಗಿವೆ.

ಅವಧಿಗೂ ಮುನ್ನ ಮುಂಗಾರು ಆರಂಭವಾಗಲಿದೆ ಎಂಬ ಮುನ್ಸೂಚನೆ ಇದ್ದರೂ ಈ ಬಾರಿ ಒಂದು ವಾರ ತಡವಾಗಿ ಪ್ರಾರಂಭವಾಗಿದೆ. ಆದರೂ ವಾಡಿಕೆ ಪ್ರಮಾಣದಲ್ಲಿ ಮಳೆಯಾಗುತ್ತಿಲ್ಲ. ಇದರಿಂದ ರಾಜ್ಯದ ಪ್ರಮುಖ ಜಲಾಶಯ ಗಳಲ್ಲಿ ಕೇವಲ ಶೇ.23ರಷ್ಟು ಮಾತ್ರ ನೀರಿನ ಸಂಗ್ರಹವಿದೆ. ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮಾಹಿತಿ ಪ್ರಕಾರ, ರಾಜ್ಯದ 14 ಪ್ರಮುಖ ಜಲಾಶಯಗಳಲ್ಲಿ ಒಟ್ಟು 207.57



ಟಿಎಂಸಿ ಅಡಿ ಮಾತ್ರ ನೀರಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ 340.22 ಟಿಎಂಸಿ ಅಡಿಯಷ್ಟು ನೀರಿತ್ತು. ಅಂದರೆ 133 ಟಿಎಂಸಿ ಅಡಿಯಷ್ಟು ನೀರು ಕಡಿಮೆ ಇದೆ. ಇದಕ್ಕೆ ಪ್ರಮುಖ ಕಾರಣ ಮುಂಗಾರು ದುರ್ಬಲವಾಗಿರುವುದು. ಜೂ.1 ರಿಂದ ಗುರುವಾರದವರೆಗೆ ರಾಜ್ಯದಲ್ಲಿ 57 ಮಿ.ಮೀ.ನಷ್ಟು ಮಳೆಯಾಗಬೇಕಿತ್ತು. ಆದರೆ ಕೇವಲ 50 ಮಿ.ಮೀ.ನಷ್ಟು ಮಾತ್ರ ಮಳೆಯಾಗಿತ್ತು. ಶೇ.12 ರಷ್ಟು ಮಳೆ ಕೊರತೆ ಉಂಟಾಗಿದೆ.

ಉ.ಕರ್ನಾಟಕ ಹೊರತುಪಡಿಸಿ ಉಳಿದೆಲ್ಲಾ ಭಾಗಗಳಲ್ಲೂ ಮಳೆ ಕೊರತೆ ಕಂಡುಬಂದಿದೆ. ದಕ್ಷಿಣ ಒಳನಾಡಿನಲ್ಲಿ ಶೇ.19, ಮಲೆನಾಡು ಭಾಗದಲ್ಲಿ ಶೇ.15 ಹಾಗೂ ಕರಾವಳಿ ಭಾಗದಲ್ಲಿ ಶೇ.28 ರಷ್ಟು ವಾಡಿಕೆಗಿಂತ ಕಡಿಮೆ ಮಳೆಯಾಗಿದೆ. ಪೂರ್ವ ಮುಂಗಾರು ಮಳೆಯೂ ಕೂಡ ಮೇನಲ್ಲಿ ಸಾಕಷ್ಟು ಪ್ರಮಾಣದಲ್ಲಿ ಬೀಳಲಿಲ್ಲ. ಅಲ್ಲದೆ ಬಿರುಬೇಸಿಗೆಯಿಂದಾಗಿ ಜಲಾಶಯ ಗಳಲ್ಲಿ ಸಂಗ್ರಹವಿದ್ದ ನೀರು ಸಾಕಷ್ಟು ಖರ್ಚಾಗಿದೆ. ಇದರಿಂದ ಜಲಾಶಯಗಳ ನೀರಿನ ಸಂಗ್ರಹ ಗಣನೀಯವಾಗಿ ಇಳಿಕೆಯಾಗಿದೆ.

ನಾರಾಯಣಪುರ ಜಲಾಶಯ ಹೊರತುಪಡಿಸಿ ರಾಜ್ಯದ ಯಾವುದೇ ಜಲಾಶಯಕ್ಕೆ ಇನ್ನೂ 5 ಸಾವಿರ ಕ್ಯೂಸೆಕ್‌ನಷ್ಟು ಒಳಹರಿವಿಲ್ಲ. ರಾಜ್ಯದ ಜೀವನಾಡಿ ಕಾವೇರಿ ಜಲಾನಯನ ಭಾಗದಲ್ಲಿ ಕಬಿನಿ ಜಲಾಶಯಕ್ಕೆ ಮಾತ್ರ 2,446 ಕ್ಯೂಸೆಕ್ ಒಳಹರಿವಿದೆ.




ಹಾರಂಗಿಗೆ ಕೇವಲ 350, ಹೇಮಾವತಿಗೆ ಕೇವಲ 498 ಹಾಗೂ ಕೆಆರ್‌ಎಸ್‌ಗೆ ಕೇವಲ 581 ಕ್ಯೂಸೆಕ್ ಒಳಹರಿವಿದೆ. ಈ ನಾಲ್ಕೂ ಜಲಾಶಯಗಳಲ್ಲಿ ಕೇವಲ ಶೇ.29ರಷ್ಟು ಮಾತ್ರ ನೀರು ಸಂಗ್ರಹವಾಗಿದೆ. ಕಳೆದ ವರ್ಷಕ್ಕಿಂತ 43 ಟಿಎಂಸಿಯಷ್ಟು ನೀರು ಸಂಗ್ರಹ ಕಡಿಮೆ ಇದೆ. ಅಂದರೆ ಕಳೆದ ವರ್ಷ ಸಂಗ್ರಹವಾಗಿದ್ದ ನೀರಿನಲ್ಲಿ ಅರ್ಧಕ್ಕಿಂತಲೂ ಕಡಿಮೆ ಇದೆ. ಕಾವೇರಿ ಜಲಾನಯನ ಭಾಗದಲ್ಲಿ ಉತ್ತಮ ಮಳೆಯೂ ಆಗುತ್ತಿಲ್ಲ. ಹೀಗಾಗಿ ಆ ಭಾಗದ ರೈತರು ಹಾಗೂ ಜನರಿಗೆ ಆತಂಕ ಎದುರಾಗಿದೆ.

ಕೆಆರ್‌ಎಸ್ ಜಲಾಶಯದಲ್ಲಿ ಕಳೆದ ವರ್ಷ ಇದೇ ಅವಧಿಯಲ್ಲಿ 108.50 ಅಡಿಯಷ್ಟು ನೀರು ಸಂಗ್ರಹವಾಗಿತ್ತು. ಅಂದರೆ 30.24 ಟಿಎಂಸಿ ಅಡಿ ನೀರಿತ್ತು. ಈ ವರ್ಷ 81.36 ಅಡಿಯಷ್ಟು ನೀರಿದ್ದು, ಕೇವಲ 11.40 ಟಿಎಂಸಿ ನೀರು ಮಾತ್ರ ಇದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಕಬಿನಿ ಜಲಾಶಯದಲ್ಲಿ 11, ಕೆಆರ್‌ಎಸ್ ಜಲಾಶಯದಲ್ಲಿ 19, ಹೇಮಾವತಿ ಜಲಾಶಯದಲ್ಲಿ 10 ಹಾಗೂ ಹಾರಂಗಿ ಜಲಾಶಯದಲ್ಲಿ 3 ಟಿಎಂಸಿ ಅಡಿ ನೀರು ಕಡಿಮೆ ಇದೆ. ಇದೇ ಪರಿಸ್ಥಿತಿ ಕಾವೇರಿ ಜಲಾನಯನ ಭಾಗದಲ್ಲಿ ಮುಂದುವರಿದು ಉತ್ತಮ ಮಳೆಯಾಗದಿದ್ದರೆ ಕೃಷಿ ಹಾಗೂ ಕುಡಿಯುವ ನೀರಿಗೆ ತೊಂದರೆ ಎದುರಾಗಬಹುದು.

ಮುಂಗಾರು ಚೇತರಿಸಿಕೊಂಡು ಜಲಾನಯನ ಭಾಗದಲ್ಲಿ ಸಾಕಷ್ಟು ಮಳೆಯಾಗದಿದ್ದರೆ ಬೆಂಗಳೂರು ಸೇರಿದಂತೆ ಕಾವೇರಿ ನದಿಪಾತ್ರದ ನಗರ ಪಟ್ಟಣಗಳಿಗೆ ಕುಡಿಯುವ ನೀರಿಗೂ ಸಂಕಷ್ಟ ಉಂಟಾಗಬಹುದು. ಜಲ ವಿದ್ಯುತ್ ಉತ್ಪಾದಿಸುವ ಲಿಂಗನಮಕ್ಕಿ, ಸೂಪಾ, ವಾರಾಹಿ ಜಲಾಶಯಗಳಲ್ಲಿ ಕೇವಲ ಶೇ.17 ರಷ್ಟು ಮಾತ್ರ ನೀರು ಸಂಗ್ರಹವಾಗಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ 22 ಟಿಎಂಸಿ ಅಡಿಯಷ್ಟು ನೀರು ಕಡಿಮೆ ಇದೆ. ಈ ಬಾರಿ ಕೇವಲ 3,077 ಕ್ಯೂಸೆಕ್‌ನಷ್ಟು ನೀರು ಮಾತ್ರ ಜಲಾಶಯಕ್ಕೆ ಹರಿದುಬರುತ್ತಿದೆ.

ಕೃಷ್ಣಾ ಕೊಳ್ಳದ ಜಲಾಶಯಗಳಲ್ಲೂ ಒಳಹರಿವಿಲ್ಲ. ಭದ್ರಾ, ತುಂಗಭದ್ರಾ, ಘಟಪ್ರಭಾ, ಮಲಪ್ರಭಾ, ಆಲಮಟ್ಟಿ,



ನಾರಾಯಣಪುರ ಜಲಾಶಯಗಳಲ್ಲಿ ಕೇವಲ ಶೇ.23 ರಷ್ಟು ಮಾತ್ರ ನೀರು ಸಂಗ್ರಹವಾಗಿದೆ. ಕಳೆದ ವರ್ಷ 161 ಟಿಎಂಸಿಗೂ ಹೆಚ್ಚು ನೀರು ಈ ಜಲಾಶಯಗಳಲ್ಲಿ ಸಂಗ್ರಹವಾಗಿತ್ತು. ಈ ವರ್ಷ ಕೇವಲ 95 ಟಿಎಂಸಿಯಷ್ಟು ಮಾತ್ರ ನೀರು ಇದೆ. ಘಟಪ್ರಭಾ, ಮಲಪ್ರಭಾ, ಆಲಮಟ್ಟಿ ಜಲಾಶಯಗಳಿಗೆ ಇನ್ನೂ ಒಳಹರಿವೇ ಪ್ರಾರಂಭವಾಗಿಲ್ಲ. ಭದ್ರಾ ಜಲಾಶಯಕ್ಕೆ ಕೇವಲ 128 ಕ್ಯೂಸೆಕ್ಸ್, ತುಂಗಭದ್ರಾ ಜಲಾಶಯಕ್ಕೆ 367 ಕ್ಯೂಸೆಕ್ ಒಳಹರಿವಿದೆ. ತುಂಗಭದ್ರಾ ಜಲಾಶಯದಲ್ಲಿ ಕಳೆದ ವರ್ಷಕ್ಕಿಂತ 15 ಟಿಎಂಸಿಯಷ್ಟು ನೀರಿನ ಕಡಿಮೆ ಸಂಗ್ರಹವಿದೆ. ಮುಂಗಾರು ಆರಂಭಗೊಂಡು 2ನೇ ವಾರಕ್ಕೆ ಪದಾರ್ಪಣೆಮಾಗಿದ್ದರೂ ರಾಜ್ಯಾದ್ಯಂತ ವ್ಯಾಪಕ ಹಾಗೂ ಉತ್ತಮ ಮಳೆಯಾಗಿಲ್ಲ.

ಬಳ್ಳಾರಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಪ್ರಶಂಸೆ

# ತುರ್ತು ಪರಿಸ್ಥಿತಿಯಲ್ಲೂ ಜನಸೇವೆ: ರೆಡ್‌ಕ್ರಾಸ್ ಸೇವೆ ಶ್ಲಾಘನೀಯ



**ಬಳ್ಳಾರಿ,ಜೂ.12.**ತುರ್ತು ಪರಿಸ್ಥಿತಿಗಳಲ್ಲಿ ಸಾರ್ವಜನಿಕರ ಆಸ್ತಿ ಮತ್ತು ಪ್ರಾಣವನ್ನು ರಕ್ಷಿಸುವ ಮೂಲಕ ರೆಡ್‌ಕ್ರಾಸ್ ಸಂಸ್ಥೆಯ ಸಿಬ್ಬಂದಿ ಮಾಡುತ್ತಿರುವ ಮಾನವೀಯ ಸೇವೆ ಅತ್ಯಂತ ಸಂತೋಷ ತರುವಂತಹದ್ದಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್. ಎನ್ ಅವರು ಶ್ಲಾಘಿಸಿದರು.

ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯ ಬಳ್ಳಾರಿ ಶಾಖೆ ಹಾಗೂ ಜಿಲ್ಲಾಡಳಿತ ಸಂಯುಕ್ತಾಶ್ರಯದಲ್ಲಿ ಶುಕ್ರವಾರ ನಗರದ ಹಳೆಯ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ 'ವಿಶ್ವ ರೆಡ್‌ಕ್ರಾಸ್ ದಿನಾಚಾರಣೆ' ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಅವರು ಮಾತನಾಡಿದರು.

ರೆಡ್‌ಕ್ರಾಸ್ ಸಂಸ್ಥೆಯ ಉದಾತ್ತ ಧ್ಯೇಯೋದ್ದೇಶಗಳು ಮತ್ತು ಸಮಾಜಮುಖಿ ಕಾರ್ಯಗಳು ಅನನ್ಯವಾಗಿವೆ ಎಂದರು.

ರೆಡ್‌ಕ್ರಾಸ್ ಸಂಸ್ಥೆಯ ಈ.ಸಿ ಸದಸ್ಯ ಡಾ.ನಾಗರಾಜ್‌ರಾವ್ ಅವರು ಮಾತನಾಡಿ, ದಿನನಿತ್ಯದ ಸಾರ್ವಜನಿಕ ಕೆಲಸ ಕಾರ್ಯಗಳಲ್ಲಿ ಕಂದಾಯ ಇಲಾಖೆಯ ಸಿಬ್ಬಂದಿ ಎದುರಿಸುವ ಮಾನಸಿಕ ಒತ್ತಡವನ್ನು ನಿವಾರಿಸಲು ಯೋಗ, ಪ್ರಾಣಾಯಾಮ ಮತ್ತು ಉತ್ತಮ ಜೀವನಶೈಲಿಯ ಅಭ್ಯಾಸಗಳು ಅತ್ಯಂತ ಪರಿಣಾಮಕಾರಿ ಎಂದು ಅವರು ಸವಿಸ್ತಾರವಾಗಿ ವಿವರಿಸಿದರು.

ಇದೇ ಸಂದರ್ಭದಲ್ಲಿ ಸಮಾಜ ಸೇವೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ರೆಡ್‌ಕ್ರಾಸ್ ಸಂಸ್ಥೆಯ ಸ್ವಯಂ ಸೇವಕರಿಗೆ ಮುಖ್ಯ ಅತಿಥಿಗಳಿಂದ ಪ್ರಮಾಣ ಪತ್ರಗಳನ್ನು ವಿತರಿಸಿ ಗೌರವಿಸಲಾಯಿತು.

ರೆಡ್‌ಕ್ರಾಸ್ ಸಂಸ್ಥೆಯ ಕಾರ್ಯದರ್ಶಿ ಎಂ.ಎ.ಷಕೀಬ್ ಅವರು ನಿರೂಪಿಸಿದರು.

ಕಾರ್ಯಕ್ರಮದಲ್ಲಿ ರೆಡ್‌ಕ್ರಾಸ್ ಸಂಸ್ಥೆಯ ಖಜಾಂಚಿ ಪೋಲಾ ರಾಧಾಕೃಷ್ಣ, ಈ.ಸಿ. ಸದಸ್ಯ ಪ್ರೊ. ಕುಪ್ಪಗಲ್ಲು ವೀರೇಶ್ ಹಾಗೂ ಬಳ್ಳಾರಿ ರೆಡ್‌ಕ್ರಾಸ್ ಸಂಸ್ಥೆಯ ಅಜೀವ ಸದಸ್ಯರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅಕ್ರಮ ದಾಸ್ತಾನು: 1,539 ರಸಗೊಬ್ಬರ ಚೀಲ ವಶ



**ಬೀದರ, ಜೂ. 12:** ನಿಯಮ ಉಲ್ಲಂಘನೆ ಕಾರಣ ಬೀದರ್ ತಾಲ್ಲೂಕಿನ ಮನ್ನಳ್ಳಿ ಗ್ರಾಮದ ಮೇಸರ್ಸ್ ವೆಂಕಟೇಶ್ವರ ರಸಗೊಬ್ಬರ ಅಂಗಡಿಯಲ್ಲಿನ 1,539 ಚೀಲ ರಸಗೊಬ್ಬರವನ್ನು ಕೃಷಿ ಇಲಾಖೆ ಬುಧವಾರ ಜಪ್ತಿ ಮಾಡಿದೆ. 9.35 ಲಕ್ಷ ಮೌಲ್ಯದ ರಸಗೊಬ್ಬರ ವಶಪಡಿಸಿ ಕೊಳ್ಳಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕಿ ದೇವಿಕಾ ತಿಳಿಸಿದ್ದಾರೆ.


ಅಂಗಡಿಗೆ ಭೇಟಿನೀಡಿ ಪರಿಶೀಲಿಸಿದ ವೇಳೆ ರೈತರಿಗೆ ಅಧಿಕ ಬೆಲೆಗೆ ರಸಗೊಬ್ಬರ ಮಾರಾಟ ಮಾಡಿರುವುದು ಹಾಗೂ ಅನುಮತಿ ಇಲ್ಲದ ರಸಗೊಬ್ಬರ ಸಹ ಮಾರಾಟ ಮಾಡಿರುವುದು ಕಂಡು ಬಂದಿದೆ. ನಿಯಮ ಉಲ್ಲಂಘನೆ ಹಿನ್ನೆಲೆಯಲ್ಲಿ ರಸಗೊಬ್ಬರ ಜಪ್ತಿ ಮಾಡಲಾಗಿದೆ ಎಂದು ಹೇಳಿದ್ದಾರೆ.

ಸಹಾಯಕ ಕೃಷಿ ನಿರ್ದೇಶಕ (ಜಾರಿ ದಳ) ಮಚ್ಛೇಂದ್ರನಾಥ, ಸಹಾಯಕ ಕೃಷಿ ನಿರ್ದೇಶಕಿ ಆರತಿ ಪಾಟೀಲ, ಕೃಷಿ ಅಧಿಕಾರಿ ವಿಜಯ ಕುಮಾರ ಪರಿಶೀಲನಾ ತಂಡದಲ್ಲಿದ್ದರು.

**ಹುಮನಾಬಾದ್:** ಪಟ್ಟಣದ ವಿವಿಧ ರಸಗೊಬ್ಬರ ಮಾರಾಟ ಮಳಿಗೆಗೆ ಬೀದರ್ ಕೃಷಿ ನಿರ್ದೇಶಕಿ ದೇವಿಕಾ ಭೇಟಿ ನೀಡಿ ಪರಿಶೀಲನೆ ನಡೆಸಿದರು. ನಂತರ ಅವರು ಮಾತನಾಡಿ, ಮಳಿಗೆಗಳಲ್ಲಿ ಅನಾವಶ್ಯಕವಾಗಿ ರಸಗೊಬ್ಬರ ದಾಸ್ತಾನು ಮಾಡಬಾರದು ಮತ್ತು ಪ್ರತಿಯೊಂದಕ್ಕೂ ದರ ಪಟ್ಟಿ ಸಿದ್ಧಪಡಿಸಿ ಪ್ರದರ್ಶಿಸಬೇಕು ಇಲ್ಲದಿದ್ದರೆ ಕ್ರಮ ಕೈಗೊಳ್ಳಲಾಗುವುದು ಎಂದರು.

ಗೊಬ್ಬರ, ಕೀಟನಾಶಕ ಮತ್ತು ಬಿತ್ತನೆಬೀಜ ಖರೀದಿ ಮಾಡುವಾಗ ಅಧಿಕೃತ ಪರವಾನಿಗೆ ಹೊಂದಿದವರಿಂದ, ರಸೀದಿ, ಎಂಆರ್‌ಪಿ ದರ ಇದೆಯೋ ಇಲ್ಲವೋ ಎಂಬುದನ್ನು ಖಾತ್ರಿಪಡಿಸಿಕೊಂಡ ನಂತರವೇ ಕೃಷಿ ಪರಿಕರಗಳನ್ನು ಖರೀದಿಸಬೇಕು' ಎಂದು ರೈತರಿಗೆ ಸಲಹೆ ನೀಡಿದರು.

# ವಿಧಾನಸಭಾ ಚುನಾವಣೆಯಲ್ಲಿ ಕುಲದ್ರೋಹಿಗಳಿಗೆ ತಕ್ಕಪಾಠ: ಡಾ. ಪ್ರಣವಾನಂದ ಸ್ವಾಮೀಜಿ



**ಗೋಕರ್ಣ, ಜೂ.12:** : ರಾಷ್ಟ್ರೀಯ ಈಡಿಗ ಮಹಾಮಂಡಳಿಯ ರಾಜ್ಯಮಟ್ಟದ 5 ನೇ ವಾರ್ಷಿಕೋತ್ಸವ, ಚಿಂತನಾಶಿಬಿರ ಪುಣ್ಯಾಶ್ರಮದಲ್ಲಿ ಎರಡು ದಿನ ನಡೆಯಿತು. ಸಭೆಯಲ್ಲಿ ಮುಂಬರುವ ವಿಧಾನಸಭಾ ಚುನಾವಣೆಯನ್ನು ಗುರಿಯಾಗಿಸಿ ಸಮಾಜದ ಸಂಘನೆಗೆ ಒತ್ತು ನೀಡುವುದು, ಸಾಗರ ಶಾಸಕ ಬೇಳೂರು ಗೋಪಾಲಕೃಷ್ಣ ಅವರಿಗೆ ಸಚಿವಸ್ಥಾನ ನೀಡುವುದು ಹಾಗೂ ಸಂಘದ ನೂತನ ಪದಾಧಿಕಾರಿಗಳ ಆಯ್ಕೆಯ ಕುರಿತು ಸಭೆಯಲ್ಲಿ ಸಮಗ್ರ ಚರ್ಚೆ ನಡೆಯಿತು.

ರಾಜ್ಯದಲ್ಲಿ ಈಡಿಗ ಮಹಾಮಂಡಳಿಯನ್ನು ಬಲಪಡಿಸುವ ನಿಟ್ಟಿನಲ್ಲಿ ಸಂಘಟಕರು ಹೆಚ್ಚಿನ ಒತ್ತು ನೀಡಬೇಕು. ಸಮಾಜದ ಮತದಿಂದ ಆಯ್ಕೆಯಾದ ಜನಪ್ರತಿನಿಧಿಗಳು ನಂತರ ಸಮಾಜವನ್ನು ಮರೆಯುತ್ತಾರೆ. ಅಂತವರು ಕೂಡ ಚುನಾವಣೆಯಲ್ಲಿ ಪಾಠ ಕಲಿಸಬೇಕು. ಅಗತ್ಯಬಿದ್ದರೆ ಚುನಾವಣೆಗೂ ನಮ್ಮವರನ್ನು ನಿಲ್ಲಿಸಲಾಗುವುದು ಎಂದರು.

ಈಡಿಗರ ಸಮಗ್ರ ಈಡಿಗರ ಅಭಿವೃದ್ಧಿಗಾಗಿ ಮುಂದಿನ ದಿನದಲ್ಲಿ ಮಹತ್ವದ ಚಿಂತನೆಯನ್ನು ಮಾಡಬೇಕಿದೆ. ನೂತನ ಮುಖ್ಯಮಂತ್ರಿಗಳನ್ನು ಸಂಪರ್ಕಿಸಿ ನಾರಾಯಣಗುರು ನಿಗಮಕ್ಕೆ ಅನುದಾನ ಬಿಡುಗಡೆಗೆ ಪ್ರಯತ್ನಿಸಲಾಗುವುದು. ಸಮಾಜದ ಗೆದ್ದ ಜನಪ್ರತಿನಿಧಿಗಳು ನಮ್ಮವರನ್ನು ಕಡೆಗಣಿಸಿದರೆ ಅಂತಹವರನ್ನು ಕಿತ್ತೊಗೆಯಲು ಪ್ರತಿಯೊಬ್ಬರು ಶಪಥ ಮಾಡಬೇಕು ಎಂದರು.

ಸಾಮಾನ್ಯ ಕಾರ್ಯಕರ್ತನೊಬ್ಬ ಪ್ರಧಾನಿ ಹುದ್ದೆ ಅಲಂಕರಿಸುವುದು

# ಬಿಜೆಪಿಯಲ್ಲಿ ಮಾತ್ರ ಸಾಧ್ಯ: ಸಂತೋಷ್ ರೆಡ್ಡಿ ಅನದೂರ



**ಬೀದರ್, ಜೂ. 12:** ಸಾಮಾನ್ಯ ಕಾರ್ಯಕರ್ತನೊಬ್ಬ ಅತ್ಯನ್ನತ ಪ್ರಧಾನಿ ಹುದ್ದೆಯನ್ನು ಅಲಂಕರಿಸುವುದು ಬಿಜೆಪಿಯಲ್ಲಿ ಮಾತ್ರ ಸಾಧ್ಯವಿದೆ. ಪ್ರಧಾನಿ ನರೇಮದ್ರ ಮೋದಿ ಅವರು ನಮ್ಮ ನಿಮ್ಮಂತೆ ಸಾಮಾನ್ಯ ಕಾರ್ಯಕರ್ತರು. ಸಂಘದ ಕಚೇರಿಯಲ್ಲಿ ದುಡಿದು, ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಯಾಗಿ ಪಕ್ಷ ಸಂಘಟಿಸಿದವರು ಎಂದು ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ್ ರೆಡ್ಡಿ ಅನದೂರ ಹೇಳಿದರು.

ಯುವ ಮೋರ್ಚಾ ಜಿಲ್ಲಾ ಪದಾಧಿಕರಿಗಳ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ನರೇಂದ್ರ ಮೋದಿ ಅವರ ಸಂಘಟನಾ ಚಾತುರ್ಯವನ್ನು ಗಮನಿಸಿದ ಅಂದಿನ ಪ್ರಧಾನಿ ಅಟಲ್ ಬಿಹರಿ ವಾಜಪೇಯಿ ಅವರು, ಗುಜರಾತ್ ಭೂಕಂಪ ಸಂದರ್ಭದಲ್ಲಿ ಅತ್ಯುತ್ತಮ ಕಾರ್ಯ ನಿರ್ವಹಣೆಯ ಸವಾಲಿನೊಂದಿಗೆ ಮೋದಿ ಅವರನ್ನು ಗುಜರಾತ್ ಮುಖ್ಯಮಂತ್ರಿ ಎಂದು ನಿಯೋಜಿಸಿ ಕಳಿಸಿದರು. ಅತ್ಯಂತ ದಕ್ಷತೆಯಿಂದ ಕಾರ್ಯ ನಿರ್ವಹಿಸುವ ಮೂಲಕ ಇಡೀ ದೇಶದಲ್ಲಿ ಗುಜರಾತ್ ಮಾದರಿ ಅಭಿವೃದ್ಧಿ ಎಂದು ಹೆಸರಾಗುವಂತೆ ಮಾಡಿದರು.

ಮುಂದೆ 2014ರ ಲೋಕಸಭಾ ಚುನಾವಣೆಯಲ್ಲಿ ಮೋದಿ ಅವರನ್ನೇ ನಿಯೋಜಿತ ಪ್ರಧಾನಿ ಎಂದು ಘೋಷಿಸಲಾಯಿತು. ಅಪಾರ ಜನಮನ್ನಣೆಯೊಂದಿಗೆ ಆಯ್ಕೆಯಾಗುವ ಮೂಲಕ ಈಗ ಪ್ರಧಾನಿ ಹುದ್ದೆಯಲ್ಲಿ ಮೂರನೇ ಅವಧಿಗೆ ಆಯ್ಕೆಯಾದ ಮೋದಿ ಅವರು, ಹಿಂದಿನ ಎಲ್ಲ ಪ್ರಧಾನಿಗಳ ದಾಖಲೆಗಳನ್ನು ಮುರಿದು ಬೆಳೆದಿರುವುದು ನಮ್ಮ ಮುಂದಿದೆ. ಅಂದರೆ ಒಬ್ಬ ಸಾಮಾನ್ಯ ವ್ಯಕ್ತಿ ವಿಶ್ವದ ಗಮನ ಸೆಳೆಯುವಂತೆ ಅಡಳಿತ ನಡೆಸಿದ ಕೀರ್ತಿ ಅವರಿಗಿದೆ. ಇದು ಭಾರತೀಯ ಜನತಾ ಪಕ್ಷದಲ್ಲಿ ಮಾತ್ರ ಸಾಧ್ಯ. ಅವರೇನೂ ನೆಹರೂ ಕುಟುಂಬದಂತೆ ಕುಟುಮಬ ರಾಜಕರಣದ ಹೆಸರಿನಲ್ಲಿ ಬಂದವರಲ್ಲ. ಅವರ ನಿಷ್ಠೆ, ಪ್ರಾಮಾಣಿಕತೆ ಮತ್ತು ಅದಮ್ಯ ದೇಶಭಕ್ತಿ ಅವರನ್ನು ಈ ಮಟ್ಟದಲ್ಲಿ ಬೆಳೆಸಿದೆ ಎಂದರು.

ಆದ್ದರಿಂದ ಭಾರತೀಯ ಜನತಾ ಪಕ್ಷದಲ್ಲಿ ನಾಯಕರರಿಗಿಂತ ಕಾರ್ಯಕರ್ತರಿಗೆ ಮಹತ್ವವಿದ್ದು, ಪಕ್ಷ ಸಂಘಟನೆ ಮಾಡುವ ಕಲೆಯನ್ನು ಕಾರ್ಯಕರ್ತರಿದ್ದಾಗಲೇ ಕರಗತ ಮಾಡಿಕೊಳ್ಳಬೇಕು. ಪಕ್ಷದ ಯಾವುದೇ ಹುದ್ದೆಗಿಂತಲೂ ಕಾರ್ಯಕರ್ತರಿಗೆ ಭಾರತೀಯ ಜನತಾ ಪಕ್ಷದಲ್ಲಿ ಅತ್ಯಂತ ಮಹತ್ವದ ಸ್ಥಾನವಿದೆ. ಈಗಲೂ ಕೂಡ ಅನೇಕ ರಾಜ್ಯಸಬಾ ಸ್ತಾನಗಳಿಗೆ ಮತ್ತು ವಿಧಾನ ಪರಿಷತ್ ಚುನಾವನೆಗಳಿಗೆ ಪಕ್ಷದ ನಿಷ್ಠಾವಂತ ಕಾರ್ಯಕರ್ತರನ್ನು ಗುರುತಿಸಿ ಟಿಕೆಟ್ ನೀಡಿರುವದನ್ನು ಗಮನಿಸಬಹುದು. ನಿಸ್ವಾರ್ಥತೆಯಿಮದ ಸೇವೆ ಮಾಡಿದವರಿಗೆ ಖಂಡಿತವಾಗಿಯೂ ಪಕ್ಷ ಗುರುತಿಸುತ್ತದೆ ಎಂದರು.

ಪಕ್ಷವನ್ನು ತಳಮಟ್ಟದಿಂದ ಕಟ್ಟಿ, ಸಂಘಟಿಸುವ ಅಗತ್ಯತೆ ಇದೆ. ಇದಕ್ಕಾಗಿ ಪಕ್ಷದ ಯುವ ಮೋರ್ಚಾ ಕಾರ್ಯಕರ್ತರು ಹಗಲೂ ರಾತ್ರಿ ಶ್ರಮಿಸಬೇಕು. ಸಂಘಟನೆಯ ಬಲವರ್ಧನೆ, ಸದಸ್ಯತ್ವ ಅಭಿಯಾನ, ಮುಂಬರುವ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಹೇಳಿದರು.

ಹೆಚ್ಚುವರಿ ಆಯುಕ್ತೆ ಕಲ್ಪಲತಾ ರಾಜನ್ ಹೇಳಿಕೆ

# ಹೊಸ ಆದಾಯ ತೆರಿಗೆ ಹೆಚ್ಚು ಸರಳ, ಪಾರದರ್ಶಕ




**ಮೈಸೂರು, ಜೂ.12:** ಹೊಸ ಆದಾಯ ತೆರಿಗೆ ಕಾಯ್ದೆ ಹೆಚ್ಚು ಸರಳ, ಪಾರದರ್ಶಕ ಹಾಗೂ ತೆರಿಗೆದಾರ ಸ್ನೇಹಿಯಾಗಿರಲಿದೆ ಎಂದು ವಲಯ ಒಂದರ ಆದಾಯ ತೆರಿಗೆ ಹೆಚ್ಚುವರಿ ಆಯುಕ್ತೆ ಕಲ್ಪಲತಾ ರಾಜನ್ ಹೇಳಿದರು.

ಕ್ರೆಡಾಯ್ ಮೈಸೂರು ಮತ್ತು ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ (ಬಿಎಐ)ದಿಂದ ವಿಶ್ವೇಶ್ವರ ನಗರದ ಎಂಬಿಸಿಟಿ ಸಭಾಂಗಣದಲ್ಲಿ ಆಯೋಜಿಸಿದ್ದ 'ಹೊಸ ಆದಾಯ ತೆರಿಗೆ ಕಾಯ್ದೆ ಅಡಿಯಲ್ಲಿ ರಿಯಲ್ ಎಸ್ಟೇಟ್ ವಲಯದ ಆದಾಯ ತೆರಿಗೆ ಮತ್ತು ನಿಯಮ ಪಾಲನೆ' ಕುರಿತ ಸಂವಾದ ಉದ್ಘಾಟಿಸಿ ಅವರು ಮಾತನಾಡಿದರು.

1961ರ ಕಾಯ್ದೆಯಲ್ಲಿ ಕಾಲಕಾಲಕ್ಕೆ ಮಾಡಿದ ನೂರಾರು ತಿದ್ದುಪಡಿಗಳು ತೆರಿಗೆದಾರರಲ್ಲಿ ಗೊಂದಲ ಮತ್ತು ಅನಗತ್ಯ ವ್ಯಾಜ್ಯಗಳಿಗೆ ಕಾರಣವಾಗಿದ್ದವು. ಆದರೆ, 2025ರ ಹೊಸ ಆದಾಯ ತೆರಿಗೆ ಕಾಯ್ದೆ ಹೆಚ್ಚು ಸರಳ, ಪಾರದರ್ಶಕ ಹಾಗೂ ತೆರಿಗೆದಾರ ಸ್ನೇಹಿಯಾಗಿರಲಿದೆ. ಇದರಿಂದ ತೆರಿಗೆದಾರರಿಗೆ ಅನುಕೂಲವಾಗಲಿದೆ ಎಂದು ಹೇಳಿದರು.

ಹೊಸ ಕಾಯ್ದೆ ಸಮಸ್ಯೆಗಳಿಗೆ ಪರಿಹಾರ ನೀಡಿ, ತೆರಿಗೆ ನಿಶ್ಚಿತತೆ ಮತ್ತು ಡಿಜಿಟಲ್ ಸುಗಮಕ್ಕೆ ಹೆಚ್ಚಿನ ಆದ್ಯತೆ ನೀಡುತ್ತದೆ ಎಂದು ವಿವರಿಸಿದರು. ರಿಯಲ್ ಎಸ್ಟೇಟ್ ಮತ್ತು ನಿರ್ಮಾಣ ಕ್ಷೇತ್ರವು ದೇಶದ ಮೂಲಸೌಕರ್ಯ ಅಭಿವೃದ್ಧಿಯ ಬೆನ್ನೆಲುಬಾಗಿದೆ. ಆದರೆ, ಈ ಕ್ಷೇತ್ರದಲ್ಲಿ ದೀರ್ಘಾವಧಿ ಹೂಡಿಕೆ, 5–7 ವರ್ಷಗಳ ಸಂಕೀರ್ಣ ಯೋಜನಾ ಅವಧಿ ಮತ್ತು ಆದಾಯ ಗುರುತಿಸುವಿಕೆಯಲ್ಲಿ ವಿಶೇಷ ಸವಾಲುಗಳಿವೆ ಎಂದರು.ಹೊಸ ಕಾಯ್ದೆ ಜಾರಿಗೆ ಮುನ್ನ ತೆರಿಗೆದಾರರಲ್ಲಿ ಜಾಗೃತಿ ಮೂಡಿಸಲು ಆದಾಯ ತೆರಿಗೆ ಇಲಾಖೆ 'ಪ್ರಾರಂಭ–2026' ಎಂಬ ವಿಶೇಷ ಅಭಿಯಾನ ಆರಂಭಿಸಿದೆ. ಇದರ ಭಾಗವಾಗಿ ಇಲಾಖೆಯ ಅಧಿಕಾರಿಗಳು, ಉತ್ಪಾದನೆ, ಸೇವೆ, ರಿಯಲ್ ಎಸ್ಟೇಟ್ ಸೇರಿದಂತೆ ವಿವಿಧ ವಲಯಗಳೊಂದಿಗೆ ನೇರ ಸಂವಾದ ನಡೆಸುತ್ತಿದ್ದಾರೆ ಎಂದರು.

ತೆರಿಗೆದಾರರ ಅನುಕೂಲಕ್ಕಾಗಿ 'ಕರಸೇತು' ಸಮಗ್ರ ಮಾಹಿತಿ ಮಾರ್ಗದರ್ಶಿ ಮತ್ತು 'ಕರಸಾಥಿ' ಎಂಬ 24X7 ಎಐ ಆಧಾರಿತ ಚಾಟ್‌ಬಾಟ್ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ. ಇದು ತೆರಿಗೆ ಕಾಯ್ದೆ, ನಿಯಮಗಳು, ಸುತ್ತೋಲೆಗಳ ಸಮಗ್ರ ಮಾಹಿತಿ ನೀಡುವ ಆನ್‌ಲೈನ್ ಮಾರ್ಗದರ್ಶಿಯಾಗಿ ಕಾರ್ಯ ನಿರ್ವಹಿಸಲಿದೆ ಎಂದರು.

ಈ ಜಾಗೃತಿ ಕಾರ್ಯಕ್ರಮಗಳು ಏಕಮುಖ ಉಪನ್ಯಾಸಗಳಲ್ಲ. ಇಲಾಖೆಯು ತನ್ನ ನೀತಿ ಮತ್ತು ನಿರೀಕ್ಷೆಗಳನ್ನು ಹಂಚಿಕೊಳ್ಳುವುದರ ಜತೆಗೆ, ಕ್ಷೇತ್ರದಲ್ಲಿರುವ ಪ್ರಾಯೋಗಿಕ ಸಮಸ್ಯೆಗಳು ಮತ್ತು ಸಲಹೆಗಳನ್ನು ಆಲಿಸಲು ಬಂದಿದೆ ಎಂದು ಹೇಳಿದರು.

ಎಲ್ಲರೂ ಮುಕ್ತವಾಗಿ ಚರ್ಚಿಸಿ ಇರುವ ಗೊಂದಲಗಳಿಗೆ ಪರಿಹಾರ ಕಂಡುಕೊಳ್ಳುವ ಜತೆಗೆ ಇಲಾಖೆಯಲ್ಲಿ ಆಗಬೇಕಿರುವ ಬದಲಾವಣೆಗಳ ಬಗ್ಗೆ ಸಲಹೆ ನೀಡಬಹುದು ಎಂದು ಕೋರಿದರು.

ವೃತ್ತ ಒಂದರ ಆದಾಯ ತೆರಿಗೆ ಸಹಾಯಕ ಆಯುಕ್ತ ಎಸ್. ವೆಂಕಟೇಶನ್ ಅವರು ಪ್ರಾತ್ಯಕ್ಷಿಕೆ ಮೂಲಕ ಕರಸೇತು ಮತ್ತು ಕರಸಾತಿ ಎಂಬ ಆನ್‌ಲೈನ್ ವ್ಯವಸ್ಥೆಯ ಬಗ್ಗೆ ರಿಯಲ್ ಎಸ್ಟೇಟ್ ವಲಯದವರಿಗೆ ಮಾಹಿತಿ ನೀಡಿದರು. ಕ್ರೆಡಾಯ್ ಅಧ್ಯಕ್ಷ ಹರೀಶ್ ಶೆಣೈ, ಕಾರ್ಯದರ್ಶಿ ನಾಗರಾಜ್ ವಿ. ಬೈರಿ, ಬಿಎಐ ಅಧ್ಯಕ್ಷ ಪ್ರಭಾಕರ್‌ರಾವ್, ಕಾರ್ಯದರ್ಶಿ ಪ್ರವೀಣ್ ಪಾಲ್, ಡಿಸಿಐಟಿಸಿ–1 ಆರ್.ರಂಗನಾಥನ್ ಇತರರು ಇದ್ದರು.

# ಶಿಶು, ತಾಯಂದಿರ ಮರಣ ಪ್ರಮಾಣ ತಗ್ಗಿಸಲು ಕ್ರಮಕೈಗೊಳ್ಳಿ



**ರಾಯಚೂರು, ಜೂ. 12:** ಮಹಿಳಾ ಮತ್ತು ಮಕ್ಕಳ ಅಪೌಷ್ಟಿಕತೆ ಹಾಗೂ ಬಾಣಂತಿಯರ ಮರಣ ಪ್ರಮಾಣ ಕಡಿಮೆ ಮಾಡಲು ಆರೋಗ್ಯ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಹಾಗೂ ಸ್ಥಳೀಯ ಸಂಸ್ಥೆಗಳ ಸಾಹಕಾರದಿಂದ ಅಭಿವೃದ್ಧಿ ಸಾಧಿಸಿ, ಮಾನವ ಅಭಿವೃದ್ಧಿಯಲ್ಲಿ ಸುಧಾರಣೆಗೆ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲೆ ಉಸ್ತುವಾರಿ ಕಾರ್ಯದರ್ಶಿ ಉಜ್ವಲ್ ಕುಮಾರ ಘೋಷ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಅಂಗನವಾಡಿ ಕೇಂದ್ರ–6ಕ್ಕೆ ಭೇಟಿ ನೀಡಿ, ಗರ್ಭಿಣಿ ಮತ್ತು ಬಾಣಂತಿಯರೊಂದಿಗೆ ಸಂವಾದ ನಡೆಸಿ, ಸೌಲಭ್ಯ ದೊರೆಯುವಿಕೆ ಬಗ್ಗೆ ಮಾಹಿತಿ ಪಡೆದರು. ನಂತರ ಮಸರಕಲ್ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪ್ರಾಥಮಿಕ ಆರೋಗ್ಯ ಕೇಂದ್ರ, ಗ್ರಾಮ ಪಂಚಾಯಿತಿ ಕಚೇರಿ, ಕೆಎಚ್‌ಪಿಟಿ ಶಕ್ತಿ ಸಮೃದ್ಧಿ ಮಹಿಳಾ ಘಟಕದ 'ಶಕ್ತಿ ವಿಟ್ಟ' ಕೇಂದ್ರಕ್ಕೆ ಭೇಟಿ ನೀಡಿ, ಆಹಾರ ತಯಾರಿಕ ಘಟಕದ ವೀಕ್ಷಣೆ ಮಾಡಿದರು. ಬಳಿಕ ಮಹಿಳಾ ಸಂಘದ ಸದಸ್ಯರೊಡನೆ ಚರ್ಚೆ ನಡೆಸಿದರು.

ರಾಯಧನ ಪಾವತಿಸದ ಗಣಿ ಗುತ್ತಿಗೆ ರದ್ದುಪಡಿಸಿ ಆದೇಶ

# ವೆಂಕಟೇಶ್ವರ ಕಲ್ಲುಗಣಿಯಿಂದ 10 ಕೋಟಿ ರೂ.ಗಳಿಗೂ ಹೆಚ್ಚು ಬಾಕಿ

**ತುಮಕೂರು, ಜೂ.12:** ಸರ್ಕಾರಿ ನಿಯಮ ಉಲ್ಲಂಘಿಸಿ 10 ಕೋಟಿ ರೂ.ಗಳಿಗೂ ಅಧಿಕ ರಾಯಧನ ಬಾಕಿ ಪಾವತಿಸದ ಹಿನ್ನೆಲೆಯಲ್ಲಿ ಪಾವಗಡ ಕಾಂಗ್ರೆಸ್ ಶಾಸಕ ವೆಂಕಟೇಶ್, ಪತ್ನಿ ಶಶಿಕಲಾ ಒಡೆತನದ ವೆಂಕಟೇಶ್ವರ ಕಲ್ಲುಗಣಿ ಗುತ್ತಿಗೆ ರದ್ದುಪಡಿಸಿ ಇಲಾಖೆ ಆದೇಶ ಹೊರಡಿಸಿದೆ. ಪಾವಗಡ ತಾಲೂಕಿನ ತಿಪ್ಪಯ್ಯನದುರ್ಗ ಗ್ರಾಮದ ಸರ್ವೆ ನಂಬರ್ 42ರಲ್ಲಿ ನಡೆಯುತ್ತಿದ್ದ ವೆಂಕಟೇಶ್ವರ ಸ್ಟೋನ್ ಕ್ರಷರ್ 10,28,67,402 ರುಪಾಯಿ ರಾಯಧನ ಬಾಕಿ ಉಳಿಸಿಕೊಂಡಿದ್ದು, ನಿಗದಿತ ಪ್ರದೇಶಕ್ಕಿಂತ ಹೆಚ್ಚು ಒತ್ತುವರಿ ಮಾಡಿ ಕಾನೂನುಬಾಹಿರ ಗಣಿಗಾರಿಕೆ ನಡೆಸಿರುವುದು ಹಾಗೂ ಪರಿಸರ ನಿಯಮಗಳನ್ನು ಉಲ್ಲಂಘಿಸಿರುವ ಹಿನ್ನೆಲೆಯಲ್ಲಿ ಗಣಿಗಾರಿಕೆ ಚಟುವಟಿಕೆಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಿ ಗಣಿ ಮತ್ತು ಭೂವಿಜ್ಞಾನ ಇಲಾಖೆ ಆದೇಶಿಸಿದೆ.

ಎಚ್.ವಿ. ವೆಂಕಟೇಶ್ ಅವರಿಗೆ ತಿಪ್ಪಯ್ಯನದುರ್ಗದ ಸರ್ವೆ ನಂ. 42ರ 5 ಎಕ್ರೆ ಸರ್ಕಾರಿ ಜಮೀನಿನಲ್ಲಿ ಕಟ್ಟಡ ಕಲ್ಲು ಗಣಿಗಾರಿಕೆಗಾಗಿ 2014ರ ಡಿಸೆಂಬರ್ 16ರಿಂದ 10 ವರ್ಷಗಳ ಅವಧಿಗೆ ಮೊದಲ ಬಾರಿಗೆ ಗುತ್ತಿಗೆ ನೀಡಲಾಗಿತ್ತು. ನಂತರ ಕೆ.ಎಂ.ಎಂ.ಸಿ.ಆರ್–1994ರ ನಿಯಮಗಳನ್ವಯ ಗುತ್ತಿಗೆ ಅವಧಿಯನ್ನು 30 ವರ್ಷಗಳವರೆಗೆ ಅಂದರೆ 2044ರ ಡಿಸೆಂಬರ್ 15ರವರೆಗೆ ವಿಸ್ತರಿಸಲಾಗಿತ್ತು.

2024–25ನೇ ಸಾಲಿನ ಅಂತ್ಯಕ್ಕೆ ಈ ಗುತ್ತಿಗೆಯ ಮೇಲೆ ಒಟ್ಟು 13,84,95,693 ರೂ ಬಾಕಿ ಉಳಿಸಿಕೊಳ್ಳಲಾಗಿತ್ತು. ಈ ಸಂಬಂಧ ಇಲಾಖೆಯು ಕಾರಣ ಕೇಳಿ ನೋಟೀಸ್ ಜಾರಿ ಮಾಡಿತ್ತು. ಇದರ ವಿರುದ್ಧ ಗುತ್ತಿಗೆದಾರರು ಮೈಸೂರಿನ ಜಂಟಿ ನಿರ್ದೇಶಕರ ಕಚೇರಿಯಲ್ಲಿ ಪರಿಷ್ಕರಣಾ ಅರ್ಜಿ ಸಲ್ಲಿಸಿ ಯಾವುದೇ ಕ್ರಮ ಜರುಗಿಸದಂತೆ ಕೋರಿದ್ದ ಮನವಿಯನ್ನು ಇಲಾಖೆ ತಿರಸ್ಕರಿಸಿತ್ತು.

ಬಳಿಕ ಬಾಕಿ ಮೊತ್ತದಲ್ಲಿ ಕೇವಲ 2,76,91,938 ರುಪಾಯಿ ಮಾತ್ರ ಪಾವತಿಸಿ, ಉಳಿಕೆ ಮೊತ್ತವನ್ನು ಸರ್ಕಾರದ ಏಕಕಾಲದ ಇತ್ಯರ್ಥ ಯೋಜನೆಯಡಿ ಪಾವತಿಸುವುದಾಗಿ ಗುತ್ತಿಗೆದಾರರು ಪ್ರಮಾಣಪತ್ರ ಸಲ್ಲಿಸಿದ್ದರು.ಏಪ್ರಿಲ್ 2ರಂದು ಪಾವಗಡ ತಹಶೀಲ್ದಾರ್, ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು, ವಲಯ ಅರಣ್ಯಾಧಿಕಾರಿಗಳು, ಭೂ ದಾಖಲೆಗಳ ಇಲಾಖೆಯ ಸಹಾಯಕ ನಿರ್ದೇಶಕರು ಹಾಗೂ ಗಣಿ ಇಲಾಖೆಯ ತಾಂತ್ರಿಕ ಅಧಿಕಾರಿಗಳನ್ನೊಳಗೊಂಡ ಜಂಟಿ ತಂಡವು ಸ್ಥಳಕ್ಕೆ ಭೇಟಿ ನೀಡಿ ಅತ್ಯಾಧುನಿಕ ಡ್ರೋನ್ ಹಾಗೂ ಡಿಜಿಪಿಎಸ್ ಸರ್ವೆ ನಡೆಸಿತ್ತು. ಮಂಜೂರಾದ 5 ಎಕರೆ ಪ್ರದೇಶದ ಹೊರತಾಗಿ ಗುತ್ತಿಗೆ ಪ್ರದೇಶಕ್ಕೆ ಹೊಂದಿಕೊಂಡಂತಿರುವ ಉತ್ತರ ಭಾಗದಲ್ಲಿ 0–17 ಎಕರೆ ಹಾಗೂ ಪೂರ್ವ, ಪಶ್ಚಿಮ, ದಕ್ಷಿಣ ಭಾಗಗಳಲ್ಲಿ 5–17 ಎಕರೆ ಸೇರಿ ಒಟ್ಟು 5–34 ಎಕರೆ/ಗುಂಟೆ ಸರ್ಕಾರಿ ಜಮೀನನ್ನು ಅನಧಿಕೃತವಾಗಿ ಒತ್ತುವರಿ ಮಾಡಿ ಗಣಿಗಾರಿಕೆ ನಡೆಸಿರುವುದು ಸ್ಥಳ ಪರಿಶೀಲನೆಯಲ್ಲಿ ಪತ್ತೆಯಾಗಿದೆ. ತಾಂತ್ರಿಕ ಅಧಿಕಾರಿಗಳ ಲೆಕ್ಕ ತಪಾಸಣಾ ವರದಿಯ ಪ್ರಕಾರ, 2016–17ರಿಂದ 2022–23ರ ಅವಧಿಯಲ್ಲಿ ವ್ಯಾಪಕ ಒತ್ತುವರಿ ಮಾಡಲಾಗಿದ್ದು, 2014–15, 2015–16, 2019–20 ಮತ್ತು 2024–25ನೇ ಸಾಲುಗಳಲ್ಲಿ ಯಾವುದೇ ಅಧಿಕೃತ ಪರವಾನಗಿ ಇಲ್ಲದೆ ಖನಿಜ ಸಾಗಾಣಿಕೆ ಮಾಡಿರುವುದು ಪತ್ತೆಯಾಗಿದೆ. ಇಲಾಖೆಯು ಪ್ರತಿ ವರ್ಷ ಡಿಸಿಬಿ ನೋಟೀಸ್ ನೀಡಿದ್ದರೂ ಬಾಕಿ ಪಾವತಿಸಿರಲಿಲ್ಲ. ಅಲ್ಲದೆ, ಅನುಮೋದಿತ ಕ್ವಾರಿ ಪ್ಲಾನ್, ಪರಿಸರ ಅನುಮತಿ ಪತ್ರ ಹಾಗೂ ಡಿಜಿಎಂಎಸ್ ನಿಯಮಾವಳಿಗಳ ಷರತ್ತುಗಳನ್ನು ಸಂಪೂರ್ಣವಾಗಿ ಉಲ್ಲಂಘಿಸಲಾಗಿತ್ತು. ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಾವಳಿ ಹಾಗೂ ಎಂ.ಎಂ.ಡಿ.ಆರ್. ಕಾಯ್ದೆ ನಿಯಮಗಳ ಸ್ಪಷ್ಟ ಉಲ್ಲಂಘನೆ ಸಾಬೀತಾಗಿರುವುದರಿಂದ, ವೆಂಕಟೇಶ್ವರ ಕಲ್ಲುಗಣಿ ಗುತ್ತಿಗೆ ಸಂಖ್ಯೆ: 826ರ ಗಣಿಗಾರಿಕೆ ಚಟುವಟಿಕೆಗಳನ್ನು 2026ರ ಏಪ್ರಿಲ್ 15ರಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೆ ರದ್ದುಪಡಿಸಲಾಗಿದೆ.

ವೆಂಕಟೇಶ್ವರ ಕಲ್ಲುಗಣಿ ಗುತ್ತಿಗೆ ಸಂಬಂಧಿಸಿದಂತೆ ಈಗಾಗಲೇ ಬೆಂಗಳೂರಿನ ಲೋಕಾಯುಕ್ತ ಕಚೇರಿಯಲ್ಲಿ ಹಾಗೂ ತುಮಕೂರು ಲೋಕಾಯುಕ್ತ ಪೊಲೀಸ್ ಠಾಣೆಯಲ್ಲಿ ದೂರುಗಳು ದಾಖಲಾಗಿ ತನಿಖೆ ನಡೆಯುತ್ತಿದೆ. ಕಾನೂನು ಉಲ್ಲಂಘಿಸಿರುವ ವೆಂಕಟೇಶ್ವರ ಕಲ್ಲುಗಣಿ ಮಾಲಕ ಶಾಸಕ ವೆಂಕಟೇಶ್ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಆಮ್ ಆದ್ಮಿ ಪಕ್ಷದ ಮುಖಂಡರು ಸೇರಿ ಸಾರ್ವಜನಿಕರು ಆಗ್ರಹಿಸಿದ್ದಾರೆ.

ಗೋಕರ್ಣದಲ್ಲಿ ರಾಷ್ಟ್ರೀಯ ಈಡಿಗ ಮಹಾಮಂಡಲ ರಾಜ್ಯ ಘಟಕದ ಸಮಾವೇಶ

# ಬೇಳೂರು ಗೋಪಾಲಕೃಷ್ಣರಿಗೆ ಸಚಿವ ಸ್ಥಾನ ನೀಡಲು ಒಕ್ಕೊರಲ ನಿರ್ಣಯ



**ಕುಮಟಾ, ಜೂ.12::** ಈಡಿಗ ಸಮಾಜದ ಮುಂದಾಳು ಹಿರಿಯ ಶಾಸಕರಾದ ಬೇಳೂರು ಗೋಪಾಲಕೃಷ್ಣ ಅವರಿಗೆ ಸಚಿವ ಸಂಪುಟ ವಿಸ್ತರಣೆಯ ವೇಳೆ ಅವಕಾಶ ನೀಡಿ ಸಮುದಾಯದ ಬೇಡಿಕೆ ಈಡೇರಿಸಬೇಕೆಂದು ರಾಷ್ಟ್ರೀಯ ಈಡಿಗ ಮಹಾಮಂಡಲದ ಪ್ರತಿನಿಧಿಗಳ ಸಮಾವೇಶದಲ್ಲಿ ಅವಿರೋಧವಾಗಿ ನಿರ್ಣಯ ಕೈಗೊಳ್ಳಲಾಗಿದೆ.

ಕುಮಟಾ ತಾಲೂಕಿನ ಗೋಕರ್ಣ ಕ್ಷೇತ್ರದ ಪುಣ್ಯಶ್ರಮದಲ್ಲಿ ಜೂನ್ 11ರಂದು ಶ್ರೀ ವಿಧುಶೇಖರ ಭಾರತಿ ಸಭಾಭವನದಲ್ಲಿ ನಡೆದ ಮಹಾಮಂಡಲದ ಎರಡು ದಿನಗಳ ಕರ್ನಾಟಕ ರಾಜ್ಯ ಘಟಕದ 2025 – 26 ನೇ ಸಾಲಿನ ಐದನೇ ವಾರ್ಷಿಕ ಸಭೆಯಲ್ಲಿ ಅತಿ ಹಿಂದುಳಿದ ಸ್ವಾಮೀಜಿಗಳ ಮಹಾಸಭಾದ ರಾಜ್ಯಾಧ್ಯಕ್ಷರು ಹಾಗೂ ಈಡಿಗ ಗುರುಗಳಾದ ಡಾ. ಪ್ರಣವಾನಂದ ಶ್ರೀಗಳು ನಿರ್ಣಯ ಮಂಡಿಸಿದಾಗ ಒಕ್ಕೊರಲಿನಿಂದ ಒಪ್ಪಿಗೆ ಸೂಚಿಸಲಾಯಿತು.

ಈ ಮಹತ್ವದ ನಿರ್ಣಯದಿಂದಾಗಿ ರಾಜ್ಯದ 20 ಜಿಲ್ಲೆಗಳ ಸಮುದಾಯದ ಜನರು ಬೇಳೂರು ಅವರನ್ನು ಸಚಿವ ಸಂಪುಟಕ್ಕೆ ಸೇರಿಸುವಂತೆ ಬಲವಾದ ಒತ್ತಡ ಹಾಕಿ ಒಗ್ಗಟ್ಟಿನ ಧ್ವನಿಗೂಡಿಸಿದರು ಈ ಸಂದರ್ಭದಲ್ಲಿ ಮಾತನಾಡಿದ ಡಾ. ಪ್ರಣವಾನಂದ ಶ್ರೀಗಳು ಸಮಾಜದ ಪ್ರತಿನಿಧಿಯಾಗಿ ಸಚಿವ ಮಧು ಬಂಗಾರಪ್ಪ ಅವರಿಗೆ ಈಗಾಗಲೇ ಮೂರು ವರ್ಷ ಅವಕಾಶ ನೀಡಲಾಗಿದೆ. ಈಡಿಗ ಸಮಾಜದ ಪರವಾಗಿ ಗಟ್ಟಿ ಧ್ವನಿ ಎತ್ತಿ, ಮೂರು ಬಾರಿ ಶಾಸಕರಾಗಿ ಅನುಭವ ಹೊಂದಿದ ಬಂಗಾರಪ್ಪ ಅವರ ಗರಡಿಯಲ್ಲಿ ಪಳಗಿದ ಬೇಳೂರು ಗೋಪಾಲಕೃಷ್ಣ ಅವರಿಗೆ ಸಚಿವ ಸ್ಥಾನ ನೀಡುವುದರ ಮೂಲಕ ಹೊಸ ನಾಯಕತ್ವಕ್ಕೆ ಅವಕಾಶ ನೀಡಬೇಕು ಎಂದು ಹೇಳಿದರು.

### ಸಮುದ್ರ ಸ್ನಾನ ವಿಶೇಷ ಪೂಜೆ ಸಂಕಲ್ಪ ಹೋಮ

ಈ ಸಂದರ್ಭದಲ್ಲಿ ಬೇಳೂರು ಅವರ ಭಾವಚಿತ್ರಗಳನ್ನು ಪ್ರದರ್ಶನ ಮಾಡಿ ಘೋಷಣೆ ಕೂಗಿ ಮಂತ್ರಿಗಿರಿ ನೀಡುವಂತೆ ಸಭೆಯಲ್ಲಿ ಆಗ್ರಹಿಸಲಾಯಿತು ನಂತರ ಎಲ್ಲ ಪ್ರತಿನಿಧಿಗಳು ಗೋಕರ್ಣದ ಕಡಲ ತಡಿಯಲ್ಲಿ ಸಮುದ್ರ ಸ್ನಾನ ಮಾಡಿ ಗೋಕರ್ಣ ಮಹಾಬಲೇಶ್ವರ ದೇವರಿಗೆ ವಿಶೇಷ ಪೂಜೆ ನೆರವೇರಿಸಲಾಯಿತು. ಆನಂತರ ಡಾ. ಪ್ರಣವಾನಂದ ಶ್ರೀಗಳ ನೇತೃತ್ವದಲ್ಲಿ ಗಾಯತ್ರಿ ಹೋಮ, ಸಂಕಲ್ಪ ಪೂಜೆ ನೆರವೇರಿಸಿ ಪ್ರಾರ್ಥನೆ ಮಾಡಲಾಯಿತು.

### ರಾಜ್ಯದ ಪ್ರತಿನಿಧಿಗಳ ಪಾಲ್ಗೊಳ್ಳುವಿಕೆಗೆ ಹರ್ಷ

ಎರಡು ದಿನಗಳ ಸಮಾವೇಶದಲ್ಲಿ ಭಾಗವಹಿಸಿ ಸಮುದಾಯದ ಸಂಘಟನೆಗೆ ಟೊಂಕ ಕಟ್ಟಿ ನಿಂತ ಮಹಾಮಂಡಲದ ಮುಖಂಡರು ನಿಜಕ್ಕೂ ಪ್ರಶಂಸನಾರ್ಹರು. ಸಮಾಜದ ಉತ್ತಮ ಭವಿಷ್ಯಕ್ಕಾಗಿ ಎಲ್ಲರೂ ಒಗ್ಗಟ್ಟಿನಿಂದ ದುಡಿಯೋಣ ಎಂದು ಸಮಾವೇಶವನ್ನು ಉದ್ಘಾಟನೆ ಮಾಡಿದ ಚಿತ್ತಾಪುರ ಬ್ರಹ್ಮಶ್ರೀ ನಾರಾಯಣಪುರು ಶಕ್ತಿಪೀಠದ ಧರ್ಮದರ್ಶಿ ಹಾಗೂ ಉದ್ಯಮಿಗಳಾದ ವೆಂಕಟೇಶ ಎಂ ಕಡೇಚೂರ್ ಹೇಳಿದರು.

### ವಿಶೇಷ ಉಪನ್ಯಾಸ

ಎರಡು ದಿನಗಳ ಸಮಾವೇಶದಲ್ಲಿ ವಿಶೇಷ ಚರ್ಚೆ, ಉಪನ್ಯಾಸ ನಡೆಯಿತು. ಸಮಾಜ, ಸಂಘಟನೆ, ಆರ್ಥಿಕ ಸಂಪನ್ಮೂಲ ಈ ಕುರಿತಾಗಿ ಕೆಪಿಎಸ್ಸಿ ಮಾಜಿ ಸದಸ್ಯ ಡಾ. ಲಕ್ಷ್ಮಿ ನರಸಯ್ಯ ಹಾಗೂ ರಾಜಕೀಯ ಶಕ್ತಿಗಳ ಕ್ರೋಢೀಕರಣ ಬಗ್ಗೆ ಆಕಾಶವಾಣಿಯ ನಿವೃತ್ತ ಕಾರ್ಯಕ್ರಮ ಮುಖ್ಯಸ್ಥರಾದ ಬ್ರಹ್ಮ ಶ್ರೀ ನಾರಾಯಣ ಗುರುಶಕ್ತಿ ಪೀಠದ ಮಾಧ್ಯಮ ಸಂಚಾಲಕರಾದ

ಡಾ.ಸದಾನಂದ ಪೆರ್ಲ ವಿಶೇಷ ಉಪನ್ಯಾಸ ನೀಡಿದರು. ಸಭೆಯಲ್ಲಿ ಮಹಾಮಂಡಲದ ರಾಜ್ಯಾಧ್ಯಕ್ಷ ತಿಪ್ಪೇಶ್, ಕಲ್ಯಾಣ ಕರ್ನಾಟಕ ಆರ್ಯ ಈಡಿಗ ಹೋರಾಟ ಸಮಿತಿಯ ಉಪಾಧ್ಯಕ್ಷ ಕುಪೇಂದ್ರ ಗುತ್ತೇದಾರ್ ನಾಗೂರ್, ನ್ಯಾಯವಾದಿ ವಿಕ್ರಮ್ ಆರ್‌ಎಲ್ ನಾಯಕ್ ಕುಮಟಾ,ಮಾಜಿ ಮಹಾಮಂಡಲದ ಮಾಜಿ ರಾಜ್ಯಾಧ್ಯಕ್ಷ ಮಂಚೇಗೌಡ, ಯಶೋದಮ್ಮ ತೇಜಸ್ವಿ ನಾಯಕ್ ಅಂಬಯ್ಯ ಗುತ್ತೇದಾರ್ ಇಬ್ರಾಹಿಂಪುರ ಸಂತೋಷ್ ಚೌಧರಿ, ಮಂಜುಳಾ ನಾಯಕ್, ತೇಜಸ್ವಿ ನಾಯಕ್, ವರ್ಧನ್ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

### ನಿರ್ಣಯಕ್ಕೆ ಒಪ್ಪಿಗೆ

ರಾಷ್ಟ್ರೀಯ ಈಡಿಗ ಮಹಾಮಂಡಲದ ವಾರ್ಷಿಕ ಸಭೆಯಲ್ಲಿ ರಾಜ್ಯದ 20 ಜಿಲ್ಲೆಗಳ ಪದಾಧಿಕಾರಿಗಳು ಪಾಲ್ಗೊಂಡು ರಾಜ್ಯಾಧ್ಯಕ್ಷ ತಿಪ್ಪೇಶ್ ಅವರು ಮಂಡಿಸಿದ ನಿರ್ಣಯಗಳನ್ನು ಅಂಗೀಕರಿಸಲಾಯಿತು.

ಬೇಳೂರು ಅವರಿಗೆ ಸಚಿವ ಸ್ಥಾನ, ರಾಜ್ಯದ 250 ಕಡೆ ಕನಿಷ್ಠ 500 ಜನರನ್ನು ಸೇರಿಸಿ ಚಿಂತನಾ ಸಭೆ, ರಾಜ್ಯದ ನಾಲ್ಕು ಕಡೆಗಳಲ್ಲಿ ರಾಜಕೀಯ ಶಕ್ತಿ ಕ್ರೋಢೀಕರಣಕ್ಕಾಗಿ ವಿಶೇಷ ಸಭೆಸಮಾಜಕ್ಕೆ ರಾಜಕೀಯ ಸ್ಥಾನ ನೀಡಿಕೆ ಮುಂತಾದ ನಿರ್ಣಯಗಳನ್ನು ಅಂಗೀಕರಿಸಲಾಯಿತು.

# ಬಾಲಕಾರ್ಮಿಕ ನಿರ್ಮೂಲನೆಗೆ ಕೈಜೋಡಿಸಿ: ನ್ಯಾಯಾಧೀಶ ಹರೀಶ



**ವಿಜಯಪುರ, ಜೂ.12–** ಸಮಾಜದಲ್ಲಿನ ಅನಿಷ್ಟ ಪಿಡುಗಾಗಿರುವ ಬಾಲಕಾರ್ಮಿಕ ಪದ್ಧತಿಯನ್ನು ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಸಾರ್ವಜನಿಕರು ಕೈಜೋಡಿಸಿ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಹರೀಶ ಎ ಅವರು ಹೇಳಿದರು.

ಬಾಲಕಾರ್ಮಿಕ ಪದ್ಧತಿ ಮತ್ತು ಬಾಲ್ಯವಿವಾಹದ ಕುರಿತು ಜನರಲ್ಲಿ ತಿಳಿವಳಿಕೆ ಹಾಗೂ ಕಾನೂನಿನ ಜಾಗೃತಿ ಹೊಂದುವುದು ಅಗತ್ಯವಾಗಿದೆ. ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು.

ಮಕ್ಕಳ ಹಕ್ಕುಗಳ ಕುರಿತಾಗಿ ಅರಿವು ಮೂಡಿಸಬೇಕು. ಈ ಬಗ್ಗೆ ಜಾಗೃತಿ ಹಾಗೂ ಸಹಕಾರ ನೀಡಲು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಾ ಸಿದ್ಧವಾಗಿದೆ ಎಂದು ಹೇಳಿದರು.

# ಉದ್ಯಮಿಗಳಾಗಿ ದೇಶದ ಅಭಿವೃದ್ಧಿಗೆ ಶ್ರಮಿಸಿ: ಶಿಖರ್ ಮುಫಾ

**ಕಲಬುರಗಿ, ಜೂ. 12:** ವಿಶ್ವ ವಿದ್ಯಾಲಯ, ಉನ್ನತ ಶಿಕ್ಷಣ ಸಂಸ್ಥೆಗಳಿಂದ ಹೊರಬರುತ್ತಿರುವ ಯುವ ಪ್ರತಿಭೆಗಳು, ಉದ್ಯೋಗ ಅರಸಿಕೊಂಡು ಹೋಗದೇ, ಸರ್ಕಾರಿ ಸೌಲಭ್ಯಗಳನ್ನು ಪಡೆದುಕೊಂಡು ತಮ್ಮೊಳಗೆ ಉದ್ಯಮಿಯಾಗುವ ಆಸೆ ಬೆಳೆಸಿಕೊಂಡು ದೇಶದ ಅಭಿವೃದ್ಧಿ ಹಾಗೂ ಆರ್ಥಿಕ ಗುರಿ ಸಾಧಿಸುವಲ್ಲಿ ಪಾಲುದಾರರಾಗಬೇಕು. ಜತೆಗೆ ಉದ್ಯಮಶೀಲತಾ ಕೌಶಲ ಜಾಗೃತಗೊಳಿಸಿ ಜೀವನದಲ್ಲಿ ಯಶಸ್ಸು ಸಾಧಿಸಬೇಕು ಎಂದು ಸಹಾಯಕ ಆಯುಕ್ತ ಶಿಖರ್ ಮುಫಾ ಹೇಳಿದರು.

ನಗರದ ಶರಣಬಸವ ವಿಶ್ವ ವಿದ್ಯಾಲಯದದ ಇಸಿಇ ವಿಭಾಗದ ತರಬೇತಿ ಮತ್ತು ಉದ್ಯೋಗ ನೇಮಕಾತಿ ಘಟಕ ಕರ್ನಾಟಕ ಡಿಜಿಟಲ್ ಎಕಾನಮಿ ಮಿಷನ್ ಸಹಯೋಗದಲ್ಲಿ ಆಯೋಜಿಸಿದ್ದ ಪ್ಲೇಸ್ಮೆಂಟ್ ಡೆವ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಯುವ ವಿದ್ಯಾರ್ಥಿಗಳು ಸಮಾಜದ ಉತ್ಪಾದಕ ಪಾಲುದಾರರಾಗುವುದರ ಜತೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರ ನಿಗದಿಪಡಿಸಿರುವ ಅಭಿವೃದ್ಧಿ ಗುರಿ ಸಾಧಿಸುವಲ್ಲಿ ಭಾಗಿಯಾಗಬೇಕು ಎಂದು ಕರೆ ನೀಡಿದರು.



**ಯುವಕರು ತಮ್ಮ ಉದ್ಯಮಶೀಲ ಕೌಶಲ ಪರೀಸುವುದರ ಜತೆಗೆ ಕೆಲಸದ ಸ್ಥಳದಲ್ಲಿ ಜವಾಬ್ದಾರಿ ಹೊತ್ತುಕೊಳ್ಳುವ ಮನೋಭಾವ ಬೆಳೆಸಿಕೊಳ್ಳಬೇಕು. ಸಂಸ್ಥೆಯಲ್ಲಿ ಹಲವಾರು ಕಾರ್ಯನಿರ್ವಾಹಕ ಹುದ್ದೆಗಳು ಖಾಲಿ ಇದ್ದು, ಜವಾಬ್ದಾರಿ ವಹಿಸಿಕೊಳ್ಳಲು ಸಿದ್ಧರಾಗಿರುವ ಯುವಕರಿಗೆ ಅವಕಾಶಗಳು ಮುಕ್ತವಾಗಿವೆ. – ಕೃಷ್ಣಾಜಿ ಕುಲಕರ್ಣಿ, ಪ್ರಧಾನ ವಿತರಕ, ಹೀರೋ ಮೋಟಾರ್ಸ್ ಸಂಸ್ಥೆ, ಕಲಬುರಗಿ.**

**ಕಲ್ಯಾಣ ಕರ್ನಾಟಕ ಪ್ರದೇಶವನ್ನು ರಾಜ್ಯದ ಇತರ ಭಾಗಗಳಿಗೆ ಸಮನಾಗಿ ಅಭಿವೃದ್ಧಿಪಡಿಸುವ ಅಗತ್ಯವಿದೆ. ಈ ಭಾಗದ ವಿದ್ಯಾವಂತ ಯುವಕರಿಗೆ ಹೊಸ ಉದ್ಯೋಗಾವಕಾಶ ಸೃಷ್ಟಿಸಬೇಕಾಗಿದೆ. ಈ ನಿಟ್ಟಿನಲ್ಲಿ ಸರ್ಕಾರ ಹಲವಾರು ಉಪಕ್ರಮಗಳನ್ನು ಜಾರಿಗೊಳಿಸುವ ಮೂಲಕ ಶ್ರಮಿಸುತ್ತಿದೆ. –ಶಿಖರ್? ಮುಫಾ, ಸಹಾಯಕ ಆಯುಕ್ತರು.**

ಇಂಜಿನಿಯರಿಂಗ್ ಶಿಕ್ಷಣ ಪೂರ್ಣಗೊಳಿಸಿದ ನಂತರ ಇಂಟರ್ನ್ ಶಿಪ್ ಅವಧಿಯಲ್ಲಿ ಅಪಾರ ಜ್ಞಾನ ಸಂಪಾದಿಸಿದ್ದೇನೆ. ಆ ಅನುಭವವೇ ನನ್ನನ್ನು ಯಾವುದೇ ಕಂಪನಿಯಲ್ಲಿ ಉದ್ಯೋಗಿಯಾಗುವುದಕ್ಕಿಂತ ನಾಗರಿಕ ಸೇವೆಗಳ ಪರೀಕ್ಷೆಗೆ ಸಿದ್ಧಗೊಳ್ಳುವಂತೆ ಪ್ರೇರೇಪಿಸಿತು. ತಮ್ಮ ಕೆಲ ಸ್ನೇಹಿತರು ಯಶಸ್ವಿ ಉದ್ಯಮಿಗಳಾಗಿ ಬೆಳೆದು, ಸಾವಿರಾರು ಕೌಶಲಯುತ ಯುವಕರಿಗೆ ಉದ್ಯೋಗ ಕಲ್ಪಿಸಿದ್ದಾರೆ ಎಂದರು.

ಹೀರೋ ಮೋಟಾರ್ಸ್ ಸಂಸ್ಥೆ ಪ್ರಧಾನ ವಿತರಕ ಕೃಷ್ಣಾಜಿ ಕುಲಕರ್ಣಿ, ಉದ್ಯೋಗ ಪಡೆಯಲು ಮಾಡಿದ ಪ್ರಯತ್ನ ವಿಫಲವಾದ ಹಿನ್ನೆಲೆ ಕೇವಲ 10,000 ರೂ. ಆರಂಭಿಕ ಬಂಡವಾಳದೊಂದಿಗೆ ಆಗಿನ ಅಟ್ಲಾಸ್ ಮೊಪೆಡ್ಸ್ ಫ್ರಾಂಚೈಸಿ ಪಡೆದು ಸ್ವಂತ ಉದ್ಯಮ ಆರಂಭಿಸಿದೆ. ಅದೇ ನನ್ನ ಉದ್ಯಮಶೀಲತಾ ಪಯಣದ ಆರಂಭ. ಇಂದು ನನ್ನ ಸಂಸ್ಥೆಯಲ್ಲಿ ಸುಮಾರು 500ಕ್ಕೂ ಹೆಚ್ಚು ಜನರಿಗೆ ಉದ್ಯೋಗ ಕಲ್ಪಿಸಲಾಗಿದೆ ಎಂದು ಹೇಳಿದರು.

ಶರಣಬಸವೇಶ್ವರ ವಿದ್ಯಾವರ್ಧಕ ಸಂದ ಕಾರ್ಯದರ್ಶಿ ಬಸವರಾಜ ದೇಶಮುಖ ಮಾತನಾಡಿ, ಶರಣಬಸವ ವಿಶ್ವವಿದ್ಯಾಲಯ ಆಯೋಜಿಸಿರುವ ಈ ಪ್ಲೇಸ್ಮೆಂಟ್ ಡೆವ್ ವಿದ್ಯಾರ್ಥಿಗಳಿಗೆ ಹೊಸ ಉದ್ಯೋಗಾವಕಾಶಗಳ ದಾರಿ ತೆರೆಯಲಿದೆ. ಯಶಸ್ವಿ ಉದ್ಯಮಿಗಳಾಗಲು ಮೊದಲು ನಾಯಕತ್ವ ಗುಣ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

# ದೈಹಿಕ, ಮಾನಸಿಕ ಆರೋಗ್ಯ ವೃದ್ಧಿಗೆ ಯೋಗ ಪರಿಣಾಮಕಾರಿ: ಎಡಿಸಿ ರಾಯಪ್ಪ

**ಕಲಬುರಗಿ, ಜೂ. 12:** ಯೋಗವು ದೈಹಿಕ ಹಾಗೂ ಮಾನಸಿಕ ಆರೋಗ್ಯ ವೃದ್ಧಿಗೆ ಅತ್ಯಂತ ಪರಿಣಾಮಕಾರಿ ಸಾಧನವಾಗಿದ್ದು, ಆರೋಗ್ಯಕರ ಸಮಾಜ ನಿರ್ಮಾಣದಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಹೇಳಿದರು.



ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾಧಿಕಾರಿಗಳು, ಜೂನ್ 21 ರಂದು ಬೆಳಿಗ್ಗೆ 7 ಗಂಟೆಯಿಂದ 7:45 ರವರೆಗೆ ನಗರದ ಡಾ.ಚಂದ್ರಶೇಖರ್ ಪಾಟೀಲ್ ಕ್ರೀಡಾಂಗಣದಲ್ಲಿ ಬೃಹತ್ ಯೋಗ ಪ್ರದರ್ಶನ ಕಾರ್ಯಕ್ರಮಕ್ಕೆ ಬರುವ ಶಾಲಾ–ಕಾಲೇಜು ವಿದ್ಯಾರ್ಥಿಗಳು ಸಾರ್ವಜನಿಕರು ಹಾಗೂ ವಿವಿಧ ಇಲಾಖೆಗಳ ಸಿಬ್ಬಂದಿಗಳು ಬೆಳಿಗ್ಗೆ 6:30ರ ಒಳಗಾಗಿ ಕ್ರೀಡಾಂಗಣ ತಲುಪಿ ನಿಯೋಜಿತ ಜಾಗಗಳಲ್ಲಿ ಸಿದ್ಧರಿರಬೇಕು ತಿಳಿಸಿದರು. ಕ್ರೀಡಾಂಗಣದಲ್ಲಿ ಯೋಗಾಸನಕ್ಕೆ ಮ್ಯಾಟ್‌ಗಳ ಅಳವಡಿಕೆ, ಶುದ್ಧ ಕುಡಿಯುವ ನೀರಿನ ಸೌಲಭ್ಯ, ತುರ್ತು ಚಿಕಿತ್ಸೆಗಾಗಿ ಆಂಬುಲೆನ್ಸ್ ವ್ಯವಸ್ಥೆ ಹಾಗೂ ಸೂಕ್ತ ಪೊಲೀಸ್ ಭದ್ರತೆಯನ್ನು ಕಲ್ಪಿಸಬೇಕು. ಕ್ರೀಡಾಂಗಣದಲ್ಲಿ ಬೆಳೆದಿರುವ ಹುಲ್ಲನ್ನು ಸಣ್ಣದಾಗಿ ಕತ್ತರಿಸಿ ಇಡೀ ಆವರಣವನ್ನು ಸ್ವಚ್ಛವಾಗಿಟ್ಟುಕೊಳ್ಳುವಂತೆ ಮಹಾನಗರ ಪಾಲಿಕೆ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ತೋಟಗಾರಿಕೆ ಇಲಾಖೆಯಿಂದ ಕ್ರೀಡಾಂಗಣದ ಸೌಂದರ್ಯೀಕರಣಕ್ಕಾಗಿ 50 ಅಲಂಕಾರಿಕ ಗಿಡಗಳ ಕುಂಡಗಳನ್ನು ಒದಗಿಸುವಂತೆ ತಿಳಿಸಿದರು.

ಗಿನ್ನೆಸ್ ವಿಶ್ವ ದಾಖಲೆಯ ಪ್ರಯತ್ನ:ಜೂನ್ 14 ರಂದು ಆನ್‌ಲೈನ್ ಮೂಲಕ ಯೋಗದ ಗಿನ್ನೆಸ್ ವಿಶ್ವ ದಾಖಲೆಯ ಮಹತ್ತರ ಪ್ರಯತ್ನವೊಂದು ನಡೆಯುತ್ತಿದ್ದು, ಜಿಲ್ಲೆಯಿಂದ ಗರಿಷ್ಠ ಸಂಖ್ಯೆಯ ನೋಂದಣಿ ದಾಖಲಾಗಬೇಕಿದೆ. ಇದಕ್ಕಾಗಿ ವೆಬ್ ಪೋರ್ಟಲ್ ಲಿಂಕ್ ಅನ್ನು ಎಲ್ಲಾ ಇಲಾಖೆಗಳ ಗ್ರೂಪ್‌ಗಳಲ್ಲಿ ಹಂಚಿಕೊಳ್ಳಬೇಕು. ವಿಶೇಷವಾಗಿ ಶಿಕ್ಷಣ ಇಲಾಖೆ (ಶಾಲೆಗಳು), ಸಮಾಜ ಕಲ್ಯಾಣ ಇಲಾಖೆ (ವಸತಿ ನಿಲಯಗಳು) ಮತ್ತು ಪೊಲೀಸ್ ಇಲಾಖೆಯ ಸಿಬ್ಬಂದಿ ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳಬೇಕು ಹಾಗೂ ಯೋಗ ಮಾಡುವಾಗ ತೆಗೆದ ಫೋಟೋಗಳನ್ನು ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಬೇಕು ಎಂದು ಕಟ್ಟುನಿಟ್ಟಾಗಿ ಆದೇಶಿಸಿದರು.

ಜೂನ್ 19 ರಂದು ಬೃಹತ್ 'ಯೋಗ ನಡಿಗೆ':ಮುಖ್ಯ ಕಾರ್ಯಕ್ರಮದ ಮುನ್ನೋಡಿಯಾಗಿ ಜೂನ್ 19 ರಂದು ಬೆಳಿಗ್ಗೆ 9:30 ಕ್ಕೆ ನಗರದಲ್ಲಿ 'ಯೋಗ ನಡಿಗೆ' (ರನ್ ಫಾರ್ ಯೋಗ) ಆಯೋಜಿಸಲಾಗಿದೆ. ಈ ನಡಿಗೆಯು ಜಗತ್ ವೃತ್ತದಿಂದ ಆರಂಭವಾಗಿ ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದ ಮಾರ್ಗವಾಗಿ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಸಾಗಲಿದೆ. ಜಿಲ್ಲೆಯ ಜನಸಾಮಾನ್ಯರು, ಯೋಗಾಸಕ್ತರು ಮತ್ತು ಸಂಘ–ಸಂಸ್ಥೆಗಳು ಈ ಎಲ್ಲಾ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕಾಗಿ ಕೋರಲಾಗಿದೆ.

# ಮಣ್ಣಿನ ಫಲವತ್ತತೆ ಕಾಯ್ದುಕೊಳ್ಳಲು ಸುಸ್ಥಿರ ಕೃಷಿ ಪದ್ಧತಿ ಮೂಲಕ ಕಾಳಜಿ ವಹಿಸಿ: ತಿಮ್ಮಣ್ಣ

**ರಾಯಚೂರು, ಜೂ. 12:** ಸುಸ್ಥಿರ ಕೃಷಿ ಪದ್ಧತಿ ಮೂಲಕ ಮಣ್ಣಿನ ಫಲವತ್ತತೆ ನಾಶವಾಗದಂತೆ ರೈತರು ಕಾಳಜಿ ವಹಿಸಬೇಕು ಎಂದು ರಾಯಚೂರು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ತಿಮ್ಮಣ್ಣ ಹೇಳಿದರು.

ತಿಪ್ಪೆ ಗೊಬ್ಬರ, ಎರೆಹುಳು ಗೊಬ್ಬರ ಬಳಸಿ ಕೃಷಿ ಉತ್ಪಾದಕತೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ರೈತರು ನಿರಂತರ ಪ್ರಯೋಗ ಶೀಲರಾಗಬೇಕು' ಎಂದು ಸಲಹೆ ನೀಡಿದರು.

ಕೃಷಿ ವಿಶ್ವ ವಿದ್ಯಾಲಯದ ಮಲ್ಲರೆಡ್ಡಿ ಮಾತನಾಡಿ,



ಜಿಲ್ಲೆಯ ಕವಿತಾಳ ಸೇರಿದಂತೆ ಸಮೀಪದ ಮಲ್ಲಟ ಮತ್ತು ನೀಲಗಲ್ ಗ್ರಾಮಗಳಲ್ಲಿ ಹಮ್ಮಿಕೊಂಡಿದ್ದ 'ಖೇತ್ ಬಚಾವೋ ಅಭಿಯಾನ' ದಲ್ಲಿ ಮಾತನಾಡಿದ ಅವರು, ನೈಸರ್ಗಿಕ ಸಂಪನ್ಮೂಲಗಳ ಬಳಕೆ, ನೀರಿನ ಸಂರಕ್ಷಣೆ ಮತ್ತು ಪರಿಸರ ಸ್ನೇಹಿ ತಂತ್ರಜ್ಞಾನ ಬಳಕೆಯಿಂದ ಭೂಮಿಯ ಫಲವತ್ತತೆ ಕಾಪಾಡಬಹುದು.

ರಸಗೊಬ್ಬರ, ಕ್ರಿಮಿನಾಶಕ ಮತ್ತಿತರ ರಾಸಾಯನಿಕಗಳ ಬಳಕೆ ಕಡಿಮೆ ಮಾಡಿ ಸಾಂಪ್ರದಾಯಿಕ 'ರಾಸಾಯನಿಕಗಳ ಸಮತೋಲಿತ ಬಳಕೆ, ಉತ್ತಮ ಗುಣಮಟ್ಟದ ಬಿತ್ತನೆ ಬೀಜ ಆಯ್ಕೆ, ಮಣ್ಣಿನ ಗುಣಧರ್ಮ ಆಧರಿಸಿ ಸೂಕ್ತ ಬೆಳೆ ಬೆಳೆಯುವುದು, ಜೈವಿಕ ಗೊಬ್ಬರ, ಹಸಿರೆಲೆ ಗೊಬ್ಬರ ಬಳಕೆಯನ್ನು ಉತ್ತೇಜಿಸುವುದು ಸೇರಿದಂತೆ ನೈಸರ್ಗಿಕ ಕೃಷಿಯ ಕಡೆ ರೈತರನ್ನು ಪರಿವರ್ತಿಸುವ ಸದುದ್ದೇಶದಿಂದ ರೈತರೊಂದಿಗೆ ಸಂವಹನ ನಡೆಸಲಾಗುವುದು' ಎಂದು ಹೇಳಿದರು.

# ರಾಷ್ಟ್ರೀಯ ಅಂಧತ್ವ ನಿವಾರಣಾ ಕಾರ್ಯಕ್ರಮದಡಿ ಉಚಿತ ಕಣ್ಣಿನ ತಪಾಸಣೆ – ಶಸ್ತ್ರಚಿಕಿತ್ಸೆ

**ಬಳ್ಳಾರಿ,ಜೂ.12.**ಸಾರ್ವಜನಿಕರಲ್ಲಿ ಕಾಡುವ ಅಂಧತ್ವ ಮತ್ತು ದೃಷ್ಟಿ ದೌರ್ಬಲ್ಯವನ್ನು ತಡೆಗಟ್ಟುವುದು, ಸೂಕ್ತ ಚಿಕಿತ್ಸೆ ನೀಡುವುದು ಹಾಗೂ ಜನರ ದೃಷ್ಟಿ ಆರೋಗ್ಯವನ್ನು ಸುಧಾರಿಸುವುದು ರಾಷ್ಟ್ರೀಯ ಅಂಧತ್ವ ನಿವಾರಣಾ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಅಂಧತ್ವದ ಪ್ರಮಾಣವನ್ನು ನಿರಂತರವಾಗಿ ಕಡಿಮೆ ಮಾಡುವುದು. ಗ್ರಾಮೀಣ ಮತ್ತು ಹಿಂದುಳಿದ ಪ್ರದೇಶಗಳ ಜನರಿಗೂ ಗುಣಮಟ್ಟದ ನೇತ್ರ ಚಿಕಿತ್ಸೆ ಸುಲಭವಾಗಿ ಲಭ್ಯವಾಗುವಂತೆ ಮಾಡುವುದು. ದೃಷ್ಟಿ ದೌರ್ಬಲ್ಯ ಹೊಂದಿರುವವರಿಗೆ ಅಗತ್ಯ ಪುನರ್ವಸತಿ ಸೇವೆಗಳನ್ನು ಒದಗಿಸುವುದು ಹಾಗೂ ಉಚಿತ ನೇತ್ರ ಚಿಕಿತ್ಸೆ ಮತ್ತು ಉಚಿತ ಕನ್ನಡಕಗಳನ್ನು ವಿತರಿಸುವುದು. ಶಾಲಾ ಮಕ್ಕಳಲ್ಲಿ ದೃಷ್ಟಿ ತಪಾಸಣೆ ನಡೆಸಿ, ಬಾಲ್ಯ ಅಂಧತ್ವವನ್ನು ತಡೆಗಟ್ಟುವುದು ಮತ್ತು ಕಣ್ಣಿನ ದೋಷವಿರುವ ಮಕ್ಕಳಿಗೆ ಉಚಿತ ಕನ್ನಡಕ ನೀಡುವುದು. ಕಣ್ಣಿನ ಆರೋಗ್ಯ ಹಾಗೂ ಕಾರ್ನಿಯಾ ದಾನ ಮತ್ತು ಕಣ್ಣಿನ ಬ್ಯಾಂಕುಗಳ ಕುರಿತು ಸಾರ್ವಜನಿಕರಲ್ಲಿ ವ್ಯಾಪಕ ಅರಿವು ಮೂಡಿಸುವುದು ಈ ಕಾರ್ಯಕ್ರಮದ ಪ್ರಮುಖ ಅಂಶಗಳಾಗಿವೆ ಎಂದರು.



## ಬಾಲಕಾರ್ಮಿಕ ಪದ್ಧತಿ ಸಮಾಜದ ಸ್ವಾಸ್ಥ್ಯಕ್ಕೆ ಮಾರಕ

# ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮದಲ್ಲಿ ಎಸ್.ಪಿ ಡಾ.ಸುಮನ್ ಪೆನ್ನೇಕರ್

**ಬಳ್ಳಾರಿ,ಜೂ.12:** ದೇಶ ಹಾಗೂ ರಾಜ್ಯದ ಹಿಂದುಳಿದ ಜಿಲ್ಲೆಗಳಲ್ಲಿ ಇಂದಿಗೂ ಬಾಲಕಾರ್ಮಿಕ ಪದ್ಧತಿ ಆಚರಣೆಯಲ್ಲಿರುವುದು ಸಮಾಜದ ಸ್ವಾಸ್ಥ ?ಯಕ್ಕೆ ಮಾರಕವಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪೆನ್ನೇಕರ್ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.



ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಜಿಲ್ಲಾ ಬಾಲಕಾರ್ಮಿಕ ಯೋಜನೆ, ಜಿಲ್ಲಾ ವಕೀಲರ ಸಂಘ, ವಿವಿಧ ಇಲಾಖೆಗಳು ಮತ್ತು ಇತರೆ ಸಂಘ– ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ?ಮಕ್ಕಳ ಕಾರ್ಮಿಕತೆಗೆ ರೆಡ್ ಕಾರ್ಡ್ ತೋರಿಸಿ, ಮಕ್ಕಳಿಗೆ ನ್ಯಾಯಯುತ ರಬಾಲ್ಯ, ವಯಸ್ಕರಿಗೆ ಘನತೆಯ ಉದ್ಯೋಗ? ಎಂಬ ಘೋಷವಾಕ್ಯದೊಂದಿಗೆ 'ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ' ವೇದಿಕೆ ಕಾರ್ಯಕ್ರಮ ಉದ್ಘಾಟಿಸಿ, ಮಾನವ ಸಂಪನ್ಮೂಲದ ಅಗತ್ಯ ಹೆಚ್ಚಿರುವ ಕಡೆಗಳಲ್ಲಿ ಸಣ್ಣ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ತೊಡಗಿಸಿಕೊಳ್ಳುವ ಪ್ರವೃತ್ತಿ ವ್ಯಾಪಕವಾಗಿ ಕಂಡುಬರುತ್ತಿದೆ. ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳಲು ಸಮಾಜದಲ್ಲಿರುವ ತಪ್ಪು ಕಲ್ಪನೆಗಳು ಮತ್ತು ಆಲೋಚನೆಗಳೇ ಮುಖ್ಯ ಕಾರಣವಾಗಿದೆ. ಬಾಲಕಾರ್ಮಿಕರಿಗೆ ಹೆಚ್ಚಿನ ಸಂಬಳ ನೀಡುವ ಅಗತ್ಯವಿರುವುದಿಲ್ಲ ಮತ್ತು ಅತ್ಯಂತ ಕಡಿಮೆ ವೇತನದಲ್ಲಿ ಅವರಿಂದ ಹೆಚ್ಚಿನ ಕೆಲಸ ಮಾಡಿಸಿಕೊಳ್ಳಬಹುದು ಎನ್ನುವ ಶೋಷಣೆಯ ಮನೋಭಾವನೆ ಇಂದಿಗೂ ಜೀವಂತವಾಗಿದೆ. ಇಂತಹ ಆಲೋಚನೆಗಳು ಮಕ್ಕಳ ಮಾನಸಿಕ ಹಾಗೂ ದೈಹಿಕ ಆರೋಗ್ಯದ ಮೇಲೆ ತೀವ್ರ ಪರಿಣಾಮ ಬೀರುತ್ತಿದ್ದು, ಅವರ ವಿದ್ಯಾಭ್ಯಾಸದ ಪ್ರಗತಿಯನ್ನು ಕುಂಠಿತಗೊಳಿಸುತ್ತಿವೆ. ಮಕ್ಕಳು ತಮ್ಮ ಬೆಳವಣಿಗೆಯ ಹಂತದಲ್ಲಿ ವಿದ್ಯಾಭ್ಯಾಸದ ಕಡೆಗೆ ಎಷ್ಟು ಗಮನ ಹರಿಸುತ್ತಾರೋ, ಅಷ್ಟೇ ಉತ್ತಮವಾಗಿ ಅವರು ದೊಡ್ಡವರಾದ ಮೇಲೆ ಸಾಧನೆ ಮಾಡಲು ಸಾಧ್ಯವಾಗುತ್ತದೆ. ಆದರೆ, ಅವರು ಸಾಧನೆ ಮಾಡುವಂತಹ ಆರಂಭಿಕ ಹಂತದಲ್ಲೇ ಅವರ ಕೈಗೆ ಪುಸ್ತಕ ನೀಡುವ ಬದಲು ಕೆಲಸಕ್ಕೆ ದೂಡಿ, ಅವರ ಭವಿಷ್ಯವನ್ನು ಮೊಟಕುಗೊಳಿಸುವುದು ಅಕ್ಷಮ್ಯ ಅಪರಾಧವಾಗಿದೆ ಎಂದರು.

ಬಾಲಕಾರ್ಮಿಕ ಪದ್ಧತಿಯು ಕಾನೂನಿನ ಪ್ರಕಾರ ಶಿಕ್ಷಾರ್ಹ ಅಪರಾಧವಾಗಿದ್ದು, ಹಿರಿಯರು ಮತ್ತು ಸಮಾಜದ ಪ್ರಮುಖರು ಬಾಲಕಾರ್ಮಿಕ ಪದ್ಧತಿಗೆ ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು. ಮಕ್ಕಳ ಬೆಳವಣಿಗೆಗೆ ಪೂರಕವಾದ ಮತ್ತು ಅನುಕೂಲಕರವಾದ ವಾತಾವರಣವನ್ನು ಸೃಷ್ಟಿಸುವ ಮೂಲಕ ಒಂದು 'ಸ್ವಸ್ಥ ಸಮಾಜ'ವನ್ನು ನಿರ್ಮಿಸಬೇಕಾದ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು.

ಮಕ್ಕಳು ಬೇರೆ ಯಾವುದೇ ಕಡೆಗೆ ಗಮನ ಹರಿಸದೆ ಕೇವಲ ಶಿಕ್ಷಣ, ಕ್ರೀಡೆ ಹಾಗೂ ಸೃಜನಶೀಲ ಚಟುವಟಿಕೆಗಳ ಕಡೆಗೆ ಹೆಚ್ಚಿನ ಗಮನ ನೀಡಬೇಕು. ಕೆಲವೊಮ್ಮೆ ನಿರಂತರ ಓದು ಬೇಸರ ತರಿಸಬಹುದು, ಆದರೆ ಶಿಕ್ಷಣವೇ ನಮ್ಮ ಭವಿಷ್ಯವನ್ನು ರೂಪಿಸುವ ಏಕೈಕ ಶಕ್ತಿ. ಓದು ಎಂದರೆ ಕೇವಲ ಪುಸ್ತಕ ಹಿಡಿದು ಕುಳಿತುಕೊಳ್ಳುವುದಲ್ಲ, ಅದು ವ್ಯಕ್ತಿತ್ವದ ಒಟ್ಟಾರೆ ಬೆಳವಣಿಗೆಗೆ ಕಾರಣವಾಗಬೇಕು. ಶಿಕ್ಷಣವು ಮನುಷ್ಯನ ವ್ಯಕ್ತಿತ್ವವನ್ನು ಸುಂದರವಾಗಿ ರೂಪಿಸುತ್ತದೆ. ಹಾಗಾಗಿ ವಿದ್ಯಾರ್ಥಿಗಳು ತಮ್ಮ ಗಮನ ಬೇರೆಡೆಗೆ ಹರಿಯದಂತೆ ಜಾಗ್ರತೆ ವಹಿಸಿ, ಶಿಕ್ಷಣದ ಮಹತ್ವವನ್ನು ಅರಿತು ಮುನ್ನಡೆಯಬೇಕು ಎಂದು ಕರೆ ನೀಡಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನೆ ಅವರು ಮಾತನಾಡಿ, ಬಾಲಕಾರ್ಮಿಕ ಪದ್ಧತಿಯನ್ನು ಕೇವಲ ಸರ್ಕಾರದ ಪ್ರಯತ್ನಗಳಿಂದ ಮಾತ್ರ ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾಧ್ಯವಿಲ್ಲ. ಸಾರ್ವಜನಿಕರು, ತರಕಾರಿ ಮಾರುಕಟ್ಟೆ, ಗ್ಯಾರೇಜ್, ಹೋಟೆಲ್, ಇಟ್ಟಂಗಿ ಭಟ್ಟಿ, ಕೋಳಿಫಾರಂ, ಹಣ್ಣಿನ ಅಂಗಡಿ ಅಥವಾ ಇತರೆಡೆಗಳಲ್ಲಿ ಸಣ್ಣ ವಯಸ್ಸಿನ ಮಕ್ಕಳು ಕೆಲಸ ಮಾಡುತ್ತಿರುವುದನ್ನು ಕಂಡರೆ ತಕ್ಷಣವೇ 1098 ಸಹಾಯವಾಣಿಗೆ ಕರೆ ಮಾಡಿ ಮಾಹಿತಿ ನೀಡಬೇಕು. ಪ್ರಜೆಗಳಾದ ನಾವೆಲ್ಲರೂ ಸರ್ಕಾರದ ಒಂದು ಭಾಗವಾಗಿದ್ದು, ಈ ಸಾಮಾಜಿಕ ಪಿಡುಗನ್ನು ತೊಡೆದುಹಾಕಲು ಕೈಜೋಡಿಸಬೇಕು ಎಂದು ಕರೆ ನೀಡಿದರು.

ಬಾಲಕಾರ್ಮಿಕ ಪದ್ಧತಿಯು ಕೇವಲ ಒಂದು ಮಗುವಿನ ಭವಿಷ್ಯವನ್ನು ಹಾಳು ಮಾಡುವುದಷ್ಟೇ ಅಲ್ಲ, ಇಡೀ ದೇಶದ ಪ್ರಗತಿಗೆ ದೊಡ್ಡ ಮಾರಕವಾಗಿದೆ. ಬಾಲಕಾರ್ಮಿಕರನ್ನು ಹೊಂದಿರುವ ದೇಶವು ಎಂದಿಗೂ ಮುನ್ನಡೆಯಲು ಸಾಧ್ಯವಿಲ್ಲ. 130 ಕೋಟಿಗೂ ಅಧಿಕ ಜನಸಂಖ್ಯೆ, ವೈವಿಧ್ಯಮಯ ಆಚಾರ–ವಿಚಾರಗಳು ಹಾಗೂ ಸುಮಾರು 2300 ಕ್ಕೂ ಹೆಚ್ಚು ಭಾಷೆಗಳನ್ನು ಹೊಂದಿರುವ ನಮ್ಮ ದೇಶದಲ್ಲಿ, ಎಲ್ಲೆಡೆ ತಲುಪಿ ಬದಲಾವಣೆ ತರುವುದು ಸರ್ಕಾರ ಮಾತ್ರವೇ ಆಗಿದೇ ನಾಗರಿಕರ ಕರ್ತವ್ಯವೂ ಪ್ರಮುಖವಾಗಿದೆ ಎಂದರು.

ನಮ್ಮ ಸಂವಿಧಾನವು 14 ವರ್ಷದೊಳಗಿನ ಮಕ್ಕಳಿಗೆ ಉಚಿತ ಶಿಕ್ಷಣದ ಹಕ್ಕನ್ನು ನೀಡಿದೆ. ಅಂತಹ ಮಕ್ಕಳಿಗೆ ವಸತಿ ಶಾಲೆಗಳ ಸೌಕರ್ಯವೂ ಇದೆ. ಆದಾಗ್ಯೂ, ಪೋಷಕರಲ್ಲಿ ಅರಿವಿನ ಕೊರತೆಯಿಂದಾಗಿ ಮಕ್ಕಳು ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ. ಪೋಷಕರಲ್ಲಿ ಶಿಕ್ಷಣದ ಮಹತ್ವದ ಬಗ್ಗೆ ಅರಿವು ಮೂಡಿಸುವುದು ಇಂದಿನ ತುರ್ತು ಅಗತ್ಯವಾಗಿದೆ ಎಂದರು.

ಬಳ್ಳಾರಿ ಉಪ ವಿಭಾಗ ಕಾರ್ಮಿಕ ಅಧಿಕಾರಿ ಸಿದ್ದಪ್ಪ ಜಿ. ಖೈನೂರ ಅವರು ಮಾತನಾಡಿ, 2025–26ರ ಸಾಲಿನಲ್ಲಿ ಜಿಲ್ಲೆಯಾದ್ಯಂತ ಕನಿಷ್ಠ 32 ಸಂಸ್ಥೆಗಳ ಮೇಲೆ ದಾಳಿ ನಡೆಸಿ, ಮಾಲೀಕರಿಗೆ ತಿಳಿಹೇಳುವುದರ ಜೊತೆಗೆ ದಂಡ ವಿಧಿಸಿ, ಪೊಲೀಸ್ ಇಲಾಖೆಯ ಮುಖಾಂತರ ಎಫ್‌ಐಆರ್ ದಾಖಲಿಸಿ ಕಾನೂನು ಕ್ರಮ ಜರುಗಿಸಲಾಗಿದೆ. ಈ ದಾಳಿಗಳ ಸಂದರ್ಭದಲ್ಲಿ ಒಟ್ಟು 58 ಬಾಲಕಾರ್ಮಿಕರನ್ನು ರಕ್ಷಿಸಲಾಗಿದೆ. ರಕ್ಷಿಸಲ್ಪಟ್ಟ ಎಲ್ಲಾ 58 ಮಕ್ಕಳಿಗೆ ಸೂಕ್ತ ಪುನರ್ವಸತಿ ಕಲ್ಪಿಸಲಾಗಿದೆ. ಈ ಹಿಂದೆ ಅವರು ಯಾವ ಶಾಲೆಗಳಲ್ಲಿ ಓದುತ್ತಿದ್ದರೋ, ಅಲ್ಲಿಗೇ ಮತ್ತೆ ಸೇರಿಸಿ ಅವರ ವಿದ್ಯಾಭ್ಯಾಸ ಮುಂದುವರೆಯುವಂತೆ ನೋಡಿಕೊಳ್ಳಲಾಗಿದೆ. ಅಲ್ಲದೆ, ಮಕ್ಕಳ ಪೋಷಕರನ್ನು ಕರೆಸಿ ಆಪ್ತ ಸಮಾಲೋಚನೆ ನಡೆಸಿ, ಯಾವುದೇ ಕಾರಣಕ್ಕೂ ಮಕ್ಕಳನ್ನು ಮತ್ತೆ ಇಂತಹ ಅಪಾಯಕಾರಿ ಕೆಲಸಗಳಿಗೆ ಕಳುಹಿಸದಂತೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಲಾಗಿದೆ ಎಂದು ಹೇಳಿದರು.

# ಆಂಧ್ರಪ್ರದೇಶ ಹೈಕೋರ್ಟ್ ಮುಖ್ಯ ನ್ಯಾಯಾಧೀಶೆ ಲಿಸಾ ಗಿಲ್ ತಿರುಮಲಕ್ಕೆ



ಆಂಧ್ರಪ್ರದೇಶ ಹೈಕೋರ್ಟ್‌ನ ಮುಖ್ಯ ನ್ಯಾಯಾಧೀಶೆ ಲಿಸಾ ಗಿಲ್ ಅವರು ಶುಕ್ರವಾರ ತಿರುಮಲ ಶ್ರೀ ವೆಂಕಟೇಶ್ವರ ಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿದರು. ದೇವಾಲಯಕ್ಕೆ ಆಗಮಿಸಿದ ಅವರನ್ನು ಟಿಟಿಡಿ ಇಒ ಮುದ್ದಾದ ರವಿಚಂದ್ರ, ಹೆಚ್ಚುವರಿ ಇಒ ಸಿ.ಎಚ್. ವೆಂಕಯ್ಯ ಚೌಧರಿ ಮತ್ತು ಸಿವಿಎಸ್‌ಒ ಮುರಳೀಕೃಷ್ಣ ಅವರು ಸ್ವಾಗತಿಸಿದರು, ದರ್ಶನದ ನಂತರ, ವಲಯದ ನಾಯಕರು ಮಂಟಪದಲ್ಲಿ ಅವರಿಗೆ ವೈದಿಕ ಆಶೀರ್ವಾದ ನೀಡಿದರು, ಆದರೆ ಆಂಧ್ರಪ್ರದೇಶದ ಇಒ ಮತ್ತು ಹೆಚ್ಚುವರಿ ಇಒ ಅವರ ತೀರ್ಥ ಪ್ರಸಾದ ಮತ್ತು ಭಾವಚಿತ್ರವನ್ನು ನೀಡಿದರು.

# ತಿರುಪತಿ ತಿಮ್ಮಪ್ಪನ ದರ್ಶನ ಪಡೆದ ರಿಲಯನ್ಸ್ ಅಧಿಪತಿ ಮುಕೇಶ್ ಅಂಬಾನಿ

**ತಿರುಪತಿ, ಜೂ.12:** ಜಗತ್ತಿನ ಪ್ರಸಿದ್ಧ ದೇವಸ್ಥಾನವೆಂದೇ ಹೆಸರುವಾಸಿಯಾದ ತಿರುಪತಿ ತಿಮ್ಮಪ್ಪನ ದರ್ಶನ ಪಡೆದ ರಿಲಯನ್ಸ್ ಅಧಿಪತಿ ಮುಕೇಶ್ ಅಂಬಾನಿ ಮತ್ತು ಮಗ ಅನಂತ ಅಂಬಾನಿ, ಸೊಸೆ ರಾಧಿಕಾ ಮರ್ಚೆಂಟ್ ವೆಂಕಟೇಶ್ವರ ಸ್ವಾಮಿಗೆ ಅಭಿಷೇಕ ನೆರವೇರಿಸಿ, ದರ್ಶನ ಪಡೆದು ಹರಕೆಯನ್ನು ತೀರಿಸಿದ್ದಾರೆ ಎಂದು ದೇವಸ್ಥಾನದ ಮಂಡಳಿಯವರು ತಿಳಿಸಿದ್ದಾರೆ. ಅಂಬಾನಿ ಅವರಿಗೆ ಟಿಟಿಡಿ ವತಿಯಿಂದ ಗೌರವಿಸಿ ಸನ್ಮಾನಿಸಿದರು.



# ಒಳ್ಳೆಯ ಮನುಷ್ಯ ಆಗುವುದೇ ನಿಜವಾದ ಯಶಸ್ಸು: ಬಸವರಾಜ ದೇಶಮುಖ



**ಬೀದರ, ಜೂ. 12:** ಪ್ರಸ್ತುತ ಶೈಕ್ಷಣಿಕ ಶ್ರೇಷ್ಠತೆ ಬಹಳ ಮುಖ್ಯವಾಗಿದೆ. ಆದರೆ ನಿಜವಾದ ಯಶಸ್ಸು ಒಳ್ಳೆಯ ಮನುಷ್ಯ ಆಗುವುದರಲ್ಲಿದೆ. ಶಿಕ್ಷಣ ವೆಂದರೆ ಸಂಸ್ಕಾರ, ಜ್ಞಾನ ಪಡೆಯುವುದಾಗಿದ್ದು, ಇವುಗಳನ್ನು ಪಡೆದವರು ಒಳ್ಳೆಯ ಮನುಷ್ಯ ರಾಗಬೇಕು. ಆಗ ಮಾತ್ರ ಶಿಕ್ಷಣ ಪಡೆದಿರುವುದಕ್ಕೆ ಮಹತ್ವ ಬರುತ್ತದೆ. ವಿದ್ಯೆ ವಿನಯ ಎನ್ನುತ್ತರೆ. ವಿನಯದಿಂದ ಮುನುಷ್ಯ ದೊಡ್ಡವನಾಗುತ್ತಾನೆ ಎಂದು ಶರಣಬಸವೇಶ್ವರ ವಿದ್ಯಾ ವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ಹೇಳಿದರು.

ಬೀದರ್ ತಾಲ್ಲೂಕಿನ ಗೋರನಳ್ಳಿ ಸಮೀಪದ ಲಿಂಗರಾಜ ಅಪ್ಪ ಎಂಜಿನಿಯರಿಂಗ್ ಕಾಲೇಜಿನಲ್ಲಿ ನಡೆದ ಪದವಿ ಪ್ರದಾನ ಸಮಾರಂಭದಲ್ಲಿ 154 ವಿದ್ಯಾರ್ಥಿಗಳಿಗೆ ಸ್ನಾತಕ ಪದವಿ, 24 ವಿದ್ಯಾರ್ಥಿಗಳಿಗೆ ಎಂ.ಟೆಕ್ ಹಾಗೂ 54 ವಿದ್ಯಾರ್ಥಿಗಳಿಗೆ ಎಂ.ಬಿ.ಎ. ಪದವಿ ಪ್ರದಾನ ಮಾಡಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಹಿಸಿದ್ದ ಕಾಲೇಜು ನಿರ್ದೇಶಕರೂ ಆದ ಶರಣಬಸಪ್ಪ ದೇಶಮುಖ, ಪ್ರಸ್ತುತ ದಿನಗಳಲ್ಲಿ ಶಿಕ್ಷಣ ಪಡೆಯದಿರುವುದು ಮನುಷ್ಯತ್ವ ಕಳೆದುಕೊಂಡಂತೆ. ಆದ್ದರಿಂದ ಶಿಕ್ಷಣ ಶ್ರೇಷ್ಠತೆ ಸಂಕೇತ ವಾಗಿದೆ. ಹಣ ಅಂತಸ್ತು ಎಲ್ಲರೂ ಗಳಿಸಬಹುದು. ಆದರೆ ವಿದ್ಯೆ ಮತ್ತು ವಿನಯ ಬಹಳ ಮುಖ್ಯವಗಿದೆ ಎಂಬುದನ್ನು ಅರಿಯಬೇಕು. ಲಿಂಗರಾಜ ಅಪ್ಪ ಕಾಲೇಜು ಈ ಭಾಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಉನ್ನತ ಶಿಕ್ಷಣ ನೀಡುತ್ತಿದೆ ಎಂದು ತಿಳಿಸಿದರು.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವ ವಿದ್ಯಾಲಯದ ಪ್ರಾದೇಶಿಕ ನಿರ್ದೇಶಕಿ ಪ್ರೊ.ಶುಭಾಂಗಿ ಡಿ.ಸಿ. ಮಾತನಾಡಿ, ಪದವೀಧರರು ಉಜ್ವಲ ಭವಿಷ್ಯ ಕಟ್ಟಿಕೊಳ್ಳಬೇಕು. ಸಮಾಜಕ್ಕೆ ಅರ್ಥಪೂರ್ಣ ಕೊಡುಗೆ ನೀಡಬೇಕು. ಪ್ರಾಚಾರ್ಯೆ ವಿನಿತಾ ಪಾಟೀಲ ಮಾತನಾಡಿ, ಕಾಲೇಜು ಪ್ರಸ್ತುತ ಆರು ಸ್ನಾತಕ ಪದವಿ, 4 ಸ್ನಾತಕೋತ್ತರ ಪದವಿ ಕೋರ್ಸ್‌ಗಳು ಹಾಗೂ ಎರಡು ಸಂಶೋಧನಾ ಕೇಂದ್ರಗಳನ್ನು ಹೊಂದಿದೆ. ಪದವಿ ಪಡೆಯುತ್ತಿರುವ ವಿದ್ಯಾರ್ಥಿಗಳದ್ದು 13ನೇ ಬ್ಯಾಚ್ ಆಗಿದೆ ಎಂದು ಹೇಳಿದರು.

## ಕೆಪಿಟಿಸಿಎಲ್ ಎಂಡಿ ರಾಮ್‌ಪ್ರಸಾತ್ ಮನೋಹರ್ ಸೂಚನೆ

# ಮಾರ್ಚ್ 2027ರೊಳಗೆ ಕುಷ್ಟಗಿ 400 ಕೆವಿ ವಿದ್ಯುತ್ ಉಪಕೇಂದ್ರ ಕಾಮಗಾರಿ ಪೂರ್ಣಗೊಳಿಸಿ

**ಕೊಪ್ಪಳ, ಜೂ.12:** ಉತ್ತರ ಕರ್ನಾಟಕದಲ್ಲಿ ಉತ್ಪಾದನೆಯಾಗುವ ನವೀಕರಿಸಬಹುದಾದ ಹಸಿರು ವಿದ್ಯುತ್ ಅನ್ನು ರಾಜ್ಯ ಹಾಗೂ ದೇಶದ ಇತರೆ ಭಾಗಗಳಿಗೆ ಸಮರ್ಪಕವಾಗಿ ತಲುಪಿಸುವ ನಿಟ್ಟಿನಲ್ಲಿ ಅತ್ಯಂತ ನಿರ್ಣಾಯಕವಾಗಿರುವ, ಕೊಪ್ಪಳ ಜಿಲ್ಲೆಯ ಕುಷ್ಟಗಿಯಲ್ಲಿ ನಿರ್ಮಾಣವಾಗುತ್ತಿರುವ ಬೃಹತ್ 400ಕೆವಿ (ಇಎಚ್‌ವಿ) ವಿದ್ಯುತ್ ಉಪಕೇಂದ್ರದ ಕಾಮಗಾರಿಯನ್ನು ಮಾರ್ಚ್ 2027ರೊಳಗೆ ಪೂರ್ಣಗೊಳಿಸುವಂತೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕೆಪಿಟಿಸಿಎಲ್) ದ ವ್ಯವಸ್ಥಾಪಕ ನಿರ್ದೇಶಕರಾದ ಡಾ. ವಿ. ರಾಮ್ ಪ್ರಸಾತ್ ಮನೋಹರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.



ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಈ ಬೃಹತ್ ಉಪಕೇಂದ್ರಕ್ಕೆ ವಿದ್ಯುತ್ ಸಂಪರ್ಕ ಕಲ್ಪಿಸಲು (ಸ್ಟೇಷನ್ ಚಾರ್ಜ್ ಮಾಡಲು) ಡೋಣಿ–ಕುಷ್ಟಗಿ ಫೀಡರ್ ಮಾರ್ಗವು ಅತ್ಯಂತ ಪ್ರಮುಖವಾಗಿದೆ. ಈ ಮಾರ್ಗವು ಹಸಿರು ಇಂಧನ ಸಾಗಣೆಯ ಜೀವನಾಡಿಯಾಗಿದ್ದು, ಇದು ಪೂರ್ಣಗೊಂಡರಷ್ಟೇ ಉಪಕೇಂದ್ರದ ಕಾರ್ಯಾರಂಭ ಸಾಧ್ಯವಾಗಲಿದೆ. ಆದರೆ, ಈ ಪ್ರಮುಖ ವಿದ್ಯುತ್ ಮಾರ್ಗದ ಕಾಮಗಾರಿಗೆ ಕೆಲವೆಡೆ ಮಾರ್ಗಾಧಿಕಾರ ಅಥವಾ ರೈಟ್ ಆಫ್ ವೇ ಸಮಸ್ಯೆಗಳು ಅಡ್ಡಿಯಾಗಿವೆ. ಈ ಹಿನ್ನೆಲೆಯಲ್ಲಿ ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕರಾದ ಡಾ. ರಾಮ್ ಪ್ರಸಾತ್ ಮನೋಹರ್ ಕೊಪ್ಪಳ ಜಿಲ್ಲೆಯ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅವರೊಂದಿಗೆ ಉನ್ನತ ಮಟ್ಟದ ಸಮನ್ವಯ ಸಭೆ ನಡೆಸಿದರು. ಪ್ರಸರಣ ಮಾರ್ಗಕ್ಕೆ ಎದುರಾಗಿರುವ ಎಲ್ಲಾ ಅಡತಡೆಗಳನ್ನು ನಿವಾರಿಸಲು ಎಂಜಿನಿಯರಿಂಗ್ ತಂಡಗಳಿಗೆ 3 ತಿಂಗಳ ಗಡುವು ನೀಡಿದ ಅವರು, ಭೂಮಿ ಮತ್ತು RoW ಸಮಸ್ಯೆಗಳನ್ನು ತ್ವರಿತವಾಗಿ ಬಗೆಹರಿಸಲು ಅಗತ್ಯವಿರುವ ಎಲ್ಲಾ ಆಡಳಿತಾತ್ಮಕ ಮತ್ತು ಪೊಲೀಸ್ ಭದ್ರತಾ ಸಹಕಾರವನ್ನು ಒದಗಿಸುವಂತೆ ಜಿಲ್ಲಾಡಳಿತಕ್ಕೆ ಸೂಚಿಸಿದರು.

ಈ ಹೊಸ ಉಪಕೇಂದ್ರವು ಸ್ಥಳೀಯ ಸೌರ ಮತ್ತು ಪವನ ವಿದ್ಯುತ್ ಸ್ಥಾವರಗಳಿಂದ ಉತ್ಪಾದನೆಯಾಗುವ ಬೃಹತ್ ಪ್ರಮಾಣದ ಹಸಿರು ಇಂಧನವನ್ನು ಸುಲಭವಾಗಿ ರಾಜ್ಯದ ಮುಖ್ಯ ಗ್ರಿಡ್‌ಗೆ ರವಾನಿಸುವ ಹೆಬ್ಬಾಗಿಲಾಗಿ ಕಾರ್ಯನಿರ್ವಹಿಸಲಿದೆ. ಉಪಕೇಂದ್ರದ ಕಾಮಗಾರಿಗಳು ಉತ್ತಮ ವೇಗದಲ್ಲಿ ಸಾಗುತ್ತಿವೆ. ಆದರೆ, ಫೀಡರ್ ಮಾರ್ಗವಿಲ್ಲದೆ ಸ್ಟೇಷನ್ ಕಾರ್ಯನಿರ್ವಹಿಸಲು ಸಾಧ್ಯವಿಲ್ಲ. ಹಸಿರು ಇಂಧನ ಸಾಗಣೆಗೆ ಡೋಣಿಯಿಂದ ಕುಷ್ಟಗಿ ವಿದ್ಯುತ್ ಮಾರ್ಗವೇ ಜೀವಾಳ. ಮುಂದಿನ ಮೂರು ತಿಂಗಳೊಳಗೆ ಸ್ಥಳೀಯವಾಗಿ ಎದುರಾಗಿರುವ ಎಲ್ಲಾ ಖಿಂಘ ಸಮಸ್ಯೆಗಳನ್ನು ಬಗೆಹರಿಸಲು ನಾವು ನಿಗಾ ವಹಿಸಲಿದ್ದೇವೆ. ಈ ನಿಟ್ಟಿನಲ್ಲಿ ಅಗತ್ಯ ಬೆಂಬಲ ನೀಡುವಂತೆ ಕೊಪ್ಪಳ ಡಿಸಿ ಮತ್ತು ಎಸ್‌ಪಿ ಅವರಿಗೆ ಸೂಚಿಸಲಾಗಿದೆ. ಜಿಲ್ಲಾಡಳಿತದೊಂದಿಗೆ ಜಂಟಿಯಾಗಿ ಕಾರ್ಯನಿರ್ವಹಿಸುವ ಮೂಲಕ ಮಾರ್ಚ್ 2027ರೊಳಗೆ ಸಂಪೂರ್ಣ ವ್ಯವಸ್ಥೆಯನ್ನು ಸಜ್ಜುಗೊಳಿಸಲಾಗುವುದು ಎಂದು ಕೆಪಿಟಿಸಿಎಲ್ ನ ವ್ಯವಸ್ಥಾಪಕ ನಿರ್ದೇಶಕರಾದ ಡಾ. ವಿ. ರಾಮ್ ಪ್ರಸಾತ್ ಮನೋಹರ್ ಅವರು ತಿಳಿಸಿದ್ದಾರೆ.

# ಅಮೆರಿಕ–ಇರಾನ್ ನಡುವಿನ ಒಪ್ಪಂದಕ್ಕೆ ಶೀಘ್ರದಲ್ಲೇ ಸಹಿ: ಟ್ರಂಪ್

ವಾಷಿಂಗ್ಟನ್, ಜೂನ್ 12: ಹಾರ್ಮುಜ್ ಜಲಸಂಧಿಯನ್ನು ಸುಂಕವಿಲ್ಲದೆ ಪುನಃ ತೆರೆಯಲು, ಟೆಹ್ರಾನ್ ಮೇಲಿನ ನಿರ್ಬಂಧಗಳನ್ನು ಹಂತ ಹಂತವಾಗಿ ಸಡಿಲಿಸಲು ಮತ್ತು ಪ್ರಸ್ತುತ ಕದನ ವಿರಾಮವನ್ನು 60 ದಿನಗಳವರೆಗೆ ವಿಸ್ತರಿಸಲು ಅಮೆರಿಕ ಮತ್ತು ಇರಾನ್ ನಡುವಿನ ಕರಡು ಒಪ್ಪಂದಕ್ಕೆ (ಎಂಓಯು) ಶೀಘ್ರದಲ್ಲೇ ಸಹಿ ಹಾಕಲಾಗುವುದು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಚರ್ಚೆಗಳನ್ನು ತಿಳಿದಿರುವ ಅಧಿಕಾರಿಗಳ ಪ್ರಕಾರ, ಪ್ರಸ್ತಾವಿತ ಒಪ್ಪಂದವು ಇರಾನ್‌ನ ಪರಮಾಣು ಕಾರ್ಯಕ್ರಮಕ್ಕೆ ಸಂಬಂಧಿಸಿದ ವಿಶಾಲ ಮಾತುಕತೆಗಳನ್ನು ಸುಗಮಗೊಳಿಸಲು ಒಂದು ಚೌಕಟ್ಟನ್ನು ರಚಿಸುತ್ತದೆ ಮತ್ತು ಲೆಬನಾನ್ ಸೇರಿದಂತೆ ಪ್ರಾದೇಶಿಕ ಉದ್ವಿಗ್ನತೆಯನ್ನು ಸ್ಥಿರಗೊಳಿಸಲು ಪ್ರಯತ್ನಿಸುತ್ತದೆ. ಮಧ್ಯಸ್ಥಿಕೆ ವಹಿಸುವ ದೇಶಗಳಲ್ಲಿ ಒಂದಾದ ರಾಜತಾಂತ್ರಿಕ ಮತ್ತು ಅಮೆರಿಕದ ಅಧಿಕಾರಿಯ ಪ್ರಕಾರ, ಎರಡೂ ಕಡೆಯವರು ತಾತ್ವಿಕವಾಗಿ ಒಪ್ಪಿಕೊಂಡಿರುವ ಪಠ್ಯಕ್ಕೆ ಇನ್ನೂ ಅಂತಿಮ ಅನುಮೋದನೆಯ ಅಗತ್ಯವಿದೆ. ಪ್ರಮುಖ ರಾಜಕೀಯ ಸಹಿಗಳು ಬಾಕಿ ಉಳಿದಿದ್ದರೂ, ವಾಷಿಂಗ್ಟನ್ ಮತ್ತು ಟೆಹ್ರಾನ್ "ಒಪ್ಪಂದದ ಪಠ್ಯಕ್ಕೆ ಒಪ್ಪಿಕೊಂಡಿವೆ" ಎಂದು ರಾಜತಾಂತ್ರಿಕ ಹೇಳಿದರು. ಈ ಒಪ್ಪಂದಕ್ಕೆ ಹಿರಿಯ ಇರಾನಿನ ಅಧಿಕಾರಿಗಳಿಂದ ಅನುಮೋದನೆ ದೊರೆತಿದೆ ಆದರೆ ಸುಪ್ರೀಂ ಲೀಡರ್ ಮೊಜ್ತಾಬಾ ಖಮೇನಿ ಅವರು ಇನ್ನೂ ಔಪಚಾರಿಕವಾಗಿ ಅನುಮೋದನೆ ನೀಡಿಲ್ಲ ಎಂದು ಈ ಪ್ರಕ್ರಿಯೆಯ ಬಗ್ಗೆ ತಿಳಿದಿರುವ ಮೂಲಗಳು ತಿಳಿಸಿವೆ, ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರರು ಟೆಹ್ರಾನ್ "ಇನ್ನೂ ಅಂತಿಮ ನಿರ್ಧಾರಕ್ಕೆ ಬಂದಿಲ್ಲ" ಎಂದು ದೃಢಪಡಿಸಿದ್ದಾರೆ. ತೈಲ ನಿರ್ಬಂಧಗಳನ್ನು ತೆಗೆದುಹಾಕಲು ಅಮೆರಿಕದ ಬದ್ಧತೆಯನ್ನು ಕರಡು ಒಪ್ಪಂದವು ಒಳಗೊಂಡಿದೆ ಮತ್ತು ಇರಾನ್ನ ಸ್ಥಗಿತಗೊಂಡ ನಿಧಿಯ ಅರ್ಧದಷ್ಟು ಬಿಡುಗಡೆಯಾಗುವವರೆಗೆ ಮತ್ತು ಅಮೆರಿಕದ ನೌಕಾ ದಿಗ್ಬಂಧನ ಕೊನೆಗೊಳ್ಳುವವರೆಗೆ ಅಂತಿಮ ಮಾತುಕತೆಗಳು ಪ್ರಾರಂಭವಾಗುವುದಿಲ್ಲ ಎಂದು ಇರಾನ್ನ ಮೆಹರ್ ಸುದ್ದಿ ಸಂಸ್ಥೆ ವರದಿ ಮಾಡಿತ್ತು.



## ಸಹಿ ಸಮಾರಂಭ

ಸಂಭವನೀಯ ಸಹಿ ಸಮಾರಂಭಕ್ಕೆ ಸಿದ್ಧತೆಗಳು ನಡೆಯುತ್ತಿರುವಂತೆ ಕಂಡುಬರುತ್ತಿದೆ. ಒಪ್ಪಂದವು ಅಂತಿಮಗೊಂಡರೆ, ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಸೇರಿದಂತೆ ಹಿರಿಯ ಅಮೆರಿಕದ ಅಧಿಕಾರಿಗಳಿಗೆ ಪ್ರಯಾಣ ವ್ಯವಸ್ಥೆಗಳನ್ನು, ಬೆಂಬಲಿಸುವ ಸಾಧನಗಳನ್ನು ಹೊತ್ತ ನಾಲ್ಕು ಯುಎಸ್ ವಾಯುಪಡೆಯ ಸಿ –17 ಸಾರಿಗೆ ವಿಮಾನಗಳು ಗುರುವಾರ ಯುರೋಪ್‌ಗೆ ಹೊರಟವು. ಕತಾರ್ ಮತ್ತು ಪಾಕಿಸ್ತಾನ ಜಂಟಿಯಾಗಿ ಮಧ್ಯಸ್ಥಿಕೆ ವಹಿಸಿದ ಈ ಒಪ್ಪಂದವನ್ನು ಎರಡೂ ಕಡೆಯವರು ಅಂತಿಮವಾಗಿ ಅನುಮೋದಿಸಿ ಪತ್ರಕ್ಕೆ ಸಹಿ ಹಾಕಿದರೆ ಇಸ್ಲಾಮಾಬಾದ್ ಒಪ್ಪಂದ ಎಂದು ಕರೆಯುವ ನಿರೀಕ್ಷೆಯಿದೆ. "ಒಪ್ಪಂದಕ್ಕೆ ಅಂತಿಮ ಸ್ಪರ್ಶ ನೀಡಲು ಮತ್ತು ಸಹಿ ಸಮಾರಂಭಕ್ಕೆ ದಿನಾಂಕವನ್ನು ನಿಗದಿಪಡಿಸಲು ನಾವು ಪಕ್ಷಗಳೊಂದಿಗೆ ಕೆಲಸ ಮಾಡುತ್ತಿದ್ದೇವೆ" ಎಂದು ರಾಜತಾಂತ್ರಿಕರು ಹೇಳಿದರು.

### ಎಂಓಯು ಪ್ರಮುಖ ಅಂಶಗಳು:

ಎಂಓಯುನ ಕೇಂದ್ರ ನಿಬಂಧನೆಗಳಲ್ಲಿ ಒಂದು, ಮೊದಲನೆಯದಾಗಿ, ಇರಾನ್ ಎಂದಿಗೂ ಪರಮಾಣು ಶಸ್ತ್ರಾಸ್ತ್ರವನ್ನು ಪಡೆಯದಿರಲು ಒಪ್ಪಿಕೊಳ್ಳಬೇಕು ಮತ್ತು ಅದರ ಪುಷ್ಟೀಕರಿಸಿದ ಯುರೇನಿಯಂ ಸುತ್ತಲಿನ ಬಿಕ್ಕಟ್ಟನ್ನು ಪರಿಹರಿಸಬೇಕು. ಚರ್ಚೆಯಲ್ಲಿರುವ ಒಂದು ಆಯ್ಕೆಯೆಂದರೆ, ಇರಾನ್ನ ಪುಷ್ಟೀಕರಿಸಿದ ಯುರೇನಿಯಂ ಅನ್ನು ವಿದೇಶಕ್ಕೆ ವರ್ಗಾಯಿಸುವ ಬದಲು ಅಂತರರಾಷ್ಟ್ರೀಯ ಮೇಲ್ವಿಚಾರಣೆಯಲ್ಲಿ ದೇಶದೊಳಗೆ ಮಿಶ್ರಣ ಮಾಡುವುದು. ಒಔಗ ಕುರಿತು ಕಡಿಮೆ ತಾಂತ್ರಿಕ ಮಾತುಕತೆಗಳು ಎಷ್ಟು ಕಷ್ಟಕರವಾಗಿದೆ ಎಂಬುದನ್ನು ಗಮನಿಸಿದರೆ ಎರಡನೇ ಒಪ್ಪಂದವು ಅನಿಶ್ಚಿತ ನಿರೀಕ್ಷೆಯೊಂದಿಗೆ ತಲುಪಿದರೆ ಮಾತ್ರ ಇರಾನ್‌ನ ಪರಮಾಣು ಕಾರ್ಯಕ್ರಮದ ಕುರಿತು ಯಾವುದೇ ಕ್ರಮಗಳು ನಡೆಯುತ್ತವೆ. ಈ ಒಪ್ಪಂದವು "ಎಲ್ಲಾ ಪರಮಾಣು ಸಮಸ್ಯೆಗಳ ವಿವರಗಳಿಗೆ ಹೋಗುತ್ತದೆ" ಮತ್ತು "ಅಮೆರಿಕದ ಎಲ್ಲಾ ಅವಶ್ಯಕತೆಗಳನ್ನು ಪೂರೈಸುತ್ತದೆ" ಎಂದು ರಾಜತಾಂತ್ರಿಕರು ಹೇಳಿದ್ದಾರೆ.

### ಹಾರ್ಮುಜ್ ಜಲಸಂಧಿಯನ್ನು ಮುಕ್ತಗೊಳಿಸಬೇಕು:

"ಕರಡು ಹಾರ್ಮುಜ್ ಜಲಸಂಧಿಯನ್ನು ತಕ್ಷಣವೇ ಪುನಃ ತೆರೆಯಬೇಕು ಮತ್ತು ಪ್ರಮುಖ ಜಲಮಾರ್ಗದಲ್ಲಿನ ಎಲ್ಲಾ ಸಾಗಣೆಯನ್ನು 30 ದಿನಗಳಲ್ಲಿ ಯುದ್ಧಪೂರ್ವ ಮಟ್ಟಕ್ಕೆ ಹಿಂತಿರುಗಿಸಬೇಕು ಎಂದು ಮತ್ತಷ್ಟು ಕರೆ ನೀಡುತ್ತದೆ. ಇರಾನ್ ವಾಣಿಜ್ಯ ಹಡಗುಗಳ ಮೇಲಿನ ತನ್ನ ಶುಲ್ಕ ವ್ಯವಸ್ಥೆಯನ್ನು ಸ್ಥಗಿತಗೊಳಿಸಲು ಸಹ ಒಪ್ಪಿಕೊಳ್ಳುತ್ತದೆ, ಆದರೆ ವಾಷಿಂಗ್ಟನ್ ತನ್ನ ಸಮುದ್ರ ದಿಗ್ಬಂಧನವನ್ನು ತೆಗೆದುಹಾಕಲು ಒಪ್ಪುತ್ತದೆ.

### ನಿರ್ಬಂಧಗಳ ವಿನಾಯಿತಿಗಳು:

ಅಮೆರಿಕ ಅಧಿಕಾರಿಗಳು ಈ ಹಿಂದೆ ಇರಾನ್ ಆರಂಭಿಕ 60 ದಿನಗಳ ಅವಧಿಗೆ ತೈಲ ರಫ್ತಿಗೆ ಅವಕಾಶ ನೀಡುವ ತಾತ್ಕಾಲಿಕ ನಿರ್ಬಂಧಗಳ ವಿನಾಯಿತಿಗಳನ್ನು ಪಡೆಯಬಹುದು ಎಂದು ಸೂಚಿಸಿದ್ದರು. ಮತ್ತಷ್ಟು ನಿರ್ಬಂಧಗಳ ಪರಿಹಾರವು ಒಪ್ಪಂದದ ಅನುಷ್ಠಾನ ಮತ್ತು ನಂತರದ ಮಾತುಕತೆಗಳಲ್ಲಿನ ಪ್ರಗತಿಯನ್ನು ಅವಲಂಬಿಸಿರುತ್ತದೆ.

### ಘನೀಕೃತ ಸ್ವತ್ತುಗಳ ಬಿಡುಗಡೆ:

ಇನ್ನೂ ಪರಿಹರಿಸಬೇಕಾದ ಮತ್ತೊಂದು ಪ್ರಮುಖ ವಿಷಯವೆಂದರೆ ವಿದೇಶಗಳಲ್ಲಿ ಖಾತೆ ಸ್ಥಗಿತಗೊಂಡ ಇರಾನಿನ ಸ್ವತ್ತುಗಳಲ್ಲಿ ಶತಕೋಟಿ ಡಾಲರ್‌ಗಳ ಭವಿಷ್ಯ. ಇರಾನ್ ತನ್ನ ಕೆಲವು ನಿಧಿಗಳಿಗೆ ತಕ್ಷಣದ ಪ್ರವೇಶವನ್ನು ಕೋರಿದ್ದರೂ, ಯಾವುದೇ ಬಿಡುಗಡೆಯು ಭಾಗಗಳಲ್ಲಿ ಸಂಭವಿಸಬೇಕು ಮತ್ತು ಅನುಸರಣೆಗೆ ಸಂಬಂಧಿಸಿರಬೇಕು ಎಂದು ಯುಎಸ್ ವಾದಿಸಿತು. ಅಮೆರಿಕದ ಅಧಿಕಾರಿಗಳ ಪ್ರಕಾರ, ಇರಾನ್ ಮತ್ತು ಕತಾರ್ ಮಾನವೀಯ ಖರೀದಿಗಳಿಗಾಗಿ ಕತಾರ್‌ನಲ್ಲಿ ಸ್ಥಗಿತಗೊಂಡಿರುವ ತನ್ನ ನಿಧಿಯ ಒಂದು ಭಾಗವನ್ನು ಟೆಹ್ರಾನ್‌ಗೆ ಪ್ರವೇಶಿಸಲು ಅನುವು ಮಾಡಿಕೊಡುವ ಕಾರ್ಯವಿಧಾನದ ಬಗ್ಗೆ ಚರ್ಚಿಸಿವೆ ಎಂದು ವರದಿಯಾಗಿದೆ.

## ಅಮೆರಿಕ ಜೊತೆಗಿನ ಯುದ್ಧವಿರಾಮ ಒಪ್ಪಂದ ಎಂದಿಗೂ ಹತ್ತಿರವಾಗಲಿಲ್ಲ: ಅಬ್ಬಾಸ್ ಅರಘ್ಚಿ



ಮಧ್ಯಪ್ರಾಚ್ಯದಲ್ಲಿ ಯುದ್ಧವನ್ನು ಕೊನೆಗೊಳಿಸುವ ಒಪ್ಪಂದಕ್ಕೆ ಅಮೆರಿಕ ಮತ್ತು ಇರಾನ್ "ಎಂದಿಗೂ ಹತ್ತಿರವಾಗಲಿಲ್ಲ" ಎಂದು ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಶುಕ್ರವಾರ ಹೇಳಿದ್ದಾರೆ. "ಇಸ್ಲಾಮಾಬಾದ್ ಒಡಂಬಡಿಕೆ ಎಂದಿಗೂ ಹತ್ತಿರವಾಗಿರಲಿಲ್ಲ" ಎಂದು ಅರಘ್ಚಿ ತಿಳಿಸಿದ್ದಾರೆ.

ಹಿಂದಿನ ಯುಎಸ್–ಇರಾನ್ ಮಾತುಕತೆಗಳನ್ನು ಆಯೋಜಿಸಿದ್ದ ಪಾಕಿಸ್ತಾನ ರಾಜಧಾನಿಯನ್ನು ಉಲ್ಲೇಖಿಸಿ. "ಅದರ ಅಂತಿಮೀಕರಣದವರೆಗೆ, ಮಾಧ್ಯಮಗಳು ಅದರ ವಿಷಯದ ಬಗ್ಗೆ ಊಹಾಪೋಹಗಳನ್ನು ನಮೂದಿಸುವುದನ್ನು ತಡೆಯಬೇಕು" ಎಂದು ಇರಾನಿನ ಮಾಧ್ಯಮಗಳು ಒಪ್ಪಂದದ ವಿವರಗಳನ್ನು ಪ್ರಕಟಿಸಿದ ನಂತರ ಅವರು ಹೇಳಿದರು.

## ಯುರೇನಿಯಂ ಸಂರಕ್ಷಣೆ: ಅಮೆರಿಕದೊಂದಿಗೆ ಮಾತುಕತೆ ನಡೆಸಲು ಇರಾನಿನ ಅಧಿಕಾರಿಗಳ ಇಂಗಿತ

ಟೆಹ್ರಾನ್, ಜೂ.12: ಇರಾನಿನ ಸರ್ಕಾರಿ ಮಾಧ್ಯಮದ ಶುಕ್ರವಾರದ ಅಧಿಕೃತ ವರದಿಯ ಪ್ರಕಾರ, ದೇಶದ ಯುರೇನಿಯಂ ಪುಷ್ಟೀಕರಣ ಕಾರ್ಯಕ್ರಮವನ್ನು ಸಂರಕ್ಷಿಸಲು ಇರಾನಿನ ಅಧಿಕಾರಿಗಳು ಅಮೆರಿಕದೊಂದಿಗೆ ಮಾತುಕತೆ ನಡೆಸಲು ಉದ್ದೇಶಿಸಿದ್ದಾರೆ.

ಐಆರ್‌ಎನ್‌ಎ ನ್ಯೂಸ್ ಪ್ರಕಟಿಸಿದ ಕರಡು ಒಪ್ಪಂದದ ನಿಯಮಗಳ ಪ್ರಕಾರ, ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಿದ ನಂತರ ಪ್ರಸ್ತಾವಿತ 60 ದಿನಗಳ ಕದನ ವಿರಾಮ ಪ್ರಾರಂಭವಾಗುತ್ತದೆ. ಆ ಅವಧಿಯಲ್ಲಿ, ಎರಡೂ ಕಡೆಯವರು ಇರಾನ್ನ ಪರಮಾಣು ಕಾರ್ಯಕ್ರಮದ ಭವಿಷ್ಯದ ಕುರಿತು ಮಾತುಕತೆ ನಡೆಸುತ್ತಾರೆ. ಹೆಸರು ಬಹಿರಂಗಪಡಿಸದ ಇರಾನಿನ ಅಧಿಕಾರಿಗಳನ್ನು ಉಲ್ಲೇಖಿಸಿ ಐಆರ್‌ಎನ್‌ಎ, ಟೆಹ್ರಾನ್ ಯುರೇನಿಯಂ ಅನ್ನು ಉತ್ಕೃಷ್ಟಗೊಳಿಸುವ ತನ್ನ ಹಕ್ಕು ಎಂದು ವಿವರಿಸುವುದನ್ನು ಸಮರ್ಥಿಸಿಕೊಳ್ಳುವುದನ್ನು ಮುಂದುವರಿಸುತ್ತದೆ ಎಂದು ಹೇಳಿದೆ. ದೇಶದಿಂದ ತನ್ನ ಪುಷ್ಟೀಕರಿಸಿದ ವಸ್ತುಗಳ ದಾಸ್ತಾನನ್ನು ತೆಗೆದುಹಾಕುವ ಯಾವುದೇ ಬೇಡಿಕೆಯನ್ನು



ಇರಾನ್ ವಿರೋಧಿಸುತ್ತದೆ ಎಂದು ವರದಿ ಹೇಳಿದೆ. ಈ ವಿಷಯವು ಎರಡು ದೇಶಗಳ ನಡುವಿನ ಅತ್ಯಂತ ವಿವಾದಾತ್ಮಕ ವಿಷಯಗಳಲ್ಲಿ ಒಂದಾಗಿದೆ ಮತ್ತು ಆಗಾಗ್ಗೆ ಭಿನ್ನಾಭಿಪ್ರಾಯಗಳಿಗೆ ಕಾರಣವಾಗಿದೆ, ಇದು ಮಾತುಕತೆಗಳಲ್ಲಿ ಅನೇಕ ಪರಿಷ್ಕೃತ ನಿಯಮಗಳಿಗೆ ಕಾರಣವಾಗಿದೆ. ಯುದ್ಧವನ್ನು ಕೊನೆಗೊಳಿಸಲು ಒಪ್ಪಂದಕ್ಕೆ ಬರಲಾಗಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಗುರುವಾರ ಹೇಳಿದ್ದಾರೆ. ಆದಾಗ್ಯೂ, ಪ್ರಸ್ತಾವನೆಯ ಬಗ್ಗೆ ಯಾವುದೇ ಅಂತಿಮ ನಿರ್ಧಾರ ತೆಗೆದುಕೊಳ್ಳಲಾಗಿಲ್ಲ ಎಂದು ಇರಾನಿನ ಅಧಿಕಾರಿಗಳು ತಿಳಿಸಿದ್ದಾರೆ. ಮಾತುಕತೆಗಳ ಬಗ್ಗೆ ತಿಳಿದಿರುವ ಮೂಲಗಳು ಸಿಬಿಎಸ್ ನ್ಯೂಸ್‌ಗೆ ತಿಳಿಸಿದ್ದು, ಟೆಹ್ರಾನ್ ತಾತ್ವಿಕವಾಗಿ, 15 ರಿಂದ 20 ವರ್ಷಗಳ ಕಾಲ ಯುರೇನಿಯಂ ಪುಷ್ಟೀಕರಣವನ್ನು ನಿಲ್ಲಿಸಲು ಮತ್ತು ಆ ಅವಧಿಯಲ್ಲಿ ತನ್ನ ಪರಮಾಣು ಸೌಲಭ್ಯಗಳನ್ನು ಕೆಡವಲು ಒಪ್ಪಿಕೊಳ್ಳಬಹುದು.

ಐಆರ್‌ಎನ್‌ಎ ಪ್ರಕಟಿಸಿದ ಕರಡು ಚೌಕಟ್ಟಿನಲ್ಲಿ ಸಂಘರ್ಷದ ಸಮಯದಲ್ಲಿ ಯುಎಸ್ ಮತ್ತು ಇಸ್ರೇಲಿ ಮಿಲಿಟರಿ ದಾಳಿಯಿಂದ ಉಂಟಾದ ಹಾನಿಗೆ ಪರಿಹಾರಕ್ಕೆ ಸಂಬಂಧಿಸಿದ ನಿಬಂಧನೆಯೂ ಸೇರಿದೆ. ವರದಿಯ ಪ್ರಕಾರ, ಇರಾನ್ ಪರಿಹಾರವನ್ನು ಪಡೆಯಲು ಒಂದು ಕಾರ್ಯವಿಧಾನವನ್ನು ಅಭಿವೃದ್ಧಿಪಡಿಸಿದೆ ಮತ್ತು ಅದರ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಮೂರನೇ ವ್ಯಕ್ತಿಗಳಿಂದ ಖಾತರಿಗಳನ್ನು ಪಡೆದುಕೊಂಡಿದೆ. ಪ್ರಗತಿಯ ಹಕ್ಕುಗಳ ಹೊರತಾಗಿಯೂ, ಚರ್ಚೆಗಳು ನಡೆಯುತ್ತಿವೆ ಮತ್ತು ಯಾವುದೇ ಅಂತಿಮ ಒಪ್ಪಂದವನ್ನು ಇನ್ನೂ ಅನುಮೋದಿಸಲಾಗಿಲ್ಲ ಎಂದು ಟೆಹ್ರಾನ್ ಒತ್ತಾಯಿಸುತ್ತಲೇ ಇದೆ.

## ಇರಾನ್ ಅಣ್ವಸ್ತ್ರ ಪಡೆಯಲು ಬಿಡುವುದಿಲ್ಲ: ನೆತನ್ಯಾಹು ಪ್ರತಿಜ್ಞೆ

ಜೆರುಸಲೆಮ್, ಜೂ.12: ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಶುಕ್ರವಾರ ತಾವು ಪ್ರಧಾನಿಯಾಗಿರುವವರೆಗೆ "ಇರಾನ್ ಪರಮಾಣು ಶಸ್ತ್ರಾಸ್ತ್ರಗಳನ್ನು ಹೊಂದಿರುವುದಿಲ್ಲ" ಎಂದು ಪ್ರತಿಜ್ಞೆ ಮಾಡಿದ್ದಾರೆ, ಅವರು ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು "ಈ ವಿಷಯದ ಬಗ್ಗೆ ಸಂಪೂರ್ಣ ಒಪ್ಪಂದ"ದಲ್ಲಿದ್ದಾರೆ ಎಂದು ಹೇಳಿದರು. "30 ವರ್ಷಗಳಿಗೂ ಹೆಚ್ಚು ಕಾಲ, ನಾನು ಇರಾನ್‌ನ ಪರಮಾಣು ಕಾರ್ಯಕ್ರಮದ ವಿರುದ್ಧದ ಅಂತರರಾಷ್ಟ್ರೀಯ ಹೋರಾಟದ ಮುಂಚೂಣಿಯಲ್ಲಿದ್ದೇನೆ. ಈ ಹೋರಾಟ ಇಲ್ಲದಿದ್ದರೆ, ಇರಾನ್ ಬಹಳ ಹಿಂದೆಯೇ ಇಸ್ರೇಲ್ ಅನ್ನು ನಾಶಮಾಡಲು ಪರಮಾಣು ಬಾಂಬ್‌ಗಳನ್ನು ಹೊಂದುತ್ತಿತ್ತು" ಎಂದು ನೆತನ್ಯಾಹು ಹೇಳಿಕೆಯಲ್ಲಿ ತಿಳಿಸಿದ್ದಾರೆ, ಇಸ್ಲಾಮಿಕ್ ಗಣರಾಜ್ಯ "ಯಹೂದಿ ರಾಷ್ಟ್ರವನ್ನು ನಾಶಮಾಡಲು ಕೆಲಸ ಮಾಡುತ್ತಿದೆ ಮತ್ತು ಅವರು ಹಾಗೆ ಮಾಡದಂತೆ ತಡೆಯಲು ನಾನು ನನ್ನ ಜೀವನವನ್ನು ಮುಡಿಪಾಗಿಡುತ್ತಿದ್ದೇನೆ" ಎಂದು ಹೇಳಿದರು. ಇಸ್ರೇಲ್ ಪ್ರಧಾನಿ ಗುರುವಾರ ರಾತ್ರಿ ಟ್ರಂಪ್ ಅವರೊಂದಿಗೆ ಮಾತನಾಡಿದ್ದಾರೆ ಎಂದು ಇಸ್ರೇಲ್ ಪಿಎಂಒ ತಿಳಿಸಿದೆ, ಮುಂದಿನ ವಾರ ಸಹಿ ಹಾಕುವ ಸಾಧ್ಯತೆಯೊಂದಿಗೆ "ಎಲ್ಲಾ ಅಂಶಗಳ" ಕುರಿತು ಟೆಹ್ರಾನ್ನೊಂದಿಗೆ ಒಪ್ಪಂದಕ್ಕೆ ಬರಲಾಗಿದೆ ಎಂದು ಯುಎಸ್ ನಾಯಕ ಹೇಳಿದ್ದಾರೆ.



"ತಿಳುವಳಿಕಾ ಒಪ್ಪಂದದಲ್ಲಿ ಇಸ್ರೇಲ್ ಒಂದು ಪಕ್ಷವಲ್ಲದಿದ್ದರೂ, ಮಾತುಕತೆಗಳ ಮುಕ್ತಾಯದ ಅಂತಿಮ ಒಪ್ಪಂದವು ಪುಷ್ಟೀಕರಿಸಿದ ವಸ್ತುಗಳನ್ನು ತೆಗೆದುಹಾಕುವುದು, ಪುಷ್ಟೀಕರಣ ಮೂಲಸೌಕರ್ಯವನ್ನು ಕಿತ್ತುಹಾಕುವುದು, ಕ್ಷಿಪಣಿ ಉತ್ಪಾದನೆಯ ಮೇಲಿನ ಮಿತಿಗಳು ಮತ್ತು ಈ ಪ್ರದೇಶದಲ್ಲಿನ ತನ್ನ ಭಯೋತ್ಪಾದಕ ಪ್ರಾಕ್ಸಿಗಳಿಗೆ ಇರಾನ್ನ ಬೆಂಬಲವನ್ನು ನಿಲ್ಲಿಸುವುದನ್ನು ಒಳಗೊಂಡಿರುತ್ತದೆ ಎಂಬ ಅಧ್ಯಕ್ಷ ಟ್ರಂಪ್ ಅವರ ಬದ್ಧತೆಗೆ ಪ್ರಧಾನಿ ತಮ್ಮ ಮೆಚ್ಚುಗೆಯನ್ನು ವ್ಯಕ್ತಪಡಿಸಿದರು" ಎಂದು ಇಸ್ರೇಲ್ ನಾಯಕರ ಕಚೇರಿ ಹೇಳಿಕೆಯಲ್ಲಿ ತಿಳಿಸಿದೆ. ಒಪ್ಪಂದದ ಕುರಿತು ಇನ್ನೂ "ಅಂತಿಮ ತೀರ್ಮಾನ"ಕ್ಕೆ ಬಂದಿಲ್ಲ ಎಂದು ಇರಾನ್ ಸರ್ಕಾರ ಹೇಳಿದೆ, ವಿಶೇಷವಾಗಿ ಒಪ್ಪಂದದ ಕೆಲವು ಅಂಶಗಳನ್ನು ಪರಿಷ್ಕರಿಸಲು ದೇಶವು ಪ್ರಯತ್ನಿಸುತ್ತಿರುವುದರಿಂದ ಪ್ರಸ್ತುತ ಏನೂ ನಿರ್ಣಾಯಕವಾಗಿಲ್ಲ ಎಂದು ಎಚ್ಚರಿಸಿದೆ. ಇದಲ್ಲದೆ, ಇರಾನ್ ಯುದ್ಧವನ್ನು ಮುಂದುವರಿಸಬೇಕೆಂದು ಒತ್ತಾಯಿಸಿರುವ ದೇಶೀಯ ಕಠಿಣವಾದಿಗಳ ಪ್ರತಿರೋಧದಿಂದಾಗಿ ಒಪ್ಪಂದವನ್ನು ತಲುಪುವುದು ಟೆಹ್ರಾನ್‌ಗೆ ಹೆಚ್ಚು ಕಷ್ಟಕರವಾಗಿದೆ.

**ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು ಶುಕ್ರವಾರ, ತಾನು ಅಧಿಕಾರದಲ್ಲಿರುವವರೆಗೂ ಟೆಹ್ರಾನ್ ಪರಮಾಣು ಶಸ್ತ್ರಾಸ್ತ್ರಗಳನ್ನು ಪಡೆಯಲು ಇಸ್ರೇಲ್ ಅನುಮತಿಸುವುದಿಲ್ಲ ಎಂದು ಹೇಳಿದ್ದಾರೆ, ಈ ವಿಷಯದ ಬಗ್ಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ತಮ್ಮ ಸಂಪೂರ್ಣ ಒಪ್ಪಿಗೆ ಇದೆ ಎಂದು ಹೇಳಿದರು.**




ಸುಸ್ಥಿರ ಕೃಷಿ, ಆಹಾರ ಭದ್ರತೆ ಮತ್ತು ರೈತರ ಸಮೃದ್ಧಿಗಾಗಿ ಸಹಯೋಗವನ್ನು ಬೆಳೆಸುವ ಬ್ರಿಕ್ಸ್ ಕೃಷಿ ಕಾರ್ಯಪಡೆ ಸಭೆಯಲ್ಲಿ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಶುಕ್ರವಾರ ಭಾಗವಹಿಸಿದ್ದರು.

## ಕಾಂಗೋದಲ್ಲಿ ಎಬೋಲಾ ಪ್ರಕರಣ 676ಕ್ಕೆ ಏರಿಕೆ

ಕಿನ್ಶಾಸಾ, ಜೂ.12: ಕಾಂಗೋ ಪ್ರಜಾಸತ್ತಾತ್ಮಕ ಗಣರಾಜ್ಯದಲ್ಲಿ (ಆಖಅ) ದೃಢಪಡಿಸಿದ ಎಬೋಲಾ ಪ್ರಕರಣಗಳ ಸಂಖ್ಯೆ 676 ಕ್ಕೆ ಏರಿದೆ, ಇದರಲ್ಲಿ 136 ಸಾವುಗಳು ಸೇರಿವೆ, ಆರೋಗ್ಯ ಅಧಿಕಾರಿಗಳು ಸಮುದಾಯ ಪ್ರಸರಣ ಮುಂದುವರಿದಿದೆ ಮತ್ತು ಏಕಾಏಕಿ ಹಠಾತ್ ಭೌಗೋಳಿಕ ವಿಸ್ತರಣೆಯ ಅಪಾಯದ ಬಗ್ಗೆ ಎಚ್ಚರಿಸಿದ್ದಾರೆ. DRCಯ ಆರೋಗ್ಯ ಅಧಿಕಾರಿಗಳು ಗುರುವಾರ ಬಿಡುಗಡೆ ಮಾಡಿದ ಇತ್ತೀಚಿನ ಪರಿಸ್ಥಿತಿ ವರದಿಯ ಪ್ರಕಾರ, ಇಟುರಿ ಮತ್ತು ಉತ್ತರ ಕಿವು ಪ್ರಾಂತ್ಯಗಳಲ್ಲಿ ಬುಧವಾರ ಒಂಬತ್ತು ಸಾವುಗಳು ಸೇರಿದಂತೆ 41 ಹೊಸ ದೃಢಪಡಿಸಿದ ಪ್ರಕರಣಗಳು ವರದಿಯಾಗಿವೆ. ಎಬೋಲಾ ವೈರಸ್ನ ಬುಂಡಿಬುಗ್ಯೊ ತಳಿಯಿಂದ ಉಂಟಾದ ಏಕಾಏಕಿ, ಇದುವರೆಗೆ ಮೂರು ಪೂರ್ವ ಪ್ರಾಂತ್ಯಗಳಲ್ಲಿ 29 ಆರೋಗ್ಯ ವಲಯಗಳ ಮೇಲೆ ಪರಿಣಾಮ ಬೀರಿದೆ: ಇಟುರಿ, ಉತ್ತರ ಕಿವು ಮತ್ತು ದಕ್ಷಿಣ ಕಿವು ಎಂದು ಕ್ಸಿನ್ಹುವಾ ವರದಿ ಮಾಡಿದೆ. ಇತ್ತೀಚಿನ ಅಧಿಕೃತ ಮೌಲ್ಯಮಾಪನವು ದೃಢಪಡಿಸಿದ ಪ್ರಕರಣಗಳು ವಾರದಿಂದ ವಾರಕ್ಕೆ ಹೆಚ್ಚುತ್ತಿವೆ ಎಂದು ಹೇಳುತ್ತದೆ, ಇದು ನಿರಂತರ ಸಮುದಾಯ ಪ್ರಸರಣವನ್ನು ಸೂಚಿಸುತ್ತದೆ. ಸಾರ್ವಜನಿಕ ಆರೋಗ್ಯ ಕ್ರಮಗಳನ್ನು ತ್ವರಿತವಾಗಿ ಜಾರಿಗೆ ತರದಿದ್ದರೆ ಏಕಾಏಕಿ ಹಠಾತ್ ಭೌಗೋಳಿಕ ವಿಸ್ತರಣೆಯ ಭಯವಿದೆ ಎಂದು ಅದು ಎಚ್ಚರಿಸಿದೆ. ಮೂರು ಪೀಡಿತ ಪ್ರಾಂತ್ಯಗಳಲ್ಲಿ 5,768 ಸಂಪರ್ಕಿತರನ್ನು ಮೇಲ್ವಿಚಾರಣೆ ಮಾಡಲಾಗುತ್ತಿದೆ ಎಂದು ಆರೋಗ್ಯ ಅಧಿಕಾರಿಗಳು ತಿಳಿಸಿದ್ದಾರೆ, ಅವರಲ್ಲಿ ಶೇಕಡಾ 71.8 ರಷ್ಟು ಅನುಸರಣಾ ದರವಿದೆ. ವರದಿಯು ದುರ್ಬಲ ಸಂಪರ್ಕ ಪತ್ತೆಹಚ್ಚುವಿಕೆಯನ್ನು ಪ್ರಮುಖ ಸವಾಲುಗಳಲ್ಲಿ ಒಂದೆಂದು ಪಟ್ಟಿ ಮಾಡಿದೆ, ಪ್ರಸ್ತುತ ದರವು ಶೇಕಡಾ 95 ರಷ್ಟು ಗುರಿಗಿಂತ ಕಡಿಮೆಯಿದೆ ಮತ್ತು ಪ್ರಸರಣ ಸರಪಳಿಗಳನ್ನು ಅಡ್ಡಿಪಡಿಸುವ ಪ್ರಯತ್ನಗಳನ್ನು ರಾಜಿ ಮಾಡಿಕೊಳ್ಳಬಹುದು ಎಂದು ಹೇಳಿದೆ.

ಇಟುರಿ ಪ್ರಾಂತ್ಯದ ರಾಜಧಾನಿ ಬುನಿಯಾದಲ್ಲಿ ಇಬ್ಬರು ಎಬೋಲಾ ರೋಗಿಗಳನ್ನು ಚೇತರಿಸಿಕೊಂಡಿದ್ದಾರೆ ಎಂದು ಘೋಷಿಸಲಾಗಿದ್ದು, ಒಟ್ಟು ಚೇತರಿಕೆಯ ಸಂಖ್ಯೆಯನ್ನು 32 ಕ್ಕೆ ತರಲಾಗಿದೆ ಎಂದು ವರದಿ ತಿಳಿಸಿದೆ. 1976 ರಲ್ಲಿ ಈ ರೋಗವನ್ನು ಮೊದಲು ಗುರುತಿಸಿದಾಗಿನಿಂದ ದೇಶದಲ್ಲಿ 17 ನೇ ಬಾರಿಗೆ ಡಿಆರ್‌ಸಿಯಲ್ಲಿ ಪ್ರಸ್ತುತ ಎಬೋಲಾ ಏಕಾಏಕಿ ಸಂಭವಿಸಿದೆ,


## ಭಾರತದ ವಿಶ್ವ ಚಾಂಪಿಯನ್‌ಶಿಪ್ ಜವಾಬ್ದಾರಿ ಮುನ್ನಡೆಸುತ್ತಿದ್ದಾರೆ ಪಿ.ವಿ.ಸಿಂಧು

ಕೌಲಾಲಂಪುರ್, ಜೂ.12: ಜಾಗತಿಕ ಫೆಡರೇಶನ್ ಆ.17ರಿಂದ 23ರವರೆಗೆ ನಡೆಯುವ ಪಂದ್ಯಾವಳಿಯ ಅರ್ಹತಾ ಪಟ್ಟಿಯನ್ನು ಅಂತಿಮಗೊಳಿಸಿದ ನಂತರ, ಮಾಜಿ ಚಾಂಪಿಯನ್ ಪಿವಿ ಸಿಂಧು ನವದೆಹಲಿಯಲ್ಲಿ ನಡೆಯಲಿರುವ ಬಿಡಬ್ಲ್ಯೂಎಫ್ ವಿಶ್ವ ಚಾಂಪಿಯನ್‌ಶಿಪ್ 2026 ರಲ್ಲಿ 10 ಜನರ ಭಾರತೀಯ ತಂಡವನ್ನು ಮುನ್ನಡೆಸಲಿದ್ದಾರೆ. 2019 ರಲ್ಲಿ ವಿಶ್ವ ಬ್ಯಾಡ್ಮಿಂಟನ್ ಪ್ರಶಸ್ತಿಯನ್ನು ಗೆದ್ದ ಮತ್ತು 2017 ಮತ್ತು 2018 ರಲ್ಲಿ ಬೆಳ್ಳಿ ಪದಕಗಳನ್ನು ಗೆದ್ದ ಸಿಂಧು, ಬ್ಯಾಡ್ಮಿಂಟನ್ ವಿಶ್ವ ಫೆಡರೇಶನ್ (ಬಿಡಬ್ಲ್ಯೂಎಫ್) ಅರ್ಹತಾ ನಿಯಮಗಳ ಅಡಿಯಲ್ಲಿ ಭಾರತದ ಆತಿಥೇಯ ಪ್ರತಿನಿಧಿಯಾಗಿ ಮಹಿಳಾ ಸಿಂಗಲ್ಸ್ ಡ್ರಾದಲ್ಲಿ ತನ್ನ ಸ್ಥಾನವನ್ನು ಪಡೆದುಕೊಂಡರು. ಏಪ್ರಿಲ್ 28ರ ವಿಶ್ವ ಬ್ಯಾಡ್ಮಿಂಟನ್ ಶ್ರೇಯಾಂಕಗಳನ್ನು ಆಧರಿಸಿದ ಅರ್ಹತಾ ಪಟ್ಟಿಯಲ್ಲಿ, ಪುರುಷ ಮತ್ತು ಮಹಿಳಾ ಸಿಂಗಲ್ಸ್‌ನಲ್ಲಿ ತಲಾ 64 ಆಟಗಾರ್ತಿಯರು ಮತ್ತು ಪ್ರತಿ ಡಬಲ್ಸ್ ವಿಭಾಗದಲ್ಲಿ 48 ಜೋಡಿಗಳು ಇದ್ದಾರೆ. ವಿಶ್ವ ಬ್ಯಾಡ್ಮಿಂಟನ್ ಚಾಂಪಿಯನ್ಶಿಪ್ನಲ್ಲಿ ಪ್ರತಿ ವಿಭಾಗದಲ್ಲಿ ಭಾರತವು ಎರಡು ನೇರ ಪ್ರವೇಶ ಪಡೆದ ಆಟಗಾರರನ್ನು ಹೊಂದಿರುತ್ತದೆ.



## ವಿಶ್ವಕಪ್ ಗೆಲ್ಲಲು ನಾನು ಗೋಲು ಗಳಿಸದೆ ಇರುತ್ತೇನೆ: ಎಂಬಪ್ಪೆ

ನವದೆಹಲಿ, ಜೂ.12: ಫ್ರೆಂಚ್ ಸ್ಟ್ರೈಕರ್ ಕೈಲಿಯನ್ ಎಂಬಪ್ಪೆ ತಮ್ಮ ತಂಡದ ಆಟಗಾರರಿಗೆ ವಿಶ್ವಕಪ್ ಗೆಲ್ಲುವುದು ಎಷ್ಟು ಕಷ್ಟ ಎಂದು ಎಚ್ಚರಿಸಿದ್ದಾರೆ ಮತ್ತು ರಷ್ಯಾ 2018 ರಲ್ಲಿ ಯಶಸ್ಸಿನ ನಂತರ ಎಂಟು ವರ್ಷಗಳಲ್ಲಿ ತಮ್ಮ ದೇಶ ಎರಡನೇ ಬಾರಿಗೆ ಪ್ರಶಸ್ತಿಯನ್ನು ಎತ್ತಿ ಹಿಡಿಯಲು ತಮ್ಮ ಅನುಭವ ಸಹಾಯ ಮಾಡುತ್ತದೆ ಎಂದು ಆಶಿಸಿದ್ದಾರೆ. ಫ್ರೆಂಚ್ ಟಿವಿ ಚಾನೆಲ್‌ನಲ್ಲಿ ಮಾತನಾಡಿದ ಎಂಬಪ್ಪೆ, 2018ರಲ್ಲಿ ಫ್ರಾನ್ಸ್ ಗೆದ್ದ ಮತ್ತು ಅರ್ಜೆಂಟೀನಾ ವಿರುದ್ಧ ಪೆನಾಲ್ಟಿಯಲ್ಲಿ 2022 ರ ಫೈನಲ್ ಅನ್ನು ಸೋತ ಕೊನೆಯ ಎರಡು ಪಂದ್ಯಾವಳಿಗಳನ್ನು ನೆನಪಿಸಿಕೊಂಡರು. "ವಿಶ್ವಕಪ್ ಗೆಲ್ಲುವುದು ಎಷ್ಟು ಕಷ್ಟ ಎಂದು ನನಗೆ ತಿಳಿದಿದೆ. ವರ್ಷಗಳು ಕಳೆದವು, ಮತ್ತು ನೀವು ನಿಮ್ಮ ಪ್ರೇರಣೆ ಮತ್ತು ಉತ್ಸಾಹವನ್ನು ಹಾಗೆಯೇ ಇಟ್ಟುಕೊಳ್ಳಬೇಕು. ವಿಶ್ವಕಪ್‌ನಲ್ಲಿ ದೂರ ಹೋಗಲು ಅವು ಮುಖ್ಯವಾದ ವಿಷಯಗಳು" ಎಂದು ಅವರು ಹೇಳಿದರು. ಎಂಬಪ್ಪೆ ತಮ್ಮ ಎರಡು ವಿಶ್ವಕಪ್ ಪಂದ್ಯಗಳಲ್ಲಿ 12 ಗೋಲುಗಳನ್ನು ಗಳಿಸಿದ್ದಾರೆ ಮತ್ತು ಈ ಆವೃತ್ತಿಯಲ್ಲಿ ಪಂದ್ಯಾವಳಿಯಲ್ಲಿ ಇದುವರೆಗೆ ಅತ್ಯಧಿಕ ಗೋಲು ಗಳಿಸಿದ ಆಟಗಾರನಾಗಬಹುದು, ಆದರೆ ತಂಡಕ್ಕಾಗಿ ವೈಯಕ್ತಿಕ ವೈಭವವನ್ನು ತ್ಯಾಗ ಮಾಡಲು ಅವರು ಸಂತೋಷಪಡುತ್ತಾರೆ. ಇತಿಹಾಸ. ಆದರೆ ನಾನು ಹೆಚ್ಚು ಬಯಸುವುದು ವಿಶ್ವಕಪ್ ಟ್ರೋಫಿಯೊಂದಿಗೆ ಫ್ರಾನ್ಸ್‌ಗೆ ಮರಳುವುದು, "ಎಂದು ಸ್ಟ್ರೈಕರ್ ಒತ್ತಾಯಿಸಿದರು.



## ಶೂಟಿಂಗ್ ಲೋಕಕ್ಕೆ ಆಘಾತ: ಕೋಚ್ ಜಸ್ಪಾಲ್ ರಾಣಾ ಇನ್ನಿಲ್ಲ


ನವದೆಹಲಿ,ಜೂ.12: ಭಾರತದ ಖ್ಯಾತ ಶೂಟಿಂಗ್ ಕೋಚ್ ಹಾಗೂ ಮಾಜಿ ಶೂಟರ್ ಜಸ್ಪಾಲ್ ರಾಣಾ ಅವರು 49ನೇ ವಯಸ್ಸಿನಲ್ಲಿ ನಿಧನರಾಗಿದ್ದಾರೆ. ಅನಾರೋಗ್ಯದಿಂದ ದೆಹಲಿಯ ಮ್ಯಾಕ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಅವರು ಗುರುವಾರ ರಾತ್ರಿ ಕೊನೆಯುಸಿರೆಳೆದಿದ್ದಾರೆ.

ಕೆಲವು ದಿನಗಳ ಹಿಂದೆ ಜರ್ಮನಿಯ ಮ್ಯೂನಿಕ್ನಲ್ಲಿ ನಡೆದ ಐಎಸ್‌ಎಸ್‌ಎಫ್ ವಿಶ್ವಕಪ್ ವೇಳೆ ಜಸ್ಪಾಲ್ ರಾಣಾ ಅವರಿಗೆ ಎದೆನೋವು ಕಾಣಿಸಿಕೊಂಡಿತ್ತು. ಆರಂಭದಲ್ಲಿ ಅದನ್ನು ಅಸಿಡಿಟಿ ಎಂದು ಭಾವಿಸಿದ್ದ ಅವರು ತಮ್ಮ ಪ್ರವಾಸವನ್ನು ಮುಂದುವರಿಸಿದ್ದರು. ಆದರೆ ಭಾರತಕ್ಕೆ ವಾಪಸ್ ಬರುವ ವೇಳೆ ವಿಮಾನ ಪ್ರಯಾಣದ ಸಮಯದಲ್ಲೂ ಮತ್ತೆ ಎದೆನೋವು ಕಾಣಿಸಿಕೊಂಡಿತ್ತು.

ದೆಹಲಿ ತಲುಪಿದ ತಕ್ಷಣ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ವೈದ್ಯಕೀಯ ಪರೀಕ್ಷೆಯಲ್ಲಿ ಹೃದಯದ ರಕ್ತನಾಳದಲ್ಲಿ ಬ್ಲಾಕೇಜ್ ಇರುವುದು ಪತ್ತೆಯಾಗಿತ್ತು. ಬಳಿಕ ಸ್ಟೆಂಟ್ ಅಳವಡಿಸಿ ಶಸ್ತ್ರಚಿಕಿತ್ಸೆ ನಡೆಸಲಾಗಿತ್ತು. ಇನ್ನೊಂದು ಸ್ಟೆಂಟ್ ಅಳವಡಿಸುವ ಪ್ರಕ್ರಿಯೆಯೂ ನಡೆಯಬೇಕಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಜಸ್ಪಾಲ್ ರಾಣಾ ನಿಧನರಾಗಿದ್ದಾರೆ.

ಭಾರತೀಯ ಶೂಟಿಂಗ್ ಕ್ಷೇತ್ರದ ದಿಗ್ಗಜರಾಗಿದ್ದ ಜಸ್ಪಾಲ್ ರಾಣಾ, ಒಲಿಂಪಿಯನ್ ಮನು ಭಾಕರ್ ಅವರ ಯಶಸ್ಸಿನ ಹಿಂದಿನ ಪ್ರಮುಖ ವ್ಯಕ್ತಿಯಾಗಿ ಗುರುತಿಸಿಕೊಂಡಿದ್ದರು. ಅವರ ಮಾರ್ಗದರ್ಶನದಲ್ಲೇ ಮನು ಭಾಕರ್ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಭಾರತಕ್ಕೆ ಎರಡು ಪದಕಗಳನ್ನು ಗೆದ್ದುಕೊಟ್ಟಿದ್ದರು.

ಜಸ್ಪಾಲ್ ರಾಣಾ ಕಾಮನ್ವೆಲ್ತ್ ಕ್ರೀಡಾ ಕೂಟಗಳಲ್ಲೂ ಭಾರತದ ಪರ ಅತ್ಯಂತ ಯಶಸ್ವಿ ಶೂಟರ್ಗಳಲ್ಲಿ ಒಬ್ಬರಾಗಿದ್ದರು. 1994, 1998, 2002 ಮತ್ತು 2006ರ ಕಾಮನ್ವೆಲ್ತ್ ಕ್ರೀಡಾಕೂಟಗಳಲ್ಲಿ ಹಲವು ಪದಕಗಳನ್ನು ಗೆದ್ದು ಮಿಂಚಿದ್ದರು. ಕೇವಲ 18ನೇ ವಯಸ್ಸಿನಲ್ಲಿ 1994ರ ಮಿಲಾನ್ ವಿಶ್ವ ಚಾಂಪಿಯನ್‌ಶಿಪ್‌ನ ಜೂನಿಯರ್ ವಿಭಾಗದಲ್ಲಿ ಚಿನ್ನದ ಪದಕ ಗೆದ್ದು, ವಿಶ್ವದಾಖಲೆಯೊಂದಿಗೆ ಅಂತರರಾಷ್ಟ್ರೀಯ ಮಟ್ಟದಲ್ಲಿ ಗಮನ ಸೆಳೆದಿದ್ದರು.



### ರಾಣಾ ನಿಧನಕ್ಕೆ ಪ್ರಧಾನಿ ಮೋದಿ ಸಂತಾಪ

ಭಾರತದ ಹಿರಿಯ ಶೂಟರ್ ಮತ್ತು ಖ್ಯಾತ ತರಬೇತುದಾರ ಜಸ್ಪಾಲ್ ರಾಣಾ ಅವರ ನಿಧನಕ್ಕೆ ಪ್ರಧಾನಿ ನರೇಂದ್ರ ಮೋದಿ ಶುಕ್ರವಾರ ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ, ಅವರ ಸಾವು ಭಾರತೀಯ ಕ್ರೀಡೆ ಮತ್ತು ಶೂಟಿಂಗ್ ಭ್ರಾತೃತ್ವಕ್ಕೆ ಅಪಾರ ನಷ್ಟ ಎಂದು ಬಣ್ಣಿಸಿದ್ದಾರೆ. ಸಾಮಾಜಿಕ ಮಾಧ್ಯಮ ವೇದಿಕೆಯಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ, ಒಬ್ಬ ನಿಪುಣ ಕ್ರೀಡಾಪಟುವಾಗಿ ಮತ್ತು ಯುವ ಪ್ರತಿಭೆಗಳಿಗೆ ಮಾರ್ಗದರ್ಶಕರಾಗಿ ಭಾರತೀಯ ಶೂಟಿಂಗ್‌ಗೆ ರಾಣಾ ಅವರ ಗಮನಾರ್ಹ ಕೊಡುಗೆಗಳಿಗೆ ಗೌರವ ಸಲ್ಲಿಸಿದ್ದಾರೆ. "ಶ್ರೀ ಜಸ್ಪಾಲ್ ರಾಣಾ ಜಿ ಅವರ ನಿಧನದಿಂದ ತೀವ್ರ ದುಃಖವಾಗಿದೆ. ಅವರ ನಿಧನ ಭಾರತೀಯ ಕ್ರೀಡಾ ಜಗತ್ತಿಗೆ ಅಪಾರ ನಷ್ಟವಾಗಿದೆ" ಎಂದು ಮೋದಿ ಹೇಳಿದರು.